ಸಂಪುಟ: 05 ಸಂಚಿಕೆ: 55 ಪುಟಗಳು: 08
www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com
ಸಂಪಾದಕರು: ಟಿ. ಹೊಂಬೇಗೌಡ ಶುಕ್ರವಾರ 09 ಮೇ 2025 RNI No. KARKAN/2021/80833 9448225696 +91 8035841833 ₹5

# ಉದಯ ವಾಹಿನಿ

ಸರ್ವ ಸಮಾನತೆಯ
ಕನ್ನಡ ದಿನಪತ್ರಿಕೆ



ಪಾಕ್ ದಾಳಿಗೆ ಯತ್ನ: ಡ್ರೋನ್, ಕ್ಷಿಪಣಿ ಎಫ್-16 ಯುದ್ಧ ವಿಮಾನ ಧ್ವಂಸಗೊಳಿಸಿದ ಭಾರತೀಯ ಸೇನಾಪಡೆ, ಪಾಕಿಸ್ತಾನದ ಕುತಂತ್ರಕ್ಕೆ ಪ್ರತ್ಯುತ್ತರ

ಪಾಕಿಸ್ತಾನದ ನೆಲದಲ್ಲೇ ಅಲ್ಲೋಲ ಕಲ್ಲೋಲ ಸೃಷ್ಟಿಸಿದ ಭಾರತೀಯ ಸೇನೆ!

# ಪಾಕ್ ಢಂ ಢಮಾರ್

**ಜಮ್ಮು, ಜೈಸಲ್ಮೇರ್, ಪಠಾಣ್‌ಕೋಟ್ ಸೇರಿದಂತೆ ಭಾರತೀಯ ನಗರಗಳ ಮೇಲಿನ ಹಲವಾರು ದಾಳಿಗಳನ್ನು ವಿಫಲಗೊಳಿಸಿದ ನಂತರ ಭಾರತವು ಪಾಕಿಸ್ತಾನದ ಸಿಯಾಲ್‌ಕೋಟ್ ಬಜ್ವತ್ ಸೆಕ್ಟರ್ ಮತ್ತು ಲಾಹೋರ್ ಮೇಲೆ ದಾಳಿ ಮಾಡಿದೆ. ಸಿಯಾಲ್‌ಕೋಟ್ ಬಜ್ವತ್ ಸೆಕ್ಟರ್ ಮೇಲೆ ಭಾರತೀಯ ಫಿರಂಗಿ ದಾಳಿಗೆ ಪಾಕಿಸ್ತಾನ ಸೇನೆಯು ಪ್ರತ್ಯುತ್ತರ ನೀಡುತ್ತಿದೆ. ಭಾರತೀಯ ನಗರಗಳ ಮೇಲೆ ಪಾಕಿಸ್ತಾನ ಅಪ್ರಚೋದಿತ ಗುಂಡಿನ ದಾಳಿ ನಡೆಸಿದ ನಂತರ ಭಾರತೀಯ ಪಡೆಗಳು ಲಾಹೋರ್ ಮೇಲೆ ದಾಳಿ ನಡೆಸಿದವು.**



## ಕರಾಚಿಯ 15 ಕಡೆ ಭಾರೀ ಸ್ಫೋಟ

ಭಾರತದ ಸೇನಾ ನೆಲೆಗಳನ್ನು ಟಾರ್ಗೆಟ್ ಮಾಡಿದ್ದ ಪಾಕ್‌ಗೆ ಭಾರತ ತಕ್ಕ ಪ್ರತ್ಯುತ್ತರ ನೀಡಿದೆ. ಕರಾಚಿಯ 15 ಕಡೆ ಭಾರತವು ಭಾರೀ ದಾಳಿ ನಡೆಸಿದೆ. ಐಎನ್‌ಎಸ್ ವಿಕ್ರಾಂತ್ ನೌಕೆಯಿಂದ ಅಟ್ಯಾಕ್ ಮಾಡಲಾಗಿದೆ. 1971 ರ ಬಳಿಕ ಕರಾಚಿ ಮೇಲೆ ಭಾರತ ದಾಳಿ ಮಾಡಿದೆ. ಕರಾಚಿ ಬಂದರನ್ನು ಭಾರತೀಯ ನೌಕಾಪಡೆ ನಾಶಪಡಿಸಿದೆ. ಪಾಕ್ ವಿರುದ್ಧ ವಿಶ್ವದ 10ನೇ ಅತಿದೊಡ್ಡ ಹಡಗು ಐಎನ್‌ಎಸ್ ವಿಕ್ರಾಂತ್ ಅಖಾಡಕ್ಕಿಳಿದಿದೆ. ಭಾರತದ ನೌಕಾಪಡೆಯಲ್ಲಿ ಈವರೆಗೆ ಮೂರು ಯುದ್ಧನೌಕೆಗಳು ನಿಯೋಜನೆಯಾಗಿವೆ. ಐಎನ್‌ಎಸ್ ವಿಕ್ರಾಂತ್, ಐಎನ್‌ಎಸ್ ವಿರಾಟ್ ಮತ್ತು ಐಎನ್‌ಎಸ್ ವಿಕ್ರಮಾದಿತ್ಯ ನಿಯೋಜನೆಗೊಂಡಿವೆ. ಈ ಪೈಕಿ ಐಎನ್‌ಎಸ್ ವಿಕ್ರಾಂತ್ ಬಲಿಷ್ಠ ಯುದ್ಧ ಹಡಗು ಆಗಿದೆ.

## ಲಾಹೋರ್ ಮೇಲೆ ಭಾರತ ಮಿಸ್ಸೈಲ್ ಸುರಿಮಳೆ

ಜಮ್ಮು ಮೇಲೆ ಪಾಕ್ 100 ಕ್ಷಿಪಣಿ ದಾಳಿ ನಡೆಸಿದ ಬೆನ್ನಲ್ಲೇ ಕೌಂಟರ್ ಆಗಿ ಭಾರತ ಲಾಹೋರ್ ಮೇಲೆ ಮಿಸ್ಸೈಲ್‌ಗಳ ಸುರಿಮಳೆ ಗರೆದಿದೆ. ಪಾಕಿಸ್ತಾನದ ಹಲವು ಪ್ರದೇಶಗಳ ಮೇಲೆ ಭಾರತದಿಂದ ಪ್ರತಿದಾಳಿ ನಡೆದಿದೆ. ಭಾರತದ ದಾಳಿಗೆ ಪಾಕ್ ನಾಗರಿಕರು ತತ್ತರಿಸಿದ್ದಾರೆ. ಲಾಹೋರ್, ಕರಾಚಿ, ಇಸ್ಲಾಮಾಬಾದ್‌ನ ಹಲವು ಪ್ರದೇಶಗಳಲ್ಲಿ ಭಾರತ ಏಕಕಾಲಕ್ಕೆ ಕ್ಷಿಪಣಿ, ಡ್ರೋನ್ ದಾಳಿ ನಡೆದಿದೆ. ಪಾಕಿಸ್ತಾನದ ಮಿಲಿಟರಿ ಕ್ಯಾಂಪ್‌ಗಳ ಮೇಲೂ ದಾಳಿ ಮಾಡಿರುವ ಬಗ್ಗೆ ಮಾಹಿತಿ ಇದೆ. ಭಾರತದ ದಾಳಿ ಪಾಕಿಸ್ತಾನ ಅಕ್ಷರಶಃ ಬೆಚ್ಚಿಬಿದ್ದಿದೆ. ಪಾಕ್‌ನ ಹಲವೆಡೆ ವಿದ್ಯುತ್ ಕಡಿತಗೊಳಿಸಲಾಗಿದೆ.



• ಉದಯವಾಹಿನಿ, ನವದೆಹಲಿ

ಪಾಕಿಸ್ತಾನ ಮತ್ತೊಮ್ಮೆ ರಾತ್ರಿಯ ಕತ್ತಲೆಯಲ್ಲಿ ಹೇಡಿತನದ ದಾಳಿ ನಡೆಸಿದೆ. ಗುರುವಾರ ರಾತ್ರಿ, ಜಮ್ಮು, ಪಂಜಾಬ್ ಮತ್ತು ರಾಜಸ್ಥಾನದ ಅನೇಕ ಸ್ಥಳಗಳಲ್ಲಿ ದಾಳಿ ನಡೆಸಲಾಯಿತು.

S-400 ಮತ್ತು 'ಆಕಾಶ್' ನಂತಹ ಎಚ್ಚರಿಕೆಯ ವಾಯು ರಕ್ಷಣಾ ವ್ಯವಸ್ಥೆಗಳು ಪ್ರತಿ ದಾಳಿಯನ್ನು ವಿಫಲಗೊಳಿಸಿದವು. ಇದರ ನಂತರ, ಭಾರತ ಪ್ರತೀಕಾರವಾಗಿ ಇಸ್ಲಾಮಾಬಾದ್‌ಗೂ ದಾಳಿ ಮಾಡಿದೆ. ಸಿಯಾಲ್‌ಕೋಟ್ ಮತ್ತು ಲಾಹೋರ್‌ನಲ್ಲಿಯೂ ಡ್ರೋನ್‌ಗಳನ್ನು ಹಾರಿಸಲಾಯಿತು. ಭಾರತವು ಪಾಕಿಸ್ತಾನದ ಎರಡು ಎಈ-17 ಮತ್ತು ಈ-16 ಜೆಟ್‌ಗಳನ್ನು ಸಹ ಹೊಡೆದುರುಳಿಸಿದೆ.ರಕ್ಷಣಾ ಸಚಿವ ರಾಜನಾಥ್ ಸಿಂಗ್ ಇತ್ತೀಚಿನ ಬೆಳವಣಿಗೆಗಳ ಬಗ್ಗೆ ಪ್ರಧಾನಿ ನರೇಂದ್ರ ಮೋದಿಗೆ ಮಾಹಿತಿ ನೀಡಿದರು. ಪ್ರಧಾನಿ ನಿರಂತರವಾಗಿ ಪರಿಸ್ಥಿತಿಯನ್ನು ಮೇಲ್ವಿಚಾರಣೆ ಮಾಡುತ್ತಿದ್ದಾರೆ. ಸಿಂಗ್ ಸಿಡಿಎಸ್ ಜನರಲ್ ಅನಿಲ್ ಚೌಹಾಣ್ ಮತ್ತು ಮೂರು ಸೇನಾ ಮುಖ್ಯಸ್ಥರೊಂದಿಗೆ ಮಾತನಾಡಿದ್ದಾರೆ. ಪ್ರಧಾನಿ ರಾಷ್ಟ್ರೀಯ ಭದ್ರತಾ ಸಲಹೆಗಾರ ಅಜಿತ್ ದೋವಲ್ ಅವರನ್ನು ಸಹ ಭೇಟಿ ಮಾಡಿದ್ದಾರೆ. ಗೃಹ ಸಚಿವ ಅಮಿತ್ ಶಾ ಬಿಎಸ್‌ಎಫ್ ಮತ್ತು ಸಿಐಎಸ್ ಎಫ್‌ನ ಡಿಜಿಗಳೊಂದಿಗೆ ಮಾತನಾಡಿದ್ದಾರೆ. ಬಿಎಸ್‌ಎಫ್ ಪಾಕಿಸ್ತಾನದ ಗಡಿಗೆ ಜವಾಬ್ದಾರರಾಗಿದ್ದರೆ, ಸಿಐಎಸ್‌ಎಫ್ ದೇಶದ ಪ್ರಮುಖ ಸಂಸ್ಥೆಗಳ ಭದ್ರತೆಯನ್ನು ನಿರ್ವಹಿಸುತ್ತದೆ.ಜಮ್ಮುವಿನ ಸತ್ವಾರಿ, ಸಾಂಬಾ, ಆರ್‌ಎಸ್ ಪುರ ಮತ್ತು ಅರ್ನಿಯಾದಲ್ಲಿ ಪಾಕಿಸ್ತಾನದಿಂದ 8 ಕ್ಷಿಪಣಿಗಳನ್ನು ಹಾರಿಸಲಾಯಿತು. ಅವೆಲ್ಲವನ್ನೂ ಭಾರತೀಯ ವಾಯು ರಕ್ಷಣಾ ಘಟಕಗಳು ಆಕಾಶದಲ್ಲಿಯೇ ತಡೆಹಿಡಿದವು. ಘಟನಾ ಸ್ಥಳದಿಂದ ಹೊರಬಂದ ದೃಶ್ಯಗಳು ಹಮಾಸ್ ಇಸ್ರೇಲ್ ಮೇಲೆ ನಡೆಸಿದ ದಾಳಿಯಂತೆಯೇ ಇವೆ. ಪಾಕಿಸ್ತಾನಿ ಸೇನೆಯು ಈಗ ಭಯೋತ್ಪಾದಕ ಸಂಘಟನೆಯಂತೆ ವರ್ತಿಸುತ್ತಿದೆ ಎಂದು ತಜ್ಞರ ಹೇಳಿಕೆಯಾಗಿದೆ.

**1** ಪೇಶಾವರದ ಕಡೆ 4 ಕಡೆ ಭಾರೀ ಸ್ಫೋಟ

**2** ಮಿಸೈಲ್, ಡ್ರೋನ್ ಹೊಡೆದುರುಳಿಸಿದ ಭಾರತ


**3** ಪಾಕಿಸ್ತಾನ 12 ಕಡೆ ಭಾರತ ದಾಳಿ

ಪಾಕಿಸ್ತಾನವು ಬುಧವಾರ-ಗುರುವಾರ ರಾತ್ರಿ ಈ ಪ್ರದೇಶಗಳನ್ನು ಗುರಿಯಾಗಿಸಲು ವಿಫಲ ಪ್ರಯತ್ನವನ್ನು ಮಾಡಿತ್ತು. ಕರ್ನಲ್ ಸೋಫಿಯಾ ಖುರೇಷಿ ಗುರುವಾರ ಸಂಜೆ ತಿಳಿಸಿದ್ದು, ಅವಂತಿಪುರ, ಶ್ರೀನಗರ, ಜಮ್ಮು, ಪಠಾಣ್ ಕೋಟ್, ಅಮೃತಸರ, ಕಪುರ್ತಲಾ, ಜಲಂಧರ್, ಲುಧಿಯಾನ, ಆದಂಪುರ, ಭಟಿಂಡಾ, ಚಂಡೀಗಢ, ನಲ್, ಫಲೋಡಿ, ಉತ್ತರಲೈ ಮತ್ತು ಭುಜ್ ನಗರಗಳನ್ನು ಗುರಿಯಾಗಿಸಲು ಪ್ರಯತ್ನಿಸಲಾಗಿದೆ ಎಂದು. ಚೇತರಿಸಿಕೊಂಡ ಅವಶೇಷಗಳು ಈ ದಾಳಿಗಳನ್ನು ಪಾಕಿಸ್ತಾನಿ ಪ್ರದೇಶದಿಂದ ನಡೆಸಲಾಗಿದೆ ಎಂದು ಸ್ಪಷ್ಟಪಡಿಸಿವೆ.

ಸುಟ್ಟರೂ ಹುಟ್ಟುಗುಣ ಹೋಗದು, ನಾಯಿ ಬಾಲ ಏನು ಮಾಡಿದರೂ ಡೊಂಕು-ನಾಣ್ಣುಡಿಗಳು ಪಾಕಿಸ್ತಾನ ಮತ್ತು ಅದರ ಸೇನೆಗೆ ಸೂಟ್ ಆದಂತೆ ಬೇರೆ ಯಾರಿಗೂ ಅನ್ವಯಿಸುವುದಿಲ್ಲ. ಪಹಲ್ಗಾಮ್ ನಲ್ಲಿ ಉಗ್ರರು ದಾಳಿ ನಡೆಸಿದ ಬಳಿಕ ಪಾಕ್ ಸೇನೆ ಜಮ್ಮು ಮತ್ತು ಕಾಶ್ಮೀರದ ಗಡಿಯುದ್ದಕ್ಕೂ ನಾಗರಿಕರನ್ನು ಗುರಿಯಾಗಿಸಿಕೊಂಡು ಅಪ್ರಚೋದಿತ ಗುಂಡಿನ ದಾಳಿ ನಡೆಸುತ್ತಿದೆ.


ಭಾರತದ ಕ್ಷಿಪಣಿಗಳ ದಾಳಿ ಪಾಕಿಸ್ತಾನ ಅಕ್ಷರಶಃ ಥಂಡಾ ಹೊಡೆದಿದೆ. ಎಲ್‌ಒಸಿಯಲ್ಲಿ ಪಾಕಿಸ್ತಾನದ ಸೇನೆ ದಾಳಿ ನಡೆಸಿ 16 ಜನರನ್ನು ಕೊಂದಿತ್ತು. ಅದಕ್ಕೆ ಪ್ರತಿಯಾಗಿ ಭಾರತ ಪಾಕಿಸ್ತಾನದ ಲಾಹೋರ್‌ನಲ್ಲಿ ಪಾಕಿಸ್ತಾನದ ವಾಯು ರಕ್ಷಣಾ ಮೂಲಸೌಕರ್ಯದ ಮೇಲೆ ದಾಳಿ ನಡೆಸಿ ನಾಶಪಡಿಸಿತ್ತು. ಹಾಗೇ,

## ಪಾಕ್ ಪ್ರಧಾನಿ ಮನೆ ಬಳಿಯೇ ದಾಳಿ



ಭಾರತ ನಡೆಸಿದ ಮಿಸ್ಸೈಲ್ ದಾಳಿಗೆ ಪಾಕ್ ಪ್ರಧಾನಿ ಶೆಹಬಾಜ್ ಷರೀಫ್ ನಡುಗುವಂತಾಗಿದೆ. ಪಾಕ್ ಪ್ರಧಾನಿ ಮನೆ ಬಳಿಯೇ ದಾಳಿಯಾಗಿದೆ ಎಂದು ವರದಿಯಾಗಿದೆ.ಪಾಕ್ ರಾಜಧಾನಿ ಇಸ್ಲಾಮಾಬಾದ್‌ನಲ್ಲಿ ಶೆಹಬಾಜ್ ಶರೀಫ್ ಅವರ ಮನೆಯಿದೆ. ಮನೆಗೆ 20 ಕಿಮೀ ದೂರದಲ್ಲೇ ಸ್ಫೋಟದ ಸದ್ದಾಗಿದೆ. ಭಾರತದ ದಾಳಿಗೆ ಪಾಕ್ ಪ್ರಧಾನಿಯೂ ಬೆಚ್ಚಿದ್ದಾರೆ. ಪಾಕಿಸ್ತಾನದಲ್ಲಿ ದಿಕ್ಕು ತೋಚದ ಪರಿಸ್ಥಿತಿ ನಿರ್ಮಾಣವಾಗಿದೆ. ದೇಶದ ಹಲವು ನಗರಗಳು ಕತ್ತಲಲ್ಲಿ ಸಿಲುಕಿವೆ. ಕೆಲವು ನಗರಗಳಲ್ಲಿ ವಿದ್ಯುತ್ ಸಂಪರ್ಕ ಕಡಿತಗೊಳಿಸಲಾಗಿದೆ.ರಸ್ತೆಗಳಿಗೆ ಬಾರದಂತೆ ಪಾಕ್ ನಾಗರಿಕರಿಗೆ ಅಲ್ಲಿನ ಸ್ಥಳೀಯ ಆಡಳಿತಗಳಿಂದ ಸೂಚನೆ ನೀಡಿದೆ. ಪಾಕಿಸ್ತಾನದ ಪೈಲಟ್‌ನನ್ನು ಭಾರತೀಯ ಸೇನೆ ವಶಕ್ಕೆ ಪಡೆದಿರೋದು ಎನ್ನಲಾಗಿದೆ.

## ಜಯಶಂಕರ್ ಕರೆ ಮಾಡಿದ ರುಬಿಯೋ



ಭಾರತ ಮತ್ತು ಪಾಕಿಸ್ತಾನದ ನಡುವಿನ ಉದ್ವಿಗ್ನತೆಯು ಗುರುವಾರ ತಾರಕಕ್ಕೇರಿದ್ದು, ಪಾಕಿಸ್ತಾನವು ಭಾರತದ ಹಲವು ನಗರಗಳ ಮೇಲೆ ಡ್ರೋನ್‌ಗಳು ಮತ್ತು ಕ್ಷಿಪಣಿಗಳ ಮೂಲಕ ದಾಳಿ ನಡೆಸಿತು. ಆದರೆ, ಭಾರತದ ಸಂಯೋಜಿತ ಕೌಂಟರ್ UAS ಗ್ರಿಡ್ ಮತ್ತು ಎಸ್-400 ವಾಯು ರಕ್ಷಣಾ ವ್ಯವಸ್ಥೆಯು ಈ ದಾಳಿಗಳನ್ನು ಯಶಸ್ವಿಯಾಗಿ ತಡೆಗಟ್ಟಿತು. ಇದಕ್ಕೆ ಪ್ರತಿಕಾರವಾಗಿ, ಭಾರತೀಯ ಸೇನೆಯು ಪಾಕಿಸ್ತಾನದ ಲಾಹೋರ್‌ನಲ್ಲಿರುವ ವಾಯು ರಕ್ಷಣಾ ವ್ಯವಸ್ಥೆ ಸೇರಿದಂತೆ ಹಲವು ಗುರಿಗಳನ್ನು ಧ್ವಂಸಗೊಳಿಸಿದೆ. ಈ ಘಟನೆಗಳ ನಡುವೆ, ಅಮೆರಿಕಾದ ವಿದೇಶಾಂಗ ಕಾರ್ಯದರ್ಶಿ ಮಾರ್ಕೋ ರೂಬಿಯೋ ಅವರು ಭಾರತದ ವಿದೇಶಾಂಗ ಸಚಿವ ಎಸ್. ಜೈಶಂಕರ್ ಮತ್ತು ಪಾಕಿಸ್ತಾನದ ಪ್ರಧಾನಮಂತ್ರಿ ಶೆಹಬಾಜ್ ಷರೀಫ್ ಅವರೊಂದಿಗೆ ಮಾತನಾಡಿ, ತಕ್ಷಣದ ಶಾಂತಿಗಾಗಿ ಮನವಿ ಮಾಡಿದ್ದಾರೆ.

## ಭಾರತ-ಪಾಕಿಸ್ತಾನದ ನಡುವೆ ನಿಲ್ಲದ ದಾಳಿ

ಭಾರತೀಯ ಸೇನೆಯಿಂದ ಪಾಕಿಸ್ತಾನದ ಲಾಹೋರ್, ಕರಾಚಿ, ಸಿಯೋಲ್ ಕೋಟ್ ಮೇಲೆ ದಾಳಿ ನಡೆಸಲಾಗಿದೆ. ಭಾರತದ ಮೇಲೆ ಪಾಕ್ ದಾಳಿಯನ್ನು ವಿಫಲಗೊಳಿಸಿದ ಬಳಿಕ ಭಾರತೀಯ ಸೇನೆಯಿಂದ ದಾಳಿ ನಡೆಸಲಾಗಿದೆ. ಪಾಕಿಸ್ತಾನ ಭಾರತದ ಚಂಡೀಗಢ, ಆವಂತಿಪೊರ, ಜಲಂಧರ್, ಲೂಧಿಯಾನ, ಅಮೃತಸರ, ಪಠಾಣಕೋಟ್, ಕಪೂರ್ತಲಾ, ನಲ, ಫಲೋಡಿ, ಉತ್ತರಲೈ, ಭುಜ್, ಜಮ್ಮು, ಶ್ರೀನಗರ, ಆಧಂಪುರ, ಭಟಿಂಡಾ ಮೇಲೆ ದಾಳಿಗೆ ಯತ್ನಿಸಿತ್ತು. ನಿನ್ನೆ ರಾತ್ರಿ ಭಾರತದ 15 ನಗರಗಳ ಮೇಲೆ ಪಾಕಿಸ್ತಾನ ದಾಳಿಗೆ ಮುಂದಾಗಿತ್ತು. ಪಾಕಿಸ್ತಾನ ಸೇನೆ ದಾಳಿಯನ್ನು ವಿಫಲಗೊಳಿಸಿರುವ ಭಾರತೀಯ ಸೇನೆ S-400 ಏರ್‌ಡಿಫೆನ್ಸ್ ಸಿಸ್ಟಮ್ ಮೂಲಕ ಪಾಕ್ ಕ್ಷಿಪಣಿಗಳನ್ನು ಧ್ವಂಸ ಮಾಡಿದೆ. ಪಾಕಿಸ್ತಾನದ ಕ್ಷಿಪಣಿಗಳ ಅವಶೇಷಗಳನ್ನು ಭಾರತೀಯ ಸೇನೆ ವಶಕ್ಕೆ ಪಡೆದಿದೆ. ಆಪರೇಷನ್ ಸಿಂಧೂರ್ ಅಡಿಯಲ್ಲಿ ಲಾಹೋರ್ ನಲ್ಲಿ ಪಾಕಿಸ್ತಾನದ ವಾಯು ರಕ್ಷಣಾ ವ್ಯವಸ್ಥೆಯನ್ನು ಭಾರತ ನಾಶಪಡಿಸಿದೆ. ಪಾಕಿಸ್ತಾನದ ವಾಯು ರಕ್ಷಣಾ ಮೂಲಸೌಕರ್ಯದ ಮೇಲೆ ಭಾರತ ನಡೆಸಿದ ದಾಳಿಯಲ್ಲಿ ಒಬ್ಬ ಅಧಿಕಾರಿ ಮತ್ತು ಮೂವರು ಸೈನಿಕರು ಸಾವನ್ನಪ್ಪಿದ್ದಾರೆ ಎಂದು ಪಾಕಿಸ್ತಾನ ಸೇನೆಯ ನಿವೃತ್ತ ಯೋಧ ಆದಿಲ್ ರಾಜಾ ಹೇಳಿದ್ದಾರೆ. ಪಾಕಿಸ್ತಾನದ ವಾಯು ರಕ್ಷಣಾ ಮೂಲಸೌಕರ್ಯದ ಮೇಲೆ ಭಾರತ ನಡೆಸಿದ ಇಂದಿನ ದಾಳಿಯಲ್ಲಿ ಒಬ್ಬ ವಾಯು ರಕ್ಷಣಾ ಅಧಿಕಾರಿ (ಕ್ಯಾಪ್ಟನ್) ಮತ್ತು ಪಾಕಿಸ್ತಾನ ಸೇನೆಯ ಮೂವರು ಸೈನಿಕರು ಹುತಾತ್ಮರಾಗಿದ್ದಾರೆ ಎಂದು ಆದಿಲ್ ರಾಜಾ ಎಕ್ಸ್‌ನಲ್ಲಿ ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಬರೆದಿದ್ದಾರೆ. ಭಾರತದ ವಿರುದ್ಧ ಚೀನಾದ ಜೆಟ್‌ಗಳನ್ನು ಬಳಸಲಾಗುತ್ತಿದೆ ಎಂಬ ಪಾಕಿಸ್ತಾನದ ಹೇಳಿಕೆಗೆ ಚೀನಾ ಪ್ರತಿಕ್ರಿಯಿಸಿದೆ.

## ಭಾರತ-ಪಾಕ್ ಗಡಿಯಲ್ಲಿ ಹೈ-ಅಲರ್ಟ್ ಘೋಷಣೆ

ಭಾರತದ ಮೇಲೆ ಸೇಡು ತೀರಿಸಿಕೊಳ್ಳಲು ಪಾಕಿಸ್ತಾನ ಕ್ಷಿಪಣಿ ದಾಳಿ ನಡೆಸಿದ್ದು, ಇದಕ್ಕೆ ಪ್ರತಿಯಾಗಿ ಭಾರತ ಪಾಕ್ ಮೇಲೆ ದಾಳಿ ನಡೆಸುತ್ತಿದೆ. ಇದರಿಂದಾಗಿ ಭಾರತ್-ಪಾಕ್ ಗಡಿಯಲ್ಲಿ ಹೈ-ಅಲರ್ಟ್ ಘೋಷಿಸಲಾಗಿದೆ. ಜಮ್ಮು, ಪಂಜಾಬ್, ರಾಜಸ್ಥಾನ ಗುರಿಯಾಗಿಸಿಕೊಂಡು ಪಾಕ್ ದಾಳಿ ಆರಂಭಿಸಿದರೆ, ಭಾರತ ಲಾಹೋರ್, ಇಸ್ಲಾಮಾಬಾದ್ ಮೇಲೆ ದಾಳಿ ನಡೆಸಿದ್ದು, ಅರಬ್ಬೀ ಸಮುದ್ರದಲ್ಲಿಯೂ ನೌಕಾ ಪಡೆ ದಾಳಿ ಆರಂಭಿಸಿದೆ. ಭಾರತದ ಏರ್ ಡಿಫೆನ್ಸ್ ಯೂನಿಟ್ ನಿಂದ ಪಾಕ್‌ನ ಎಲ್ಲಾ ಕ್ಷಿಪಣಿಗಳನ್ನು ಉಡೀಸ್ ಮಾಡಿದೆ. ಇಸ್ರೇಲ್ ಮೇಲೆ ಹಮಾಸ್ ದಾಳಿಯ ಮಾದರಿಯಲ್ಲಿ ಪಾಕ್ ಆರ್ಮಿ ದಾಳಿ ನಡೆಸಿದೆ. ಸದ್ಯ ಭಾರತದ ಮೂರು ಪಡೆಗಳಿಂದಲೂ ದಾಳಿ ಆರಂಭವಾಗಿದ್ದು, ಸದ್ಯ ಭಾರತ-ಪಾಕ್ ಗಡಿಯಲ್ಲಿ ಹೈ-ಅಲರ್ಟ್ ಘೋಷಿಸಲಾಗಿದೆ.

ಚೀನಾ ನಿರ್ಮಿತ ಕ್ಷಿಪಣಿಯನ್ನೂ ಹೊಡೆದುರುಳಿಸಿತ್ತು. ಇದಕ್ಕೆ ಪ್ರತೀಕಾರವಾಗಿ ಸಂಜೆ ಪಾಕಿಸ್ತಾನ ಜಮ್ಮುವಿನಲ್ಲಿ ಡ್ರೋನ್ ದಾಳಿಗೆ ಯತ್ನಿಸಿತ್ತು. ಆದರೆ, ಭಾರತೀಯ ಸೇನೆ 8 ಪಾಕ್ ಡ್ರೋನ್‌ಗಳನ್ನು ಹೊಡೆದುರುಳಿಸಿತ್ತು. ಪಾಕಿಸ್ತಾನ ಮತ್ತೆ ಮತ್ತೆ ಭಾರತದ ಮೇಲೆ ದಾಳಿ ನಡೆಸಿರುವುದರಿಂದ ತಕ್ಕ ಪಾಠ ಕಲಿಸಲು ಮುಂದಾಗಿರುವ ಭಾರತ ಇದೀಗ ಮತ್ತೆ ಪಾಕಿಸ್ತಾನದೊಳಗೆ ನುಗ್ಗಿದೆ. ಲಾಹೋರ್, ಇಸ್ಲಮಾಬಾದ್ ಸೇರಿದಂತೆ ಹಲವೆಡೆ ವೈಮಾನಿಕ ದಾಳಿ ನಡೆಸಿದೆ. ಪಾಕಿಸ್ತಾನದ ಡ್ರೋನ್-ಕ್ಷಿಪಣಿ ದಾಳಿಗೆ ಪ್ರತೀಕಾರವಾಗಿ ಭಾರತ ಲಾಹೋರ್‌ಗೆ ದಾಳಿ ಮಾಡಿದೆ. ಪಾಕಿಸ್ತಾನವು ಅನೇಕ ಸ್ಥಳಗಳಲ್ಲಿ ಕ್ಷಿಪಣಿಗಳನ್ನು ಹಾರಿಸಿ, AWACS ಅನ್ನು ನಾಶಪಡಿಸಿದ ನಂತರ ಭಾರತ ಲಾಹೋರ್, ಸಿಯಾಲ್‌ಕೋಟ್ ಮೇಲೆ ದಾಳಿ ಮಾಡಿದೆ.



## ಇಸ್ಲಮಾಬಾದ್, ಲಾಹೋರ್ ಮೇಲೆ ವಾಯುದಾಳಿ



ಎಲ್‌ಒಸಿಯಲ್ಲಿ ಪಾಕಿಸ್ತಾನದ ಸೇನೆ ದಾಳಿ ನಡೆಸಿ 16 ಜನರನ್ನು ಕೊಂದಿತ್ತು. ಅದಕ್ಕೆ ಪ್ರತಿಯಾಗಿ ಭಾರತ ಪಾಕಿಸ್ತಾನದ ಲಾಹೋರ್‌ನಲ್ಲಿ ಪಾಕಿಸ್ತಾನದ ವಾಯು ರಕ್ಷಣಾ ಮೂಲಸೌಕರ್ಯದ ಮೇಲೆ ದಾಳಿ ನಡೆಸಿ ನಾಶಪಡಿಸಿತ್ತು. ಹಾಗೇ, ಚೀನಾ ನಿರ್ಮಿತ ಕ್ಷಿಪಣಿಯನ್ನೂ ಹೊಡೆದುರುಳಿಸಿತ್ತು. ಇದಕ್ಕೆ ಪ್ರತೀಕಾರವಾಗಿ ಸಂಜೆ ಪಾಕಿಸ್ತಾನ ಜಮ್ಮುವಿನಲ್ಲಿ ಡ್ರೋನ್ ದಾಳಿಗೆ ಯತ್ನಿಸಿತ್ತು. ಆದರೆ, ಭಾರತೀಯ ಸೇನೆ 8 ಪಾಕ್ ಡ್ರೋನ್‌ಗಳನ್ನು ಹೊಡೆದುರುಳಿಸಿತ್ತು. ಪಾಕಿಸ್ತಾನ ಮತ್ತೆ ಮತ್ತೆ ಭಾರತದ ಮೇಲೆ ದಾಳಿ ನಡೆಸಿರುವುದರಿಂದ ತಕ್ಕ ಪಾಠ ಕಲಿಸಲು ಮುಂದಾಗಿರುವ ಭಾರತ ಇದೀಗ ಮತ್ತೆ ಪಾಕಿಸ್ತಾನದೊಳಗೆ ನುಗ್ಗಿದೆ. ಲಾಹೋರ್, ಇಸ್ಲಮಾಬಾದ್ ಸೇರಿದಂತೆ ಹಲವೆಡೆ ವೈಮಾನಿಕ ದಾಳಿ ನಡೆಸಿದೆ. ಪಾಕಿಸ್ತಾನದ ಡ್ರೋನ್-ಕ್ಷಿಪಣಿ ದಾಳಿಗೆ ಪ್ರತೀಕಾರವಾಗಿ ಭಾರತ ಲಾಹೋರ್‌ಗೆ ದಾಳಿ ಮಾಡಿದೆ. ಪಾಕಿಸ್ತಾನವು ಅನೇಕ ಸ್ಥಳಗಳಲ್ಲಿ ಕ್ಷಿಪಣಿಗಳನ್ನು ಹಾರಿಸಿ, AWACS ಅನ್ನು ನಾಶಪಡಿಸಿದ ನಂತರ ಭಾರತ ಲಾಹೋರ್, ಸಿಯಾಲ್‌ಕೋಟ್ ಮೇಲೆ ದಾಳಿ ಮಾಡಿದೆ. ಪಾಕಿಸ್ತಾನದಿಂದ ಜಮ್ಮು ವಾಯುನೆಲೆಯ ಕಡೆಗೆ ದಾಳಿಗಳನ್ನು ಪ್ರಾರಂಭಿಸಿದಾಗ ಪಾಕಿಸ್ತಾನದೊಂದಿಗಿನ ಉದ್ವಿಗ್ನತೆ ಹೆಚ್ಚಾಯಿತು. ಎಂಟು ಕ್ಷಿಪಣಿಗಳು ಮತ್ತು ಮೂರು ಡ್ರೋನ್‌ಗಳನ್ನು ಭಾರತದ S-400 ರಕ್ಷಣಾ ವ್ಯವಸ್ಥೆಗಳು ತಡೆಹಿಡಿದಿವೆ.

ಈ ದಿನದ ದರ | ಪೆಟ್ರೋಲ್: 103.50 ₹/L | ಡೀಸೆಲ್ : 90.03 ₹/L | ಬಂಗಾರ: ₹9,960/Gram24ct ₹9,130/Gram22ct | ಬೆಳ್ಳಿ: ₹99.00/Gram

## 48ನೇ ವರ್ಷದ ಶ್ರೀ ನರಸಿಂಹ ಜಯಂತಿ ಉತ್ಸವ ಹಾಗೂ ಬ್ರಹ್ಮರಥೋತ್ಸವ

• ಉದಯ ವಾಹಿನಿ, ಬೆಂಗಳೂರು

ಪ್ರತಿ ವರ್ಷದಂತೆ ಈ ವರ್ಷವೂ ತ್ಯಾಗರಾಜನಗರದ ಶ್ರೀ ಲಕ್ಷ್ಮೀ ನರಸಿಂಹಸ್ವಾಮಿ ದೇವಸ್ಥಾನದಲ್ಲಿ 48ನೇ ವರ್ಷದ ಶ್ರೀ ನರಸಿಂಹ ಜಯಂತಿ ಉತ್ಸವ ಹಾಗೂ ಬ್ರಹ್ಮರಥೋತ್ಸವ ಸಮಾರಂಭನ್ನು ಇದೇ ತಿಂಗಳ 10, 11 ಮತ್ತು 12 ರಂದು ಮೂರು ದಿನಗಳ ಕಾಲ ಹಮ್ಮಿಕೊಂಡಿದ್ದು, ವಿವರಗಳು ಈ ರೀತಿ ಇವೆ: ಮೇ 10, ಶನಿವಾರ: ಬೆಳಗ್ಗೆ- ನವಗ್ರಹ ಶಾಂತಿ, ಹೋಮಗಳು, ಶ್ರೀ ಅಶ್ವತ್ಥ ಕುಬೇರ ಲಕ್ಷ್ಮೀ ನರಸಿಂಹ ಸ್ವಾಮಿಗೆ ಫಲ ಪಂಚಾಮೃತ ಅಭಿಷೇಕ, ಮಹಾಪೂಜೆ, ನಾಣ್ಯ ಅಭಿಷೇಕ, ಸುದರ್ಶನ ಹೋಮ, ಅನ್ನದಾನ ಸೇವೆ, ಸಂಜೆ ಸಾಂಸ್ಕೃತಿಕ ಕಾರ್ಯಕ್ರಮ ನಂತರ ಕಲ್ಯಾಣೋತ್ಸವ, ಶೇಷವಾಹನೋತ್ಸವ. ಮೇ 11, ಭಾನುವಾರ: ಬೆಳಗ್ಗೆ ಶ್ರೀ ನರಸಿಂಹ ತಾರಕ ಹೋಮ, ಬ್ರಹ್ಮ ರಥೋತ್ಸವ, ಮಹಾ ಮಂಗಳಾರತಿ, ಅನ್ನದಾನ ಸೇವೆ. ಸಂಜೆ ದ್ವಾರ ಪೂಜೆ, ಗಜೇಂದ್ರ ಮೋಕ್ಷ ಉತ್ಸವ. ಮೇ 12, ಸೋಮವಾರ : ಬೆಳಗ್ಗೆ- ಶ್ರೀ ನರಸಿಂಹ ಕಂಬಕ್ಕೆ ಕುಂಭಾಭಿಷೇಕ, ಬ್ರಹ್ಮ ಕಲಶ ಅಭಿಷೇಕ, ಚಕ್ರಸ್ನಾನ, ಅನ್ನದಾನ ಸೇವೆ. ಸಂಜೆ ದೊಡ್ಡ ರಥೋತ್ಸವ, ಶ್ರೀ ನರಸಿಂಹ ದೇವರ ದಂಡಕ್ಕೆ ಪೂಜೆ, ಬಲಿಹರಣ. ಸ್ಥಳ : ಶ್ರೀ ಅಭಯ ಲಕ್ಷ್ಮೀ ನರಸಿಂಹ ಸ್ವಾಮಿ ದೇವಸ್ಥಾನ, ತ್ಯಾಗರಾಜನಗರ, ಬೆಂಗಳೂರು-560028



## ಅಕ್ರಮ ಆಸ್ತಿ, ಭ್ರಷ್ಟಾಚಾರ ಪ್ರಕರಣ ರಾಜ್ಯದ ವಿವಿಧೆಡೆ ಲೋಕಾಯುಕ್ತ ದಾಳಿ

• ಉದಯ ವಾಹಿನಿ, ಬೆಂಗಳೂರು

ಆದಾಯಕ್ಕಿಂತ ಅಧಿಕ ಆಸ್ತಿಗಳಿಕೆ ಹಾಗೂ ಭ್ರಷ್ಟಾಚಾರ ಆರೋಪ ಸಂಬಂಧ ರಾಜ್ಯದ ವಿವಿಧೆಡೆ ಲೋಕಾಯುಕ್ತ ಪೊಲೀಸರು ಇಂದು (ಗುರುವಾರ) ಬೆಳಿಗ್ಗೆ ದಾಳಿ ನಡೆಸಿದ್ದಾರೆ. ಕೋಲಾರ, ಯಾದಗಿರಿ, ದಾವಣಗೆರೆ ಮತ್ತು ಬೆಂಗಳೂರಿನ ವಿವಿಧ ಸ್ಥಳಗಳಲ್ಲಿ ಕಾರ್ಯಾಚರಣೆ ನಡೆಯುತ್ತಿದೆ. ಕೋಲಾರ ತಾಲ್ಲೂಕಿನ ಭೂಮಾಪನಾ ಇಲಾಖೆ ಸರ್ವೇ ಅಧಿಕಾರಿ ಸುರೇಶ್ ಬಾಬು ಜಿ., ಸುರಪುರ ತಾಲ್ಲೂಕು ಆರೋಗ್ಯಾಧಿಕಾರಿ ರಾಜೀವ್ ವೆಂಕಟಪ್ಪ ನಾಯಕ, ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯ (ದಾವಣಗೆರೆ) ಸಹಾಯಕ ಕಾರ್ಯನಿರ್ವಾಹಕ ಎಂಜಿನಿಯರ್ ಎಂ.ಬಿ ರವಿ ಹಾಗೂ ಜಲ ಸಂಪನ್ಮೂಲ ಇಲಾಖೆಯ ಸಹಾಯಕ ಕಾರ್ಯನಿರ್ವಾಹಕ ಎಂಜಿನಿಯರ್ ಜಿ. ಶ್ರೀನಿವಾಸ ಮೂರ್ತಿ ಅವರ ನಿವಾಸ ಹಾಗೂ ಕಚೇರಿಗಳಲ್ಲಿ ಶೋಧ ನಡೆಸಲಾಗುತ್ತಿದೆ.

## ಮೊಬೈಲ್ ಜಗಳ ಕೊಲೆಯಲ್ಲಿ ಅಂತ್ಯ

• ಉದಯ ವಾಹಿನಿ, ಬೆಂಗಳೂರು

ಕಳ್ಳತನ ಮಾಡಿದ್ದ ಮೊಬೈಲ್ ಹಿಂದಿರುಗಿಸುವ ವಿಚಾರಕ್ಕೆ ನಡೆದ ಜಗಳವು ಮೆಕ್ಯಾನಿಕ್ ಎಂಜಿನಿಯರ್‌ವೊಬ್ಬರ ಕೊಲೆಯಲ್ಲಿ ಅಂತ್ಯವಾಗಿದೆ. ಬಿಹಾರ ಮೂಲದ ಅಬ್ದುಲ್ ಮಲೀಕ್ (52) ಮೃತಪಟ್ಟವರು. ಈ ಬಗ್ಗೆ ಮಾಗಡಿ ರಸ್ತೆ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಆರೋಪಿ ಮನೋಜ್‌ನನ್ನು ಬಂಧಿಸಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ. ಮಾಗಡಿ ರಸ್ತೆ ಪೊಲೀಸ್ ಠಾಣಾ ವ್ಯಾಪ್ತಿಯ ರಾಜಾಜಿನಗರ ಕೈಗಾರಿಕಾ ಪ್ರದೇಶದಲ್ಲಿ ನಡೆದ ಜಗಳದಲ್ಲಿ ಅಬ್ದುಲ್ ಮಲೀಕ್ ಮೃತಪಟ್ಟಿದ್ದಾನೆ. ಅವರ ಸಹಾಯಕ ಜೈನುಲ್ ಗಂಭೀರವಾಗಿ ಗಾಯಗೊಂಡಿದ್ದಾರೆ. ಅಬ್ದುಲ್ ಮಲೀಕ್ ಮತ್ತು ಜೈನುಲ್ ಅವರು ಐದು ವರ್ಷಗಳಿಂದ ಖಾಸಗಿ ಕಂಪನಿಯಲ್ಲಿ ಕೆಲಸ ಮಾಡುತ್ತಿದ್ದರು ಎಂದು ಪೊಲೀಸರು ಹೇಳಿದರು. ಆರೋಪಿ ಮನೋಜ್ ಪೋರ್ಟರ್ ಕಂಪನಿಯಲ್ಲಿ ಡೆಲಿವರಿ ಏಜೆಂಟ್ ಆಗಿ ಕೆಲಸ ಮಾಡುತ್ತಿದ್ದ. ಅಬ್ದುಲ್ ಮಲೀಕ್ ಅವರ ಕಚೇರಿಗೆ ತೆರಳಿದ್ದ ಮನೋಜ್ ಮೊಬೈಲ್‌ವೊಂದನ್ನು ಕಳ್ಳತನ ಮಾಡಿದ್ದ. ಈ ದೃಶ್ಯವನ್ನು ಅಬ್ದುಲ್ ಮಲೀಕ್ ಮತ್ತು ಜೈನುಲ್ ಸಿ.ಸಿ.ಟಿ.ವಿ.ಯಲ್ಲಿ ನೋಡಿದ್ದರು. ಮೊಬೈಲ್ ಹಿಂದಿರುಗಿಸುವಂತೆ ಮನೋಜ್‌ಗೆ ಒತ್ತಾಯಿಸಿದರು. ಆದರೆ ಆರೋಪಿ ಮೊಬೈಲ್ ನೀಡದೇ ಅಬ್ದುಲ್ ಮಲೀಕ್ ಮತ್ತು ಜೈನುಲ್ ಮೇಲೆ ಹಲ್ಲೆ ನಡೆಸಿದ್ದಾನೆ. ನಂತರ ಅಬ್ದುಲ್ ಮಲೀಕ್‌ಗೆ ಚಾಕುವಿನಿಂದ ಇರಿದು ಕೊಲೆ ಮಾಡಿದ್ದಾನೆ. ಜೈನುಲ್‌ಗೆ ಗಂಭೀರ ಗಾಯಗಳಾಗಿದ್ದು, ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ' ಎಂದು ಪೊಲೀಸ್ ಮೂಲಗಳು ತಿಳಿಸಿವೆ.

## ಕೋರ್ಟ್ ಆದೇಶದ ಬಳಿಕ ಜನಾರ್ದನ ರೆಡ್ಡಿ ಶಾಸಕತ್ವ ಅನರ್ಹತೆ ಬಗ್ಗೆ ತೀರ್ಮಾನ

• ಉದಯ ವಾಹಿನಿ, ಬೆಂಗಳೂರು

ಕೋರ್ಟ್‌ನಿಂದ ಆದೇಶ ಬಂದ ಬಳಿಕ ಶಾಸಕ ಜನಾರ್ದನ ರೆಡ್ಡಿ ಅವರ ಶಾಸಕತ್ವ ಅನರ್ಹತೆ ಬಗ್ಗೆ ತೀರ್ಮಾನ ಮಾಡುವುದಾಗಿ ವಿಧಾನಸಭಾ ಸ್ಪೀಕರ್ ಯು.ಟಿ. ಖಾದರ್ ತಿಳಿಸಿದರು. ಸಿಬಿಐ ಕೋರ್ಟ್‌ನಿಂದ ಶಿಕ್ಷೆಗೆ ಗುರಿಯಾಗಿರುವ ಜನಾರ್ದನ ರೆಡ್ಡಿ ಅವರನ್ನು ಶಾಸಕ ಸ್ಥಾನದಿಂದ ಅನರ್ಹ ಮಾಡುವ ವಿಚಾರಕ್ಕೆ ವಿಧಾನಸೌಧದಲ್ಲಿ ಪ್ರತಿಕ್ರಿಯೆ ನೀಡಿದ ಅವರು, ಜನಾರ್ದನ ರೆಡ್ಡಿಗೆ ಶಿಕ್ಷೆ ಆಗಿರುವ ವಿಚಾರ ಮಾಧ್ಯಮ, ಪತ್ರಿಕೆಗಳ ಮೂಲಕ ನನಗೆ ಗೊತ್ತಾಗಿದೆ. ಮಾಧ್ಯಮ, ಪತ್ರಿಕೆಗಳನ್ನು ನೋಡಿ ನಾನು ಏನು ನಿರ್ಧಾರ ಮಾಡಲು ಸಾಧ್ಯವಿಲ್ಲ. ಕೋರ್ಟ್‌ನಿಂದ ಆದೇಶ ಬರಲಿ. ಆದೇಶ ಬಂದ ಬಳಿಕ ಕಾನೂನು ಪ್ರಕಾರ, ಸಂವಿಧಾನದ ಪ್ರಕಾರ ಕ್ರಮ ತೆಗೆದುಕೊಳ್ಳುತ್ತೇನೆ ಎಂದರು. ಇದೇ ವೇಳೆ 18 ಶಾಸಕರ ಅಮಾನತು ವಿಚಾರಕ್ಕೆ ಪ್ರತಿಕ್ರಿಯೆ ನೀಡಿದ ಅವರು, ರಾಜ್ಯಪಾಲರು ನನಗೆ ಪತ್ರ ಬರೆದಿದ್ದರು. ನಾನು ಊರಿನಲ್ಲಿ ಇರಲಿಲ್ಲ. ರಾಜ್ಯಪಾಲರ ಜೊತೆ ದೂರವಾಣಿಯಲ್ಲಿ ಮಾತನಾಡಿದ್ದೇನೆ. ಆದಷ್ಟು ಬೇಗ ರಾಜ್ಯಪಾಲರನ್ನು ಭೇಟಿಯಾಗಿ ಚರ್ಚೆ ಮಾಡುತ್ತೀನಿ ಎಂದು ತಿಳಿಸಿದರು.

# ಹೆಬ್ಬಾಳ -ಕೆಂಪೇಗೌಡ ಏರ್ ಪೋರ್ಟ್ ಫ್ಲೈಓವರ್ ಕಾರಿಡಾರ್ ಕಾಮಗಾರಿ ತ್ವರಿತಗೊಳಿಸಿ

### 35 ಕಿಲೋಮೀಟರ್ ಉದ್ದವಿರುವ ಮೇಲ್ಸೇತುವೆ, ಉತ್ತರ ಬೆಂಗಳೂರಿನಲ್ಲಿ ಮೂಲಸೌಕರ್ಯ ಅಗತ್ಯವಾಗಿದೆ ಗಡ್ಕರಿಗೆ ಸಲ್ಲಿಕೆ


• ಉದಯ ವಾಹಿನಿ, ಬೆಂಗಳೂರು

ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ದೆಹಲಿಯಲ್ಲಿ ಕೇಂದ್ರ ರಸ್ತೆ ಸಾರಿಗೆ, ಹೆದ್ದಾರಿ ಖಾತೆ ಸಚಿವ ನಿತಿನ್ ಗಡ್ಕರಿ ಅವರನ್ನು ಭೇಟಿ ಮಾಡಿ ಬೆಂಗಳೂರಿನ ಮೂಲಸೌಕರ್ಯವನ್ನು, ವಿಶೇಷವಾಗಿ ಹೆಬ್ಬಾಳ ಜಂಕ್ಷನ್‌ನಿಂದ ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದವರೆಗಿನ ಫ್ಲೈಓವರ್ ಕಾರಿಡಾರ್‌ನ್ನು ವೃದ್ಧಿಸುವ ಯೋಜನೆಗಳನ್ನು ತ್ವರಿತಗೊಳಿಸಲು ಮಧ್ಯಪ್ರವೇಶಿಸುವಂತೆ ಕೋರಿದ್ದಾರೆ. ಸರಿಸುಮಾರು 35 ಕಿಲೋಮೀಟರ್ ಉದ್ದವಿರುವ ಮೇಲ್ಸೇತುವೆ, ಉತ್ತರ ಬೆಂಗಳೂರಿನಲ್ಲಿ ಮೂಲಸೌಕರ್ಯ ಅಗತ್ಯವಾಗಿದೆ ಎಂದು ಅವರು ಗಡ್ಕರಿಗೆ ಸಲ್ಲಿಸಿದ ಮನವಿ ಪತ್ರದಲ್ಲಿ ಶಿವಕುಮಾರ್ ತಿಳಿಸಿದ್ದಾರೆ.

ತ್ವರಿತ ನಗರೀಕರಣ, ವಿಮಾನ ನಿಲ್ದಾಣದ ಸುತ್ತಲಿನ ಹಲವಾರು ಕೈಗಾರಿಕಾ ಮತ್ತು ವಾಣಿಜ್ಯ ಕೇಂದ್ರಗಳ ಬೆಳವಣಿಗೆಯೊಂದಿಗೆ, ಈ ಕಾರಿಡಾರ್‌ನಲ್ಲಿ ಸಂಚಾರ ಪ್ರಮಾಣ ಗಮನಾರ್ಹವಾಗಿ ಹೆಚ್ಚಾಗಿದೆ. ಇದರ ಜೊತೆಗೆ, ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣವು ಕಳೆದ ಕೆಲವು ವರ್ಷಗಳಿಂದ ಪ್ರಯಾಣಿಕರ ಸಂಚಾರದಲ್ಲಿ ತೀವ್ರ ಹೆಚ್ಚಳವನ್ನು ಕಂಡಿದೆ, ಇದು ಭಾರತದಲ್ಲಿ ಅತ್ಯಂತ ಜನನಿಬಿಡ ಮತ್ತು ವೇಗವಾಗಿ ಬೆಳೆಯುತ್ತಿರುವ ವಿಮಾನ ನಿಲ್ದಾಣಗಳಲ್ಲಿ ಒಂದಾಗಿದೆ ಎಂದು ವಿವರಿಸಿದ್ದಾರೆ.

ಕೆಂಪೇಗೌಡ ವಿಮಾನ ನಿಲ್ದಾಣಕ್ಕೆ ಹೋಗುವ ಪ್ರಯಾಣಿಕರು, ಲಾಜಿಸ್ಟಿಕ್ಸ್ ನಿರ್ವಾಹಕರು ಮತ್ತು ಹತ್ತಿರದ ಟೆಕ್ ಪಾರ್ಕ್‌ಗಳು ಮತ್ತು ಕೈಗಾರಿಕಾ ಪ್ರದೇಶಗಳಿಗೆ ಪ್ರಯಾಣಿಸುವ ಮತ್ತು ಅಲ್ಲಿಂದ ಬರುವ ಉದ್ಯೋಗಿಗಳಿಗೆ ಮೂಲಸೌಕರ್ಯಗಳಿಲ್ಲದೆ ತೊಂದರೆಯಾಗಿದೆ. ಮೀಸಲಾದ, ಅಡೆತಡೆಯಿಲ್ಲದ ಫ್ಲೈ ಓವರ್ ಹೆಬ್ಬಾಳ ಮತ್ತು ವಿಮಾನ ನಿಲ್ದಾಣದ ನಡುವಿನ ಪ್ರಯಾಣದ ಸಮಯವನ್ನು ಕಡಿಮೆ ಮಾಡುತ್ತದೆ, ಮುಖ್ಯ ಕ್ಯಾರೇಜ್‌ವೇಯಲ್ಲಿನ ದಟ್ಟಣೆಯನ್ನು ಕಡಿಮೆ ಮಾಡುತ್ತದೆ, ಪ್ರಯಾಣಿಕರು ಮತ್ತು ಸರಕು ಸಾಗಣೆಗೆ ವಿಮಾನ ನಿಲ್ದಾಣಕ್ಕೆ ಸುಗಮ ಮತ್ತು ವೇಗದ ಪ್ರವೇಶವನ್ನು ಖಚಿತಪಡಿಸುತ್ತದೆ, ರಸ್ತೆ ಸುರಕ್ಷತೆಯನ್ನು ಸುಧಾರಿಸುತ್ತದೆ, ಒಟ್ಟಾರೆ ಪ್ರಯಾಣದ ಅನುಭವವನ್ನು ಹೆಚ್ಚಿಸುತ್ತದೆ. ವಿಮಾನ ನಿಲ್ದಾಣದ ಹೆಚ್ಚುತ್ತಿರುವ ಪ್ರಯಾಣಿಕರ ದಟ್ಟಣೆ ಮತ್ತು ಪ್ರಾದೇಶಿಕ ಆರ್ಥಿಕ ಚಾಲಕನಾಗಿ ಅದರ ಕಾರ್ಯತಂತ್ರದ ಪ್ರಾಮುಖ್ಯತೆಯನ್ನು ಗಮನದಲ್ಲಿಟ್ಟುಕೊಂಡು, ಈ ಯೋಜನೆಯು ಉತ್ತರ ಬೆಂಗಳೂರಿಗೆ ಮಾತ್ರವಲ್ಲದೆ, ವಿಶಾಲ ಪ್ರದೇಶ ಮತ್ತು ರಾಷ್ಟ್ರಕ್ಕೆ ಹೆಚ್ಚಿನ ಪ್ರಯೋಜನವನ್ನು ನೀಡುತ್ತದೆ ಎಂದು ಹೇಳಿದ್ದಾರೆ.

ರಾಷ್ಟ್ರೀಯ ಹೆದ್ದಾರಿ 209 ರಲ್ಲಿ ದೀರ್ಘಕಾಲದಿಂದ ಬಾಕಿ ಉಳಿದಿರುವ ರಸ್ತೆ ಕಾಮಗಾರಿಗೆ ಅಗತ್ಯವಾದ ಭೂಮಿಯನ್ನು, ಆರ್ಟ್ ಆಫ್ ಲಿವಿಂಗ್ ರವಿಶಂಕರ್ ಆಶ್ರಮದಿಂದ ಕಗ್ಗಲೀಪುರ ಟೋಲ್‌ವರೆಗಿನ 7 ಕಿ.ಮೀ. ಪ್ರದೇಶವನ್ನು ಈಗಾಗಲೇ ಸ್ವಾಧೀನಪಡಿಸಿಕೊಳ್ಳಲಾಗಿದೆ, ಆದರೆ ರಾಷ್ಟ್ರೀಯ ಹಸಿರು ನ್ಯಾಯಮಂಡಳಿ ಎತ್ತಿದ ಆಕ್ಷೇಪಣೆಗಳಿಂದಾಗಿ ನಿರ್ಮಾಣ ಕಾರ್ಯ ಸ್ಥಗಿತಗೊಂಡಿದೆ ಎಂದು ವಿವರಿಸಿದ್ದಾರೆ. ಅಪೂರ್ಣ ರಸ್ತೆ ಸಂಚಾರಕ್ಕೆ ಪ್ರಮುಖ ಅಡಚಣೆಯಾಗಿದ್ದು, ದೈನಂದಿನ ಪ್ರಯಾಣಿಕರ ಮೇಲೆ ತೀವ್ರ ಪರಿಣಾಮ ಬೀರುತ್ತಿದೆ. ಹೆಚ್ಚುವರಿಯಾಗಿ, ಹಾರೋಹಳ್ಳಿ ಕೈಗಾರಿಕಾ ಪ್ರದೇಶವು ಗಮನಾರ್ಹ ಬೆಳವಣಿಗೆಯನ್ನು ಕಾಣುತ್ತಿದೆ. ಈ ಕಾರಿಡಾರ್‌ನಲ್ಲಿ ಮತ್ತು ಅದರ ಸುತ್ತಲೂ ತ್ವರಿತ ವಸತಿ ಅಭಿವೃದ್ಧಿ ನಡೆಯುತ್ತಿದೆ. ಸುಗಮ ಸಂಪರ್ಕ, ಆರ್ಥಿಕ ಅಭಿವೃದ್ಧಿ ಮತ್ತು ಪ್ರಯಾಣಿಕರ ಸುರಕ್ಷತೆಯನ್ನು ಖಚಿತಪಡಿಸಿಕೊಳ್ಳಲು ಈ ಬಾಕಿ ಕೆಲಸವನ್ನು ಪೂರ್ಣಗೊಳಿಸುವುದು ಅತ್ಯಗತ್ಯ ಎಂದು ವಿವರಿಸಿದ್ದಾರೆ. ವಿಮಾನ ನಿಲ್ದಾಣದ ಹೆಚ್ಚುತ್ತಿರುವ ಪ್ರಯಾಣಿಕರ ದಟ್ಟಣೆ ಪ್ರಾದೇಶಿಕ ಆರ್ಥಿಕ ಚಾಲಕನಾಗಿ ಅದರ ಕಾರ್ಯತಂತ್ರದ ಪ್ರಾಮುಖ್ಯತೆಯನ್ನು ಗಮನಿಸಿದರೆ, ಈ ಯೋಜನೆಯು ಉತ್ತರ ಬೆಂಗಳೂರಿಗೆ ಮಾತ್ರವಲ್ಲ, ವಿಶಾಲ ಪ್ರದೇಶ ಮತ್ತು ರಾಷ್ಟ್ರಕ್ಕೆ ಹೆಚ್ಚಿನ ಪ್ರಯೋಜನವನ್ನು ನೀಡುತ್ತದೆ ಎಂದು ಅವರು ಹೇಳಿದರು. ಬೆಂಗಳೂರಿನಿಂದ ಕನಕಪುರದವರೆಗಿನ ರಾಷ್ಟ್ರೀಯ ಹೆದ್ದಾರಿ 209 ಎರಡೂ ಬದಿಗಳಲ್ಲಿ ಸೇವಾ ರಸ್ತೆಗಳೊಂದಿಗೆ ಆರು ಪಥದ ಹೆದ್ದಾರಿಯಾಗಿ ವಿಸ್ತರಿಸಬೇಕೆಂದು ಅವರು ಒತ್ತಾಯಿಸಿದರು.


ಉದಯವಾಹಿನಿ ಚಿತ್ರ

### STRR ಯೋಜನೆಯಲ್ಲಿ ರೈತರಿಗೆ ಪರಿಹಾರ ಬಿಡುಗಡೆ

**ಸ್ಯಾಟಲೈಟ್ ಟೌನ್ ರಿಂಗ್ ರೋಡ್ ಯೋಜನೆ (NH-948A) ಗಾಗಿ ಸ್ವಾಧೀನಪಡಿಸಿಕೊಂಡ ರೈತರ ಜಮೀನುಗಳಿಗೆ ಪರಿಹಾರ ವಿತರಣೆಯಲ್ಲಿನ ವಿಳಂಬದ ಸಮಸ್ಯೆಯನ್ನು ಪರಿಹರಿಸಲು ಡಿಸಿಎಂ ಶಿವಕುಮಾರ್ ಗಡ್ಕರಿ ಅವರಿಗೆ ಮನವಿ ಮಾಡಿದರು. ಬೆಂಗಳೂರಿನ ಜನದಟ್ಟಣೆಯನ್ನು ಕಡಿಮೆ ಮಾಡುವ ಮತ್ತು ಪ್ರಾದೇಶಿಕ ಸಂಪರ್ಕವನ್ನು ಹೆಚ್ಚಿಸುವ ಗುರಿಯನ್ನು ಹೊಂದಿರುವ ಈ ಯೋಜನೆಯು ಡಾಬಸ್ ಪೇಟೆ, ಮಾಗಡಿ, ರಾಮನಗರ, ಹಾರೋಹಳ್ಳಿ, ಆನೇಕಲ್ ಸೇರಿದಂತೆ ಪ್ರಮುಖ ಪಟ್ಟಣಗಳ ಮೂಲಕ ಹಾದುಹೋಗುತ್ತದೆ. ಇದು ಈ ಪ್ರದೇಶದ ಮೂಲಸೌಕರ್ಯ ಮತ್ತು ಆರ್ಥಿಕ ಬೆಳವಣಿಗೆಗೆ ನಿರ್ಣಾಯಕವಾಗಿದೆ ಎಂದಿದ್ದಾರೆ. ಈ ಯೋಜನೆಯನ್ನು 2019 ರಲ್ಲಿ ಪ್ರಾರಂಭಿಸಲಾಗಿದ್ದರೂ, ಪರಿಹಾರ ಬಿಡುಗಡೆಯಲ್ಲಿನ ದೀರ್ಘಕಾಲದ ವಿಳಂಬವು ಅದರ ಪ್ರಗತಿಗೆ ಅಡ್ಡಿಯಾಗಿದೆ, ರೈತರನ್ನು ಅನಿಶ್ಚಿತ ಸ್ಥಿತಿಯಲ್ಲಿರಿಸಿದೆ ಎಂದು ಹೇಳಿದ್ದಾರೆ.**

# ದುರ್ವಾಸನೆ ನಡುವೆಯೇ ವ್ಯಾಪಾರ ವಹಿವಾಟು

• ಉದಯ ವಾಹಿನಿ, ಬೆಂಗಳೂರು


ಉದಯವಾಹಿನಿ ಚಿತ್ರ

**ವಾಹನ ನಿಲುಗಡೆ ಸ್ಥಳದಲ್ಲಿ ಸಂಗ್ರಹ**

ಮಾರುಕಟ್ಟೆಯ ಪ್ರಾಂಗಣದಲ್ಲಿ ಬಿದ್ದಿರುವ ಕಸದ ರಾಶಿ. ಮಳೆ ಬಂದಾಗಲೆಲ್ಲ ಕೆಸರು ಗದ್ದೆಯಾಗುವ ಅಂಗಳ, ಮಾರುಕಟ್ಟೆಯ ಹಿಂಭಾಗದ ರಸ್ತೆಯ ಮೇಲೆ ಹರಿಯುವ ಒಳಚರಂಡಿ ನೀರಿನಿಂದ ಇಡೀ ಪ್ರದೇಶವೇ ಗಬ್ಬೆದ್ದು ನಾರುತ್ತಿದೆ. ನಿತ್ಯ ಈ ದುರ್ವಾಸನೆಯ ನಡುವೆಯೇ ವ್ಯಾಪಾರ ವಹಿವಾಟು ನಡೆಯುತ್ತಿದೆ. ಕೆ.ಆರ್. ಮಾರುಕಟ್ಟೆಯ ಮುಖ್ಯ ಕಟ್ಟಡದ ಹಿಂಭಾಗದಿಂದ ಚಿಕ್ಕಪೇಟೆ ಮೆಟ್ರೊ ನಿಲ್ದಾಣಕ್ಕೆ ಹೋಗುವ ಮಾರ್ಗದಲ್ಲಿರುವ ಹಣ್ಣು, ತರಕಾರಿ, ಸೊಪ್ಪು ಮತ್ತು ತೆಂಗಿನಕಾಯಿ ವ್ಯಾಪಾರಿಗಳು ಇಂಥ ಅಶುಚಿತ್ವದ ಪರಿಸರದಲ್ಲೇ ವ್ಯಾಪಾರ ಮಾಡುವ ಪರಿಸ್ಥಿತಿ ಇದೆ.

**ದುರ್ವಾಸನೆಗೆ ಕಾರಣವೇನು:** ಕೆ.ಆರ್. ಮಾರು ಕಟ್ಟೆಯ ಕಟ್ಟಡದ ನೆಲಮಹಡಿಯ ವಾಹನ ನಿಲುಗಡೆ ಸ್ಥಳದಲ್ಲಿ ನಿತ್ಯ ತ್ಯಾಜ್ಯ ಸಂಗ್ರಹವಾಗುತ್ತದೆ. ಬಿಬಿಎಂಪಿಯವರು ತ್ಯಾಜ್ಯವನ್ನು ಜೆಸಿಬಿ ಮೂಲಕ ಲಾರಿಗೆ ತುಂಬಿಸುವ ಸಂದರ್ಭದಲ್ಲಿ ಅದನ್ನು ಕಂಪ್ರೆಸ್ ಮಾಡುತ್ತಾರೆ. ಆಗ ಉತ್ಪತ್ತಿಯಾಗುವ ತ್ಯಾಜ್ಯ ನೀರನ್ನು ಪೈಪ್ ಮೂಲಕ ಚರಂಡಿಗೆ ಬಿಡುವ ಬದಲು ನಿತ್ಯ ರಸ್ತೆಯಲ್ಲಿ ಹರಿಸಲಾಗುತ್ತಿದೆ. ಇದೇ ದುರ್ವಾಸನೆ ಹೊಮ್ಮಲು ಕಾರಣವಾಗಿದೆ. ಮುಖ್ಯ ಕಟ್ಟಡದಿಂದ ಚರಂಡಿಗೆ ಜೋಡಿಸಿಬೇಕಿದ್ದ ಪೈಪ್ ಹಾಗೆಯೇ ಬಿಟ್ಟಿರುವುದರಿಂದ, ತ್ಯಾಜ್ಯ ನೀರು ರಸ್ತೆಗೆ ಹರಿಯುತ್ತಿದೆ. ವಾಹನ ನಿಲುಗಡೆ ಸ್ಥಳದಲ್ಲಿ ಸಂಗ್ರಹಿಸಿದ ತ್ಯಾಜ್ಯವನ್ನು ಬಿಬಿಎಂಪಿ ಸಿಬ್ಬಂದಿ ಜೆಸಿಬಿ ಮೂಲಕ ಮೇಲ್ಭಾಗಕ್ಕೆ ತೆಗೆದು ಕೊಂಡು ಬಂದು ರಸ್ತೆಯಲ್ಲಿ ಸುರಿಯುತ್ತಾರೆ. ಸುರಿದ ತ್ಯಾಜ್ಯವನ್ನು ಇನ್ನೊಂದು ಜೆಸಿಬಿಯ ಮೂಲಕ ಟ್ರಕ್‌ಗಳಲ್ಲಿ ತುಂಬಿಸಿ ವಿಲೇವಾರಿ ಮಾಡಲಾಗುತ್ತಿದೆ. ಹಸಿ ಕಸ, ಒಣ ಕಸವೆಂದು ವಿಂಗಡಿಸದೇ ಅವೈಜ್ಞಾನಿಕ ವಾಗಿ ವಿಲೇವಾರಿ ಮಾಡುತ್ತಿದ್ದಾರೆ. ಇದೂ ನಮಗೆ ದೊಡ್ಡ ಸಮಸ್ಯೆಯಾಗಿದೆ' ಎಂದು ವ್ಯಾಪಾರಿಗಳು ದೂರಿದರು.

ತೆಂಗಿನಕಾಯಿ, ಹಣ್ಣು, ತರಕಾರಿ, ಹೂವು ಸೇರಿದಂತೆ ವಿವಿಧ ಬಗೆಯ ಪದಾರ್ಥಗಳನ್ನು ಮಾರಾಟ ಮಾಡುವ ಹತ್ತಾರು ಅಂಗಡಿಗಳು ಇಲ್ಲಿ ಇವೆ. ಮಾರುಕಟ್ಟೆಗೆ ಸಂಪರ್ಕಿಸುವ ಎಲ್ಲಾ ಮಾರ್ಗಗಳಲ್ಲೂ ಅಷ್ಟೇ ಪ್ರಮಾಣದ ವ್ಯಾಪಾರ ನಡೆಯುತ್ತಿದೆ. ಆದರೆ, ಇಲ್ಲಿ ಶುದ್ಧ ಕುಡಿಯುವ ನೀರಿನ ವ್ಯವಸ್ಥೆ ಇಲ್ಲ. ಸ್ವಚ್ಛತೆ ಎಂಬುದು ಮರಿಚೀಕೆಯಾಗಿದೆ.

### ರಸ್ತೆಯಲ್ಲೇ ಮಳೆ ನೀರು

**ಸ್ವಲ್ಪ ಜೋರಾಗಿ ಮಳೆ ಸುರಿದರೆ ಸಾಕು ಮಾರುಕಟ್ಟೆಯ ಸಂಪರ್ಕದ ರಸ್ತೆಗಳೆಲ್ಲ ಕಾಲುವೆಗಳಂತಾಗುತ್ತವೆ. ಅವೆನ್ಯೂ ರಸ್ತೆಯಲ್ಲಿ ಮಳೆ ಬಂದಾಗ ಒಳಚರಂಡಿಯ ಚೇಂಬರ್‌ಗಳು ತೆರೆದುಕೊಂಡು ಕೊಳಚೆ ನೀರು ಹೊರಗೆ ಹರಿಯುತ್ತದೆ. ಮಾರುಕಟ್ಟೆಯಲ್ಲಿ ಸರಿಯಾದ ಚರಂಡಿ ವ್ಯವಸ್ಥೆಯೇ ಇಲ್ಲ ಎಂದು ವ್ಯಾಪಾರಿಗಳು ಪರಿಸ್ಥಿತಿ ವಿವರಿಸಿದರು.**

ಶೌಚಾಲಯಗಳಿಗೆ ಮೂಗು ಮುಚ್ಚಿಕೊಂಡು ಹೋಗಬೇಕಾಗಿದೆ ಎಂದು ಅವರು ಅಳಲು ತೋಡಿಕೊಂಡರು. ರಸ್ತೆಯಲ್ಲಿ ಹರಿಯುವ ದ್ರವತ್ಯಾಜ್ಯದ ಸಮಸ್ಯೆಯನ್ನು ಬಗೆಹರಿಸುವಂತೆ ಬಿಬಿಎಂಪಿ ಸಿಬ್ಬಂದಿಗೆ ಹಲವಾರು ಬಾರಿ ಮನವಿ ಸಲ್ಲಿಸಿದರೂ ಪ್ರಯೋಜನವಾಗಿಲ್ಲ. ಇದು ನಮ್ಮ ವಿಭಾಗಕ್ಕೆ ಬರುವುದಿಲ್ಲವೆಂದು ಅಧಿಕಾರಿಗಳು ಒಬ್ಬರ ಮೇಲೆ ಇನ್ನೊಬ್ಬರು ಆರೋಪಿಸುತ್ತಿದ್ದಾರೆ. ಎರಡು ವರ್ಷಗಳಿಂದ ಈ ಸಮಸ್ಯೆ ಹಾಗೆಯೇ ಉಳಿದಿದೆ' ಎಂದು ನಿಂಬೆ ಹಣ್ಣಿನ ವ್ಯಾಪಾರಿ ಸರೋಜಮ್ಮ ಅಳಲು ತೋಡಿಕೊಂಡರು. ಈ ಬಗ್ಗೆ ಪ್ರತಿಕ್ರಿಯೆ ಪಡೆಯಲು ಬಿಎಸ್‌ಡಬ್ಲ್ಯುಎಂಎಲ್‌ನ ಮುಖ್ಯ ಕಾರ್ಯನಿರ್ವಹಣಾ ಅಧಿಕಾರಿ ರಮಾಮಣಿ ಅವರಿಗೆ ಕರೆ ಮಾಡಿದರು ಸ್ವೀಕರಿಸಲಿಲ್ಲ.

## ದೇವರ ಪ್ರತಿಷ್ಠಾಪನಾ ಮಹೋತ್ಸವ

• ಉದಯ ವಾಹಿನಿ, ಯಲಹಂಕ

ದೇವಾಲಯಗಳು ಕಷ್ಟದಲ್ಲಿರುವವರ ಮನಸ್ಸಿಗೆ ಶಾಂತಿ-ನೆಮ್ಮದಿ ಮತ್ತು ಪರಿಹಾರಗಳನ್ನು ನೀಡುವ ತಾಣಗಳಾಗಿವೆ' ಎಂದು ಆದಿಚುಂಚನಗಿರಿ ಮಠದ ನಿರ್ಮಲಾನಂದನಾಥ ಸ್ವಾಮೀಜಿ ಅಭಿಪ್ರಾಯ ಪಟ್ಟರು. ಗ್ರಾಮಗಳಲ್ಲಿ ದೇವಾಲಯಗಳನ್ನು ನಿರ್ಮಿಸುವುದರಿಂದ ಜನರು ಒಂದೆಡೆ ಬೆರೆತು, ಒಗ್ಗಟ್ಟು ಮೂಡುವುದರ ಜೊತೆಗೆ ನಮ್ಮ ಸನಾತನ ಹಿಂದೂ ಧರ್ಮ ಮತ್ತು ಸಂಸ್ಕೃತಿಯ ಬೆಳವಣಿಗೆಗೆ ಸಹಕಾರಿಯಾಗುತ್ತದೆ ಎಂದರು.


ಉದಯವಾಹಿನಿ ಚಿತ್ರ


ಬ್ಯಾಟರಾಯನಪುರ ಕ್ಷೇತ್ರದ ತರಹುಣಿಸೆ ಗ್ರಾಮದಲ್ಲಿ ಮಹಾಗಣಪತಿ, ಬಸವೇಶ್ವರ ಸ್ವಾಮಿ, ಮಹ ದೇಶ್ವರಸ್ವಾಮಿ, ವಿಮಾನ ಗೋಪುರ ಹಾಗೂ ನಾಗರದೇವತಾ ಪ್ರತಿಷ್ಠಾಪನಾ ಮಹೋತ್ಸವ ಸಮಾರಂಭದಲ್ಲಿ ಅವರು ಮಾತನಾಡಿದರು. ಮಕ್ಕಳಿಗೆ ಪ್ರಾಥಮಿಕ ಹಂತದಿಂದಲೇ ದೇವರು, ಸಂಸ್ಕೃತಿ, ದೇಶ ಮತ್ತು ಧರ್ಮದ ಬಗ್ಗೆ ಜಾಗೃತಿ ಮೂಡಿಸಬೇಕು. ಇದರಿಂದ ಸನಾತನ ಹಿಂದೂಧರ್ಮ ಮತ್ತು ಸಂಸ್ಕೃತಿಯ ಅಭಿವೃದ್ಧಿಗೆ ಪೂರಕವಾಗುತ್ತದೆ ಎಂದರು. ತುಮಕೂರು ಸಿದ್ದಗಂಗಾ ಕ್ಷೇತ್ರದ ಸಿದ್ಧಲಿಂಗ ಸ್ವಾಮೀಜಿ, ಕಂದಾಯ ಸಚಿವ ಕೃಷ್ಣಬೈರೇಗೌಡ, ಶಾಸಕ ಎಸ್. ಆರ್. ವಿಶ್ವನಾಥ್, ದೇವಸ್ಥಾನದ ಆಡಳಿತ ಮಂಡಳಿ ಅಧ್ಯಕ್ಷ ಟಿ.ಪಿ.ಪ್ರಕಾಶ್, ಉಪಾಧ್ಯಕ್ಷ ಟಿ.ಪಿ.ಮುನೇಗೌಡ, ಕಾರ್ಯದರ್ಶಿ ಟಿ.ಎಸ್.ನಾಗರಾಜರಾವ್, ಖಜಾಂಚಿ ಟಿ.ಎಂ.ಶ್ರೀರಾಮ್, ಗ್ರಾಮಪಂಚಾಯಿತಿ ಅಧ್ಯಕ್ಷೆ ಹೇಮಾವತಿ ನಾಗರಾಜಬಾಬು, ಸದಸ್ಯ ಟಿ.ಎಸ್.ನವೀನ್‌ಕುಮಾರ್ ಉಪಸ್ಥಿತರಿದ್ದರು.

## ರಾಯರ ಮಠದಲ್ಲಿ ಭಾರತ ದೇಶ, ಧರ್ಮ ರಕ್ಷಣೆಗಾಗಿ ಸಹಸ್ರಾರು ಭಕ್ತರಿಂದ ದೀಪಾರಾಧನೆ

• ಉದಯ ವಾಹಿನಿ, ಬೆಂಗಳೂರು

ಜಯನಗರ 5ನೇ ಬಡಾವಣೆಯ ನಂಜನಗೂಡು ಶ್ರೀ ರಾಘವೇಂದ್ರ ಸ್ವಾಮಿಗಳ ಮಠದಲ್ಲಿ ಪರಮಪೂಜ್ಯ ಶ್ರೀ 1008 ಶ್ರೀ ಸುಬುಧೇಂದ್ರತೀರ್ಥ ಶ್ರೀಪಾದಂಗಳವರ ಆದೇಶದಂತೆ ಶ್ರೀಮಠದ ಹಿರಿಯ ವ್ಯವಸ್ಥಾಪಕರಾದ ಶ್ರೀ ಆರ್. ಕೆ. ವಾದೀಂದ್ರಾಚಾರ್ಯರ ನೇತೃತ್ವದಲ್ಲಿ ಲೋಕ ಕಲ್ಯಾಣಕ್ಕಾಗಿ ಭಕ್ತರಿಂದ ಶ್ರೀ ರಾಘವೇಂದ್ರ ಸ್ವಾಮಿಗಳಿಗೆ ಪೂಜ್ಯಾಯ ರಾಘವೇಂದ್ರಾಯ ಸತ್ಯ ಧರ್ಮ ರತಾಯಕ ಭಜತಾಂ ಕಲ್ಪವೃಕ್ಷಾಯ ನಮತಾಂ ಕಾಮಧೇನವೇ ಹಾಗೂ ರಾಘವೇಂದ್ರ ಪಾಹಿಮಾಮ್ ರಾಘವೇಂದ್ರ ರಕ್ಷಮಾಂ ಎಂಬ ಶ್ಲೋಕಗಳ ಮೂಲಕ ಪ್ರಾರ್ಥನೆಯನ್ನು ಸಲ್ಲಿಸಿದರು ಎಂದು ಶ್ರೀ ನಂದ ಕಿಶೋರ್ ಆಚಾರ್ಯರು ತಿಳಿಸಿದರು. ಗುರುವಾರದ ಪ್ರಯುಕ್ತ ವಿಶೇಷ ಜಪ, ಪಾರಾಯಣ, ಪ್ರಾರ್ಥನೆಯೊಂದಿಗೆ ಶ್ರೀ ರಾಘವೇಂದ್ರ ಸ್ವಾಮಿಗಳ ಬೃಂದಾವನಕ್ಕೆ ದೀಪಾರಾಧನೆ ನೆರವೇರಿತು.

ಇದರ ಮೂಲಕ ಕೆಲವು ದಿನಗಳ ಹಿಂದೆ ಪಹಲ್ಗಾಮ್ನಲ್ಲಿ ಭಯೋತ್ಪಾದಕರ ದಾಳಿಗೊಳಗಾಗಿ ದೇಶಕ್ಕಾಗಿ ಪ್ರಾಣ ಕೊಟ್ಟವರ ಆತ್ಮಕ್ಕೆ ಸದ್ಗತಿ ಸಿಗಲಿ ಹಾಗೂ ನಮ್ಮ ದೇಶದ ಗಡಿಯನ್ನು ರಕ್ಷಿಸುತ್ತಿರುವ ಸೇನೆಗೆ ಇನ್ನಷ್ಟು ಶಕ್ತಿ ಬರಲಿ ಎಂದು ಶ್ರೀಮಠದ ಸಿಬ್ಬಂದಿಗಳು ಸಹಸ್ರಾರು ಭಕ್ತರು ದೀಪಗಳನ್ನು ಪ್ರಜ್ವಲಿಸಿ ಆರತಿಯನ್ನು ಬೆಳಗುವ ಮೂಲಕ ಭಾರತ ದೇಶವನ್ನು ಸುಭದ್ರವಾಗಿ ನಡೆಸುತ್ತಿರುವ ಪ್ರಧಾನಿ ಮೋದಿ ಅವರಿಗೂ, ಭಾರತೀಯ ಸೇನೆಗೂ ಇನ್ನಷ್ಟು ಬಲ ಹಾಗೂ ಶಕ್ತಿ ಬರಲಿ ಎಂದು ಶ್ರೀ ರಾಘವೇಂದ್ರ ತೀರ್ಥ ಗುರುಸಾರ್ವಭೌಮರಲ್ಲಿ ಪ್ರಾರ್ಥಿಸಲಾಯಿತು.


ಉದಯವಾಹಿನಿ ಚಿತ್ರ

ಈ ಪೂಜೆಯಲ್ಲಿ ಆರ್ ಕೆ ವಾದಿಂದ್ರ ಆಚಾರ್ಯರು ಹಾಗೂ ಶ್ರೀ ನಂದ ಕಿಶೋರ್ ಆಚಾರ್ಯರೊಂದಿಗೆ ಸಹಸ್ರಾರು ಸಂಖ್ಯೆಯಲ್ಲಿ ಭಕ್ತರು ಭಾಗವಹಿಸಿ ಪ್ರಾರ್ಥನೆ ಸಲ್ಲಿಸಿದರು.

## ಮಸೀದಿಗಳಲ್ಲಿ ವಿಶೇಷ ಪ್ರಾರ್ಥನೆಗೆ ಜಮೀರ್ ಸಂದೇಶ

• ಉದಯ ವಾಹಿನಿ, ಬೆಂಗಳೂರು

ಆಪರೇಷನ್ ಸಿಂಧೂರ ಕಾರ್ಯಾಚರಣೆ ಹಿನ್ನೆಲೆಯಲ್ಲಿ ಕರ್ನಾಟಕದ ಮುಜರಾಯಿ ಇಲಾಖಾ ಎಲ್ಲಾ ದೇವಾಲಯಗಳಲ್ಲಿ ವಿಶೇಷ ಪೂಜೆ ಸಲ್ಲಿಸಲು ಮುಜರಾಯಿ ಇಲಾಖೆ ಆದೇಶ ಹೊರಡಿಸಿದೆ.

ಮುಜರಾಯಿ ಸಚಿವ ರಾಮಲಿಂಗಾರೆಡ್ಡಿ ಅವರು ಆಪರೇಷನ್ ಸಿಂಧೂರದ ಭಾಗವಾಗಿ ಎಲ್ಲಾ ದೇವಸ್ಥಾನದಲ್ಲಿ ವಿಶೇಷ ಪೂಜೆ ನಡೆಸಲು ಸೂಚನೆ ನೀಡಿದ್ದಾರೆ. ಭಾರತೀಯ ಸೇನೆಯ ಹೆಸರಿನಲ್ಲಿ ವಿಶೇಷ ಪೂಜೆ ಮಾಡಲು ಧಾರ್ಮಿಕ ದತ್ತಿ ಇಲಾಖೆ ಆಯುಕ್ತರು ಆದೇಶಿಸಿದ್ದಾರೆ. ಇದರ ಬೆನ್ನಲ್ಲೇ ಇದೀಗ ಮಸೀದಿಗಳಲ್ಲಿ ವಿಶೇಷ ಪ್ರಾರ್ಥನೆ ಸಲ್ಲಿಸುವಂತೆ ವಕ್ಫ್ ಅಲ್ಪಸಂಖ್ಯಾತರ ಕಲ್ಯಾಣ ಸಚಿವ ಜಮೀರ್ ಅಹ್ಮದ್ ಖಾನ್ ಅವರು ಸಂದೇಶ ರವಾನಿಸಿದ್ದಾರೆ.

ಭಾರತೀಯ ಸೇನೆಯ ಆಪರೇಷನ್ ಸಿಂಧೂರ ಕಾರ್ಯಾಚರಣೆಗೆ ಎಲ್ಲೆಡೆ ಪ್ರಶಂಸೆ ವ್ಯಕ್ತವಾಗುತ್ತಿದೆ. ಈ ನಿಟ್ಟಿನಲ್ಲಿ ನಮ್ಮ ದೇಶದ ಮೂರು ಸಶಸ್ತ್ರ ಪಡೆಗಳ ಸೈನಿಕರಿಗೆ ಕೃತಜ್ಞತೆ ಸಲ್ಲಿಸಲು ರಾಜ್ಯಾದ್ಯಂತ ಎಲ್ಲಾ ಮಸೀದಿಗಳಲ್ಲಿ ವಿಶೇಷ ಪ್ರಾರ್ಥನೆ ಸಲ್ಲಿಸುವಂತೆ ಸಚಿವ ಬಿ ಝಡ್ ಜಮೀರ್ ಅಹ್ಮದ್ ಅವರು ವಕ್ಫ್ ಬೋರ್ಡ್ ಸಿಇಒಗೆ ಪತ್ರದ ಮೂಲಕ ಸೂಚನೆ ನೀಡಿದ್ದಾರೆ.


ಉದಯವಾಹಿನಿ ಚಿತ್ರ

ಪಹಲ್ಗಾಮ್‌ನಲ್ಲಿ ಉಗ್ರರ ದಾಳಿ ಹಿನ್ನೆಲೆ ಆಪರೇಷನ್ ಸಿಂಧೂರ ಕಾರ್ಯಾಚರಣೆ ನಡೆಸಿ ದೇಶ ರಕ್ಷಣೆಯಲ್ಲಿ ತೊಡಗಿರುವ ಭಾರತದ ಸೈನಿಕರ ಶ್ರೇಯಸ್ಸು ಮತ್ತು ಶಕ್ತಿ ತುಂಬಲು ವಕ್ಫ್ ಬೋರ್ಡ್ ವ್ಯಾಪ್ತಿಯ ಮಸೀದಿಗಳು ಸೇರಿ ಎಲ್ಲಾ ಮಸೀದಿಗಳಲ್ಲಿ ನಾಳೆ ಶುಕ್ರವಾರ ವಿಶೇಷ ಪ್ರಾರ್ಥನೆ ಸಲ್ಲಿಸುವಂತೆ ತಿಳಿಸಲಾಗಿದೆ. ಇದು ಸಾಮಾಜಿಕ ಜಾಲತಾಣಗಳಲ್ಲಿ ಭಾರೀ ಟ್ರೋಲ್ ಆಗಿತ್ತು. ಇದರ ಮಧ್ಯ ಈಗ ಭಾರತ ಸೈಕರ ಶ್ರೇಯಸ್ಸಿಗೆ ಮಸೀದಿಗಳಲ್ಲಿ ಪ್ರಾರ್ಥನೆ ಸಲ್ಲಿಸಲು ಸೂಚನೆ ಹೊರಡಿಸಿದ್ದಾರೆ.

**ರಾಜ್ಯದ ಮುಜುರಾಯಿ ಇಲಾಖೆಗೆ ಒಳಪಡುವ ದೇವಸ್ಥಾನಗಳಲ್ಲಿ ಭಾರತೀಯ ಸೇನೆ ಹೆಸರಲ್ಲಿ ವಿಶೇಷ ಪೂಜೆ ಸಲ್ಲಿಸುವಂತೆ ಸುತ್ತೋಲೆ ಹೊರಬಿದ್ದ ಬೆನ್ನಲ್ಲೇ ಮುಸ್ಲಿಮರಿಗೂ ಸಹ ಮಸೀದಿಗಳಲ್ಲಿ ವಿಶೇಷ ಪೂಜೆ ಸಲ್ಲಿಸಲು ಹೇಳಬೇಕೆಂಬ ಕೂಗು ಕೇಳಿಬಂದಿದ್ದವು. ಇದರ ಬೆನ್ನಲ್ಲೇ ಇದೀಗ ಸಚಿವ ಜಮೀರ್ ಅಹ್ಮದ್ ಖಾನ್ ಇಂತಹದೊಂದು ಸೂಚನೆ ನೀಡಿದ್ದು ಮೆಚ್ಚುಗೆಗೆ ಕಾರಣವಾಗಿದೆ. ಇನ್ನು ಮೊನ್ನೆ ಅಷ್ಟೇ ಇದೇ ಸಚಿವ ಜಮೀರ್ ಅಹ್ಮದ್ ಖಾನ್ ಅವರು ಪಾಕಿಸ್ತಾನ ವಿರುದ್ಧ ಯುದ್ಧ ಮಾಡುವುದಾದರೆ ನಾನು ಸೂಸೈಡ್ ಸೂಟ್ ತೊಟ್ಟು ಹೋಗಲು ಸಿದ್ಧನಿದ್ದೇನೆ ಎಂದು ಹೇಳಿದ್ದರು.**

# ಬೆಂಗಳೂರಿನಲ್ಲಿ ಸೇನೆಗಳ ಮಾಕ್ ಡ್ರಿಕ್ ಸಕ್ಸಸ್

### ಯುದ್ಧ ಕಾರ್ಮೋಡದ ಹಿನ್ನೆಲೆಯಲ್ಲಿ ಜಾಗೃತಿ, ಆಪರೇಷನ್ ಅಭ್ಯಾಸ್ ಅಣಕು ಪ್ರದರ್ಶನ ವೀಕ್ಷಿಸಿದ ಡಾ.ಜಿ.ಪರಮೇಶ್ವರ್

• ಉದಯ ವಾಹಿನಿ, ಬೆಂಗಳೂರು

ಪ್ರಶಾಂತ ಇಳಿ ಸಂಜೆಯಲ್ಲಿ ಕನಲಿ ಹೋಗುವ ಸೈರನ್ ಸದ್ದು... ನಾಲ್ಕೈದು ಬಾರಿ ಗುಂಡಿನ ಸ್ಫೋಟ. ಮೂರಂತಸ್ತಿನ ಕಟ್ಟಡದಲ್ಲಿ ಧಗಧಗಿಸಿದ ಬೆಂಕಿ... ದಿಕ್ಕಾಪಾಲಾಗಿ ಓಡಿದ ಜನ.. ಕೆಲವೇ ನಿಮಿಷಗಳಲ್ಲಿ ರಕ್ಷಣೆಗೆ ಧಾವಿಸಿದ ರಕ್ಷಣಾ ಸಿಬ್ಬಂದಿ.. ಅರೆ ಇದೇನಿದು, ಬೆಂಗಳೂರಿನಲ್ಲಿ ಉಗ್ರರ ದಾಳಿಯಾಯಿತೇ ಎಂದು ಆತಂಕಪಡಬೇಡಿ. ಇದು ಯುದ್ಧಪೂರ್ವದ ಮುನ್ಸೂಚನೆ ಹಾಗೂ ತುರ್ತು ಪರಿಸ್ಥಿತಿಯಲ್ಲಿ ಕೈಗೊಳ್ಳುವ ರಕ್ಷಣಾ ಕ್ರಮಗಳ ಬಗ್ಗೆ ಹಲಸೂರಿನಲ್ಲಿ ನಡೆದ ಅಣಕು ಪ್ರದರ್ಶನವಷ್ಟೇ.. ಕಾಶ್ಮೀರದ ಪಹಲ್ಗಾಮ್‌ನಲ್ಲಿ ಪಾಕಿಸ್ತಾನದ ಉಗ್ರರು ನಡೆಸಿದ ಪೈಶಾಚಿಕ ನರಮೇಧದ ಬಳಿಕ ಭಾರತೀಯ ಸೇನಾ ಪಡೆಗಳು ಪಾಕಿಸ್ತಾನದಲ್ಲಿರುವ 9 ಉಗ್ರನೆಲೆಗಳನ್ನು ಧ್ವಂಸ ಮಾಡಿ ತಿರುಗೇಟು ನೀಡಿದೆ. ಈ ನಿಟ್ಟಿನಲ್ಲಿ ದೇಶಾದ್ಯಂತ ಯುದ್ಧದ ಕಾರ್ಮೋಡ ಕವಿದಿತ್ತು. ಮುಂಜಾಗ್ರತಾ ಕ್ರಮವಾಗಿ ತುರ್ತು ಸಂದರ್ಭದಲ್ಲಿ ನಾಗರಿಕರು ರಕ್ಷಣೆ ಮಾಡಿಕೊಳ್ಳುವ 'ಆಪರೇಷನ್ ಅಭ್ಯಾಸ್' ಅಣಕು ಪ್ರದರ್ಶನ ನಡೆಸುವಂತೆ ಕೇಂದ್ರ ಗೃಹ ಇಲಾಖೆ ಸೂಚನೆ ರವಾನಿಸಿತ್ತು. ಈ ನಿಟ್ಟಿನಲ್ಲಿ ರಾಜ್ಯ ಅಗ್ನಿಶಾಮಕ ದಳ ಹಾಗೂ ತುರ್ತು ಸೇವೆಗಳ ಇಲಾಖೆ ವತಿಯಿಂದ ಹಲಸೂರಿನ ಕಚೇರಿ ಆವರಣದಲ್ಲಿ 'ಆಪರೇಷನ್ ಅಭ್ಯಾಸ್' ನಡೆಯಿತು.

**ಐದು ಸೈರನ್ ಮುನ್ಸೂಚನೆ:** ಶತ್ರುಗಳು ದಾಳಿ ನಡೆಸಲಿರುವ ಮುನ್ನೆಚ್ಚರಿಕೆ ನೀಡುವ ಸಲುವಾಗಿ ಸೈರನ್ ಮೊಳಗಿಸುವ ಮೂಲಕ ನಾಗರಿಕರಿಗೆ ತಿಳಿವಳಿಕೆ ನೀಡಲಾಯಿತು. ಮೂಧಿರು ಬಾರಿ ಭಿನ್ನ ರೀತಿಯ ಸೈರನ್ ಕೂಗಿದಾಗ ನಾಗರಿಕರು ಹೇಗೆ ಸುರಕ್ಷಿತ ಸ್ಥಳಗಳಿಗೆ ತೆರಳಬೇಕು. ಯಾವ ರೀತಿ ಸ್ವಯಂ ರಕ್ಷಣೆ ಪಡೆದುಕೊಳ್ಳಬೇಕು ಎಂದು ಅಣಕು ಪ್ರದರ್ಶನದ ಮೂಲಕ ಜಾಗೃತಿ ಮೂಡಿಸಲಾಯಿತು. ಕೊನೆಯದಾಗಿ ಯಾವುದೇ ಅಪಾಯವಿಲ್ಲ ಎಂಬುದಕ್ಕೂ ಪ್ರತ್ಯೇಕ ಸೈರನ್ ಮೊಳಗಿಸಿ ಗೌಪ್ಯ ಸ್ಥಳಗಳಲ್ಲಿ ರಕ್ಷಣೆ ಪಡೆದಿರುವ ನಾಗರಿಕರು ಸುರಕ್ಷಿತವಾಗಿ ಹೊರಗಡೆ ಬರಬಹುದು ಎಂಬುದರ ಪ್ರಾತ್ಯಕ್ಷಿಕೆಯನ್ನೂ ನೀಡಲಾಯಿತು.


ಉದಯವಾಹಿನಿ ಚಿತ್ರ

**ಢಂ ಢಂ ಢಮಾರ್:** ಮತ್ತೊಂದೆಡೆ ಬಾಂಬ್ ಸ್ಫೋಟವನ್ನೇ ಹೋಲುವಂತೆ ಹಠಾತ್ತಾಗಿ ನಾಲ್ಕೈದು ಬಾರಿ ಸ್ಫೋಟ ಸಂಭವಿಸಿತು. ಭಾರೀ ಸದ್ದು ಕೇಳಿ ನಾಗರಿಕರು ಕೆಲಕಾಲ ಬೆಚ್ಚಿಬಿದ್ದರು.

ಅಪಾರ್ಟ್‌ಮೆಂಟ್ ನಿವಾಸಿಗಳು ಆತಂಕದಿಂದ ಕೆಳಗೆ ಇಳಿದರು. ಕೆಲವರು ಕಿಟಕಿಗಳಿಂದಲೇ ಏನು ಸಂಭವಿಸಿದೆ ಎಂದು ಇಣುಕಿ ನೋಡುತ್ತಿದ್ದರು. ನೋಡ ನೋಡುತ್ತಿದ್ದಂತೆ ಮೂರಂತಸ್ತಿನ ಕಟ್ಟಡದಲ್ಲಿದಟ್ಟ ಹೊಗೆ ಹಾಗೂ ಕಟ್ಟಡದ ಟೆರೇಸ್ ಮೇಲೆ ಬೆಂಕಿ ಹೊತ್ತಿ ಉರಿಯತೊಡಗಿತ್ತು.

ಸಹಾಯಕ್ಕಾಗಿ ಕಿರುಚಾಟ, ಕೂಗಾಟವೂ ಹೆಚ್ಚಾಗಿತ್ತು. ವಿಷಯ ತಿಳಿದ ಕೂಡಲೇ ನಾಲ್ಕು ಅಗ್ನಿಶಾಮಕ ವಾಹನಗಳು ಸ್ಥಳಕ್ಕೆ ಆಗಮಿಸಿದವು. ಆಕ್ಸಿಜನ್ ಸಿಲಿಂಡರ್ ಹೊತ್ತ ಸಿಬ್ಬಂದಿ ಪ್ರಾಣಾಪಾಯ ಲೆಕ್ಕಿಸದೆ ಕಟ್ಟಡದ ಒಳಗಡೆ ಪ್ರವೇಶಿಸಿದರು. ಕಟ್ಟಡದಲ್ಲಿಸಿಲುಕಿದ್ದ ನಾಗರಿಕರನ್ನು ಸುರಕ್ಷಿತವಾಗಿ ಹೊರಗೆ ಕರೆತಂದು ಅದಾಗಲೇ ಸಿದ್ಧವಾಗಿ ನಿಂತಿದ್ದ ಆಂಬ್ಯುಲೆನ್ಸ್ ಮೂಲಕ ಆಸ್ಪತ್ರೆಗೆ ರವಾನಿಸಿದರು. ಇದೇ ಸಮಯದಲ್ಲಿಮತ್ತೊಂದು ತಂಡ ಏಣಿ ಬಳಸಿ ಸರಸರನೆ ಕಟ್ಟಡದ ಟೆರೇಸ್ ಏರಿದರು. ಕ್ಷಿಪ್ರ ಕಾರ್ಯಾಚರಣೆ ನಡೆಸಿ ಬೆಂಕಿ ನಂದಿಸುವಲ್ಲಿಯಶಸ್ವಿಯಾಯಿತು. ಈ ಮೂಲಕ ತುರ್ತು ಸಂದರ್ಭಗಳಲ್ಲಿನಿಮ್ಮ ರಕ್ಷಣೆಗೆ ನಾವು ಸದಾ ಬದ್ಧ ಎಂಬ ಸಂದೇಶವನ್ನು ಅಗ್ನಿಶಾಮಕ ಸಿಬ್ಬಂದಿ ರವಾನಿಸಿದರು.

**90 ಮೀಟರ್ ಎತ್ತರದಲ್ಲಿದ್ದರೂ ಸೇಫ್:** ಮತ್ತೊಂದೆಡೆ ಸುಮಾರು 90 ಮೀಟರ್ ಎತ್ತರದ ಕಟ್ಟಡದಲ್ಲಿ ಸಂಕಷ್ಟದಲ್ಲಿ ಸಿಲುಕಿದವರನ್ನು ರಕ್ಷಣೆ ಮಾಡಲಾಗುತ್ತದೆ ಎಂಬುದರ ಪ್ರಾತ್ಯಕ್ಷಿಕೆ ನೀಡಲಾಯಿತು. ಭಾರೀ ಎತ್ತರದ ಪಿಲ್ಲರ್ ಕಟ್ಟಡದಲ್ಲಿಸಿಲುಕಿದ್ದ ಹಲವರನ್ನು ಏರಿಯಲ್ ಲ್ಯಾಡರ್ ಬಳಸಿ ಸುರಕ್ಷಿತವಾಗಿ ಕರೆತರಲಾಯಿತು. ಈ ವೇಳೆ ನೆರೆದಿದ್ದ ಸಾರ್ವಜನಿಕರು ಚಪ್ಪಾಳೆ ತಟ್ಟಿ ರಕ್ಷಣಾ ತಂಡದ ಕಾರ್ಯವನ್ನು ಶ್ಲಾಘಿಘಿಸಿದರು.

ಕರ್ನಾಟಕ ಅಗ್ನಿಶಾಮಕ ದಳ ತುರ್ತು ಸಂದರ್ಭದಲ್ಲಿಬಳಕೆ ಮಾಡುವ ಸಲುವಾಗಿಯೇ ಸುಮಾರು 90 ಮೀಟರ್ ಎತ್ತರದ ರಕ್ಷಣಾ ಕಾರ್ಯಾಚರಣೆಗೆ ಬಳಸುವ ಏರಿಯಲ್ ಲ್ಯಾಡರ್ ಹೊಂದಿದ್ದು, ಇದನ್ನು ಹೊಂದಿರುವ ದೇಶದ ಕೆಲವೇ ರಾಜ್ಯಗಳಲ್ಲಿಒಂದಾಗಿದೆ.

### ಸೈರನ್ ಮೊಳಗಿದರೆ ಏನು ಸೂಚನೆ?

**ತುರ್ತು ಪರಿಸ್ಥಿತಿ ಯಲ್ಲಿಸೈರನ್ ಎರಡು ನಿಮಿಷ ನಿರಂತರವಾಗಿ ಮೊಳಗಿದರೆ ಹೆಚ್ಚಿನ ಅಪಾಯ ಬರಲಿದೆ ಎಂದು ನಾಗರಿಕರು ಎಚ್ಚೆತ್ತುಕೊಳ್ಳಬೇಕು. ಮುಂದಿನ ಹತ್ತು ನಿಮಿಷದಲ್ಲಿ ಕಿಟಕಿಗಳನ್ನು ಮುಚ್ಚಬೇಕು. ದೀಪಗಳನ್ನು ಆರಿಸಬೇಕು, ತಕ್ಷಣ ತುರ್ತು ಮೆಡಿಕಲ್ ಕಿಟ್ ತೆಗೆದುಕೊಂಡು ಸುರಕ್ಷಿತ ಸ್ಥಳಕ್ಕೆ ತೆರಳಬೇಕು' ಎಂದು ರಾಜ್ಯ ಸಿವಿಲ್ ಡಿಫೆನ್ಸ್ ಅಧಿಕಾರಿ ಡಾ. ಚೇತನ್ ಸಲಹೆ ನೀಡಿದರು.**

## ಬೆಂಗ್ಳೂರಿನ ಚಿನ್ನಸ್ವಾಮಿ ಸ್ಟೇಡಿಯಂನ ಸುತ್ತ ಪೊಲೀಸರ ಹದ್ದಿನ ಕಣ್ಣು


ಉದಯವಾಹಿನಿ ಚಿತ್ರ

• ಉದಯ ವಾಹಿನಿ, ಬೆಂಗಳೂರು

ಆಪರೇಷನ್ ಸಿಂಧೂರ ಪ್ರತೀಕಾರದ ಬೆನ್ನಲ್ಲೇ ದೇಶಾದ್ಯಂತ ಹೈಅಲರ್ಟ್ ಘೋಷಣೆ ಮಾಡಲಾಗಿದೆ. ಇದೀಗ ಐಪಿಎಲ್ ಮ್ಯಾಚ್ ಹಿನ್ನೆಲೆ ಚಿನ್ನಸ್ವಾಮಿ ಸ್ಟೇಡಿಯಂನ ಸುತ್ತಲೂ ಪೊಲೀಸರು ಹದ್ದಿನ ಕಣ್ಣಿಟ್ಟಿದ್ದಾರೆ. ಪ್ರಮುಖ ಸ್ಥಳಗಳು ಹಾಗೂ ಜನಕೇಂದ್ರಿತ ಸ್ಥಳಗಳಲ್ಲಿ ಟೈಟ್ ಸೆಕ್ಯುರಿಟಿ ಮಾಡಿಕೊಳ್ಳುವಂತೆ ಕೇಂದ್ರ ಸರ್ಕಾರ ಸೂಚನೆ ನೀಡಿದೆ. ಇದೀಗ ಪೊಲೀಸರು ಎಲ್ಲಾ ಕಡೆಗಳಲ್ಲಿ ಹೆಚ್ಚಿನ ಬಿಗಿ ಭದ್ರತೆಯನ್ನು ಕೈಗೊಂಡಿದ್ದಾರೆ. ಐಪಿಎಲ್ ಮ್ಯಾಚ್ ಹಿನ್ನೆಲೆ ಚಿನ್ನಸ್ವಾಮಿ ಸ್ಟೇಡಿಯಂನ ಪ್ರತೀ ಗೇಟ್ ಬಳಿಯೂ ಪೊಲೀಸರು ಹದ್ದಿನ ಕಣ್ಣಿಟ್ಟಿದ್ದಾರೆ. ಮೂರು ಪಾಳಿಗಳಲ್ಲಿ 70ಕ್ಕೂ ಹೆಚ್ಚು ಪೊಲೀಸರ ನಿಯೋಜನೆ ಮಾಡಿದ್ದಾರೆ. ಬೆಂಗಳೂರಿನ ಚಿನ್ನಸ್ವಾಮಿ ಸ್ಟೇಡಿಯಂನಲ್ಲಿ ಮೇ 13ರಂದು ಆರ್‌ಸಿಬಿ ಹಾಗೂ ಸನ್‌ರೈಸರ್ಸ್ ಹೈದರಾಬಾದ್ ತಂಡಗಳ ನಡುವೆ ಪಂದ್ಯ ನಡೆಯಲಿದೆ.

# ಉದಯ ವಾಹಿನಿ

## ಪ್ರಾದೇಶಿಕ

ಶುಕ್ರವಾರ 09 ಮೇ 2025

03


## ಜಲ ಜೀವನ್ ಮಿಷನ್ ನಿಧಾನಗತಿಗೆ ಸಂಸದ ಡಾ.ಸಿ.ಎನ್.ಮಂಜುನಾಥ್ ಅಸಮಾಧಾನ

# ಯೋಜನೆ ತ್ವರಿತಕ್ಕೆ ಡಿ.ಸಿ, ಜಿ.ಪಂ ಸಿಇಒ ಜೊತೆ ಸಭೆ ನಡೆಸಿ


• ಉದಯವಾಹಿನಿ, ರಾಮನಗರ

ಮನೆ ಮನೆಗೆ ನೀರು ಪೂರೈಸುವ ಜಲ ಜೀವನ್ ಮಿಷನ್, ಯೋಜನೆ ಕಾಮಗಾರಿಯ ನಿಧಾನಗತಿಗೆ ಕೇಂದ್ರ ಪುರಸ್ಕೃತ ಯೋಜನೆಗಳ ಜಿಲ್ಲಾ ಮಟ್ಟದ ಅಭಿವೃದ್ಧಿ ಸಮನ್ವಯ, ಉಸ್ತುವಾರಿ ಸಮಿತಿ ಸಭೆಯಲ್ಲಿ ಡಾ. ಸಿ.ಎನ್. ಮಂಜುನಾಥ್ ತೀವ್ರ ಅಸಮಾಧಾನ ವ್ಯಕ್ತಪಡಿಸಿದರು. ನಗರದ ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ನಡೆದ ಸಭೆಯ ಆರಂಭದಲ್ಲೇ ಜೆಜೆಎಂ ವಿಷಯ ಪ್ರಸ್ತಾಪವಾಯಿತು. ಕಾಮಗಾರಿ ಮಾಹಿತಿ ನೀಡಿದ ಜಿ.ಪಂ. ಎಂಜಿನಿಯರ್ ವೀರನಂಜೇಗೌಡ, ಜಿಲ್ಲೆಯಲ್ಲಿ ಇದುವರೆಗೆ 989 ಕಾಮಗಾರಿಗಳು ಮುಗಿದಿದ್ದು, 600 ಪ್ರಗತಿಯಲ್ಲಿವೆ. ಈ ಸಾಲಿನಲ್ಲಿ 3,923 ಕೋಟಿ ಅನುದಾನ ಬಿಡುಗಡೆಯಾಗಿದ್ದು, ಆ ಪೈಕಿ 3,833.11 ಕೋಟಿ ವೆಚ್ಚವಾಗಿದೆ ಎಂದರು. ಕಾಮಗಾರಿ ಪ್ರಗತಿಗೆ ಆಶ್ಚರ್ಯ ವ್ಯಕ್ತಪಡಿಸಿದ ಮಂಜುನಾಥ್, ಪಕ್ಕದ ತುಮಕೂರಿನಲ್ಲಿ ಶೇ 70–80ರಷ್ಟು ಜೆಜೆಎಂ ಕಾಮಗಾರಿ ಮುಗಿದಿದೆ. ರಾಮನಗರ ಜಿಲ್ಲೆಯಲ್ಲಿ ತೀರಾ ಹಿಂದುಳಿದಿದೆ. ಚನ್ನಪಟ್ಟಣದಲ್ಲಿ ಮಾತ್ರ ಶೇ 64ರಷ್ಟು ಕಾಮಗಾರಿ ಆಗಿದ್ದು, ಉಳಿದೆಡೆ ಕನಿಷ್ಠ ಶೇ 50ರಷ್ಟು ಸಹ ಆಗಿಲ್ಲ. ಯೋಜನೆ ವಿಷಯದಲ್ಲಿ ನಿರ್ಲಕ್ಷ್ಯ ಸಲ್ಲದು ಎಂದರು.

**ಯೋಜನೆ ವಿಷಯದಲ್ಲಿ ನಿರ್ಲಕ್ಷ್ಯ ಸಲ್ಲದು**

**ನೋಟಿಸ್ ಕೊಡಿ:** ಆರಂಭದಲ್ಲಿ ಗುತ್ತಿಗೆ ಪಡೆದವರು ಕಾಮಗಾರಿ ವಿಳಂಬ ಮಾಡಿರುವುದು, ಒಬ್ಬರೇ 100ಕ್ಕೂ ಹೆಚ್ಚು ಕಡೆ ಕೆಲಸ ಮಾಡುತ್ತಿರುವುದರಿಂದ ಕಾಮಗಾರಿ ವಿಳಂಬವಾಗಿದೆ ಎಂದು ಎಂಜಿನಿಯರ್ ಹೇಳಿದರು. ಅದಕ್ಕೆ, ಮಂಜುನಾಥ್, ವಿಳಂಬಕ್ಕೆ ಕಾರಣವೇನು? ಮೂರನೇ ವ್ಯಕ್ತಿ ಪರಿಶೀಲನೆ ತಡವಾಗಿದೆಯೇ? ತಡ ಮಾಡಿದ ಗುತ್ತಿಗೆದಾರರಿಗೆ ನೋಟಿಸ್ ಕೊಡಿ. ಯೋಜನೆ ತ್ವರಿತಕ್ಕೆ ಡಿ.ಸಿ, ಜಿ.ಪಂ ಸಿಇಒ ಜೊತೆ ಸಭೆ ನಡೆಸಿ ಎಂದು ಸೂಚಿಸಿದರು. ಆಗ ಮಧ್ಯ ಪ್ರವೇಶಿಸಿದ ಜಿಲ್ಲಾಧಿಕಾರಿ ಯಶವಂತ್ ವಿ. ಗುರುಕರ್, ನೋಟಿಸ್ ಜೊತೆಗೆ ದಂಡ ಸಹ ವಿಧಿಸಬೇಕು ಎಂದು ಸೂಚಿಸಿದರು. ಈಗಾಗಲೇ 3 ನೋಟಿಸ್ ಕೊಟ್ಟಿದ್ದೇವೆ ಎಂದು ಅಧಿಕಾರಿ ಹೇಳಿದಾಗ, ದಂಡ ವಿಧಿಸಿದರೆ ಕೆಲಸ ಮಾಡುತ್ತಾರೆ. ಮೊದಲು ಆ ಕೆಲಸ ಮಾಡಿ ಎಂದು ಸಂಸದರು ಹೇಳಿದರು. ಈ ಸಲದ ದಿಶಾ ಸಭೆಯತ್ತಲೂ ಜಿಲ್ಲೆಯ ಶಾಸಕರು ಹಾಗೂ ವಿಧಾನ ಪರಿಷತ್ ಸದಸ್ಯರು ಸುಳಿಯಲಿಲ್ಲ. ಕೆಲ ಇಲಾಖೆಗಳ ಅಧಿಕಾರಿಗಳು ಸಹ ಗೈರಾಗಿದ್ದರು. ಸಭೆಗೆ ಪೂರ್ಣ ಮಾಹಿತಿಯೊಂದಿಗೆ ಬಾರದ ಕೆಲ ಅಧಿಕಾರಿಗಳು, ಸಂಸದರ ಪ್ರಶ್ನೆಗೆ ಉತ್ತರಿಸಲು ತಡವರಿಸಿದರು.

ಸದಸ್ಯರಾದ ರೇಖಾ, ರಾಜೇಶ್, ಶಿವಣ್ಣ, ಸುನೀತಾ, ಮಮತಾ, ಜಗದೀಶ್, ಸಿದ್ದೇಗೌಡ, ಶೋಭಾ, ಸಿದ್ದರಾಮು, ಡಿ. ಶ್ರೀನಿವಾಸ್, ಸಿಇಒ ಅನ್ಮೋಲ್ ಜೈನ್, ಆರ್. ಚಂದ್ರಯ್ಯ, ಪಿ.ಕೆ. ಬಿನೊಯ್, ಚಿಕ್ಕಸುಬ್ಬಯ್ಯ, ಅಧಿಕಾರಿಗಳು ಇದ್ದರು.



ಉದಯವಾಹಿನಿ ಚಿತ್ರ

**ಕಡತಕ್ಕಿಂತ ಜೀವ ಮುಖ್ಯ**

**ಹಾವು ಕಡಿತ ಪ್ರಕರಣಗಳಲ್ಲಿ ದೂರು ದಾಖಲಾಗುವವರೆಗೂ ಕಾಯಬೇಡಿ. ಕಡತಕ್ಕಿಂತ ಜೀವ ಮುಖ್ಯ. ಮೊದಲು ಚಿಕಿತ್ಸೆ ಕೊಡಿ. ನಂತರ ಕಡತದ ಕಡೆಗೆ ಗಮನ ಕೊಡಿ ಎಂದು ಸೂಚಿಸಿದರು. ಚನ್ನಪಟ್ಟಣದಲ್ಲಿ ಉತ್ತಮ ಶವಾಗಾರವಿಲ್ಲ. ಇತ್ತೀಚೆಗೆ ನೆಲದ ಮೇಲೆ ಮಲಗಿಸಿದ್ದ ಶವವನ್ನು ಇರುವೆಗಳು ಮುತ್ತಿಕೊಂಡಿದ್ದವು' ಎಂದು ಸಮಿತಿ ಸದಸ್ಯರೊಬ್ಬರು ಗಮನ ಸೆಳೆದರು.**

**ಮೂರು ನೋಟಿಸ್ ಕೊಟ್ಟಿದ್ದೇವೆ**

**ಮಾಹಿತಿಯೊಂದಿಗೆ ಪ್ರಸ್ತಾವ ಸಲ್ಲಿಸಿ**

**ಜಿಲ್ಲೆಯಲ್ಲಿ ಉತ್ತಮ ಶವಾಗಾರದ ಜೊತೆಗೆ ಶೈತ್ಯಾಗಾರ ನಿರ್ಮಿಸಲು ಜಿ.ಪಂ. ವತಿಯಿಂದ ಕ್ರಮ ಕೈಗೊಳ್ಳಬಹುದೇ?' ಎಂದು ಸಿಇಒ ಅನ್ಮೋಲ್ ಜೈನ್ ಅವರಿಗೆ ಸಂಸದರು ಕೇಳಿದರು. ನಿರ್ಮಾಣಕ್ಕೆ ಎಷ್ಟು ಖರ್ಚಾಗುತ್ತದೆ ಎಂಬುದರ ಮಾಹಿತಿಯೊಂದಿಗೆ ಪ್ರಸ್ತಾವ ಸಲ್ಲಿಸಿ ಎಂದು ಸಿಇಒ ಜಿಲ್ಲಾ ಆರೋಗ್ಯಾಧಿಕಾರಿಗೆ ಸೂಚಿಸಿದರು.**

## ಶಿಡ್ಲಘಟ್ಟಕ್ಕೆ ರಾಮಸಮುದ್ರ ಕೆರೆ ನೀರು ಹರಿಸದಿರಿ: ದೇವಗಾನಹಳ್ಳಿ ಗ್ರಾಮಸ್ಥರ ಮನವಿ

• ಉದಯವಾಹಿನಿ, ಚಿಕ್ಕಬಳ್ಳಾಪುರ

ಶಿಡ್ಲಘಟ್ಟ ತಾಲ್ಲೂಕಿನ ಸಾದಲಿ ಹೋಬಳಿಯ ಎಸ್. ದೇವಗಾನಹಳ್ಳಿ ರಾಮಸಮುದ್ರ ಕೆರೆಯ ನೀರನ್ನು ಶಿಡ್ಲಘಟ್ಟ ನಗರಕ್ಕೆ ಪೂರೈಸಲು ಜಿಲ್ಲಾಡಳಿತ ಮುಂದಾಗಿದೆ. ತಕ್ಷಣವೇ ಈ ಯೋಜನೆ ಕೈಬಿಡಬೇಕು ಎಂದು ಆಗ್ರಹಿಸಿ ಹೆಚ್ಚುವರಿ ಜಿಲ್ಲಾಧಿಕಾರಿ ಡಾ.ಎನ್.ಭಾಸ್ಕರ್ ಅವರಿಗೆ ದೇವಗಾನಹಳ್ಳಿ ಗ್ರಾಮಸ್ಥರು ಬುಧವಾರ ಮನವಿ ಸಲ್ಲಿಸಿದರು. ರಾಮಸಮುದ್ರ ಕೆರೆಯು 1889ರಲ್ಲಿ ಸ್ಥಾಪನೆಯಾಗಿದೆ. 1894ರಲ್ಲಿ ಉದ್ಘಾಟನೆಯಾಗಿದೆ.

ಕೃಷಿ ಬಳಕೆಗೆ ಎಂದೇ ಈ ಕೆರೆ ನಿರ್ಮಿಸಲಾಗಿದೆ. ಇದು ಈ ಭಾಗಕ್ಕೆ ಆಸರೆಯಾಗಿದೆ. ರಾಮಸಮುದ್ರದ ಕೆರೆ ಅಭಿವೃದ್ಧಿಗೊಳಿಸಲಾಗಿದೆ. ಮೂರು ಬಾರಿ ಕೋಡಿಯೂ ಹರಿದಿದೆ. ಆದರೆ ಈಗ ಜಿಲ್ಲಾಡಳಿತ ಶಿಡ್ಲಘಟ್ಟ ನಗರಕ್ಕೆ ಇಲ್ಲಿಂದ ಕುಡಿಯುವ ನೀರು ಪೂರೈಸಲು ಯೋಜನೆ ರೂಪಿಸುತ್ತಿದೆ. ಇದನ್ನು ತಕ್ಷಣವೇ ಕೈ ಬಿಡಬೇಕು.

ಯಾವುದೇ ರೀತಿಯ ನಾಲೆಗಳು ಈ ಭಾಗದಲ್ಲಿ ಇಲ್ಲ. ಈ ಕೆರೆಯೇ ಜಲಮೂಲಕ್ಕೆ ಆಧಾರ. ಇಲ್ಲಿನ ರೈತರಲ್ಲಿ ಶೇ 70ರಷ್ಟು ಬಡವರು, ಪರಿಶಿಷ್ಟ ಜಾತಿ, ಪಂಗಡ, ಹಿಂದುಳಿದವರು ಇದ್ದಾರೆ. ಈ ಕೆರೆ ನಂಬಿ ಜೀವನ ಸಾಗಿಸುತ್ತಿದ್ದಾರೆ. ತಾವು ಈ ಬಗ್ಗೆ ಸಮಗ್ರವಾಗಿ ಪರಿಶೀಲಿಸಬೇಕು. ಕುಡಿಯುವ ನೀರು ಪೂರೈಕೆ ಯೋಜನೆ ಕೈ ಬಿಡಬೇಕು ಎಂದು ಗ್ರಾಮಸ್ಥರು ಆಗ್ರಹಿಸಿದರು.

ಕೃಷಿ ಮತ್ತು ನೀರಾವರಿ ಕಾಯ್ದೆ ಅನ್ವಯ ಸದರಿ ಕೆರೆ ಅಚ್ಚುಕಟ್ಟು ವ್ಯಾಪ್ತಿಯ ಬೆಳೆಗಳಿಗೆ ಜೂನ್–ಜುಲೈನಲ್ಲಿ ನೀರು ಹರಿಸಲು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಬೇಕು ಎಂದು ಕೆರೆ ನೀರು ಬಳಕೆದಾರರ ಸಂಘದ ಪದಾಧಿಕಾರಿಗಳು, ರಾಮಸಮುದ್ರ ಕೆರೆ ವ್ಯಾಪ್ತಿಯ ಗ್ರಾಮಗಳ ರೈತರು ಕೋರಿದ್ದಾರೆ. ಡಿ.ವಿ ಪ್ರಸಾದ್, ಸೀತಾರಾಮಪ್ಪ, ಎಂ.ನರಸಿಂಹರೆಡ್ಡಿ, ಮುನಿರಾಜು ವೈ.ವಿ., ಗ್ರಾ.ಪಂ ಮಾಜಿ ಸದಸ್ಯ ವಿ.ವೆಂಕಟೇಶಪ್ಪ, ಹನುಮಪ್ಪ ಬಿ., ನಾಗೇಶ್, ಚಂದ್ರಶೇಖರ್, ಪ್ರದೀಪ್ ಕುಮಾರ್ ಮತ್ತಿತರರು ನಿಯೋಗದಲ್ಲಿ ಇದ್ದರು.



ಉದಯವಾಹಿನಿ ಚಿತ್ರ

## ಬಿರುಗಾಳಿ ಸಹಿತ ಮಳೆ: ಅಡಿಕೆ, ಬಾಳೆ ಫಸಲು ನಷ್ಟ

• ಉದಯವಾಹಿನಿ, ಯಳಂದೂರು

ಯಳಂದೂರು ಪಟ್ಟಣ ಸೇರಿದಂತೆ ತಾಲ್ಲೂಕಿನ ವಿವಿಧ ಗ್ರಾಮಗಳಲ್ಲಿ ಬುಧವಾರ ರಾತ್ರಿ, ಗುಡುಗು ಮಿಂಚು, ಸಿಡಿಲಬ್ಬರದೊಂದಿಗೆ ಮಳೆ ಸುರಿಯಿತು. ಬಿರುಗಾಳಿ ಸಹಿತ ಸುರಿದ ಮಳೆಗೆ ಹಲವೆಡೆ ಮರ, ವಿದ್ಯುತ್ ಕಂಬಗಳು ಬುಡಸಮೇತ ಉರುಳಿವೆ. ಕೆಲವೆಡೆ ತೆಂಗು ಮತ್ತು ಅಡಿಕೆ ಮರಗಳು ನೆಲ ಕಚ್ಚಿವೆ. ಪಟ್ಟಣದ ಸಾರ್ವಜನಿಕ ಆಸ್ಪತ್ರೆ ಹಾಗೂ ಕೆಸ್ತೂರು ಸುತ್ತಮುತ್ತ ಅಪಾರ ಹಾನಿಯಾಗಿದ್ದು, ರಾತ್ರಿಪೂರ ವಿದ್ಯುತ್ ಕಡಿತವಾಗಿತ್ತು. ಮನೆಗಳಿಗೆ ನೀರು ನುಗ್ಗಿದ್ದು, ಸಾರ್ವಜನಿಕರು ಪರದಾಡಿದರು. ರಸ್ತೆಗೆ ಅಡ್ಡಲಾಗಿ ಮರಗಳು ಬಿದ್ದಿದ್ದು ಮುಂಜಾನೆ ಸಾರ್ವಜನಿಕರ ಸಂಚಾರಕ್ಕೆ ತೊಂದರೆ ಆಯಿತು.

ಯರಿಯೂರು ಸುತ್ತಮುತ್ತ ಹಲವು ತೆಂಗಿನ ಮರಗಳು ನೆಲಕ್ಕುರುಳಿವೆ. ಮದ್ದೂರು, ಹೊನ್ನೂರು ಗ್ರಾಮದ ಸುತ್ತಮುತ್ತ 10 ಎಕರೆ ಬಾಳೆ, 2 ಎಕರೆ ಅಡಿಕೆ ಬೆಳೆಗೆ ಹಾನಿಯಾಗಿದೆ. ಸಮೀಕ್ಷಾ ಕಾರ್ಯ ನಡೆಯುತ್ತಿದ್ದು, ಇನ್ನಷ್ಟೇ ನಷ್ಟ ಅಂದಾಜಿಸಬೇಕಿದೆ ಎಂದು ತೋಟಗಾರಿಕಾ ಇಲಾಖೆ ಸಹಾಯಕ ನಿರ್ದೇಶಕ ಜಿ.ಎಸ್.ರಾಜು ಮಾಹಿತಿ ನೀಡಿದರು. ರಾತ್ರಿ ಬಿರುಗಾಳಿ ಸಹಿತ ದಿಢೀರ್ ಮಳೆ ಸುರಿಯಿತು. ರಸ್ತೆ ಬದಿಯ ಕಂಬಗಳು ಮತ್ತು ಮರಗಳೂ ಮುರಿದು ಬಿದ್ದವು. ಬಾಳೆ, ಅಡಿಕೆ ಮರಗಳು ಮುರಿದು ಹಾನಿಯಾಗಿದೆ. ಸಂಬಂಧಪಟ್ಟವರು ರೈತರಿಗೆ ನಷ್ಟ ಭರಿಸಬೇಕು ಎಂದು ಕೃಷಿಕ ಮಹಿಳೆಯರು ಒತ್ತಾಯಿಸಿದರು. ಹೊನ್ನೂರು–ಮದ್ದೂರು ಸುತ್ತಮುತ್ತ ಬಾಳೆ, ಅಡಿಕೆ ಫಸಲು ಹಾಳಾಗಿದೆ. ಕಂದಾಯ, ತೋಟಗಾರಿಕೆ ಇಲಾಖೆ ಸಿಬ್ಬಂದಿ ಹಾನಿ ಪ್ರದೇಶಕ್ಕೆ ಭೇಟಿ ನೀಡಿ ಮಾಹಿತಿ ಸಂಗ್ರಹಿಸುತ್ತಿದ್ದಾರೆ ಎಂದು ರಾಜಸ್ವ ನಿರೀಕ್ಷಕ ಎಂ.ಎಸ್.ಯದುಗಿರಿ ಹೇಳಿದರು.

**ಸೋನೆ ಮಳೆ:** ತಾಲ್ಲೂಕಿನ ಬಿಳಿಗಿರಿಬೆಟ್ಟ, ಯಳಂದೂರು ಪಟ್ಟಣದ ಸುತ್ತಮುತ್ತ ಗುರುವಾರವೂ ಸೋನೆ ಮಳೆ ಸುರಿಯಿತು. ವೇಗವಾಗಿ ಬೀಸಿದ ಗಾಳಿಯಿಂದ ವಿದ್ಯುತ್ ಕಡಿತವಾಯಿತು, ಪರಿಣಾಮ ಕುಡಿಯುವ ನೀರು ಪೂರೈಕೆಯಲ್ಲಿ ವ್ಯತ್ಯಯವಾಯಿತು. ಸೆಸ್ಕ್ ಸಿಬ್ಬಂದಿ ಮುಂಜಾನೆಯಿಂದಲೇ ದುರಸ್ತಿ ಮಾಡಿ, ಸಕಾಲದಲ್ಲಿ ನೀರು ಪೂರೈಸಿದರು ಎಂದು ಬೆಟ್ಟದ ಮಾದೇಗೌಡ ಹೇಳಿದರು.



ಉದಯವಾಹಿನಿ ಚಿತ್ರ

**ವಿದ್ಯುತ್ ಸ್ಥಗಿತ, ಜನರ ಪರದಾಟ**

**ಕೆಸ್ತೂರು ಸುತ್ತಮುತ್ತ 8 ವಿದ್ಯುತ್ ಕಂಬಗಳು ನೆಲಕಚ್ಚಿವೆ. 2 ವಿದ್ಯುತ್ ಪರಿವರ್ತಕಗಳೂ ಧರಾಶಾಹಿಯಾಗಿದ್ದು, ವಿದ್ಯುತ್ ಕಡಿತವಾಗಿತ್ತು. ಗುರುವಾರ 15 ಸಿಬ್ಬಂದಿ ಮಧ್ಯಾಹ್ನದ ವೇಳೆಗೆ ದುರಸ್ತಿ ಕಾರ್ಯ ಪೂರ್ಣಗೊಳಿಸಿದ್ದು ಪಟ್ಟಣ, ಗ್ರಾಮೀಣ ಪ್ರದೇಶಗಳಿಗೆ ವಿದ್ಯುತ್ ಪೂರೈಸಲಾಗಿದೆ ಎಂದು ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮದ ಎಇಇ ನಿಂಗರಾಜು ತಿಳಿಸಿದರು.**

## ಸಿ.ಎಂಗೆ ಕಪ್ಪು ಬಾವುಟ ಪ್ರದರ್ಶನಕ್ಕೆ ಮುಂದಾದವರ ಬಂಧನ

• ಉದಯವಾಹಿನಿ, ಮಂಡ್ಯ

ಶೇ 75ರಷ್ಟು ಮೀಸಲಾತಿ ಹೆಚ್ಚಳ ಮಾಡುತ್ತೇವೆ ಎಂಬ ಭರವಸೆ ಈಡೇರಿಸಿಲ್ಲ ಎಂದು ಮಂಡ್ಯ ನಗರದಲ್ಲಿ ಗುರುವಾರ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಕಪ್ಪು ಬಾವುಟ ಪ್ರದರ್ಶಿಸಲು ಮುಂದಾಗಿದ್ದ ದಲಿತ ಸಂಘರ್ಷ ಸಮಿತಿ ಕಾರ್ಯಕರ್ತರನ್ನು ಪೊಲೀಸರು ಬಂಧಿಸಿ, ಬಳಿಕ ಬಿಡುಗಡೆ ಮಾಡಿದರು. ವಿವಿಧ ಕಾರ್ಯಕ್ರಮಗಳ ನಿಮಿತ್ತ ನಗರಕ್ಕೆ ಸಿದ್ದರಾಮಯ್ಯ ಅವರು ಭೇಟಿ ನೀಡುವ ಸಮಯ ತಿಳಿದು ನಗರದ ಜಯಚಾಮರಾಜೇಂದ್ರ ಒಡೆಯರ್ ವೃತ್ತದಲ್ಲಿ ಜಮಾವಣೆಗೊಂಡ ಸಮಿತಿಯ ಕಾರ್ಯಕರ್ತರು ಪ್ರತಿಭಟನೆ ನಡೆಸಿ ಕಪ್ಪು ಬಾವುಟ ಪ್ರದರ್ಶಿಸಲು ಮುಂದಾಗುತ್ತಿದ್ದರು.

ಇದನ್ನು ತಿಳಿದ ಪೊಲೀಸರು ಮುಖ್ಯಮಂತ್ರಿ ಆಗಮನಕ್ಕೆ ಮುನ್ನ ಸಮಿತಿಯ ರಾಜ್ಯ ಘಟಕದ ಅಧ್ಯಕ್ಷ ವೆಂಕಟಗಿರಿಯಯ್ಯ ಸೇರಿದಂತೆ 60ಕ್ಕೂ ಹೆಚ್ಚು ಕಾರ್ಯಕರ್ತರನ್ನು ಬಂಧಿಸಿ ಪೊಲೀಸ್ ಕವಾಯತು ಮೈದಾನಕ್ಕೆ ಕರೆದುಕೊಂಡು ಹೋಗಿ ಬಳಿಕ ಬಿಡುಗಡೆ ಮಾಡಿದರು. ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಅಸ್ತಿತ್ವಕ್ಕೆ ಬಂದ ನಂತರ ಮುಖ್ಯಮಂತ್ರಿ ಸಿದ್ದರಾಮಯ್ಯ ಶೋಷಿತ ಸಮುದಾಯಗಳನ್ನು ನಿರಂತರ ವಂಚಿಸುತ್ತಾ ಬಂದಿದ್ದಾರೆ.

ರಾಜ್ಯದ ದಲಿತ, ಹಿಂದುಳಿದ ಅಲ್ಪಸಂಖ್ಯಾತ, ಬಹುಜನ ತಳ ಸಮುದಾಯಗಳ ಅಭಿವೃದ್ಧಿಗಾಗಿ ಜನಸಂಖ್ಯೆಗನುಗುಣವಾಗಿ ಮೀಸಲಾತಿ ಪ್ರಮಾಣವನ್ನು ಶೇ 75ಕ್ಕೆ ಹೆಚ್ಚಳ ಮಾಡುವುದಾಗಿ ನುಡಿದ ಸಿದ್ದರಾಮಯ್ಯ ನುಡಿದಂತೆ ನಡೆಯಲಿಲ್ಲವೇಕೆ' ಎಂದು ಪ್ರಶ್ನಿಸಿದರು.

ಶೋಷಿತ ತಳ ಸಮುದಾಯಗಳ ಆರ್ಥಿಕ, ಸಾಮಾಜಿಕ, ಶೈಕ್ಷಣಿಕ ಸಮೀಕ್ಷೆಯ ಜಾತಿ ಜನಗಣತಿಯ ಎಚ್.ಕಾಂತರಾಜ ಆಯೋಗದ ವರದಿಯನ್ನು ಆರು ತಿಂಗಳ ಕಾಲಮಿತಿಯೊಳಗೆ ಜಾರಿಗೊಳಿಸದೆ 10 ವರ್ಷಗಳಿಂದಲೂ ಸ್ವಾರ್ಥ ರಾಜಕಾರಣಕ್ಕೆ ದುರ್ಬಳಕೆ ಮಾಡಿಕೊಂಡು ಅಧಿಕಾರ ಉಂಡ ಮುಖ್ಯಮಂತ್ರಿ ಸಿದ್ದರಾಮಯ್ಯ ಅಹಿಂದ ಸಮುದಾಯಗಳಿಗೆ ಮಾಡಿದ ಅನ್ಯಾಯ' ಎಂದು ಕಿಡಿಕಾರಿದರು.

ಪ್ರತಿಭಟನೆಯಲ್ಲಿ ಸಮಿತಿಯ ಮುಖಂಡರಾದ ಕೆ.ಎಂ.ಅನಿಲ್ ಕುಮಾರ್, ಬಿ.ಆನಂದ್, ಮಹದೇವು, ಕರಿಯಪ್ಪ, ಸುಶ್ಮಿತಾ, ಮೀನಾಕ್ಷಿ, ಮಂಜುಳಾ, ಸಿದ್ದಯ್ಯ, ಮರಂಕಯ್ಯ, ಸುರೇಶ್ ಕುಮಾರ್, ತಮ್ಮಣ್ಣ, ವೆಂಕಟೇಶ್ ಭಾಗವಹಿಸಿದ್ದರು.



**ಅಹಿಂದ ಹೆಸರು ಹೇಳಿಕೊಂಡು ಅಧಿಕಾರಕ್ಕೆ ಬಂದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಅನ್ಯಾಯ ಮಾಡುತ್ತಾ ಬಂದಿದ್ದಾರೆ. ಇವರು ಚುನಾವಣೆ ಸಂದರ್ಭದಲ್ಲಿ ಹೇಳಿದ ಭರವಸೆಗಳು ಕೇವಲ ಭರವಸೆಗಳಾಗಿಯೇ ಉಳಿದಿವೆ. ಇವರನ್ನು ಒಣಗೇಡಿ ಮುಖ್ಯಮಂತ್ರಿ ಸಿದ್ದರಾಮಯ್ಯ ಎಂದು ಕರೆಯಬೇಕು**

**– ವೆಂಕಟಗಿರಿಯಯ್ಯ**


## ಸರ್ಕಾರಿ ಕಾಲೇಜಿನಲ್ಲಿ ಅವ್ಯವಸ್ಥೆ, ಪರಿಶೀಲನೆ

• ಉದಯವಾಹಿನಿ, ಕುಣಿಗಲ್

ಪಟ್ಟಣದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಪ್ರಥಮ ಸೆಮಿಸ್ಟಾರ್‌ನಲ್ಲಿ ಕಳಪೆ ಫಲಿತಾಂಶ ಬಂದಿದೆ. ಮೂಲ ಸೌಕರ್ಯ ಕೊರತೆ ಹೆಚ್ಚಾಗಿ ಅವ್ಯವಸ್ಥೆಯಾಗಿರುವ ಬಗ್ಗೆ ಸ್ಥಳೀಯರಿಂದ ದೂರುಗಳು ಬಂದ ಹಿನ್ನೆಲೆ ಯಲ್ಲಿ ತಾಲ್ಲೂಕು ಉಸ್ತುವಾರಿ ಅಧಿಕಾರಿ ವಿಶ್ವನಾಥ್ ಗುರುವಾರ ಭೇಟಿ ನೀಡಿ ಪರಿಶೀಲಿಸಿದರು. ಫಲಿ ತಾಂಶದ ಬಗ್ಗೆ ಪ್ರಾಂಶುಪಾಲ ಮಾಯಾ ಸಾರಂಗ ಪಾಣಿಯೊಂದಿಗೆ ಚರ್ಚಿಸಿದರು.

ಪ್ರಥಮ ಸೆಮಿಸ್ಟಾರ್ ವಾಣಿಜ್ಯ ವಿಭಾಗದಲ್ಲಿ 190 ವಿದ್ಯಾರ್ಥಿಗಳಿಗೆ ಕೇವಲ 8 ವಿದ್ಯಾರ್ಥಿಗಳು ಉತ್ತೀರ್ಣರಾಗಿರುವ ವಿಷಯ ತಿಳಿದು ಅಸಮಾಧಾನ ವ್ಯಕ್ತಪಡಿಸಿದರು. ವಿದ್ಯಾರ್ಥಿಗಳ ಶೈಕ್ಷಣಿಕ ಪ್ರಗತಿ ಸಂಪೂರ್ಣ ಮಾಹಿತಿ, ವಿಷಯವಾರು ಉಪನ್ಯಾಸಕರ ಫಲಿತಾಂಶದ ವಿವರ ನೀಡಲು ಸೂಚನೆ ನೀಡಿದರು. ಕಾಲೇಜಿನ ಶೌಚಾಲಯ ಅವ್ಯವಸ್ಥೆ ಬಗ್ಗೆ ಗಮನಹರಿಸಲು ಸೂಚನೆ ನೀಡಿದರು. ಕಾಲೇಜು ಆವರಣದಲ್ಲಿ 5ಕೋಟಿ ವೆಚ್ಚದಲ್ಲಿ ಗ್ರಂಥಾಲಯ ಮತ್ತು ಪ್ರಯೋಗಾಲಯ ಕಟ್ಟಡಗಳು ನಿರ್ಮಾಣವಾಗಿದ್ದು, ಉದ್ಘಾಟನೆಯಾಗಿ ಆರು ತಿಂಗಳು ಕಳೆದರೂ ಬಳಸಲಾಗದ ದುಸ್ಥಿತಿಗೆ ತಲುಪಿರುವುದನ್ನು ಕಂಡು ಅಸಮಾಧಾನ ವ್ಯಕ್ತಪಡಿಸಿದರು. ಪ್ರಾಂಶುಪಾಲರು, ವಿದ್ಯುತ್ ಸೌಲಭ್ಯ ಕಲ್ಪಿಸದ ಕಾರಣ ಬಳಕೆ ಮಾಡಲು ಸಾಧ್ಯವಾಗಿಲ್ಲ ಎಂದು ತಿಳಿಸಿದಾಗ, ಕಾಮಗಾರಿ ಪೂರ್ಣವಾಗದೆ ಇಲಾಖೆ ವಶಕ್ಕೆ ಪಡೆದ ಬಗ್ಗೆ ಆಕ್ಷೇಪ ವ್ಯಕ್ತಪಡಿಸಿದರು.

ತಾಲ್ಲೂಕಿನಲ್ಲಿರುವ ಏಕೈಕ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಶೈಕ್ಷಣಿಕ ಪ್ರಗತಿ ಕುಂಠಿತವಾಗಿರುವ ಬಗ್ಗೆ, ಅವ್ಯವಸ್ಥೆ ಬಗ್ಗೆ ದೂರುಗಳು ಬಂದ ಹಿನ್ನೆಲೆಯಲ್ಲಿ ಶಾಸಕರ ಸೂಚನೆ ಮೇರೆಗೆ ಭೇಟಿ ನೀಡಿ ಪರಿಶೀಲನೆ ನಡೆಸಲಾಗಿದೆ. ಮುಂದಿನ ದಿನಗಳಲ್ಲಿ ಶಾಸಕರು ಸೇರಿದಂತೆ ತಾಲ್ಲೂಕಿನ ಕೆಲ ಇಲಾಖೆ ಅಧಿಕಾರಿಗಳೊಂದಿಗೆ ನಿರಂತರ ಭೇಟಿ ಮತ್ತು ಸಭೆ ನಡೆಸಲಾಗುವುದು ಎಂದರು. ತಹಶೀಲ್ದಾರ್ ರಶ್ಮಿ ಸೇರಿದಂತೆ ಉಪನ್ಯಾಸಕರು ಇದ್ದರು.



ಉದಯವಾಹಿನಿ ಚಿತ್ರ

## ಅಭಿವೃದ್ಧಿ ಕಾಮಗಾರಿ ಭೂಮಿಪೂಜೆ; ಸಿಎಂ ಭಾಗಿ

• ಉದಯವಾಹಿನಿ, ಕೆ.ಆರ್.ನಗರ

ಇಲ್ಲಿನ ರೇಡಿಯೊ ಮೈದಾನದಲ್ಲಿ ಮೇ 23ರಂದು ಸಾಲಿಗ್ರಾಮ ಮತ್ತು ಕೆ.ಆರ್.ನಗರ ಅವಳಿ ತಾಲ್ಲೂಕುಗಳಿಗೆ ತರಲಾದ ಸುಮಾರು 400 ಕೋಟಿ ಮೊತ್ತದ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಭೂಮಿಪೂಜೆ ನೆರವೇರಿಸಲು ಸಿಎಂ ಸಿದ್ದರಾಮಯ್ಯ, ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಆಗಮಿಸಲಿದ್ದಾರೆ ಎಂದು ಶಾಸಕ ಡಿ.ರವಿಶಂಕರ್ ಹೇಳಿದರು. ತಾಲ್ಲೂಕಿನ ಗಂಧನಹಳ್ಳಿ ಗ್ರಾಮದಲ್ಲಿ 2.25 ಕೋಟಿ ಮೊತ್ತದ ವಿವಿಧ ರಸ್ತೆ, ಚರಂಡಿ ಅಭಿವೃದ್ಧಿಗೆ ಕಾಮಗಾರಿಗೆ ಬುಧವಾರ ಭೂಮಿಪೂಜೆ ನೆರವೇರಿಸಿ ಅವರು ಮಾತನಾಡಿದರು.

ಸಾಲಿಗ್ರಾಮ, ಕೆ.ಆರ್.ನಗರ ತಾಲ್ಲೂಕಿನ ಅಭಿವೃದ್ಧಿಗೆ ಎರಡು ವರ್ಷಗಳ ಅವಧಿಯಲ್ಲಿ 700 ಕೋಟಿಗೂ ಅಧಿಕ ಅನುದಾನ ತರಲಾಗಿದೆ. ಪಟ್ಟಣದ ಜನತೆಗೆ ಶುದ್ಧ ಕುಡಿಯುವ ನೀರು ಒದಗಿಸಲು ಅಮೃತ 2.0 ಯೋಜನೆಯಡಿ 30 ಕೋಟಿ, ಒಳಚರಂಡಿ ಯೋಜನೆಗೆ 20 ಕೋಟಿ, ಸಾರ್ವಜನಿಕ ಆಸ್ಪತ್ರೆ ಅಭಿವೃದ್ಧಿಗೆ 1 ಕೋಟಿ, ಶ್ರೀಕೃಷ್ಣರಾಜೇಂದ್ರ ಕ್ರೀಡಾಂಗಣದ ಅಭಿವೃದ್ಧಿಗೆ 2 ಕೋಟಿ ಅನುದಾನ ಮಂಜೂರಾಗಿದೆ ಎಂದರು. ನಿರಾಣಿ ಶುಗರ್ಸ್‌ನವರಿಗೆ ಚುಂಚನಕಟ್ಟೆ ಶ್ರೀರಾಮ ಸಹಕಾರ ಸಕ್ಕರೆ ಕಾರ್ಖಾನೆಯನ್ನು 40 ವರ್ಷಗಳ ಅವಧಿಗೆ ಗುತ್ತಿಗೆ ನೀಡಿ ನೋಂದಣಿ ಮಾಡಿಸಿಕೊಳ್ಳಲಾಗಿದೆ. ಅದರಂತೆ ಕಾರ್ಖಾನೆ ಶೀಘ್ರ ಪ್ರಾರಂಭವಾಗಲಿದೆ.

ಬಿತ್ತನೆ ಬೀಜ ಮತ್ತು ಗೊಬ್ಬರ ವಿತರಣೆಗೆ ನಿರಾಣಿ ಅವರೊಂದಿಗೆ ಚರ್ಚಿಸಿದ್ದೇನೆ. ರೈತರು ಆತಂಕ ಪಡುವ ಅಗತ್ಯವಿಲ್ಲ. ಸಾಲಿಗ್ರಾಮ ಪಟ್ಟಣವನ್ನು ಪಟ್ಟಣ ಪಂಚಾಯಿತಿಯನ್ನಾಗಿ ಮೇಲ್ದರ್ಜೆ ಏರಿಸಲು ಕ್ರಮ ಕೈಗೊಳ್ಳಲಾಗಿದೆ. ಕರ್ನಾಟಕ ಪಬ್ಲಿಕ್ ಶಾಲೆ ತಾಲ್ಲೂಕಿನ ಗಂಧನಹಳ್ಳಿಗೂ ತರುವ ಪ್ರಯತ್ನ ಮಾಡಲಾಗಿದೆ ಎಂದರು.

## 53 ಆಮ್ಲಜನಕ ಸಾಂದ್ರಕದ ದಾನಿಗಳ ಭೇಟಿ, ಸಂವಾದ

• ಉದಯವಾಹಿನಿ, ಮಡಿಕೇರಿ

ಕೋವಿಡ್–19ರ ಅವಧಿಯಲ್ಲಿ ಇಲ್ಲಿನ ಕೊಡಗು ವೈದ್ಯಕೀಯ ವಿಜ್ಞಾನಗಳ ಸಂಸ್ಥೆಗೆ 53 ಆಮ್ಲಜನಕ ಸಾಂದ್ರಕಗಳು (ಆಕ್ಸಿಜನ್ ಕಾನ್ಸನ್‌ಟ್ರೇಟರ್‌ಗಳು) ಕೊಡುಗೆಯಾಗಿ ನೀಡಿದ್ದ ಅಮೆರಿಕದ ಮೀರಾವೆಲ್ಸ್, ಅವರ ಪತಿ ಐಬಿಎಂ ಸಂಸ್ಥೆಯ ನಿರ್ದೇಶಕ ಕೋರ್ಟ್‌ಲ್ಯಾಂಡ್, ನಿವೃತ್ತ ಐಎಎಸ್ ಅಧಿಕಾರಿ ಎ.ಕೆ.ಮೊಣ್ಣಪ್ಪ, ಸ್ಥಳೀಯ ವೈದ್ಯ ಡಾ.ಸಣ್ಣುವಂಡ ಕಾವೇರಪ್ಪ ಅವರು ಭೇಟಿ ನೀಡಿದರು. ಈ ವೇಳೆ ಅವರು ಕೊಡಗು ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ಡೀನ್, ನಿರ್ದೇಶಕ ಡಾ.ಎ.ಜೆ.ಲೋಕೇಶ್‌ತಂಡದವರೊಂದಿಗೆ ಸಮಾಲೋಚನೆ ನಡೆಸಿದರು. ಲೋಕೇಶ್ ಅವರು ಆಮ್ಲಜನಕ ಸಾಂದ್ರಕಗಳನ್ನು ಕೊಡುಗೆಯಾಗಿ ನೀಡಿದ್ದ ಕ್ಷಣಗಳನ್ನು ನೆನೆದು ಕೃತಜ್ಞತೆ ಅರ್ಪಿಸಿದರು. ಇದಕ್ಕೆ ಪ್ರತಿಕ್ರಿಯಿಸಿದ ತಂಡದವರು ಮುಂದೆಯೂ ಸಂಸ್ಥೆಗೆ ಸಾಧ್ಯವಿರುವ ನೆರವು ನೀಡಲಾಗುವುದು ಎಂದು ಭರವಸೆ ನೀಡಿದರು.

ಈ ವೇಳೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಕೆ.ಎಂ.ಸತೀಶ್‌ಕುಮಾರ್, ಸಂಸ್ಥೆಯ ಪ್ರಾಂಶುಪಾಲ ಡಾ.ವಿಶಾಲ್ ಕುಮಾರ್, ಸಂಸ್ಥೆಯ ಮುಖ್ಯ ಆಡಳಿತಾಧಿಕಾರಿ ರೋಹಿಣಿ ಭಾಗವಹಿಸಿದ್ದರು.

**ನೆರವು ನೀಡಿದ್ದು ಹೀಗೆ...:** ಕೋವಿಡ್ ಸಂಕಷ್ಟದ ಸಮಯದಲ್ಲಿ ಡಾ.ಶೋಭಾ ಚೊಟ್ಟೇರಾ, ಮಾಜಿ ಐಎಎಸ್ ಅಧಿಕಾರಿ ಎ.ಕೆ. ಮೊಣ್ಣಪ್ಪ ಅವರು ನಾಪೋಕ್ಲುವಿನ ಡಾ.ಸಣ್ಣುವಂಡ ಎಂ.ಕಾವೇರಪ್ಪ ಅವರನ್ನು ಸಂಪರ್ಕಿಸಿ ಕೊಡಗಿನಲ್ಲಿ ಆಮ್ಲಜನಕದ ಸಾಂದ್ರೀಕರಣದ ಅಗತ್ಯವಿದೆಯೇ ಎಂದು ವಿಚಾರಿಸಿದ್ದರು. ಇದರ ನಂತರ, ಡಾ.ಕಾವೇರಪ್ಪ ಅವರು ಅಂದಿನ ಜಿಲ್ಲಾಧಿಕಾರಿ ಚಾರುಲತಾ ಸೋಮಲ್ ಮತ್ತು ಕೊಡಗು ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ಡೀನ್ ಅವರನ್ನು ಸಂಪರ್ಕಿಸಿ ಉಪಕರಣದ ಅವಶ್ಯಕತೆ ಬಗ್ಗೆ ಹೇಳಿದ್ದರು. ಯುನೈಟೆಡ್ ಸ್ಟೇಟ್ಸ್ ಮೂಲದ ವೈದ್ಯಕೀಯ ತಜ್ಞರಾದ ಡಾ.ಮೀರಾ ವೆಲ್ಸ್ ಅವರ ನೇತೃತ್ವದಲ್ಲಿ 2021ರ ಮೇ 23ರಂದು ಕೊಡಗು ವೈದ್ಯಕೀಯ ಕಾಲೇಜಿಗೆ 53 ಆಮ್ಲಜನಕ ಸಾಂದ್ರಕಗಳನ್ನು ದಾನ ಮಾಡಲಾಗಿತ್ತು.



ಉದಯವಾಹಿನಿ ಚಿತ್ರ

# ಜನರಿಗೆ ಕಾಣುವ ಅಭಿವೃದ್ಧಿ ಬಿಜೆಪಿಗೇಕೆ ಕಾಣುತ್ತಿಲ್ಲ: ಸಿಎಂ ಸಿದ್ದರಾಮಯ್ಯ

## ಬಿಜೆಪಿಯವರು ಯಾವತ್ತಿಗೂ ಸಾಮಾಜಿಕ ನ್ಯಾಯದ ಪರವಾಗಿ ಇಲ್ಲ, ನಮ್ಮ ಸರ್ಕಾರ ಜಾತಿ ನೋಡಿ ಗ್ಯಾರಂಟಿ ಸೌಲಭ್ಯಗಳನ್ನು ಕೊಡುತ್ತಿಲ್ಲ


• ಉದಯವಾಹಿನಿ, ಮಂಡ್ಯ

ಪಂಚ ಗ್ಯಾರಂಟಿ ಯೋಜನೆಗಳಿಗೆ ಕಳೆದ ವರ್ಷ 53 ಸಾವಿರ ಕೋಟಿ ವೆಚ್ಚ ಮಾಡಿದ್ದೆವು. ಈ ಬಾರಿ ಬಜೆಟ್‌ನಲ್ಲಿ 50 ಸಾವಿರ ಕೋಟಿ ಮೀಸಲಿಟ್ಟಿದ್ದೇವೆ. ಆಸ್ತಿ ಸೃಜನೆಗೆ 83 ಸಾವಿರ ಕೋಟಿ ಇಟ್ಟಿದ್ದೇವೆ. ನಮ್ಮ ಸರ್ಕಾರ 1.35 ಲಕ್ಷ ಕೋಟಿಯನ್ನು ಅಭಿವೃದ್ಧಿಗೆ ತೆಗೆದಿರಿಸಿದೆ. ಬಿಜೆಪಿಯವರು ಆರೋಪಿಸುವಂತೆ ಪಾಪರ್ ಸರ್ಕಾರವಾಗಿದ್ದರೆ, ಖಜಾನೆ ಖಾಲಿಯಾಗಿದ್ದರೆ ಇಷ್ಟೊಂದು ಅಭಿವೃದ್ಧಿ ಸಾಧ್ಯವಿತ್ತೆ?' ಎಂದು ಸಿಎಂ ಸಿದ್ದರಾಮಯ್ಯ ತಿರುಗೇಟು ನೀಡಿದರು. ನಗರದ ಕನಕ ಭವನದಲ್ಲಿ ಮಂಡ್ಯ ಜಿಲ್ಲಾ ಕುರುಬರ ಸಂಘದ ವತಿಯಿಂದ ಆಯೋಜಿಸಿದ್ದ ಬಾಲಕರ ವಿದ್ಯಾರ್ಥಿನಿಲಯದ ನೂತನ ಕಟ್ಟಡದ ಶಂಕು ಸ್ಥಾಪನೆ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಬಿಜೆಪಿ ನಿರಂತರವಾಗಿ ಸುಳ್ಳು ಹೇಳಿಕೊಂಡು ತಿರುಗುತ್ತಿದೆ. ಸರ್ಕಾರದ ಬೊಕ್ಕಸ ಖಾಲಿ ಎನ್ನುತ್ತಿದ್ದಾರೆ. ನಮ್ಮ ಸರ್ಕಾರದ ಅಭಿವೃದ್ಧಿಪರ ಕಾರ್ಯಕ್ರಮಗಳು ಜನರಿಗೆ ಕಾಣುತ್ತಿವೆ, ಬಿಜೆಪಿ ಯವರಿಗೆ ಕಾಣುತ್ತಿಲ್ಲ. ಬಿಜೆಪಿಯವರು ಯಾವತ್ತಿಗೂ ಸಾಮಾಜಿಕ ನ್ಯಾಯದ ಪರವಾಗಿ ಇಲ್ಲ ಎಂದು ಕುಟುಕಿದರು. ನಮ್ಮ ಸರ್ಕಾರ ಜಾತಿ ನೋಡಿ ಗ್ಯಾರಂಟಿ ಸೌಲಭ್ಯಗಳನ್ನು ಕೊಡುತ್ತಿಲ್ಲ. ಸರ್ವ ಜನಾಂಗದವರಿಗೂ ಪಂಚ ಗ್ಯಾರಂಟಿ ಸೌಲಭ್ಯ ತಲುಪುತ್ತಿದೆ. ಚಲುವರಾಯಸ್ವಾಮಿ, ನರೇಂದ್ರಸ್ವಾಮಿ ಹಾಗೂ ನನ್ನ ಹೆಂಡ್ತಿಯೂ ಶಕ್ತಿ ಯೋಜನೆಯಡಿ ಉಚಿತವಾಗಿ ಬಸ್‌ನಲ್ಲಿ ಹೋಗಬಹುದು ಎಂದು ಸಿಎಂ ಹೇಳಿದಾಗ, ಸಭಿಕರು ಶಿಳ್ಳೆ, ಚಪ್ಪಾಳೆ ತಟ್ಟಿ ಹರ್ಷೋದ್ಗಾರ ಮಾಡಿದರು. ಕಾರ್ಯಕ್ರಮದಲ್ಲಿ ಕೃಷಿ ಸಚಿವ ಎನ್.ಚಲುವರಾಯಸ್ವಾಮಿ, ಶಾಸಕರಾದ ಪಿ.ಎಂ.ನರೇಂದ್ರಸ್ವಾಮಿ, ರಮೇಶ ಬಂಡಿಸಿದ್ದೇಗೌಡ, ಪಿ.ರವಿಕುಮಾರ್ ಗಣಿಗ, ದಿನೇಶ್ ಗೂಳಿಗೌಡ, ಮಧು ಮಾದೇ ಗೌಡ, ಮೈಷುಗರ್ ಅಧ್ಯಕ್ಷ ಸಿ.ಡಿ.ಗಂಗಾಧರ್, ಮಾಜಿ ಶಾಸಕ ಕೆ.ಬಿ.ಚಂದ್ರಶೇಖರ್ ಮುಂತಾದವರು ಪಾಲ್ಗೊಂಡಿದ್ದರು.

**ಅಮ್ಯೂಸ್‌ಮೆಂಟ್, ಕಾವೇರಿ ಆರತಿಗೆ ರೈತರ ವಿರೋಧ:** ಕೆಆರ್‌ಎಸ್ ಅಣೆಕಟ್ಟೆಗೆ ಧಕ್ಕೆ ತರುವ 2400 ಕೋಟಿ ವೆಚ್ಚದ ಅಮ್ಯೂಸ್‌ಮೆಂಟ್ ಪಾರ್ಕ್, ಕಾವೇರಿ ಆರತಿ ಕಾರ್ಯಕ್ರಮಗಳನ್ನು ಕೂಡಲೇ ಕೈಬಿಡಬೇಕು. ಡ್ಯಾಂ ಸುತ್ತಮುತ್ತ ಜನಸಂಪರ್ಕ ಯೋಜನೆ ಕೈಗೊಳ್ಳಬಾರದು ಎಂದು ರೈತಸಂಘ, ಪ್ರಗತಿಪರ ಸಂಘಟನೆಗಳ ಮುಖಂಡರು ಸಿಎಂ ಸಿದ್ದರಾಮಯ್ಯ ಅವರಿಗೆ ಮನವಿ ಸಲ್ಲಿಸಿದರು. ಕೆಆರ್‌ಎಸ್ ಅಣೆಕಟ್ಟು ಭದ್ರತೆಗೆ ಭದ್ರತಾ ಸಿಬ್ಬಂದಿ, ಮಿಲಿಟರಿ ಭದ್ರತೆ ಒದಗಿಸಬೇಕು. ಮೌಲ್ಯದ ಹೆಸರಿನಲ್ಲಿ 92 ಕೋಟಿ ಖರ್ಚು ಮಾಡಿ 'ಕಾವೇರಿ ಆರತಿ' ಮಾಡುವ ಅಗತ್ಯವೇನಿದೆ' ಎಂದು ರೈತ ನಾಯಕಿ ಸುನಂದಾ ಜಯರಾಂ ಪ್ರಶ್ನಿಸಿದರು. ಸಿಎಂ ಪ್ರತಿಕ್ರಿಯಿಸಿ, ಕೆಆರ್‌ಎಸ್ ಅಣೆಕಟ್ಟೆ ಪ್ರವಾಸಿ ತಾಣವೂ ಆಗಿದೆ. ಪ್ರವಾಸೋದ್ಯಮ ಉತ್ತೇಜನಕ್ಕೆ ಈ ಕಾರ್ಯಕ್ರಮಗಳನ್ನು ರೂಪಿಸಿದ್ದೇವೆ. ನಿಮ್ಮ ಮನವಿಯನ್ನು ಮತ್ತೊಮ್ಮೆ ಪರಿಶೀಲಿಸುತ್ತೇನೆ' ಎಂದರು.

**ಕಪ್ಪು ಬಾವುಟ: ದಸಂಸ ಕಾರ್ಯಕರ್ತರ ವಶ:** ಶೇ 75ರಷ್ಟು ಮೀಸಲಾತಿ ಹೆಚ್ಚಳ ಮಾಡುತ್ತೇವೆ ಎಂದು ಮಾತು ಕೊಟ್ಟಿದ್ದ ಸಿದ್ದರಾಮಯ್ಯ ಅವರು ನುಡಿದಂತೆ ನಡೆದುಕೊಂಡಿಲ್ಲ ಎಂದು ಆರೋಪಿಸಿ, ಸಿಎಂ ಅವರಿಗೆ ಕಪ್ಪು ಬಾವುಟ ಪ್ರದರ್ಶಿಸಲು ದಲಿತ ಸಂಘರ್ಷ ಸಮಿತಿ ಮುಖಂಡರು ಮತ್ತು ಕಾರ್ಯಕರ್ತರು ಸಜ್ಜಾಗಿದ್ದರು. ಈ ಮಾಹಿತಿ ಪಡೆದ ಪೊಲೀಸರು, ಮುಖ್ಯಮಂತ್ರಿ ಅವರು ಮಂಡ್ಯ ನಗರ ಪ್ರವೇಶಿಸುವ ಮುನ್ನವೇ ದಸಂಸ ಕಾರ್ಯಕರ್ತರನ್ನು ವಶಕ್ಕೆ ಪಡೆದು, ಪೊಲೀಸ್ ವಾಹನದಲ್ಲಿ ಕರೆದೊಯ್ದರು.



ಉದಯವಾಹಿನಿ ಚಿತ್ರ

**ರಾಜ್ಯದಲ್ಲಿರುವ ಪಾಕಿಸ್ತಾನದ ಪ್ರಜೆಗಳನ್ನು ಗಡೀಪಾರು ಮಾಡಿಲ್ಲ ಎಂಬ ಬಿಜೆಪಿ ಆರೋಪಕ್ಕೆ ಪ್ರತಿಕ್ರಿಯಿಸಿ, 'ಮೈಸೂರಿನಲ್ಲಿ ಕೆಲವರು ನ್ಯಾಯಾಲಯದ ಮೊರೆ ಹೋಗಿದ್ದಾರೆ. ಅಂಥವರು ಮಾತ್ರ ಉಳಿದುಕೊಂಡಿರುವುದು ಬಿಟ್ಟರೆ ಬಹುತೇಕ ಎಲ್ಲರೂ ಗಡೀಪಾರು ಆಗಿದ್ದಾರೆ. ಎಷ್ಟು ಜನ ಉಳಿದಿದ್ದಾರೆ ಎಂಬ ಮಾಹಿತಿ ನನಗೆ ಇಲ್ಲ ಎಂದರು.**

**2028ರವರೆಗೂ ಸಿದ್ದು ಸಿಎಂ: ಭೈರತಿ ಸುರೇಶ್**

**2028ರವರೆಗೂ ಸಿದ್ದರಾಮಯ್ಯನವರೇ ಮುಖ್ಯಮಂತ್ರಿಯಾಗಿರುತ್ತಾರೆ. ಎಐಸಿಸಿ ಆಶೀರ್ವಾದ ಮತ್ತು ಜನರ ಬೆಂಬಲ ಇರುವವರೆಗೂ ಸಿಎಂ ಆಗಿ ಮುಂದುವರಿಯುತ್ತಾರೆ. ಸಿದ್ದರಾಮಯ್ಯ ಅಂದ್ರೆ, ಕಾಂಗ್ರೆಸ್. ಕಾಂಗ್ರೆಸ್ ಅಂದ್ರೆ, ಸಿದ್ದರಾಮಯ್ಯ. ಅವರ ನೇತೃತ್ವದಿಂದಲೇ ಕಾಂಗ್ರೆಸ್ 136 ಸ್ಥಾನಗಳನ್ನು ಗೆದ್ದಿದೆ – ಭೈರತಿ ಸುರೇಶ್, ನಗರಾಭಿವೃದ್ಧಿ ಸಚಿವ**



**ನ್ಯಾಯದ ಪರವಾಗಿ ಇಲ್ಲ**

## ಮಿನಿ ನ್ಯೂಸ್

### ಆಪರೇಷನ್ ಅಭ್ಯಾಸ್: ಶಿರಾದಲ್ಲಿ ನಾಗರಿಕ ಸುರಕ್ಷತಾ ಅಣಕು ಪ್ರದರ್ಶನ

ಉದಯವಾಹಿನಿ ಚಿತ್ರ



• ಉದಯವಾಹಿನಿ, ಶಿರಾ

ನಗರದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಎನ್.ಸಿ.ಸಿ ಕೆಡೆಟ್ಸ್‌ಗಳಿಂದ ಅಪರೇಷನ್ ಅಭ್ಯಾಸ್ ನಾಗರಿಕರ ಸುರಕ್ಷತೆ ಅಣಕುವಾಯಿತು ಪ್ರದರ್ಶನ ನಡೆಸಲಾಯಿತು. ಕಾಶ್ಮೀರದ ಪಹಲ್ಗಾಮ್‌ನಲ್ಲಿ ಏ.22ರಂದು ನಡೆದ ಭಯೋತ್ಪಾದಕ ದಾಳಿ ನಂತರ ಪಾಕಿಸ್ತಾನದೊಂದಿಗೆ ಉದ್ವಿಗ್ನ ಪರಿಸ್ಥಿತಿ ಹೆಚ್ಚಿರುವ ಹಿನ್ನೆಲೆಯಲ್ಲಿ ಗೃಹ ಸಚಿವಾಲಯ ಮೇ7ರಂದು ದೇಶದಾದ್ಯಂತ 244 ಸ್ಥಳಗಳಲ್ಲಿ ಅಣಕು ಕವಾಯತು ನಡೆಸಲು ಆದೇಶಿಸಿತ್ತು. ಎನ್.ಸಿ.ಸಿ ಮಹಾನಿರ್ದೇಶಕ ಗುರ್ಬಿಪರ್‌ಲ್ ಸಿಂಗ್, ಅಣಕು ಕವಾಯತು ಬೆಂಬಲಿಸಿ ದೇಶದ ಎಲ್ಲ ಎನ್.ಸಿ.ಸಿ ಕೆಡೆಟ್‌ಗಳು ಪಾಲ್ಗೊಳ್ಳುವುದಾಗಿ ಎಕ್ಸ್‌ನಲ್ಲಿ ಟ್ವೀಟ್ ಮಾಡಿ ಎಲ್ಲ ಎನ್.ಸಿ.ಸಿ ಬೆಟಾಲಿಯನ್‌ಗಳಿಗೆ ಅಣಕು ಕವಾಯತು ನಡೆಸಲು ನಿರ್ದೇಶಿಸಿದ್ದರು. ನಗರದ 4 ಕಾರ್ ಬೆಟಾಲಿಯನ್, 4/4 ಕಂಪನಿ, ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಶಿರಾದ 25 ಎನ್.ಸಿ.ಸಿ ಕೆಡೆಟ್‌ಗಳು ತುರ್ತು ನಾಗರಿಕ ರಕ್ಷಣಾ ಸಿದ್ಧತೆ ಅಣಕು ಕವಾಯತು ಪ್ರದರ್ಶನ ನೀಡಿದರು.

ಸೈರನ್ ಸದ್ದು ಮೊಳಗುತ್ತಿದಂತೆ ವಿದ್ಯಾರ್ಥಿಗಳು ಸುರಕ್ಷಿತ ಸ್ಥಳಗಳಲ್ಲಿ ಅವಿತುಕೊಳ್ಳುವುದು, ಅಂಗವಿಕಲರು ಮತ್ತು ವಯಸ್ಸಾದ ಜನರನ್ನು ಸುರಕ್ಷಿತ ಸ್ಥಳಗಳಿಗೆ ಸ್ಥಳಾಂತರಿಸುವುದು, ಪ್ಯಾನಿಕ್ ಅಟ್ಯಾಕ್, ಉಸಿರಾಟದ ಸಮಸ್ಯೆ ಎದುರಾದರೆ ಸಿ.ಪಿ.ಆರ್ ಮಾಡುವುದು, ಹತ್ತಿರದ ಆಸ್ಪತ್ರೆ ಅಥವಾ ವೈದ್ಯರ ಹತ್ತಿರ ಕರೆದುಕೊಂಡು ಹೋಗುವುದರ ಬಗ್ಗೆ ಅಣಕು ಪ್ರದರ್ಶನ ಮಾಡಲಾಯಿತು. ಪ್ರಾಂಶುಪಾಲ ಡಿ.ಚಂದ್ರಶೇಖರಪ್ಪ, ಪತ್ರಾಂಕಿತ ವ್ಯವಸ್ಥಾಪಕ ಶ್ರೀನಿವಾಸಮೂರ್ತಿ, ಡಿ.ಆರ್ ಹೊನ್ನಾಂಜಿನಯ್ಯ, ಕಾಲೇಜಿನ ಎನ್.ಸಿ.ಸಿ ಸಿ.ಟಿ.ಒ ಶ್ರೀಕೃಷ್ಣ ವಿ.ವೈ ಇದ್ದರು.

### ಸರ್ವೆ ಇಲಾಖೆ ಸೂಪರ್‌ವೈಸರ್ ನಿವಾಸದ ಮೇಲೆ ಲೋಕಾಯುಕ್ತ ದಾಳಿ





ಉದಯವಾಹಿನಿ ಚಿತ್ರ

• ಉದಯವಾಹಿನಿ, ಕೋಲಾರ

ಆದಾಯಕ್ಕಿಂತ ಅಧಿಕ ಆಸ್ತಿ ಸಂಪಾದನೆ ಆರೋಪದ ಮೇಲೆ ಕೋಲಾರ ಸರ್ವೆ ಇಲಾಖೆ ಸೂಪರ್‌ವೈಸರ್ ಸುರೇಶ್ ಬಾಬು ಅವರಿಗೆ ಸಂಬಂಧಿಸಿದ ಏಳು ಕಡೆ ಲೋಕಾಯುಕ್ತ ಪೊಲೀಸರು ಗುರುವಾರ ಬೆಳಿಗ್ಗೆ ದಾಳಿ ನಡೆಸಿದ್ದಾರೆ. ಮಾಲೂರು ತಾಲ್ಲೂಕು, ಕೋಲಾರ ತಾಲ್ಲೂಕು, ಬೆಂಗಳೂರು ಗ್ರಾಮಾಂತರದ ಹೊಸಕೋಟೆ ಸೇರಿದಂತೆ ವಿವಿಧೆಡೆ ಜಿಲ್ಲಾ ಲೋಕಾಯುಕ್ತ ಎಸ್‌ಪಿ ಧನಂಜಯ್ ನೇತೃತ್ವದಲ್ಲಿ ಈ ದಾಳಿ ನಡೆದಿದೆ. ಸುರೇಶ್ ಬಾಬು ಕೋಲಾರ ಜಿಲ್ಲಾ ಸರ್ಕಾರಿ ನೌಕರರ ಸಂಘದ ಮಾಜಿ ಅಧ್ಯಕ್ಷ ಕೂಡ. ಈ ಬಾರಿ ಚುನಾವಣೆಯಲ್ಲಿ ಸೋಲು ಕಂಡಿದ್ದರು. ಎರಡು ತಿಂಗಳ ಹಿಂದೆ ಕೂಡ ಅವರಿಗೆ ಸಂಬಂಧಿಸಿದ ಮೂರು ಕಡೆ ಲೋಕಾಯುಕ್ತ ಪೊಲೀಸರು ದಾಳಿ ನಡೆಸಿ ಕಡತಗಳನ್ನು ಜಾಲಾಡಿದ್ದರು. ಈ ಸಂದರ್ಭದಲ್ಲಿ ಕಚೇರಿಯ ಕಡತಗಳು ಮನೆಯಲ್ಲಿ ಪತ್ತೆಯಾಗಿದ್ದವು.

### ಚಿರತೆ ಮರಿ ರಕ್ಷಣೆ


• ಉದಯವಾಹಿನಿ, ಪಿರಿಯಾಪಟ್ಟಣ

ಪಟ್ಟಣದ ಹೊರವಲಯದಲ್ಲಿರುವ ಹಳೆಪೇಟೆ ಕಂಠಾಪುರದ ಜಮೀನಿನಲ್ಲಿ ನಿತ್ರಾಣಗೊಂಡ ಸ್ಥಿತಿಯಲ್ಲಿದ್ದ 1.5 ವರ್ಷದ ಗಂಡು ಚಿರತೆ ಮರಿಯನ್ನು ಅರಣ್ಯ ಇಲಾಖೆ ಸಿಬ್ಬಂದಿ ರಕ್ಷಿಸಿದ್ದಾರೆ. ಗ್ರಾಮಸ್ಥರು ಚಿರತೆ ಯನ್ನು ಗಮನಿಸಿದ್ದು, ಅರಣ್ಯ ಇಲಾಖೆಗೆ ಸುದ್ದಿ ಮುಟ್ಟಿಸಿದ್ದಾರೆ. ತಕ್ಷಣ ಆರ್‌ಎಫ್‌ಒ ಪದ್ಮಶ್ರೀ ನೇತೃತ್ವದಲ್ಲಿ ಅರಣ್ಯ ಇಲಾಖೆ ಸಿಬ್ಬಂದಿ ಚಿರತೆ ಮರಿಯನ್ನು ಸೆರೆ ಹಿಡಿದಿದ್ದಾರೆ. ಡಾ. ಮಧು ಸೂಧನ್ ಅವರು ಮರಿಯನ್ನು ಪರೀಕ್ಷಿ ಸಿದ್ದು ಆರೋಗ್ಯವಾಗಿದೆ ಎಂದು ತಿಳಿಸಿದ್ದಾರೆ.



ಚಿರತೆ ಮರಿಯು ಎರಡು ಮೂರು ದಿನಗಳಿಂದ ಆಹಾರ ಸಿಗದ ಕಾರಣ ನಿತ್ರಾಣಗೊಂಡಿದೆ, ಜಮೀನಿನ ಅಕ್ಕಪಕ್ಕದಲ್ಲೇ ಅದರ ತಾಯಿ ಚಿರತೆ ಇರುವ ಸಾಧ್ಯತೆಯಿದ್ದು, ಅದರೊಂದಿಗೆ ಸೇರಿಸುವ ಪ್ರಯತ್ನ ಮಾಡಲಾಗುವುದು, ಬೇಟೆಯಾಡಿ ಆಹಾರ ಹುಡುಕಿಕೊಳ್ಳಲು ಸಾಧ್ಯ ವಿಲ್ಲದ ಕಾರಣ, ತಾಯಿ ಚಿರತೆಯೊಂದಿಗೆ ಸೇರಿಸಲು ಸಾಧ್ಯವಾಗದಿದ್ದರೆ ಪುನರ್ವಸತಿ ಕೇಂದ್ರದ ವಶಕ್ಕೆ ನೀಡಲಾ ಗುವುದು ಎಂದು ಆರ್ ಎಫ್‌ಒ ಪದ್ಮಶ್ರೀ ತಿಳಿಸಿದ್ದಾರೆ.

### ಹಜ್ ಯಾತ್ರೆಯಿಂದ ಏಕತೆ-ಸಮಾನತೆ



ಉದಯವಾಹಿನಿ ಚಿತ್ರ

• ಉದಯವಾಹಿನಿ, ವಿರಾಜಪೇಟೆ

ಪವಿತ್ರ ಹಜ್ ಯಾತ್ರೆಯು ಯಾತ್ರಾರ್ಥಿಗಳಲ್ಲಿ ಏಕತೆ ಮತ್ತು ಸಮಾನತೆ ಭಾವನೆ ಮೂಡಿಸುತ್ತದೆ ಎಂದು ಕೊಡವ ಮುಸ್ಲಿಂ ಅಸೋಶಿಯೇಷನ್ ಅಧ್ಯಕ್ಷ ದುದ್ದಿಯಂಡ ಎಚ್. ಸೂಫಿ ಅಭಿಪ್ರಾಯಪಟ್ಟರು.

ಇಲ್ಲಿನ ಕೊಂಡಗೇರಿಯಲ್ಲಿ ಕೊಡವ ಮುಸ್ಲಿಂ ಅಸೋಸಿಯೇಷನ್ ಗುರುವಾರ ಏರ್ಪಡಿಸಿದ್ದ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿ, ಆಧ್ಯಾತ್ಮಿಕ ಉತ್ಕರ್ಷ, ಸಮಾನತೆ, ಸಹೋದರತೆಗಳನ್ನು ಬೆಳೆಸಿ ಮುಂದಿನ ಕೆಡುಕು ರಹಿತ ಬದುಕು, ಆತ್ಮಪರಿಶುದ್ಧತೆಯನ್ನು ಏಕೀಕರಿಸುವುದರಲ್ಲಿ ಹಜ್ ಬಹು ದೊಡ್ಡ ಪಾತ್ರ ವಹಿಸುತ್ತದೆ ಎಂದರು.

ಕೆ.ಎಂ.ಎ ನಿರ್ದೇಶಕ ಕುಪ್ಪಂದಿರ ಕೆ.ಯೂಸುಫ್ ಹಾಜಿ ಹಜ್ ಯಾತ್ರೆಗೆ ತೆರಳುತ್ತಿರುವ ಹಿನ್ನೆಲೆ ಕಾರ್ಯಕ್ರಮದಲ್ಲಿ ಅವರನ್ನು ಸನ್ಮಾನಿಸಿ ಶುಭ ಕೋರಲಾಯಿತು.

ಅಂತರಾಳದಿಂದ..
EDITORIAL

# ಆಪರೇಷನ್ ಸಿಂಧೂರ ಕಾರ್ಯಾಚರಣೆ ಪಾಕಿಸ್ತಾನ ಪಾಠ ಕಲಿಯಬೇಕು



ಪಹಲ್ಗಾಮ್‌ನಲ್ಲಿ ಉಗ್ರರು ದಾಳಿ ನಡೆಸಿದ್ದಕ್ಕೆ ಪ್ರತೀಕಾರದ ರೂಪದಲ್ಲಿ ಪಾಕಿಸ್ತಾನ ಮತ್ತು ಪಾಕ್ ಆಕ್ರಮಿತ ಕಾಶ್ಮೀರದಲ್ಲಿನ ಭಯೋತ್ಪಾದಕರ ಶಿಬಿರಗಳ ಮೇಲೆ ಭಾರತವು ದಾಳಿ ನಡೆಸಿದೆ. ಬಹಾವಲ್‌ರ, ಮುಜಫ್ಫರಾಬಾದ್ ಮತ್ತು ಇತರ ಕೆಲವು ಸ್ಥಳಗಳಲ್ಲಿನ ಒಟ್ಟು ಒಂಬತ್ತು ಶಿಬಿರಗಳ ಮೇಲೆ ಭಾರತವು ಮಿಲಿಟರಿ ದಾಳಿ ನಡೆಸಿದೆ. ಪಹಲ್ಗಾಮ್‌ನಲ್ಲಿ ಉಗ್ರರು ದಾಳಿ ನಡೆಸಿದ ನಂತರದಲ್ಲಿ. ಈ ದಾಳಿ ನಡೆಸಿದವರು ಹಾಗೂ ದಾಳಿಗೆ ಬೆಂಬಲ ನೀಡಿದವರ ವಿರುದ್ಧ ಕ್ರಮ ಜರುಗಿಸುವುದು ಖಚಿತ ಎಂಬ ಮಾತನ್ನು ಭಾರತ ಸ್ಪಷ್ಟವಾಗಿ ಹೇಳಿತ್ತು. ಭಯೋತ್ಪಾದಕರು ಎಲ್ಲಿಯೇ ಇದ್ದರೂ ಅವರನ್ನು ಹುಡುಕಿ ಶಿಕ್ಷಿಸಲಾಗುತ್ತದೆ ಎಂಬ ಮಾತನ್ನು ಪ್ರಧಾನಿ ನರೇಂದ್ರ ಮೋದಿ ಅವರು ಹೇಳಿದ್ದರು. ಕೇಂದ್ರ ಸರ್ಕಾರದ ಇತರ ಕೆಲವು ಪ್ರಮುಖ ಮುಖಂಡರು ಕೂಡ, ದೇಶದ ದೃಢಸಂಕಲ್ಪವನ್ನು ಸ್ಪಷ್ಟವಾಗಿ ಹೇಳಿದ್ದರು. ಪಾಕಿಸ್ತಾನ ಮತ್ತು ಪಾಕ್ ಆಕ್ರಮಿತ ಕಾಶ್ಮೀರದಲ್ಲಿನ ಗುರಿಗಳ ಮೇಲೆ ಭಾರತ ನಡೆಸಿರುವ ದಾಳಿಯು ಯಶಸ್ವಿಯಾಗಿದೆ ಎಂದು ವರದಿಗಳು ಹೇಳುತ್ತಿವೆ. ಈ ದಾಳಿಗೆ ಹಲವು ಭಯೋತ್ಪಾದಕರು ಬಲಿಯಾಗಿದ್ದಾರೆ. ಆಪರೇಷನ್ ಸಿಂಧೂರ ಹೆಸರಿನ ಈ ಕಾರ್ಯಾಚರಣೆಯು ಭಯೋತ್ಪಾದಕರನ್ನು ತಯಾರು ಮಾಡುವ ಮೂಲಸೌಕರ್ಯವನ್ನು ಗುರಿಯಾಗಿಸಿಕೊಂಡಿತ್ತು. ಪಾಕಿಸ್ತಾನದ ಯಾವುದೇ ಮಿಲಿಟರಿ ಸ್ಥಳಗಳ ಮೇಲೆ ದಾಳಿ ನಡೆಸಿಲ್ಲ ಎಂಬುದನ್ನು ಭಾರತ ಸ್ಪಷ್ಟಪಡಿಸಿದೆ. ತನ್ನ ಗುರಿಯು ಬಹಳ ನಿಖರವಾಗಿತ್ತು, ಪ್ರತಿದಾಳಿಯನ್ನು ಆಲೋಚಿಸಿ ನಡೆಸಲಾಗಿದೆ, ಅದು ಪರಿಸ್ಥಿತಿಯನ್ನು ಉದ್ವಿಗ್ನಗೊಳಿಸುವ ಸ್ವರೂಪದ್ದಲ್ಲ ಎಂಬುದನ್ನು ಕೂಡ ಭಾರತ ಹೇಳಿದೆ. ಗುರಿಯನ್ನು ಆಯ್ಕೆ ಮಾಡುವ ಸಂದರ್ಭದಲ್ಲಿ ದಾಳಿಯ ಆಲೋಚನೆಯನ್ನು ಕಾರ್ಯರೂಪಕ್ಕೆ ತರುವ ಸಂದರ್ಭದಲ್ಲಿ ಸಂಯಮ ಪಾಲಿಸಲಾಗಿದೆ ಎಂದೂ ಹೇಳಿದೆ.

**ಪಹಲ್ಗಾಮ್ ದಾಳಿಯ ವಿಚಾರವಾಗಿ ವಿಶ್ವಸಂಸ್ಥೆಯ ಭದ್ರತಾ ಮಂಡಳಿಯು ಪಾಕಿಸ್ತಾನವನ್ನು ತರಾಟೆಗೆ ತೆಗೆದುಕೊಂಡಿದೆ ಎಂಬ ವರದಿಗಳು ಬಂದ ನಂತರದಲ್ಲಿ ಭಾರತ ದಾಳಿ ನಡೆಸಿದೆ. ಭಾರತದಲ್ಲಿ ನಡೆಯುವ ಭಯೋತ್ಪಾದಕ ಕೃತ್ಯಗಳಿಗೆ ಪಾಕಿಸ್ತಾನವು ಬೆಂಬಲ ನೀಡುವುದನ್ನು ಭಾರತದ ಮೇಲಿನ ಆಕ್ರಮಣ ಎಂದು ಮಾತ್ರವೇ ಅರ್ಥ ಮಾಡಿಕೊಳ್ಳಬಹುದು. ಪಾಕಿಸ್ತಾನದ ಕೃತ್ಯಗಳ ಕಾರಣದಿಂದಾಗಿ ಭಾರತ ಎದುರಿಸುತ್ತಿರುವ ಪರಿಸ್ಥಿತಿಯ ಬಗ್ಗೆ ಕೇಂದ್ರ ಸರ್ಕಾರವು ಜಗತ್ತಿನ ಪ್ರಮುಖ ದೇಶಗಳಿಗೆ ಮಾಹಿತಿ ನೀಡಿದೆ.**

ಭಾರತ ನಡೆಸಿರುವ ದಾಳಿಯನ್ನು ಅಪ್ರಚೋದಿತ' ಎಂದು ಪಾಕಿಸ್ತಾನ ಕರೆದಿದೆ. ದಾಳಿಗೆ ಪ್ರತಿಯಾಗಿ ಶಿಕ್ಷೆ ಇಲ್ಲದಿಲ್ಲ ಎಂದು ಅಲ್ಲಿನ ಪ್ರಧಾನಿ ಶೆಹಬಾಜ್ ಷರೀಫ್ ಹೇಳಿದ್ದಾರೆ. ಅಂದರೆ ಪಾಕಿಸ್ತಾನ ಪ್ರತಿದಾಳಿ ನಡೆಸುವ ಸಾಧ್ಯತೆ ಇದೆ ಎಂಬುದನ್ನು ಅವರ ಮಾತು ಹೇಳುತ್ತಿದೆ.

ಬಿಕ್ಕಟ್ಟು ಇನ್ನಷ್ಟು ತೀವ್ರ ಸ್ವರೂಪ ಪಡೆದುಕೊಳ್ಳುವ ಸಾಧ್ಯತೆಯನ್ನು ಭಾರತವು ಮೊದಲೇ ಅಂದಾಜು ಮಾಡಿದೆ. ನಾಗರಿಕರ ಸ್ವಯಂ ರಕ್ಷಣೆಯ ಸಿದ್ಧತೆಗಳನ್ನು ಇನ್ನಷ್ಟು ಹೆಚ್ಚುಮಾಡುವ ಉದ್ದೇಶದಿಂದ ಸ್ವಯಂ ರಕ್ಷಣಾ ತಾಲೀಮುಗಳನ್ನು ದೇಶದೆಲ್ಲೆಡೆ ಆಯೋಜಿಸಿರುವುದು ಇದೇ ಕಾರಣಕ್ಕಾಗಿ. ಇಂತಹ ತಾಲೀಮು ದೇಶದಲ್ಲಿ ಐದು ದಶಕಗಳ ನಂತರ ಇದೇ ಮೊದಲ ಬಾರಿಗೆ ನಡೆದಿದೆ. ಅಂದರೆ, ಪಾಕಿಸ್ತಾನದ ಜೊತೆಗಿನ ಸಂಘರ್ಷವು ಒಂದೆರಡು ದಿನಗಳ ಏಟು ಎದಿರೇಟಿನ ಆಚೆಗೂ ವಿಸ್ತರಿಸುವ ಸಾಧ್ಯತೆ ಇಲ್ಲದಿಲ್ಲ. ಸಿಂಧೂ ಜಲ ಒಪ್ಪಂದವನ್ನು ಅಮಾನತಿನಲ್ಲಿ ಇರಿಸುವುದು, ರಾಜತಾಂತ್ರಿಕ ಸಂಬಂಧವನ್ನು ಕಡಿಮೆ ಮಾಡಿದ್ದು ಸೇರಿದಂತೆ ಇತರ ಹಲವು ಕ್ರಮಗಳನ್ನು ಕೈಗೊಂಡ ನಂತರದಲ್ಲಿ ಭಾರತವು ದಾಳಿ ನಡೆಸಿದೆ. ದೇಶದ ಹಿತಾಸಕ್ತಿಯನ್ನು, ಸಾರ್ವಭೌಮತ್ವವನ್ನು ರಕ್ಷಿಸಲು ಸಶಸ್ತ್ರ ಪಡೆಗಳು ಕೈಗೊಂಡಿರುವ ಕ್ರಮಕ್ಕೆ ಇಡೀ ದೇಶ ಬೆಂಬಲ ವ್ಯಕ್ತಪಡಿಸಿದೆ. ಎಲ್ಲಾ ರಾಜಕೀಯ ಪಕ್ಷಗಳು ಕೂಡ ಸಶಸ್ತ್ರ ಪಡೆಗಳಿಗೆ ಬೆಂಬಲ ಸೂಚಿಸಿವೆ. ಪಾಕಿಸ್ತಾನವು ಪಾಠ ಕಲಿತುಕೊಂಡು, ಹೆಜ್ಜೆಯನ್ನು ಹಿಂದಕ್ಕೆ ಇರಿಸಿದರೆ ಒಳಿತು. ಅದು ನೆರೆಯ ರಾಷ್ಟ್ರದ ಜೊತೆ ಒಳ್ಳೆಯ ಸಂಬಂಧ ಹೊಂದುವುದನ್ನು ತನ್ನ ನೀತಿಯನ್ನಾಗಿಸಿಕೊಳ್ಳಬೇಕು. ದೀರ್ಘ ಅವಧಿಯ ಸಮರವು ಎರಡೂ ದೇಶಗಳಿಗೆ ಒಳಿತು ಮಾಡುವುದಿಲ್ಲ. ಅದರಲ್ಲೂ ಮುಖ್ಯವಾಗಿ, ಆರ್ಥಿಕವಾಗಿ ದುರ್ಬಲಗೊಂಡಿರುವ ಹಾಗೂ ರಾಜಕೀಯವಾಗಿ ಕುಸಿಯುವ ಹಂತ ತಲುಪಿರುವ ಪಾಕಿಸ್ತಾನಕ್ಕೆ ಯುದ್ಧ ಒಳಿತಲ್ಲ. ಪಾಕಿಸ್ತಾನಕ್ಕಿಂತ ಹೆಚ್ಚು ಬಲಿಷ್ಠವಾಗಿರುವ ಹಾಗೂ ಎಲ್ಲಾ ವಿಚಾರಗಳಲ್ಲಿಯೂ ಉತ್ತಮ ಸ್ಥಾನದಲ್ಲಿರುವ ಭಾರತವು ಇದುವರೆಗೆ ಬಹಳ ಪ್ರಬುದ್ಧವಾಗಿ ಮತ್ತು ಜವಾಬ್ದಾರಿ ಯಿಂದ ನಡೆದುಕೊಂಡಿದೆ. ಆ ಕೆಲಸವನ್ನು ಭಾರತ ಮುಂದುವರಿಸಬೇಕು.

# ರಾಮಾಯಣ



## ಶ್ರೀರಾಮನು ಗುಹಸುಮಂತ್ರರನ್ನು ಕಳುಹಿಸಿ ಗಂಗಾನದಿಯನ್ನು ದಾಟಿದ್ದು

• ಹಿಂದಿನ ಸಂಚಿಕೆಯಿಂದ 78ನೆಯ ಅಧ್ಯಾಯ

ಆ ಮಾತನ್ನು ಕೇಳಿ ಶ್ರೀರಾಮನು ಅತ್ಯಂತ ಸಂತೋಷಪಟ್ಟು ಮನಸ್ಸಿನಲ್ಲಿದ್ದ ದುಃಖವನ್ನು ತ್ಯಜಿಸಿ ನಿರ್ಜನವಾದ ಆ ಅರಣ್ಯದ ಒಂದು ಅಲದಮರದಡಿಯಲ್ಲಿ ತಳಿರಹಾಸಿಗೆಯಮೇಲೆ ಭಯವಿಲ್ಲದೆ ಪರ್ವತದ ತಪ್ಪಲುಗಳಲ್ಲಿರುವ ಸಿಂಹರಾಜನಂತೆ ಸುಖವಾಗಿ ನಿದ್ರಿಸುತ್ತ ಆ ರಾತ್ರಿಯನ್ನು ಕಳೆದನು.

### ಭರ ದ್ವಾಜ ಮುನಿಯ ಸಂದರ್ಶನ

ಈ ರೀತಿಯಲ್ಲಿ ಶ್ರೀರಾಮನು ಸೀತಾಲಕ್ಷ್ಮಣಸಮೇತನಾಗಿ ಆ ಮರದ ಕೆಳಗೆ ಆ ರಾತ್ರಿಯನ್ನು ಕಳೆದು ಪ್ರಾತಃಕಾಲದಲ್ಲಿದ್ದು ನಿತ್ಯಕರ್ಮಾನುಷ್ಠಾನಗಳನ್ನು ತೀರಿಸಿಕೊಂಡು ಅಪೂರ್ವವಾಗಿಯೂ ಮನೋಹರವಾಗಿಯೂ ಮೊದಲು ನೋಡದೆಯೂ ಇದ್ದ ಅನೇಕ ದೇಶಗಳನ್ನು ನೋಡಿ ಅತ್ಯಂತಹೋಗುತ್ತಿರಲು ಸುಮಂತ್ರನು ತನ್ನ ದೃಷ್ಟಿಗೋಚರವಾಗುವಪರಂತ ದೃಷ್ಟಿಸಿ ನೋಡಿ, ಅವರು ಕಣ್ಣು ಮರೆಯಾಗಲು ಅತ್ಯಂತ ವ್ಯಥೆಯಿಂದ ಕಣ್ಣೀರುಬಿಟ್ಟು ಹಂಬಲಿಸುತ್ತಿದ್ದನು. ತಪಸ್ವಿಯಾದ ಶ್ರೀರಾಮನು ಗಂಗಾತೀರವನ್ನು ದಾಟಿ ಮುಂದೆ ಅನೇಕ ಸಂಪತ್ತುಗಳಿಂದ ಕೂಡಿದ ವತ್ಸ ದೇಶವನ್ನೆ ದಿದನು.

ಅವರೆಲ್ಲರೂ ಮುಂದೆ ಪ್ರಯಾಣಮಾಡಿದ ಮೇಲೆ ರಾಮಲಕ್ಷ್ಮಣರು ಅರಣ್ಯದಲ್ಲಿ ಸಂಚರಿಸುತ್ತಿದ್ದ ಕಾಡಹಂದಿಗಳು ಹುಲ್ಲೆ ಕೃಷ್ಣಸಾರಗಳೆಂಬ ಮೃಗಗಳನ್ನು ಕೊಂದು ಅವುಗಳ ಮಾಂಸಗಳನ್ನು ತೆಗೆದುಕೊಂಡು ಸಾಯಂಕಾಲಸಮಯದಲ್ಲಿ ಒಂದು ಮರದಡಿಯನ್ನು ಸೇರಿದರು.

### ಶ್ರೀ ರಾಮನ ವನವಾಸ ಪ್ರಾರಂಭ

ಆಮೇಲೆ ಶ್ರೀರಾಮನು ಸಾಯಂಕಾಲ ಸಂಧ್ಯಾವಂದನೆಯನ್ನು ಮಾಡಿ ಲಕ್ಷ್ಮಣನನ್ನು ಕುರಿತು ಲಕ್ಷ್ಮಣ, ನಾವು ಈವರೆಗೆ ರಾಜ್ಯದೊಳಗಣ ಕಾನನದಲ್ಲಿ ರಾತ್ರಿಗಳನ್ನು ಕಳೆದವು. ಈ ರಾತ್ರಿ ಮೊದಲುಗೊಂಡು ಮಹಾರಣ್ಯದಲ್ಲಿ ರಾತ್ರಿಗಳನ್ನು ಕಳೆಯಬೇಕು. ಸುಮಂತ್ರನೂ ಇಲ್ಲ. ನಾವಿಬ್ಬರೂ ಇಂದುಮೊದಲಾಗಿ ರಾತ್ರಿಯಲ್ಲಿ ಎಚ್ಚರಿಕೆಯಿಂದ ಸೀತಾದೇವಿಯನ್ನು ರಕ್ಷಿಸಬೇಕು. ತಳಿರ ಹಾಸಿಗೆಯನ್ನು ಮಾಡಿಕೊಂಡು ಈ ರಾತ್ರಿಯನ್ನು ಕಳೆಯಬೇಕು ಎಂದು ನುಡಿದನು. ಆ ಬಳಿಕ ಅತಿಮೃದುವಾದ ಹಂಸತೂಲಿಕಾತಲ್ಪದಲ್ಲಿ ಮಲಗುತ್ತಿದ್ದ ಶ್ರೀರಾಮನು ನೆಲದ ಮೇಲೆ ಕುಳಿತುಕೊಂಡು ಲಕ್ಷ್ಮಣನೊಡನೆ ಮಾತನಾಡುತ್ತ ಹೀಗೆಂದನು:

ಲಕ್ಷ್ಮಣ ಈ ರಾತ್ರಿಯಲ್ಲಿ ದಶರಥರಾಯನು ಅತ್ಯಂತ ದುಃಖಾಕ್ರಾಂತನಾಗಿ ಮಲಗಿರುವನು. ಕೈಕೇಯಿದೇವಿಯು ತನ್ನ ಮನಸ್ಸಿನ ಇಷ್ಟವು ಸಂದಿತೆಂದು ಹರ್ಷಪಡುತ್ತ ತನ್ನ ಮಗನಾದ ಭರತನಿಗೆ ರಾಜ್ಯಾಧಿ ಪತ್ಯವಾಯಿತೆಂಬ ಸಂತೋಷದಿಂದಿರುವಳು. ಅನಾಥನಾಗಿ ವೃದ್ಧನಾದ ದಶರಥಮಹಾರಾಯನು ಆ ದೇವಿಯ ಮಾತಿಗೆ ಮರುಳಾಗಿ ನಮ್ಮ ಅಗಲಿಕೆಯಿಂದುಂಟಾದ ದುಃಖದಿಂದ ಹಂಬಲಿಸಿ ಚಿತ್ರ ಭ್ರಮೆಯಿಂದ ಏನುತಾನೆ ಮಾಡಿಯಾನು ಲೋಕದಲ್ಲಿ ಧರ್ಮಾರ್ಥಗಳಿಗಿಂತಲೂ ಕಾಮವು ಬಲವಾದದ್ದೆಂದು ತೋರುತ್ತದೆ. ಅಜ್ಞಾನಿಗಳಾದವರೂ ಸ್ತ್ರೀಯರ ಮಾತಿಗೆ ಮರುಳಾಗಿ ಅನುಕೂಲರಾದ ಮಕ್ಕಳನ್ನು ಬಿಡರು. ದಶರಥರಾಯನು ಅಜ್ಞಾನಿಗಳೆಲ್ಲರಿಗೂ ಮೊದಲಿನವ ನಾದನು.

ಮುಂದುವರಿಯುವುದು...

# ಪಾಕಿಸ್ತಾನಿ ಭಯೋತ್ಪಾದಕರ ಮೇಲಿನ ಕಾರ್ಯಾಚರಣೆ

• ಉದಯ ವಾಹಿನಿ, ಬೆಂಗಳೂರು

ಭಾರತೀಯ ಸೈನ್ಯವು ಮಾರ್ಚ್ 7 ಕ್ಕೆ ಪಾಕಿಸ್ತಾನದಲ್ಲಿನ 9 ಭಯೋತ್ಪಾದಕ ಕೇಂದ್ರಗಳ ಮೇಲೆ ಅತ್ಯಂತ ನಿಖರವಾಗಿ ಮತ್ತು ನಿರ್ಣಾಯಕವಾಗಿ ವೈಮಾನಿಕ ದಾಳಿ ನಡೆಸಿ ಆ ಕೇಂದ್ರಗಳನ್ನು ನಾಶ ಮಾಡಿದೆ. ಇದು ಕೇವಲ ಒಂದು ಸೈನ್ಯದ ಕಾರ್ಯಾಚರಣೆಯಲ್ಲ, ದೇಶದ ಗೌರವ, ಸುರಕ್ಷತೆ ಆತ್ಮಸನ್ಮಾನದ ಶಂಖನಾದವಾಗಿದೆ, ಎಂದು ಸನಾತನ ಸಂಸ್ಥೆಯ ವಕ್ತಾರರಾದ ಶ್ರೀ. ಅಭಯ ವರ್ತಕ ಇವರು ಪ್ರತಿಪಾದಿಸಿದ್ದಾರೆ.

ಅವರು ಮಾತು ಮುಂದುವರೆಸಿ, ಜಮ್ಮು ಕಾಶ್ಮೀರದಲ್ಲಿನ ಪಹಲ್ಗಾವ್ ನಲ್ಲಿ 26 ಅಮಾಯಕ ಹಿಂದೂ ಪ್ರಯಾಣಿಕರ ಬರ್ಬರ ಹತ್ಯೆ ಮಾಡಲಾಗಿತ್ತು, ಈ ದಾಳಿ ಕೇವಲ ಕೆಲವು ವ್ಯಕ್ತಿಗಳ ಮೇಲೆ ಆಗದೆ, ಸಂಪೂರ್ಣ ಹಿಂದೂ ಸಮಾಜದ ಮೇಲೆ ಆಗಿತ್ತು. ಭಾರತದ ಸಂಸ್ಕೃತಿಯ ಮೇಲೆ ಆಗಿತ್ತು. ಈ ಕ್ರೂರತೆಯ ಪ್ರತಿಕಾರ ಭಾರತೀಯ ಸೈನ್ಯ ತೆಗೆದುಕೊಂಡಿದೆ. ಇದು ಪ್ರತಿಯೊಬ್ಬ ರಾಷ್ಟ್ರಪ್ರೇಮಿ ಭಾರತೀಯರ ಹೃದಯಕ್ಕೆ ಸಮಾಧಾನ ತಂದಿದೆ.

ಸನಾತನ ಸಂಸ್ಥೆಯ ವತಿಯಿಂದ ಈ ನಿರ್ಣಾಯಕ ಕಾರ್ಯಾಚರಣೆಯನ್ನು ನಾವು ಮನಃಪೂರ್ವಕವಾಗಿ ಸ್ವಾಗತಿಸುತ್ತೇವೆ. ಇದು ಕೇವಲ ಸೇಡು ಅಷ್ಟೇ ಅಲ್ಲದೆ,



ಇದು ಹಿಂದೂಗಳ ಸುರಕ್ಷತೆಗಾಗಿ ಮತ್ತು ಭಾರತದ ಅಖಂಡತೆಗಾಗಿ ತೆಗೆದು ಕೊಂಡಿರುವ ಸಾಹಸಿ ಹೆಜ್ಜೆ ಆಗಿದೆ. ಭಾರತದಲ್ಲಿನ ಹಿಂದೂಗಳು ಈಗ ಎಚ್ಚರಗೊಂಡಿದ್ದಾರೆ. ಆದ್ದರಿಂದ ಅವರ ಆಗ್ರಹಕ್ಕೆ ಬೆಲೆ ಕೊಟ್ಟು ಸರಕಾರ ಪಾಕಿಸ್ತಾನಕ್ಕೆ ಸರಿಯಾದ ಪ್ರತ್ಯುತ್ತರ ನೀಡಿದೆ.

ಇನ್ನೇನಾದರೂ ಪಾಕಿಸ್ತಾನವು ಬೇರೆಯ ರೀತಿ ಪ್ರಯತ್ನ ಮಾಡುವ ಬಗ್ಗೆ ಯೋಚಿಸಿದರೆ ಇದಕ್ಕಿಂತಲೂ ಹೆಚ್ಚಿನ ಕಠಿಣ ರೀತಿಯಲ್ಲಿ ಉತ್ತರ ದೊರೆಯುವುದು, ಇದನ್ನು ಇಂದಿನ ಕಾರ್ಯಾಚರಣೆಯಿಂದ ಭಾರತೀಯ ಸೈನ್ಯ ಸ್ಪಷ್ಟಪಡಿಸಿದೆ. ಸನಾತನ ರಾಷ್ಟ್ರ ಶಂಖನಾದ ಇದು ಕೇವಲ ಘೋಷಣೆಯಲ್ಲ. ಹಿಂದೂ ಸಮಾಜದ ಮೇಲಿನ ಅನ್ಯಾಯದ ವಿರುದ್ಧ ಹಿಂದೂಗಳ ಒಗ್ಗಟ್ಟಿನ ಘರ್ಜನೆಯಾಗಿದೆ. ಸಂಪೂರ್ಣ ಹಿಂದೂ ಸಮಾಜ ಭಾರತೀಯ ಸೈನ್ಯದ ಜೊತೆಗೆ ಒಗ್ಗಟ್ಟಿನಿಂದ ನಿಂತಿದೆ.

# ಟೆಸ್ಟ್ ಮಾಡಿಸದೇ ನಿಮ್ಮ ಲಿವರ್ ಆರೋಗ್ಯ ಪತ್ತೆಹಚ್ಚಬಹುದಂತೆ



ನಾವು ಹೆಚ್ಚಾಗಿ ನಮ್ಮ ಕಣ್ಣಿಗೆ ಕಾಣುವ ದೇಹದ ಭಾಗಗಳ ಬಗ್ಗೆ ಹೆಚ್ಚಿನ ಕಾಳಜಿ ತೆಗೆದುಕೊಳ್ಳುತ್ತೇವೆ. ಅದೇ ನಮ್ಮ ಕಣ್ಣಿಗೆ ಕಾಣದೇ ಇರುವ ದೇಹದೊಳಗಿನ ಹಲವಾರು ಪ್ರಮುಖ ಅಂಗಗಳಿವೆ. ಅವು ಸರಿಯಾಗಿ ಕಾರ್ಯನಿರ್ವಹಿಸಿದರಷ್ಟೇ ನಾವು ಆರೋಗ್ಯದಿಂದಿರಲು ಸಾಧ್ಯ. ಅಂತಹ ಅಂಗಗಳಲ್ಲಿ ಲಿವರ್ ಕೂಡಾ ಒಂದು. ಇದು ಪ್ರತಿದಿನ ನಮ್ಮ ದೇಹದ ರಕ್ತವನ್ನು ಶುದ್ಧೀಕರಿಸುತ್ತದೆ, ಸರಿಯಾದ ಜೀರ್ಣಕ್ರಿಯೆಯನ್ನು ಕಾಪಾಡಿಕೊಳ್ಳಲು ಸಹಾಯ ಮಾಡುತ್ತದೆ ಮತ್ತು ದೇಹದಿಂದ ವಿಷವನ್ನು ತೆಗೆದುಹಾಕುವ ಕೆಲಸ ಮಾಡುತ್ತದೆ. ಆದರೆ ನಮ್ಮ ಲಿವರ್‌ನಲ್ಲಿ ಏನಾದರೂ ದೊಡ್ಡ ಮಟ್ಟದ ಸಮಸ್ಯೆಯಾಗುವವರೆಗೂ ನಮಗೆ ಗೊತ್ತೇ ಆಗೋದಿಲ್ಲ.

### ಚರ್ಮದ ಮೇಲೆ ತುರಿಕೆ ಅಥವಾ ದದ್ದು

**ಯಕೃತ್ತು ಹಾನಿಗೊಳಗಾದಾಗ, ದೇಹದಲ್ಲಿ ವಿಷಕಾರಿ ಅಂಶಗಳು ಹೆಚ್ಚಾಗುತ್ತವೆ, ಇದು ಚರ್ಮದ ಕಿರಿಕಿರಿ ಅಥವಾ ತುರಿಕೆಯಂತಹ ಸಮಸ್ಯೆಗಳನ್ನು ಉಂಟುಮಾಡಬಹುದು. ಯಕೃತ್ತಿನ ಆರೋಗ್ಯವನ್ನು ನಿರ್ಲಕ್ಷಿಸುವುದು ದುಬಾರಿಯಾಗಬಹುದು. ಮೇಲೆ ತಿಳಿಸಿದ ಚಿಹ್ನೆಗಳು ನಿಮ್ಮ ದೇಹದಲ್ಲಿ ನಿರಂತರವಾಗಿ ಕಾಣಿಸಿಕೊಳ್ಳುತ್ತಿದ್ದರೆ, ಜಾಗರೂಕರಾಗಿರಬೇಕು.**

**ಲಿವರ್ ಹಾನಿಯ ಸಂಕೇತ:** ನಮ್ಮ ಲಿವರ್ ಯಾವ ರೀತಿ ಕಾರ್ಯನಿರ್ವಹಿಸುತ್ತಿದೆ, ಲಿವರ್ ಆರೋಗ್ಯದಿಂದ ಇದೆಯೋ ಇಲ್ಲವೋ ಎನ್ನುವುದನ್ನು ತಿಳಿಯಲು ಪರೀಕ್ಷೆ ಮಾಡಿಸಬೇಕಾಗುತ್ತದೆ. ಆದರೆ ನೀವು ಯಾವುದೇ ಪರೀಕ್ಷೆ ಮಾಡಿಸದೇ ನಿಮ್ಮ ಲಿವರ್‌ನ ಆರೋಗ್ಯವನ್ನು ತಿಳಿಯಲು ಸಾಧ್ಯ. ಯಕೃತ್ತು ಅನಾರೋಗ್ಯದಿಂದಿದ್ದರೆ ಕೆಲವೊಂದು ಸೂಕ್ಷ್ಮ ಲಕ್ಷಣಗಳನ್ನು ಅದು ತೋರಿಸಲಾರಂಭಿಸುತ್ತದೆ. ಆ ಲಕ್ಷಣಗಳತ್ತ ಗಮನಹರಿಸುವುದು ಮುಖ್ಯ.

**ಚರ್ಮ ಮತ್ತು ಕಣ್ಣುಗಳು ಹಳದಿಯಾಗುವುದು:** ಮುಖ ಅಥವಾ ಕಣ್ಣುಗಳ ಬಿಳಿ ಭಾಗ ಸ್ವಲ್ಪ ಹಳದಿ ಬಣ್ಣಕ್ಕೆ ತಿರುಗುವುದು ಕಾಮಾಲೆಯ ಸಂಕೇತವಾಗಿರಬಹುದು, ಇದು ಯಕೃತ್ತು ಹಾನಿಗೊಳಗಾದಾಗ ಸಂಭವಿಸುತ್ತದೆ. ಇದನ್ನು ಹಗುರವಾಗಿ ತೆಗೆದುಕೊಳ್ಳಬೇಡಿ. ನಿಮ್ಮ ಯಕೃತ್ತಿನ ಪರೀಕ್ಷೆ ಮಾಡಿಸಿಕೊಳ್ಳುವುದು ಮುಖ್ಯ.

**ಹೊಟ್ಟೆಯಲ್ಲಿ ಭಾರ ಅಥವಾ ಉಬ್ಬುವುದು:** ನೀವು ಆಗಾಗ್ಗೆ ಹೊಟ್ಟೆಯ ಬಲಭಾಗದಲ್ಲಿ ಭಾರ, ಊತ ಅಥವಾ ಸೌಮ್ಯ ನೋವು ಅನುಭವಿಸುತ್ತಿದ್ದರೆ, ಇವು ಯಕೃತ್ತಿನ ಸಂಕೇತಗಳಾಗಿರಬಹುದು. ತಿಂದ ನಂತರ ನಿಮ್ಮ ಹೊಟ್ಟೆ ಉಬ್ಬಿಕೊಂಡಂತೆ ಅನಿಸಿದರೆ, ವಿಶೇಷವಾಗಿ ಲಿವರ್‌ನತ್ತ ಗಮನ ಕೊಡಿ. ಹೊಟ್ಟೆಯ ಭಾಗದಲ್ಲಿ ಊತ ಲಿವರ್ ಸಮಸ್ಯೆಯ ಲಕ್ಷಣವಾಗಿರಬಹುದು.

**ದಣಿದ ಮತ್ತು ದುರ್ಬಲ ಭಾವನೆ:** ಯಾವುದೇ ಕಾರಣವಿಲ್ಲದೆ ನೀವು ದಣಿದಿದ್ದರೆ ಮತ್ತು ದಿನವಿಡೀ ಆಲಸ್ಯದಿಂದ ಕೂಡಿದ್ದರೆ, ಅದು ಯಕೃತ್ತಿನ ಅಸ್ವಸ್ಥತೆಯ ಸಂಕೇತವೂ ಆಗಿರಬಹುದು. ಯಕೃತ್ತು ವಿಷವನ್ನು ಸರಿಯಾಗಿ ಸಂಸ್ಕರಿಸದಿದ್ದರೆ ದೇಹದಲ್ಲಿ ಕಡಿಮೆ ಶಕ್ತಿ ಉತ್ಪತ್ತಿಯಾಗುತ್ತದೆ. ಹಾಗಾಗಿ ದಣಿದ ಅನುಭವವಾಗುತ್ತದೆ.

**ಹಸಿವು ಕಡಿಮೆಯಾಗುವುದು:** ಯಕೃತ್ತಿನ ಸಮಸ್ಯೆಗಳು ಹಸಿವಿನ ಮೇಲೆ ಪರಿಣಾಮ ಬೀರಬಹುದು. ದಿನೇ ದಿನೇ ನಿಮ್ಮ ಹಸಿವು ಕಡಿಮೆಯಾಗುತ್ತಿದ್ದರೆ ಅಥವಾ ನಿಮಗೆ ಆಹಾರ ತಿನ್ನಲು ಆಸಕ್ತಿ ಇಲ್ಲದಿದ್ದರೆ, ಇದು ಒಂದು ಎಚ್ಚರಿಕೆಯೂ ಆಗಿರಬಹುದು. ಹಾಗಾಗಿ ನಿಮಗೆ ಒಂದೆರಡು ದಿನ ಹಸಿವಾಗದಿದ್ದರೆ ಸರೀ ಆದರೆ ಇದು ಹೀಗೆ ಮುಂದುವರಿದರೆ ಅಪಾಯದ ಸಂಕೇತವಾಗಿದೆ. ಮನೆಯಲ್ಲಿಯೇ ರೋಗಲಕ್ಷಣಗಳನ್ನು ಗುರುತಿಸುವುದು ಆರಂಭಿಕ ಹಂತವಾಗಿದೆ, ಆದರೆ ಸರಿಯಾದ ಚಿಕಿತ್ಸೆಗೆ ನೀವು ಖಂಡಿತವಾಗಿಯೂ ವೈದ್ಯರನ್ನು ಸಂಪರ್ಕಿಸಬೇಕು.

# ಶ್ರೀ ಗೋಪಾಲಕೃಷ್ಣ ಗೋಖಲೆರವರ 159ನೇ ವರ್ಷದ ಜನ್ಮ ಜಯಂತಿ




ಕಲಾ ಸಾಹಿತ್ಯ
ಕೃಷ್ಣಪ್ಪ
ಲೇಖಕರು
ಪ್ರಗತಿ ಪರ ಚಿಂತಕ ,
ವಿಮರ್ಶಕರು

• ಉದಯವಾಹಿನಿ, ವಿಶೇಷ

ಶ್ರೀ ಗೋಪಾಲಕೃಷ್ಣ ಗೋಖಲೆರವರು 1866 ಮೇ 09 ರಂದು ಮಹಾರಾಷ್ಟ್ರದ ರತ್ನಗಿರಿ ಜಿಲ್ಲೆಯ ಕೊಟ್ಲುಕ್ ಎಂಬ ಹಳ್ಳಿಯಲ್ಲಿ ಜನಿಸಿದರು. ಅವರದು ಬಡತನದ ಕುಟುಂಬ.ತಂದೆ ಕೃಷ್ಣರಾವ್ ಸರ್ಕಾರದ ಕಚೇರಿಯೊಂದರಲ್ಲಿ ಕಾರಕೂನರಾಗಿದ್ದರು. ಸ್ವಾಭಿಮಾನ, ಪ್ರಮಾಣಿಕತೆಗಳಿಂದಾಗಿ ಅವರನ್ನು ಎಲ್ಲರೂ ಗೌರವಿಸುತ್ತಿದ್ದರು. ಗೋಖಲೆಯವರ ತಾಯಿ ಸತ್ಯಭಾಮ ಸರಳ ಸ್ವಭಾವದವರಾಗಿದ್ದು ಮಕ್ಕಳಿಗೆ ಧಾರ್ಮಿಕ ಪ್ರವೃತ್ತಿ,ದಯೆ, ಔದಾರ್ಯ ಮೊದಲಾದ ಸದ್ಗುಣಗಳನ್ನು ಬಾಲ್ಯದಿಂದಲೇ ಕಲಿಸಿದರು.

ಗೋಖಲೆಯವರು ತಂದೆತಾಯಿಗಳ ಒಳ್ಳೆಯ ಗುಣಗಳನ್ನು ಚಿಕ್ಕವಯಸ್ಸಿನಿಂದಲೇ ಪಾಲಿಸಿಕೊಂಡು ಅವುಗಳನ್ನು ಮೈಗೂಡಿಸಿಕೊಂಡರು. ಗೋಖಲೆಯವರು ತಮ್ಮ 13 ನೇ ವಯಸ್ಸಿನಲ್ಲಿ ತಂದೆಯನ್ನು ಕಳೆದುಕೊಂಡರು. ಅವರು ತಮ್ಮ ಹಿರಿಯಣ್ಣನ ನೆರವಿನಿಂದ ವಿದ್ಯಾಭ್ಯಾಸ ನಡೆಸಿದರು. ಬೀದಿಯ ದೀಪದ ಬೆಳಕಿನಲ್ಲಿ ವಿದ್ಯಾಭ್ಯಾಸ. ಅಣ್ಣ ನೀಡುತ್ತಿದ್ದ ಅಲ್ಪ ಹಣದಲ್ಲಿ ಬಹುಕಷ್ಟದಿಂದ ವಿದ್ಯಾಭ್ಯಾಸ ನಡೆಸಿದರು. ಯಾವತ್ತೂ ಹೆಚ್ಚಿನ ಹಣಕ್ಕಾಗಿ ಅಣ್ಣನನ್ನು ಕಾಡಲಿಲ್ಲ. ಬದಲಿಗೆ ಅಣ್ಣನ ಸಹಾಯವನ್ನು ಕೃತಜ್ಞತೆಯಿಂದ ಸ್ಮರಿಸುತ್ತಿ ದ್ದರು. **ಗೋಖಲೆಯವರು :** ಎಲ್ಫಿನ್ಸ್ಟನ್ ಕಾಲೇಜಿನಲ್ಲಿ ವ್ಯಾಸಂಗ ಮಾಡಿ ಪದವೀಧರರಾದರು. ಬ್ರಿಟಿಷ್ ಕವಿ ವಿಲಿಯಂ ವರ್ಡ್ಸ್ವರ್ತ್ ಅವರ ಮೊಮ್ಮಗ ಡಾ: ವರ್ಡ್ಸ್ವರ್ತ್ ಅದೇ ಕಾಲೇಜಿನಲ್ಲಿ ಪ್ರಾಧ್ಯಾಪಕ ರಾಗಿದ್ದು ಗೋಖಲೆಯವರು ಇಂಗ್ಲೀಷ್ ಭಾಷೆ ಸಾಹಿತ್ಯಗಳಲ್ಲಿ ಹೆಚ್ಚಿನ ವ್ಯಾಸಂಗ ಮಾಡುವಂತೆ ಪ್ರೋತ್ಸಾಹಿಸಿದರು. ಆಗ ಗೋಖಲೆಯವರಿಗೆ ಇಂಗ್ಲೀಷ್ ಭಾಷೆ ಮೇಲೆ ಅಸಾಧಾರಣ ಪ್ರಭುತ್ವ ಇದ್ದಿತು. ಇದರಿಂದಾಗಿಯೇ ಅವರು ಅನನ್ಯ ಭಾಷಣಕಾರರು ಹಾಗೂ ಸಂಸದರು ಎಂದು ಪ್ರಸಿದ್ಧರಾಗಿದ್ದರು. ಗೋಖಲೆಯವರು ತಮ್ಮ 18 ನೇ ವಯಸ್ಸಿನಲ್ಲಿ ಶಾಲಾ ಉಪಾಧ್ಯಾಯರಾದರು.



ಮುಂದೆ ಆ ಶಿಕ್ಷಣ ಸಂಸ್ಥೆ ಫರ್ಗುಸನ್ ಕಾಲೇಜ್ ಆದಾಗ ಗೋಖಲೆಯವರು ಕಾಲೇಜಿನ ಪ್ರಾಧ್ಯಾಪಕರಾಗಿಯೂ ಮತ್ತು ಪ್ರಾಂಶುಪಾಲರಾಗಿಯೂ ಕೆಲಸ ಮಾಡಿದರು. ಮಹಾದೇವ ಗೋವಿಂದ ರಾನಡೆಯವರ ಪ್ರೇರಣೆಯಿಂದ ಗೋಖಲೆಯವರು ಸಾರ್ವಜನಿಕ ಕ್ಷೇತ್ರವನ್ನು ಪ್ರವೇಶಿಸಿದರು. ಅವರು ಮಹಾರಾಷ್ಟ್ರದ ರಾಜಕೀಯ ಸಂಸ್ಥೆ ಯಾಗಿದ್ದ ಸಾರ್ವಜನಿಕ ಸಭೆಯ ಕಾರ್ಯದರ್ಶಿಗಳಾಗಿ ಕಾಂಗ್ರೆಸ್ ಪಕ್ಷದ ಸದಸ್ಯರಾದರು.

### ಸರ್ವೆಂಟ್ಸ್ ಆಫ್ ಇಂಡಿಯಾ ಸ್ಥಾಪನೆ

**ಗೋಖಲೆಯವರ ಮಹತ್ವದ ಸಾಧನೆಯೆಂದರೆ ಸರ್ವೆಂಟ್ಸ್ ಆಫ್ ಇಂಡಿಯಾ ಸ್ಥಾಪನೆ ಈ ಸಂಸ್ಥೆಯ ಉದ್ದೇಶವೇನೆಂದರೆ, ಸ್ವಾರ್ಥ ಮರೆತು ನಿಸ್ವಾರ್ಥ ದೇಶ ಸೇವಕರ ತಂಡವನ್ನು ನಿರ್ಮಿಸುವುದೇ ಆಗಿತ್ತು. ಗೋಖಲೆ ಅವರ ಮಾರ್ಗ ದರ್ಶನದಲ್ಲಿ ಈ ಸಂಸ್ಥೆಯ ಸದಸ್ಯರುಗಳು ಆದಿವಾಸಿ ಜನರಿಗೆ ಹಲವು ರೀತಿಯಲ್ಲಿ ಸೇವೆ ಸಲ್ಲಿಸಿದರು. ಕ್ಷಾಮ ಮತ್ತು ನೆರೆಹಾವಳಿ ಸಂದರ್ಭಗಳಲ್ಲಿ ಜನತೆಗೆ ಸಹಾಯ ನೀಡಿದರು.**

33ನೇ ವಯಸ್ಸಿನಲ್ಲಿ ಮುಂಬೈ ಪ್ರಾಂತದ ಶಾಸನಸಭೆಯ ಸದಸ್ಯರೂ ಆದರು. ಆನಂತರ ಕೆಲ ಕಾಲದ ಬಳಿಕ ಕೇಂದ್ರ ಶಾಸನ ಸಭೆಗೆ ಆಯ್ಕೆಯಾದರು. ದಕ್ಷಿಣ ಆಫ್ರಿಕೆಯಲ್ಲಿ ವರ್ಣದ್ವೇಷದ ವಿರುದ್ಧ ಗಾಂಧೀಜಿ ನಡೆಸುತ್ತಿದ್ದ ಚಳುವಳಿಗಳನ್ನು ಗೋಖಲೆಯವರು ಬೆಂಬಲಿಸಿದರು. ದೇಶದ ಸಮಸ್ಯೆಗಳ ಬಗ್ಗೆ ಗೋಖಲೆಯವರು ಹೊಂದಿದ್ದ ವಾಸ್ತವ ದೃಷ್ಟಿ ಮತ್ತು ಅವರು ನಡೆಸುತ್ತಿದ್ದ ವಿಧಾಯಕ ಕಾರ್ಯಕ್ರಮಗಳ ಬಗ್ಗೆ ಗಾಂಧೀಜಿ ಅವರಿಗೆ ಅಪಾರ ಗೌರವವಿತ್ತು. ಅವರು ಗೋಖಲೆ ರವರನ್ನು ತಮ್ಮ ರಾಜಕೀಯ ಗುರುವೆಂದು ಭಾವಿಸಿದ್ದರು. ಗೋಖಲೆಯವರು ಭಾರತೀಯರಿಗೆ ಸ್ವಯಂ ಆಡಳಿತ ಕ್ರಮ ನೀಡುವಂತೆ ಬ್ರಿಟಿಷ್ ಸರ್ಕಾರಕ್ಕೆ ಒತ್ತಾಯಿಸಿದರು. ಭಾರತೀಯರಿಗೆ ಕನಿಷ್ಠ ಪ್ರಮಾಣದ ತೆರಿಗೆ ವಿಧಿಸಬೇಕೆಂದು ಸರ್ಕಾರಕ್ಕೆ ಮನವಿ ಮಾಡಿದರು. ಈ ವಿಷಯದ ಬಗ್ಗೆ ಗೋಖಲೆಯವರು ದೇಶದ ನಾನಾ ಕಡೆ ಭಾಷಣ ಮಾಡಿದಾಗ ಬ್ರಿಟಿಷರು ಸಹ ಇವರ ತಾರ್ಕಿಕತೆ, ವಸ್ತುನಿಷ್ಠವಾದ ಮತ್ತು ಭಾಷಾ ಪಾಂಡಿತ್ಯಗಳಿಗೆ ಬೆರಗಾಗುತ್ತಿದ್ದರು. ಗೋಖಲೆಯವರು ಸಭೆ-ಸಮ್ಮೇಳನಗಳಿಗೆ ಭಾಗವಹಿಸಲು ಹಲವು ಬಾರಿ ಇಂಗ್ಲೆಂಡಿಗೆ ಭೇಟಿ ನೀಡಿದರು. ಅಲ್ಲಿ ಅವರು ಭಾರತೀಯರ ಸಮಸ್ಯೆಗಳನ್ನು ಬ್ರಿಟಿಷರಿಗೆ ಮನಮುಟ್ಟುವಂತೆ ವಿವರಿಸಿ ಆದಷ್ಟು ಬೇಗನೆ ಭಾರತಕ್ಕೆ ಸ್ವಾತಂತ್ರ್ಯ ನೀಡಬೇಕೆಂದು ಆಗ್ರಹಿಸಿದರು.ಭಾರತದ ಮಹಾನ್ ಬುದ್ಧಿಜೀವಿ ಎಂದು ಗೋಖಲೆಯವರು ಪ್ರಸಿದ್ಧರಾಗಿದ್ದರು. ಗೋಖಲೆಯವರು ಸಂವಿಧಾನಬದ್ಧ ಹಾಗೂ ಕಾನೂನುಬದ್ಧ ಹಾಗೂ ಅಹಿಂಸಾತ್ಮಕ ಚಳವಳಿಯಲ್ಲಿ ನಂಬಿಕೆ ತಾಳಬೇಕೆಂದು ಸ್ವಾತಂತ್ರ್ಯ ಹೋರಾಟಗಾರರಿಗೆ ತಿಳಿಹೇಳಿದರು.

ಗೋಖಲೆಯವರ ಮತ್ತೊಂದು ಅಮೂಲ್ಯ ಕೊಡುಗೆ ಎಂದರೆ, ರಾಜಕೀಯವನ್ನು ಆಧ್ಯಾತ್ಮೀಕರಣ ಗೊಳಿಸಿದ್ದು,ರಾಜಕೀಯ ಕ್ಷೇತ್ರದಲ್ಲಿ ನೈತಿಕತೆ ಮತ್ತು ಆಧ್ಯಾತ್ಮ ಪ್ರಧಾನವಾಗಿ ಪ್ರವೇಶಿಸಬೇಕೆಂದು ಅವರು ಪ್ರತಿಪಾದಿಸಿದರು. ಗೋಖಲೆಯವರು ಪರಿಶುದ್ಧತೆ, ಪರಿ ಶುಭ್ರತೆ, ನಿಸ್ವಾರ್ಥತೆ, ಪ್ರಾಮಾಣಿಕತೆ, ಸತ್ಯವಾ ದಿತ್ವ,ಮಾನವೀಯತೆ ಹಾಗೂ ಕಾರ್ಯಕ್ಷಮತೆ ಈ ಗುಣಗಳ ಸಾಕಾರ ಸ್ವರೂಪವಾಗಿದ್ದರು. ಲೋಕಮಾನ್ಯ ಬಾಲಗಂಗಾಧರ ತಿಲಕರು ಗೋಪಾಲಕೃಷ್ಣ ಗೋಖಲೆಯವರನ್ನು ಭಾರತದ ವಜ್ರ, ಮಹಾರಾಷ್ಟ್ರೀಯರ ಕಂಠಾಭರಣ ಮತ್ತು ಕಾರ್ಯಕರ್ತರ ಅರಸು ಎಂದು ಬಣ್ಣಿಸಿದ್ದಾರೆ. ಇಂತಹ ಮಹಾನ್ ಚೇತನ ಗೋಪಾಲಕೃಷ್ಣ ಗೋಖಲೆಯವರು 1915 ಫೆಬ್ರವರಿ 19 ರಂದು ಪುಣೆಯಲ್ಲಿ ನಿಧನರಾದರು. ದೇಶಭಕ್ತ ,ಅನನ್ಯ ದೇಶಾಭಿಮಾನ, ರಾಜಕೀಯ ಗುರು ಗೋಪಾಲಕೃಷ್ಣ ಗೋಖಲೆಯವರ 159 ನೇ ವರ್ಷದ ಜನ್ಮದಿನಾಚರಣೆಯ ಸಂಬಂಧ ಭಾರತೀಯರಾದ ನಾವೆಲ್ಲರೂ ಸ್ಮರಿಸಿ ನೆನೆಯುತ್ತಾ, ಅವರ ಆದರ್ಶಗಳನ್ನು ಎಲ್ಲಾ ವರ್ಗದ ಜನರು ಪಾಲಿಸುವ ಸಂಕಲ್ಪ ಮಾಡೋಣ.

# ಇವೆರಡರಲ್ಲಿ ಹೃದಯಕ್ಕೆ ಹೆಚ್ಚು ಅಪಾಯಕಾರಿ ಯಾವುದು?



### ವೈದ್ಯರು ಏನು ಹೇಳುತ್ತಾರೆ

ಕಳೆದ ಕೆಲವು ವರ್ಷಗಳಿಂದ ಹೃದಯ ಕಾಯಿಲೆಗಳಿಂದ ಬಳಲುತ್ತಿರುವ ರೋಗಿಗಳ ಸಂಖ್ಯೆ ವೇಗವಾಗಿ ಹೆಚ್ಚುತ್ತಿದೆ. ಇದಕ್ಕೆ ಪ್ರಮುಖ ಕಾರಣ ನಾವು ಅನುಸರಿಸುತ್ತಿರುವ ಅನಾರೋಗ್ಯಕಾರಿ ಆಹಾರಪದ್ಧತಿ ಹಾಗೂ ಜೀವನಶೈಲಿ ಎಂದು ನೇರವಾಗಿ ಹೇಳಬಹುದು ಇನ್ನೂ ಸ್ವಲ್ಪ ಆಳವಾಗಿ ನೋಡುವುದಾದರೆ, ಧೂಮಪಾನ, ಮದ್ಯಪಾನ ಕೂಡ ಹೃದಯ ಕಾಯಿಲೆಗೆ ಕಾರಣವೆಂದು ಪರಿಗಣಿಸಲಾಗಿದೆ, ಆದರೆ ಇವೆರಡರಲ್ಲಿ ಯಾವುದು ಹೆಚ್ಚು ಹೃದಯಕ್ಕೆ ಹಾನಿಕಾರಕ ನೋಡೋಣ ಬನ್ನಿ


ಸಣ್ಣಪುಟ್ಟ ಆರೋಗ್ಯ ಸಮಸ್ಯೆಗಳು ಬಿಟ್ಟರೆ ಸಾಧಾರಣವಾಗಿ 30ರಿಂದ 35 ವರ್ಷದ ಒಳಗಿನ ಬಹುತೇಕ ಪುರುಷರು ಮತ್ತು ಮಹಿಳೆಯರು ಆರೋಗ್ಯದಿಂದಲೇ ಇರುತ್ತಾರೆ ಆನಂತರದ ಜೀವನ ಹೇಳುವುದಕ್ಕೆ ಆಗುವುದಿಲ್ಲ ಯಾಕೆಂದ್ರೆ, ಈ ಸಮಯದಲ್ಲಿ ಎಲ್ಲಿಲ್ಲದ ಕಾಯಿಲೆಗಳು ಇದ್ದಕ್ಕಿದ್ದಂತೆ ಮನುಷ್ಯನಿಗೆ ಕಾಡಲು ಶುರುವಾಗುತ್ತವೆ. ಕೆಲವೊಂದು ಅನುವಂಶೀಯವಾಗಿ ಬಂದರೆ ಇನ್ನು ಕೆಲವು ನಮ್ಮದೆ ತಪ್ಪಿನಿಂದ ಕಾಣಿಸಿಕೊಳ್ಳುತ್ತದೆ. ಅದರಲ್ಲೂ ವಯಸ್ಸು 30 ದಾಟಿದ ಬಳಿಕ, ದೀರ್ಘಕಾಲದವರೆಗೆ ಕಾಡುವ ಕಾಯಿಲೆಗಳ ಅಪಾಯ ಹೆಚ್ಚಿರುತ್ತದೆ ಎಂದೇ ಹೇಳಬಹುದು ಇವುಗಳಲ್ಲಿ ರಕ್ತದೊತ್ತಡ, ಮಧುಮೇಹ ಮತ್ತು ಹೃದಯದ ತೊಂದರೆ ತುಂಬ ಮಾರಕವಾದ ಮತ್ತು ಜೀವಕ್ಕೆ ಹಾನಿ ಉಂಟು ಮಾಡುವ ಕಾಯಿಲೆಗಳ ರೂಪದಲ್ಲಿರುತ್ತದೆ.



ಈಗಾಗಲೇ ಹೃದಯ ಕಾಯಿಲೆ ಇರುವವರು ದೆಹಲಿಯ ಆರ್‌ಎಂಎಲ್ ಆಸ್ಪತ್ರೆಯ ಹೃದ್ರೋಗ ವಿಭಾಗದ ಮಾಜಿ ಪ್ರಾಧ್ಯಾಪಕ ಡಾ. ತರುಣ್ ಕುಮಾರ್ ಅವರು ಹೇಳುವ ಪ್ರಕಾರ, ಈಗಾಗಲೇ ಹೃದಯ ಕಾಯಿಲೆ ಇರುವ ಜನರಿಗೆ ಸಿಗರೇಟ್ ಅಪಾಯಕಾರಿ ಎಂದು ಹೇಳುತ್ತಾರೆ. ಈ ಸಮಸ್ಯೆ ಇರುವವರು ದಿನಕ್ಕೆ ಒಂದು ಸಿಗರೇಟ್ ಕೂಡ ಸೇದ ಬಾರದು. ಏಕೆಂದರೆ ಇದು ಭವಿಷ್ಯದಲ್ಲಿ ಹೃದಯ ಕಾಯಿಲೆಯ ಅಪಾಯವನ್ನು ಹಲವು ಪಟ್ಟು ಹೆಚ್ಚಿಸುತ್ತದೆ. ಹೃದಯಾಘಾತ ಅಥವಾ ಹೃದಯ ವೈಫಲ್ಯದ ಅಪಾಯಕ್ಕೂ ಕಾರಣವಾಗುತ್ತದೆ ಇನ್ನು ಹೃದಯ ರೋಗಗಳಿಂದ ಬಳಲುತ್ತಿರುವವರು ಮದ್ಯಪಾನದ ಕಡೆಗೆ ಕಣ್ಣೆತ್ತಿಯೂ ಕೂಡ ನೋಡಬಾರದು ಎನ್ನುತ್ತಾರೆ ಡಾ. ತರುಣ್ ಅವರು. ಒಂದು ವೇಳೆ ನೀವು ವಿಶೇಷ ಸಂದರ್ಭದಲ್ಲಿ ಮದ್ಯಪಾನ ಮಾಡಲು ಬಯಸಿದರೆ, ಇದಕ್ಕಾಗಿ ನಿಮ್ಮ ವೈದ್ಯರನ್ನು ಸಂಪರ್ಕಿಸಿ. ಏಕೆಂದರೆ ಮದ್ಯಪಾನವು ಹೃದಯ ರೋಗಿಗಳಿಗೆ ಹಾನಿಕಾರಕವಾಗಿದೆ.

Reference:www.tv9hindi.com ಹಕ್ಕು ನಿರಾಕರಣೆ: ಈ ಲೇಖನವು ಕೇವಲ ಮಾಹಿತಿಗಾಗಿ ಮಾತ್ರ. ಇದು ಯಾವುದೇ ರೀತಿಯಲ್ಲೂ ಯಾವುದೇ ಔಷಧಿ ಅಥವಾ ಚಿಕಿತ್ಸೆಗೆ ಪರ್ಯಾಯವಲ್ಲ. ವಿಜಯಕರ್ನಾಟಕ ಇದರ ಸತ್ಯತೆ, ನಿಖರತೆ ಮತ್ತು ಪರಿಣಾಮದ ಜವಾಬ್ದಾರಿಯನ್ನು ತೆಗೆದುಕೊಳ್ಳುವುದಿಲ್ಲ.

**ಸಿಗರೇಟ್ ಮತ್ತು ಆಲ್ಕೋಹಾಲ್:** ಸಿಗರೇಟ್ ಮತ್ತು ಆಲ್ಕೋಹಾಲ್ ಸೇವನೆಯು ಹೃದಯ ಕಾಯಿಲೆಯ ಅಪಾಯದ ಮೇಲೆ ಹೇಗೆ ಪರಿಣಾಮ ಬೀರುತ್ತದೆ ಎಂಬುದರ ಕುರಿತು ಸಂಶೋಧನೆ ಮಾಡಲಾಗಿತ್ತು ಆದರೆ ಒಬ್ಬ ವ್ಯಕ್ತಿಯು ದಿನಕ್ಕೆ ಮೂರು ಪೆಗ್ ಅಥವಾ ಅದಕ್ಕಿಂತ ಹೆಚ್ಚು ಪ್ರಮಾಣದಲ್ಲಿ ಮದ್ಯಪಾನ ಮಾಡಿ ಹಾಗೂ ಅಷ್ಟೇ ಪ್ರಮಾಣದಲ್ಲಿ ಸಿಗರೇಟ್ ಸೇದಿದರೆ, ಅದು ಹೃದಯಕ್ಕೆ ಹಾನಿಕಾರಕವಾಗಿದೆ.



ಅದರಲ್ಲೂ ಅತಿಯಾಗಿ ಸಿಗರೇಟು ಸೇದುವುದರಿಂದ ಹೃದಯ ಅಪಧಮನಿ ಅಡಚಣೆ ಉಂಟಾಗುವುದು ಮಾತ್ರವಲ್ಲದೆ ಹೃದ್ರೋಗದ ಅಪಾಯ ಕೂಡ ಹೆಚ್ಚಾಗುತ್ತದೆ, ಆದರೆ ಮದ್ಯಪಾನ ಮಾಡುವುದರಿಂದ ಅಧಿಕ ರಕ್ತದೊತ್ತಡದ ಅಪಾಯ ಹೆಚ್ಚಾಗುತ್ತದೆ.

ಆದರೆ ಒಬ್ಬ ವ್ಯಕ್ತಿಯು ಧೂಮಪಾನ ಮಾಡದಿದ್ದರೆ ಮತ್ತು ವಾರಕ್ಕೆ ಒಂದು ಅಥವಾ ಎರಡು ಪೆಗ್ ಮದ್ಯಪಾನ ಮಾಡಿದರೆ, ಅದರಿಂದ ಹೃದಯಕ್ಕೆ ಅಷ್ಟೊಂದು ಗಂಭೀರ ಆರೋಗ್ಯ ಸಮಸ್ಯೆ ಉಂಟಾಗುವುದಿಲ್ಲ ಎಂದು ವರದಿಯಲ್ಲಿ ತಿಳಿಸಲಾಗಿದೆ. ಇನ್ನು ಮದ್ಯಪಾನಕ್ಕಿಂತ ಸಿಗರೇಟ್ ಹೃದಯಕ್ಕೆ ಹೆಚ್ಚು ಹಾನಿಕಾರಕ. ದಿನಕ್ಕೆ 2 ಸಿಗರೇಟ್ ಸೇದಿದರೂ ಹೃದಯ ಕಾಯಿಲೆಯ ಅಪಾಯ ಹೆಚ್ಚಾಗುತ್ತದೆಯಂತೆ

**ಹೃದ್ರೋಗ ತಜ್ಞರು ಹೇಳುವ ಪ್ರಕಾರ :** ಹೃದ್ರೋಗ ತಜ್ಞ ಡಾ. ವಿಕ್ರಮ್ ಕುಮಾರ್ ಅವರ ಪ್ರಕಾರ,ಸಿಗರೇಟಿಗಿಂತ ಮದ್ಯಪಾನವು ಹೃದಯಕ್ಕೆ ಕಡಿಮೆ ಅಪಾಯಕಾರಿಯಾದರೂ, ಒಬ್ಬ ವ್ಯಕ್ತಿಯು ಹೆಚ್ಚು ಮದ್ಯಪಾನ ಮಾಡಲು ಪ್ರಾರಂಭಿಸಬೇಕು ಅಥವಾ ಈಗಾಗಲೇ ಮದ್ಯಪಾನ ಮಾಡದವರು ಕುಡಿಯಲು ಪ್ರಾರಂಭಿಸಬೇಕು ಎಂದು ಅರ್ಥವಲ್ಲ!

ಮದ್ಯಪಾನವು ದೇಹಕ್ಕೆ ಹಾನಿಕಾರಕವೂ ಹೌದು. ಇದರಿಂದ ಕೂಡ ದೇಹದ ಪ್ರಮುಖ ಅಂಗಾಂಗಳು ಹಾನಿ ಉಂಟಾಗುವುದು ಆದರೆ ಹೃದಯ ವಿಚಾರದ ಬಗ್ಗೆ ನೋಡುವುದಾರೆ ಸಿಗರೇಟ್ ಮದ್ಯಕ್ಕಿಂತ ದೇಹಕ್ಕೆ ಹೆಚ್ಚು ಅಪಾಯಕಾರಿಯಂತೆ

**ಸೆಕೆಂಡ್ ಹ್ಯಾಂಡ್ ಹೊಗೆಯು ಕೂಡ ಡೇಂಜರ್:** ದೆಹಲಿಯ ರಾಜೀವ್ ಗಾಂಧಿ ಆಸ್ಪತ್ರೆಯ ಹೃದ್ರೋಗ ವಿಭಾಗದ ಪ್ರಾಧ್ಯಾಪಕ ಡಾ. ಅಜಿತ್ ಜೈನ್ ಅವರು ಹೇಳುವ ಪ್ರಕಾರ, ಧೂಮಪಾನದಿಂದಾಗುವ ಆರೋಗ್ಯ ಸಮಸ್ಯೆಗಳು ನಿಮ್ಮನ್ನು ಆವರಿಸಲು ನೀವು ಸಿಗರೇಟ್ ಸೇದಿಯೇ ಬರಬೇಕೆಂದೇನಿಲ್ಲ ನಿಮ್ಮ ಎದುರಿಗೆ ಇರುವವರು ಸೇದಿ ಬಿಟ್ಟ ಹೊಗೆಯ ಸೇವನೆಯಿಂದಲೂ ನಾನಾ ರೀತಿಯ ಅನಾರೋಗ್ಯಗಳು ಎದುರಾಗುತ್ತವೆ.

ದಾರಿಯಲ್ಲಿ ಹಾದು ಹೋಗುವಾಗ ರಸ್ತೆ ಬದಿಯಲ್ಲಿ ಧೂಮಪಾನ ಮಾಡುವ ವರ ಹೊಗೆ ಗಾಳಿಯ ಮುಖಾಂತರ ನಮ್ಮ ಶ್ವಾಸಕೋಶವನ್ನು ಸೇರಿಕೊಂಡರೂ ಕೂಡ ಹೃದಯಕ್ಕೆ ಸಂಬಂಧಪಟ್ಟ ಸಮಸ್ಯೆಗಳು ಕಾಣಿಸಿಕೊಳ್ಳುವ ಅಪಾಯ ಇರುತ್ತದೆಯಂತೆ

## ಸಮತೆ ಸಾಧ್ಯವಾದಲ್ಲಿ ಪ್ರಪಂಚದಲ್ಲಿ ಶಾಂತಿ ನೆಲೆಸಲು ಸಾಧ್ಯ: ವಿಠ್ಠಲದಾಸ ಪ್ಯಾಗೆ

• ಉದಯವಾಹಿನಿ, ಔರಾದ್

ಬುದ್ಧ ಬಸವ ಅಂಬೇಡ್ಕರ್ ಚಿಂತನೆಗಳು ಭಾರತ ದೇಶಕ್ಕೆ ನಮ್ಮ ಮಾರ್ಗದರ್ಶಿ ತತ್ತ್ವಗಳಾಗಿವೆ ಎಂದು ಬೀದರ್ ವಿಶ್ವವಿದ್ಯಾಲಯದ ಸಿಂಡಿಕೇಟ್ ಸದಸ್ಯ ವಿಠ್ಠಲದಾಸ ಪ್ಯಾಗೆ ಅಭಿಪ್ರಾಯಪಟ್ಟರು.

ಪಟ್ಟಣದ ಅಮರೇಶ್ವರ ಪದವಿ ಮಹಾವಿದ್ಯಾಲಯದಲ್ಲಿ ತಾಲ್ಲೂಕು ಕನ್ನಡ ಸಾಹಿತ್ಯ ಪರಿಷತ್ ಬುದ್ಧ ಬಸವ ಅಂಬೇಡ್ಕರ್ ಜಯಂತಿ ನಿಮಿತ್ತ ಹಮ್ಮಿಕೊಂಡ ಸಮತೆಯ ಮಾರ್ಗದಲ್ಲಿ ವಿಚಾರ ಸಂಕಿರಣ ಉದ್ಘಾಟಿಸಿ ಮಾತನಾಡಿದರು.

ಸಮತೆ ಸಾಧ್ಯವಾದರೆ ಪ್ರಪಂಚದಲ್ಲಿ ಶಾಂತಿ ನೆಲೆಸಲು ಸಾಧ್ಯ ಎಂಬುದನ್ನು ಅರಿಯಬೇಕಿದೆ, ಈ ನಿಟ್ಟಿನಲ್ಲಿ ಬುದ್ಧ ಬಸವ ಅಂಬೇಡ್ಕರ್ ಚಿಂತನೆಗಳು ಪ್ರಸ್ತುತ ಎನಿಸುತ್ತವೆ. ಬುದ್ಧನ ಶಾಂತಿ ಸಂದೇಶ, ಬಸವಣ್ಣನವರ ಸಮಾನತೆ ಕಾಯಕ ಮತ್ತು


ಉದಯವಾಹಿನಿ ಚಿತ್ರ

ದಾಸೋಹ ಹಾಗೂ ಅಂಬೇಡ್ಕರ್ ಅವರ ಸಮ ಸಮಾಜದ ಪರಿಕಲ್ಪನೆ ಹಿಂದೆಂದಿಗಿಂತಲೂ ಇಂದು ಹೆಚ್ಚು ಅವಶ್ಯಕವಾಗಿವೆ.

ಈ ಮೂವರ ವೈಚಾರಿಕ ನಿಲುವುಗಳು ಭ್ರಮೆಯ ಲೋಕದಿಂದ ವಾಸ್ತವ ಲೋಕದ ಕಡೆಗೆ ಕರೆದೊಯ್ಯುತ್ತವೆ, ಹಾಗಾಗಿ ಈ ಮೂವರ ಸಂದೇಶಗಳನ್ನು ಅನುಸರಿಸಿಕೊಂಡು ಬದುಕು ಸಾಗಿಸಿದ್ದಲ್ಲಿ ಪ್ರಬುದ್ಧ ಭಾರತ ನಿರ್ಮಾಣ ಸಾಧ್ಯ ಎಂದರು.

ಕಸಾಪ ತಾಲ್ಲೂಕು ಅಧ್ಯಕ್ಷ ಬಿ.ಎಂ ಅಮರವಾಡಿ ಅವರು ಮಾತನಾಡಿ ಬುದ್ಧ ಬಸವ ಅಂಬೇಡ್ಕರ್ ಅವರ ಚಿಂತನೆಗಳಿಂದ ಬದುಕು ಕಟ್ಟಿಕೊಳ್ಳಬೇಕಿದೆ, ಅವರು ಬೆಳಗಿದ ದೀಪ ಸೀಮಾತೀತ. ಬುದ್ಧ ಬಸವ ಅಂಬೇಡ್ಕರ್ ಚಿಂತನೆಗಳು ಅಳವಡಿಸಿಕೊಳ್ಳದ ಭಾರತ ಊನವಾಗುತ್ತದೆ ಎಂದರು.

ವಿಶೇಷ ಸನ್ಮಾನ ಸ್ವೀಕರಿಸಿದ ಅಡವೆಪ್ಪ ಪಟ್ನೆ ಜಾನಪದ ಗೀತೆಗಳ ಮೂಲಕ ಶರಣರ ವೈಚಾರಿಕ ವಿಚಾರಗಳನ್ನು ಪ್ರಸ್ತುತಪಡಿಸಿದರು.

ಪ್ರಾಚಾರ್ಯ ಡಾ. ಗೌತಮ ಗಾಯಕವಾಡ ಅಧ್ಯಕ್ಷತೆ ವಹಿಸಿ ಮಾತನಾಡಿದರು.

**ತಾಲ್ಲೂಕಿನ ಕೀರ್ತಿ ಹೆಚ್ಚಿಸಿದ ವಿದ್ಯಾರ್ಥಿಗಳಿಗೆ ಸನ್ಮಾನ:** ಎಸ್ಸೆಸ್ಸೆಲ್ಸಿ ವಿಭಾಗದಲ್ಲಿ ಸಾಧನೆಗೈದ ಆದರ್ಶ, ಆದಿತ್ಯ, ನಿವೇದಿತಾ, ಕಾರ್ತಿಕ ಮತ್ತು ಐಶ್ವರ್ಯ, ಹಾಗೂ ದ್ವಿತೀಯ ಪಿಯುಸಿ ವಿಜ್ಞಾನ ವಿಭಾಗದ ಆರತಿ, ಶಿಫಾ, ಶಿವಕರ್ಣಾ, ಕಲಾ ವಿಭಾಗದ ಸುಧಾರಾಣಿ, ಕೀರ್ತನಾ, ವಾಣಿಜ್ಯ ವಿಭಾಗದ ಅಂಬಿಕಾ ಹಾಗೂ ಶ್ವೇತಾ ವಿದ್ಯಾರ್ಥಿಗಳಿಗೆ ಅಭಿನಂದನಾ ಪತ್ರ ನೀಡಿ ಗೌರವಿಸಲಾಯಿತು. ಬಳಿಕ ತಾಲೂಕು ಕಸಾಪ ಪದಾಧಿಕಾರಿಗಳಿಗೆ ಹಾಗೂ ವಿವಿಧ ವಲಯ ಘಟಕಗಳ ಅಧ್ಯಕ್ಷರಿಗೆ ನೇಮಕ ಪತ್ರ ನೀಡಿ ಅಭಿನಂದಿಸಲಾಯಿತು.

## ಆಪರೇಷನ್ ಸಿಂಧೂರ ಚಿಂಚೋಳಿಯಲ್ಲಿ ಪಟಾಕಿ ಸಿಡಿಸಿ ಸಿಹಿ ಹಂಚಿ ವಿಜಯೋತ್ಸವ


ಉದಯವಾಹಿನಿ ಚಿತ್ರ

• ಉದಯವಾಹಿನಿ, ಚಿಂಚೋಳಿ

ಪಹಲ್ಗಾಮ್‌ದಲ್ಲಿ ಭಯೋತ್ಪಾದಕರು ನಡೆಸಿದ ದಾಳಿಯ ಪ್ರತಿಕಾರವಾಗಿ ಭಾರತೀಯ ಸೇನೆಯು ಅಪರೇಷನ್ ಸಿಂಧೂರ ಮೂಲಕ ಪಾಕಿಸ್ತಾನದ ಉಗ್ರರ 09 ನೆಲೆ ಧ್ವಂಸ ಮಾಡಿ ಉಗ್ರರನ್ನು ನಾಶಮಾಡಿ ಪಾಕಿಸ್ತಾನಕ್ಕೆ ತಕ್ಕ ಪಾಠ ಕಲಿಸಿದ ಕಾರಣ ಪಟ್ಟಣದ ಬಸ್ ನಿಲ್ದಾಣದ ಎದುರು ವಕೀಲರ ಸಂಘ ಹಾಗೂ ಸರ್ವಧರ್ಮದವರು ಸೇರಿಕೊಂಡು ಪಟಾಕಿ ಸಿಡಿಸಿ ಸಿಹಿ ಹಂಚಿ ವಿಜಯೋತ್ಸವ ಆಚರಿಸಿದರು.

ಈ ಸಂದರ್ಭದಲ್ಲಿ ಗೋಪಾಲರಾವ ಕಟ್ಟಿಮನಿ,ವಕೀಲರ ಸಂಘದ ಅಧ್ಯಕ್ಷ ಶ್ರೀಮಂತ ಕಟ್ಟಿಮನಿ,ಭೀಮಶೆಟ್ಟಿ ಮುರುಡಾ,ಸಂತೋಷ ಗಡಂತಿ,ಕೆ.ಎಂ ಬಾರಿ, ಅಶೋಕ ಚವ್ಹಾಣ, ಪ್ರೇಮಸಿಂಗ್ ಜಾಧವ, ರಾಜು ಪವ್ಹಾರ, ಚಂದ್ರಶೇಟ್ಟಿ ಜಾಧವ, ನಿಯಾಜ್ ಅಲಿ,ಹಣಮಂತ ಪೂಜಾರಿ,ಜಗದೇವ ಗೌತಮ್,ರಾಜೇಂದ್ರಕುಮಾರ ವರ್ಮಾ, ವಿಜಯಕುಮಾರ ರಾಠೋಡ್, ಗಿರಿರಾಜ ನಾಟಿಕಾರ,ರಾಮರೆಡ್ಡಿ ಪಾಟೀಲ, ಶ್ರೀಕಾಂತ ಪಿತ್ತಲ,ಲೋಕೇಶ ಶೇಳ್ಳಗಿ,ಶಿವಕುಮಾರ ಕೋರಿ, ಅಮರ ಲೊಡ್ಡನೂರ,ಶಶಿ ಕಳಸ್ಕರ,ಶಿವಕುಮಾರ ಪೋಚಾಲಿ,ಆಕಾಶ ಕನಕಪುರ,ಶಶಿಕಾಂತ ಆಡಕಿ,ಅನೇಕರಿದ್ದರು.

## ಉಗ್ರರ ಮೇಲೆ ದಾಳಿ; ಸಂಭ್ರಮಾಚರಣೆ

• ಉದಯವಾಹಿನಿ, ಚಿಟಗುಪ್ಪ

ಪಾಕಿಸ್ತಾನದ ಉಗ್ರರ ಮೇಲೆ ದಾಳಿ ನಡೆಸಿ ಪ್ರತಿಕಾರ ತೀರಿಸಿಕೊಂಡ ಹಿನ್ನಲೆ ಭಾರತ ಸರಕಾರದ ನಿರ್ಧಾರಕ್ಕೆ ಮತ್ತು ಸೈನಿಕರ ದಿಟ್ಟ ಹೋರಾಟಕ್ಕೆ ಮೆಚ್ಚುಗೆ ವ್ಯಕ್ತಪಡಿಸಿ ಚಿಟಗುಪ್ಪ ಪಟ್ಟಣದಲ್ಲಿ ಆರ್ಯ ವೈಶ್ಯ ಯೂತ್ ಕ್ಲಬ್ ವತಿಯಿಂದ ಬುಧವಾರ ವಿಜಯೋತ್ಸವ ಸಂಭ್ರಮದಿಂದ ಆಚರಿಸಲಾಯಿತು. ಪಟ್ಟಣದ ಐತಿಹಾಸಿಕ ನಗರೇಶ್ವರ ದೇವಸ್ಥಾನದ ಆವರಣದಲ್ಲಿ ಬೈಕ್ ರ್ಯಾಲಿಗೆ ಚಾಲನೆ ನೀಡಿ ಪ್ರಮುಖ ಬೀದಿಗಳ ಮಾರ್ಗಗಳ ಮೂಲಕ ಪಟ್ಟಣದ ಬೇಸ್ ವರೆಗೆ ಮೆವಣಿಗೆ ನಡೆಸಿ ಭಾರತ ಮಾತೆಗೆ ಜೈ, ಜೈಕಾರ ಕೂಗಿ ಸಂಭ್ರಮಿಸಿದರು.

## ಹಣ ದ್ವಿಗುಣಗೊಳಿಸುವ ಹೆಸರಲ್ಲಿ ನೆಪದಲ್ಲಿ ಲಕ್ಷಾಂತರ ರೂ. ವಂಚನೆ

• ಉದಯವಾಹಿನಿ, ಸುಳ್ಯ

ಹಣ ದ್ವಿಗುಣಗೊಳಿಸುವ ಹೆಸರಲ್ಲಿ ಸುಳ್ಯದ ಪಿಸಿಯೋಥೆರಪಿಸ್ಟ್ ವೋರ್ವರಿಗೆ ಲಕ್ಷಾಂತರ ರೂ. ವಂಚಿಸಿದ ಬಗ್ಗೆ ಸೆನ್ ಅಪರಾಧ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಸುಳ್ಯದಲ್ಲಿ ವಾಸವಿರುವ 23ರ. ಹರೆಯದ ಯುವಕ, ಉದ್ವಿನಂಗಡಿಯಲ್ಲಿ ಫಿಸಿಯೋಥೆರಪಿಸ್ಟ್ ಆಗಿ ಕೆಲಸ ಮಾಡಿಕೊಂಡಿದ್ದು, ಏ.18ರಂದು ರೀಲ್ಸ್ ನೋಡುತ್ತಿದ್ದ ವೇಳೆ ಗೇಮಿಂಗ್ ವೆಬ್‌ಸೈಟ್‌ನ ಜಾಹೀರಾತು ನೋಡಿ ಹಣ ದ್ವಿಗುಣಗೊಳಿಸುವ ಉದ್ದೇಶದಿಂದ ಲಿಂಕ್ ಒತ್ತಿದ್ದರು. ಅಲ್ಲಿ ಹಣ ಡೆಪಾಸಿಟ್, ವಿತ್ ಡ್ರಾ ಮಾಡಲು ಅವಕಾಶ ನೀಡಲಾಗಿತ್ತು. ಅದರಂತೆ ಸುಳ್ಯದ ಯುವಕ 101 ರೂ.ನಂತೆ 100 ಬಾರಿ ಡೆಪಾಸಿಟ್ ಮಾಡಿದಕ್ಕೆ ಬೋನಸ್ ಹಾಗೂ ಹಾಕಿದ ಹಣ ಸಿಕ್ಕಿತ್ತು. ಅನಂತರ ಡೆಪಾಸಿಟ್ ಮಾಡಿದ ಹಣ ವಿತ್ ಡ್ರಾ ಮಾಡಲು ಆಗದೇ ಇದ್ದಾಗ, ಇನ್ನೂ ಹೆಚ್ಚಿನ ಹಣ ಹಾಕಲು ತಿಳಿಸಿದ್ದ ಹಿನ್ನೆಲೆಯಲ್ಲಿ ಮೇ 5ರವರೆಗೆ ಹಂತ ಹಂತವಾಗಿ 1,98,000 ರೂ. ಹಣ ಹಾಕಿದ್ದು ವಿತ್ ಡ್ರಾ ಮಾಡಲು ಸಾಧ್ಯವಾಗಿಲ್ಲ. ಹಣ ಡೆಪಾಸಿಟ್ ಮಾಡಲು ಹೇಳಿ ನನಗೆ ವಂಚನೆ ಮಾಡಲಾಗಿದೆ. ಎಂದು ಯುವಕ ಸೆನ್ ಠಾಣೆಗೆ ದೂರು ನೀಡಿದ್ದಾನೆ. ಅದರಂತೆ ಪ್ರಕರಣ ದಾಖಲಾಗಿದೆ.

## ನರೇಗಾ ಕಾರ್ಮಿಕರಿಗೆ ಮೂಲಭೂತ ಸೌಕರ್ಯ

• ಉದಯವಾಹಿನಿ, ಕಲಬುರಗಿ

ಜಿಲ್ಲೆಯ ಕಮಲಾಪುರ ತಾಲ್ಲೂಕಿನ ಮರಗುತ್ತಿ ಗ್ರಾಮ ಪಂಚಾಯತಿ ವ್ಯಾಪ್ತಿಯ ಮರಮಂಚಿ ತಾಂಡಾದಲ್ಲಿ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಡಿಯಲ್ಲಿ ನಾಲಾ ಹೂಳೆತ್ತುವ ಕಾಮಗಾರಿಯಲ್ಲಿ ಕಾರ್ಮಿಕರಿಗೆ ಸ್ಥಳದಲ್ಲಿ ಮೂಲಭೂತ ಸೌಕರ್ಯ ಕಲ್ಪಿಸಲಾಯಿತು. ನೆರಳಿನ ವ್ಯವಸ್ಥೆ,ಶುದ್ಧ ಕುಡಿಯುವ ನೀರಿನ ವ್ಯವಸ್ಥೆ, ಒಆರ್ ಎಸ್ ಪಾಕೇಟ್‌ಳನ್ನು ಕೂಲಿ ಕಾರ್ಮಿಕರಿಗೆ ಕೊಡಲಾಯಿತು. ಮಹಿಳೆಯರು,ಹಿರಿಯ ನಾಗರಿಕರಿಗೆ ಕೆಲಸದಲ್ಲಿ ನಿಯಮಾನುಸಾರ ರಿಯಾಯಿತಿ ನಿಡುವುದುರ ಬಗ್ಗೆ ಮಾಹಿತಿ ಮತ್ತು ಒಂದು ದಿನದ ಕೂಲಿ 370.ರೂಪಾಯಿ ಹೆಚ್ಚಳದ ಬಗ್ಗೆ ಮಾಹಿತಿ ಹಾಗೂ ಉದ್ಯೋಗ ಖಾತ್ರಿಯ ಏಕೀಕೃತ ಸಹಾಯವಾಣಿಯ ಬಗ್ಗೆ 8277506000 ಮಾಹಿತಿ ನೀಡಲಾಯಿತು.

● ಕೇಂದ್ರದ ಕೋಸ್ಟ್ ಗಾರ್ಡ್, ಕೋಸ್ಟ್ ಗಾರ್ಡ್ ಪೊಲೀಸ್ ಹಾಗೂ ಇತರ ಪಡೆಗಳನ್ನು ಕಾರ್ಯಾಚರಣೆಗೆ ಸನ್ನದ್ಧಗೊಳ್ಳಲು ಸೂಚನೆ

# ಕರಾವಳಿ ತೀರದಲ್ಲೂ ಹೈ ಅಲರ್ಟ್: ಸಮುದ್ರದಲ್ಲಿ ಗಸ್ತು ಹೆಚ್ಚಳಕ್ಕೆ ನಿರ್ದೇಶನ

• ಉದಯವಾಹಿನಿ, ಮಂಗಳೂರು

ಭಾರತೀಯ ಸೇನೆಯು ಪಾಕಿಸ್ತಾನ ಉಗ್ರ ನೆಲೆಗಳ ಮೇಲೆ ಆಪರೇಷನ್ ಸಿಂದೂರ ನಡೆಸುತ್ತಿದ್ದಂತೆ ದೇಶಾದ್ಯಂತ ಸಂಚಲನ ಮೂಡಿಸಿದೆ. ಕರಾವಳಿ ಭಾಗದಲ್ಲೂ ಹೈ ಅಲರ್ಟ್ ಘೋಷಣೆಯಾಗಿದ್ದು, ಕೇಂದ್ರದ ಕೋಸ್ಟ್‌ಗಾರ್ಡ್, ಕೋಸ್ಟ್‌ಗಾರ್ಡ್ ಪೊಲೀಸ್ ಹಾಗೂ ಇತರ ಪಡೆಗಳನ್ನು ಸನ್ನದ್ಧರಾಗಿರುವಂತೆ ನಿರ್ದೇಶನ ನೀಡಲಾಗಿದೆ.

ಭಾರತವು ಪಾಕಿಸ್ತಾನದಲ್ಲಿರುವ ಉಗ್ರ ನೆಲೆಗಳ ಮೇಲೆ ದಾಳಿ ಮಾಡಿರುವ ಹಿನ್ನೆಲೆಯಲ್ಲಿ ಯಾವುದೇ ಕ್ಷಣದಲ್ಲಿ ಭಾರತದ ಮೇಲೆ ಪಾಕಿಸ್ತಾನ ದಾಳಿ ಮಾಡುವ ಸಾಧ್ಯತೆ ಹಿನ್ನೆಲೆಯಲ್ಲಿ ಹೈ ಅಲರ್ಟ್ ಆಗಿರುವಂತೆ ಸ್ಪಷ್ಟ ನಿರ್ದೇಶನ ಬಂದಿದೆ. ಸಾಮಾನ್ಯವಾಗಿ ಯುದ್ಧ ಸನ್ನಿವೇಶದಲ್ಲಿ ಭೂಮಾರ್ಗ, ವಾಯುಮಾರ್ಗ, ಜಲಮಾರ್ಗ ಮೂಲಕ ದಾಳಿ ಮಾಡುವ ಸಾಧ್ಯತೆಯಿರುವ ಹಿನ್ನೆಲೆಯಲ್ಲಿ ದೇಶದ ಕರಾವಳಿ ಭಾಗದಲ್ಲಿ ವಿಶೇಷ ಕಟ್ಟೆಚ್ಚರ ವಹಿಸಲಾಗಿದೆ.

ಕೋಸ್ಟ್‌ಗಾರ್ಡ್ ಹಿರಿಯ ಅಧಿಕಾರಿಗಳು, ಕೋಸ್ಟಲ್ ಪೊಲೀಸ್ ಹಾಗೂ ಪೊಲೀಸ್ ಇಲಾಖೆ ಮಹಾ ನಿರ್ದೇಶಕರು ವಿಡಿಯೋ ಕಾನ್ಫರೆನ್ಸ್ ಮೂಲಕ ಜಿಲ್ಲಾಮಟ್ಟದ ಮತ್ತು ಕಮಿಷನರೇಟ್ ವ್ಯಾಪ್ತಿಯ ಅಧಿಕಾರಿಗಳಿಗೆ ಕೆಲವೊಂದು ನಿರ್ದೇಶನಗಳನ್ನು ನೀಡಿದ್ದಾರೆ. ಕೇಂದ್ರದ ಕೋಸ್ಟ್‌ಗಾರ್ಡ್ ಕಡಲಿನಲ್ಲಿ 200 ನಾಟಿಕಲ್(ಆಳಸಮುದ್ರ) ದೂರದಲ್ಲಿ ಗಸ್ತು ಹೆಚ್ಚಿಸಿದ್ದು, ಯಾವುದೇ ಅನಾಮಿಕ ಹಡಗು, ಬೋಟ್‌ಗಳ ಸುತ್ತಾಟದ ಮೇಲೆ ನಿಗಾ ಇರಿಸುವಂತೆ ಸೂಚನೆ ನೀಡಲಾಗಿದೆ.

ಕಡಲ ಗಸ್ತು ಹಡಗು ವರಾಹ, ಸಕ್ಷಮ್, ಫಾಸ್ಟ್ ಪ್ಯಾಟ್ರೋಲ್ ವೆಸೆಲ್‌ಗಳಾದ ಅಮಾತ್ಯ, ರಾಜ್ ದೂತ್ ಹಾಗೂ ಸಾವಿತ್ರಿಭಾಯಿ ಫುಲೆ, ಇಂಟರ್ ಸೆಪ್ಟರ್ ಬೋಟ್‌ಗಳು ಯಾವುದೇ ಸನ್ನಿವೇಶಗಳನ್ನು ಎದುರಿಸಲು ಸನ್ನದ್ಧವಾಗಿದೆ.

ಸಮುದ್ರ ಮಾರ್ಗದ ಮೂಲಕ ಅಕ್ರಮ ಪ್ರವೇಶಕ್ಕೆ ತಡೆ ಹಾಗೂ ಮೀನುಗಾರರು, ನಾಗರಿಕರ ರಕ್ಷಣೆಯ ಕ್ಷಿಪ್ರ ಕಾರ್ಯಾಚರಣೆಗಳನ್ನು ಮಾಡಲು ಸಿದ್ಧಗೊಂಡಿದೆ. ಭಾರತದ ಸೀಮಾ ರೇಖೆಯೊಳಗೆ ಯಾವುದೇ ಹಡಗು ಅಕ್ರಮ ಪ್ರವೇಶ ಮಾಡದಂತೆ ಅಥವಾ ಅನಾಮಿಕ ಹಡಗುಗಳು ಸುತ್ತಾಟ ನಡೆಸಿದರೆ ಕ್ಷಿಪ್ರ ಕಾರ್ಯಾಚರಣೆ ನಡೆಸುವಂತೆ ಸೂಚನೆ ನೀಡಲಾಗಿದೆ.

ರಾಜ್ಯದ ಕೋಸ್ಟ್‌ಗಾರ್ಡ್ ಪೊಲೀಸರಿಗೆ 20 ನಾಟಿಕಲ್ ದೂರದಲ್ಲಿ ಬೋಟ್‌ಗಳ ಗಸ್ತು ಹೆಚ್ಚಳ ಮಾಡಬೇಕು, ಅನುಮಾನಾಸ್ಪದ ವ್ಯಕ್ತಿಗಳು ಅಥವಾ ಬೋಟ್‌ಗಳು ಕಂಡು ಬಂದರೆ ತಪಾಸಣೆ ನಡೆಸಬೇಕು ಎಂದು ಸೂಚನೆ ನೀಡಲಾಗಿದೆ.

**ಮಲ್ಪೆಯಲ್ಲಿ ಕರಾವಳಿ ಕಾವಲು ಪೊಲೀಸರಿಂದ ತೀವ್ರ ನಿಗಾ:** ಉಡುಪಿ ಕೇಂದ್ರಿತ ಕರಾವಳಿ ಕಾವಲು ಪೊಲೀಸ್ ಪಡೆಯು ಭಾರತೀಯ ಸೇನೆಯ ಯಶಸ್ವಿ ಆಪರೇಶನ್ ಸಿಂದೂರ ಕಾರ್ಯಾಚರಣೆ ಬಳಿಕ ಕರಾವಳಿ ತೀರದಲ್ಲಿ ಮತ್ತಷ್ಟು ನಿಗಾ, ಕಟ್ಟೆಚ್ಚರ ವಹಿಸಿದೆ. ಮುಂಬಯಿ ತಾಜ್ ಹೋಟೆಲ್‌ಗೆ ದಾಳಿ ನಡೆಸಿದ್ದ ಪಾಕ್ ಉಗ್ರರು ಕಡಲಿನ ಮೂಲಕ ಆಗಮಿಸಿದ್ದ ಹಿನ್ನೆಲೆಯಲ್ಲಿ ಕರಾವಳಿ ಕಾವಲು ಪಡೆ ಬಳಿಕ ರೂಪುಗೊಂಡಿದ್ದು ದೇಶದಲ್ಲಿ ಎಲ್ಲೇ ಉಗ್ರ ದಾಳಿಯಾದರೂ ಕರ್ನಾಟಕ ಕರಾವಳಿಯಲ್ಲೂ ಅಲರ್ಟ್ ಸಹಜವಾಗಿದೆ.

ಕಾರವಾರದಲ್ಲಿ ನೌಕಾ ನೆಲೆಯಿರುವ ಹಿನ್ನೆಲೆಯಲ್ಲಿ(ಕ್ರಿಟಿಕಲ್ ಇನ್‌ಫ್ರಾಸ್ಟ್ರಕ್ಚರ್)ಯುದ್ಧ ಎದುರಿಸುವ ಪೂರ್ವ ಸಿದ್ಧತೆಯ ಅಣಕು ಕಾರ್ಯಾಚರಣೆ ನಡೆದಿದ್ದು, ಉಡುಪಿ, ದಕ್ಷಿಣ ಕನ್ನಡದಲ್ಲಿ ಯಾವುದೇ ಕಾರ್ಯಾಚರಣೆ ಪಟ್ಟಿಯಲ್ಲಿಲ್ಲ.

### ದೇವಸ್ಥಾನ, ಕಟ್ಟಡಗಳಿಗೆ ಭದ್ರತೆ

ಕಮಿಷನರೇಟ್ ಮತ್ತು ಜಿಲ್ಲಾ ಪೊಲೀಸರು ಕೆಲವೊಂದು ಸೂಕ್ಷ್ಮ ಪ್ರದೇಶಗಳ ಮೇಲೆ ನಿಗಾ ಇಡಬೇಕು, ಸರಕಾರಿ ಕಟ್ಟಡಗಳ ಮೇಲೆ, ಕೋಸ್ಟ್ ಗಾರ್ಡ್, ನೇವಿ, ಆರ್ಮಿ, ರಕ್ಷಣಾ ಇಲಾಖೆ ಕಚೇರಿಗಳ ಮೇಲೆ ಕಣ್ಗಾವಲಿರಿಸಬೇಕು ಎಂದು ನಿರ್ದೇಶನ ನೀಡಲಾಗಿದೆ. ಕರಾವಳಿಯ ಕೊಲ್ಲೂರು, ಕಟೀಲು, ಧರ್ಮಸ್ಥಳ, ಮಂಗಳಾದೇವಿ ಸೇರಿದಂತೆ ಪ್ರಮುಖ ದೇವಸ್ಥಾನಗಳಿಗೆ ಭದ್ರತೆ ನಿಯೋಜಿಸಲು ಸೂಚಿಸಲಾಗಿದೆ.


ಉದಯವಾಹಿನಿ ಚಿತ್ರ

### ಎಸ್‌ಒಪಿ ತಯಾರಿಸಲು ಸೂಚನೆ

ಯುದ್ಧ ಸನ್ನಿವೇಶ ನಡೆದರೆ ಅಥವಾ ಪಾಕಿಸ್ತಾನ ದಾಳಿ ನಡೆಸಿದರೆ ಯಾವ ರೀತಿ ಪಡೆಗಳು ಕಾರ್ಯನಿರ್ವಹಿಸಬೇಕು ಎಂಬ ನಿಟ್ಟಿನಲ್ಲಿ ಎಸ್‌ಒಪಿ(ಸ್ಟ್ಯಾಂಡರ್ಸ್ ಆಪರೇಟಿಂಗ್ ಪ್ರೊಸೀಜರ್) ತಯಾರಿಸಲು ಸೂಚನೆ ನೀಡಲಾಗಿದೆ. ಒಂದು ವೇಳೆ ಯುದ್ಧ ಸನ್ನಿವೇಶ ಎದುರಾದರೆ ನಾಗರಿಕರ ರಕ್ಷಣೆ ಮತ್ತು ಸವಾಲುಗಳನ್ನು ಎದುರಿಸುವ ಬಗ್ಗೆ ಸ್ಥಳೀಯವಾಗಿ ಅಣಕು ಪ್ರದರ್ಶನ ನಡೆಸಬೇಕು, ಜನರಲ್ಲಿ ಜಾಗೃತಿ ಮೂಡಿಸಲು ನಿರ್ದೇಶನ ನೀಡಲಾಗಿದೆ.

- ಕೇಂದ್ರದ ಕೋಸ್ಟ್ ಗಾರ್ಡ್, ಕೋಸ್ಟ್ ಗಾರ್ಡ್ ಪೊಲೀಸ್ ಹಾಗೂ ಇತರ ಪಡೆಗಳನ್ನು ಕಾರ್ಯಾಚರಣೆಗೆ ಸನ್ನದ್ಧಗೊಳ್ಳಲು ಸೂಚನೆ ನೀಡಲಾಗಿದೆ.
- ಯುದ್ಧ ಸನ್ನಿವೇಶದಲ್ಲಿ ನಾಗರಿಕರ ರಕ್ಷಣೆಗಾಗಿ ಸ್ಥಳೀಯವಾಗಿ ಅಣಕು ಪ್ರದರ್ಶನ ನಡೆಸಲು ಹಾಗೂ ಜನರಲ್ಲಿ ಜಾಗೃತಿ ಮೂಡಿಸಲು ನಿರ್ದೇಶನ ನೀಡಲಾಗಿದೆ.
- ಕರಾವಳಿಯ ಕೊಲ್ಲೂರು, ಕಟೀಲು, ಧರ್ಮಸ್ಥಳ, ಮಂಗಳಾದೇವಿ ಸೇರಿದಂತೆ ಪ್ರಮುಖ ದೇವಸ್ಥಾನಗಳಿಗೆ ಭದ್ರತೆ ನಿಯೋಜಿಸಲು ಸೂಚಿಸಲಾಗಿದೆ.

**ಕರಾವಳಿ ಭಾಗದಲ್ಲಿ ವಿಶೇಷ ಕಟ್ಟೆಚ್ಚರ**

## ಬಿದಿರು ಸಂಸ್ಕರಣಾ ಘಟಕ ನಿರ್ಮಾಣಕ್ಕೆ ಅಡಿಗಲ್ಲು

• ಉದಯವಾಹಿನಿ, ಚನ್ನಮ್ಮನ ಕಿತ್ತೂರು

ಕಾಗದ, ಏಣಿ, ತೊಟ್ಟಿಲು, ಕೊಳಲು, ಬುಟ್ಟಿ, ಮರ, ಚಾನಿಗೆ, ಕುರ್ಚಿ, ಮೇಜು, ಚಾಪೆ, ಬುಟ್ಟಿ, ಶಾಮಿಯಾನ, ಬೀಸಣಿಗೆ, ಕೃಷಿಯಲ್ಲಿ ಬಳಸುವ ವಿವಿಧ ಉಪಕರಣಗಳು, ಆಟಿಕೆ ಸಾಮಾನುಗಳು ಸೇರಿದಂತೆ ವಿವಿಧ ವಸ್ತುಗಳನ್ನು ತಯಾರಿಸುವಲ್ಲಿ ಬಿದರನ್ನು ಬಳಸುತ್ತಿದ್ದರು. ಎಂದು ಶಾಸಕ ಬಾಬಾಸಾಹೇಬ ಹೇಳಿದರು.

ಪಟ್ಟಣದ ಬೀಡಿ ಕ್ರಾಸ್ ಹತ್ತಿರದ ಅರಣ್ಯ ಇಲಾಖೆ ಆವರಣದಲ್ಲಿ 50 ಲಕ್ಷ ರೂ. ವೆಚ್ಚದಲ್ಲಿ ಬಿದಿರು ಸಂಸ್ಕರಣಾ ಘಟಕ ನಿರ್ಮಾನಕ್ಕೆ ಅಡಿಗಲ್ಲು ಪೂಜೆ ನೇರವೇರಿಸಿ ಮಾತನಾಡಿ ಇಂದಿನ ದಿನಗಳಲ್ಲಿ ಬಿದರಿನ ವಸ್ತುಗಳನ್ನು ಖರೀದಿಸುವ ಜನರೆಲ್ಲ ಪ್ಲಾಸ್ಟಿಕ್‌ನತ್ತ ಮೊರೆಹೋಗಿದ್ದಾರೆ.

ಆದ್ದರಿಂದ ಮೇದಾರ ಸಮೂದಾಯದವರಿಂದ ಬಿದರಿನ ಕುಲ ಕಸುಬು ನಶಿಸಿಹೋಗುತ್ತಿದೆ. ಇದಾಗದಂತೆ ತಮ್ಮ ಪೂರ್ವಜರಿಂದ ಬಂದ ಈ ಕಸಬು


ಉದಯವಾಹಿನಿ ಚಿತ್ರ

ನಶಿಸಿ ಹೋಗದಂತೆ ಸಂರಕ್ಷಿಸಲು ತಾವೆಲ್ಲರೂ ಮುಂದಾಗಬೇಕು. ಇದನ್ನು ಉಳಿಸಲು ಸರಕಾರ ಮಹತ್ವಕಾಂಕ್ಷೆ ಯೋಜನೆ ರೂಪಿಸಿದೆ. ಅಂದಾಜು 50 ಲಕ್ಷ ರೂ.ವೆಚ್ಚದಲ್ಲಿ ಬಿದಿರು ಸಂರಕ್ಷಣಾ ಘಟಕ ಸ್ಥಾಪಿಸಲಾಗುತ್ತಿದೆ. ಆಸಕ್ತರಿಗೆ ಅತ್ಯಾಧುನಿಕ ಯಂತ್ರೋಪಕರಣಗಳ ಮೂಲಕ ತರಬೇತಿ ನೀಡಲಾಗುವುದು. ಎಲ್ಲರು ಈ ಸಂಸ್ಕರಣಾ ಘಟಕದ ಸದುಪಯೋಗ ಪಡೆದುಕೊಂಡು ಒಳ್ಳೆಯ ಬದುಕು ಕಟ್ಟಿಕೊಳ್ಳಿ. ಈ ಕಲೆಯಿಂದ ಐತಿಹಾಸಿಕ ಕಿತ್ತೂರನ್ನು ಎಲ್ಲರು ಕಣ್ತೆರೆದು ನೋಡುವಂತೆ ಆಗುತ್ತದೆ ಎಂದು ಹೇಳಿದರು.

> ಬಿದಿರು ನಿಸರ್ಗಕ್ಕೆ ಬಹಳ ಉಪಯುಕ್ತವಾಗಿದೆ. ಕರ್ನಾಟಕ ಅರಣ್ಯ ಇಲಾಖೆಯಲ್ಲಿ ಬಿದಿರು ಮರಿಚಿಕೆಯಾಗುವುದರಿಂದ ಬಿದರಿನಿಂದ ತಯಾರಿಸುವ ಕಲೆ ಉಳಿಸಿ-ಬೆಳೆಸಲು ಸರ್ಕಾರ ಅನೇಕ ಯೋಜನೆಗಳನ್ನು ಜಾರಿಗೊಳಿಸಿದೆ. ನೈಸರ್ಗಿಕವಾಗಿ ಬಿದಿರಿನಿಂದ ತಯಾರಿಸುವ ವಸ್ತುಗಳಿಗೆ ಮಾರುಕಟ್ಟೆಯಲ್ಲಿ ಬಹಳ ಬೇಡಿಕೆಯಿದೆ. ಆದ್ದರಿಂದ ಮೇದಾರ ಸಮಾಜದವರು ಈ ಕಡೆ ಹೆಚ್ಚಿನ ಗಮನ ಹರಿಸಿ ಈ ಕಲೆ ಕಾಪಾಡಲು ಮುಂದಾಗಿ
>
> -ಶಿವಾನಂದ ಮಗದುಮ

## ಪುಸ್ತಕಗಳು ಸ್ಪರ್ಧಾತ್ಮಕ ಪರೀಕ್ಷೆ ತಯಾರಿಗೆ ನೆರವಾಗಲಿ

• ಉದಯವಾಹಿನಿ ಬೆಳಗಾವಿ

ಜಿಲ್ಲೆಯ ಗ್ರಂಥಾಲಯಗಳಲ್ಲಿ ಇರುವ ಪುಸ್ತಕಗಳು ಸ್ಪರ್ಧಾತ್ಮಕ ಪರೀಕ್ಷೆಗೆ ತಯಾರಿ ನಡೆಸುವವರಿಗೆ ನೆರವಾಗಬೇಕು ಎಂದು ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ರಾಹುಲ್ ಶಿಂಧೆ ಹೇಳಿದರು.

ಗ್ರಾಮ ಪಂಚಾಯಿತಿ ಗ್ರಂಥಪಾಲಕರು ಮತ್ತು ಮೇಲ್ವಿಚಾರಕರ ಸಭೆಯಲ್ಲಿ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಮಾಹಿತಿ ಸಂಗ್ರಹಣೆಗೆ ಸಹಾಯ ಮಾಡುವುದೇ ಗ್ರಂಥಾಲಯಗಳ ಉದ್ದೇಶ. ಗ್ರಂಥಾಲಯಗಳು ತಮ್ಮ ಸೇವೆ ಹಾಗೂ ಕಾರ್ಯಕ್ಷಮತೆ ಹೆಚ್ಚಿಸಿಕೊಳ್ಳುವಂತೆ ಎಲ್ಲರೂ ಕಾರ್ಯ ನಿರ್ವಹಿಸಬೇಕು. ಗ್ರಂಥಾಲಯಗಳು ಮುಖ್ಯವಾಗಿ ಸ್ಪರ್ಧಾತ್ಮಕ ಪರೀಕ್ಷೆಗೆ ಅಗತ್ಯವಿರುವ ಮಾಹಿತಿ ಒದಗಿಸಬೇಕು’ ಎಂದರು. ಜಿಲ್ಲಾ ಪಂಚಾಯಿತಿ ಉಪಕಾರ್ಯದರ್ಶಿ ಬಸವರಾಜ ಹೆಗ್ಗನಾಯಕ, ಗ್ರಾಪಂ ವ್ಯಾಪ್ತಿಗೆ ಬರುವ ಸಾರ್ವಜನಿಕ ಗ್ರಂಥಾಲಯಗಳಲ್ಲಿ


ಉದಯವಾಹಿನಿ ಚಿತ್ರ

ಸೇವೆ ಸಲ್ಲಿಸುವ ಗ್ರಂಥಪಾಲಕರಿಗೆ ವೇತನ ಪಾವತಿಸಲು ಬಯೊಮೆಟ್ರಿಕ್ ವ್ಯವಸ್ಥೆ ಕಡ್ಡಾಯಗೊಳಿಸಲಾಗಿದೆ. ಬಯೋಮೆಟ್ರಿಕ್ ಹಾಜರಾತಿ ಆಧರಿಸಿ, ಅವರಿಗೆ ವೇತನ ಪಾವತಿಸಲಾಗುವುದು’ ಎಂದು ತಿಳಿಸಿದರು.

ತಮ್ಮ ಕರ್ತವ್ಯದ ಅವಧಿಯಲ್ಲಿ ಗ್ರಂಥಾಲಯದಲ್ಲಿ ಗ್ರಂಥಪಾಲಕರು ಕಡ್ಡಾಯವಾಗಿ ಹಾಜರಿರಬೇಕು. ಗ್ರಂಥಾಲಯಕ್ಕೆ ಬರುವ ವಿದ್ಯಾರ್ಥಿಗಳು ಮತ್ತು ಸಾರ್ವಜನಿಕರಿಗೆ ತೊಂದರೆಯಾಗದಂತೆ ನೋಡಿಕೊಳ್ಳಬೇಕು. ಶುಚಿತ್ವ ಕಾಪಾಡಿಕೊಂಡು ಸೂಕ್ತ ರೀತಿಯಲ್ಲಿ ಗ್ರಂಥಾಲಯಗಳ ನಿರ್ವಹಣೆ ಮಾಡಬೇಕು’ ಎಂದು ಸಲಹೆ ನೀಡಿದರು.

## ಜೂನ್ 15ರೊಳಗೆ ಸಿಗಂದೂರು ಸೇತುವೆ ಲೋಕಾರ್ಪಣೆ

• ಉದಯವಾಹಿನಿ, ಸಿಗಂದೂರು

ಬಹುಕಾಲದ ಬೇಡಿಕೆ, ಶರಾವತಿ ಮುಳುಗಡೆ ಪ್ರದೇಶದ ಜನರ ಹಲವು ದಶಕಗಳ ಕನಸು ಈಡೇರುವ ದಿನ ಹತ್ತಿರವಾಗುತ್ತಿದ್ದು ಜೂನ್ 15ರೊಳಗೆ ಸಿಗಂದೂರು ಸೇತುವೆ ಲೋಕಾರ್ಪಣೆಯಾಗಲಿದೆ ಎಂದು ಸಂಸದ ಬಿ.ವೈ. ರಾಘವೇಂದ್ರ ಹೇಳಿದರು.

ಶರಾವತಿ ಹಿನ್ನೀರಿನ ಹೊಳೆಬಾಗಿಲಿನಲ್ಲಿ ನಿರ್ಮಾಣ ಹಂತದಲ್ಲಿರುವ ಸಿಗಂದೂರು ಸೇತುವೆ ಕಾಮಗಾರಿಯನ್ನು ಗುರುವಾರ ಪರಿಶೀಲಿಸಿ ಅವರು ಮಾತನಾಡಿದರು.

ಲೋಕಾರ್ಪಣೆ ಸಂಬಂಧ ಕೇಂದ್ರದ ಅಧಿಕಾರಿಗಳ ತಂಡ ಸ್ಥಳ ಪರಿಶೀಲನೆ ನಡೆಸಿದೆ. ಸೇತುವೆ ಉದ್ಘಾಟನೆಗೆ ಪ್ರಧಾನಿ ನರೇಂದ್ರ ಮೋದಿ ಅವರನ್ನು ಆಹ್ವಾನಿಸುವ ಬಗ್ಗೆ ಕೇಂದ್ರ ಸಾರಿಗೆ ಸಚಿವ ನಿತಿನ್ ಗಡ್ಕರಿ ಜೊತೆ ಚರ್ಚೆ ನಡೆಸಲಾಗಿದೆ ಎಂದರು. ಸಾಗರ-ಮರಕುಟಕ ರಸ್ತೆಯನ್ನು 369-ಇ ರಾಷ್ಟ್ರೀಯ ಹೆದ್ದಾರಿಯಾಗಿ ಮೇಲ್ದರ್ಜೆಗೆ ಏರಿಸಲಾಗಿದೆ.


ಉದಯವಾಹಿನಿ ಚಿತ್ರ

ಸೇತುವೆ ಲೋಕಾರ್ಪಣೆ ಬಳಿಕ ಹೆದ್ದಾರಿ ಕಾಮಗಾರಿ ಆರಂಭವಾಗಲಿದೆ. ಈ ಭಾಗದ ಜನರ ಅನುಕೂಲಕ್ಕಾಗಿ ಬಹುಕೋಟಿ ವೆಚ್ಚದ ಸೇತುವೆಗೆ ಅಂದಿನ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಅವರು ಸಾಕಷ್ಟು ಶ್ರಮಿಸಿದ್ದಾರೆ ಎಂದು ಅವರು ನೆನಪಿಸಿಕೊಂಡರು.

ಹೊರ ಜಗತ್ತಿನ ಸಂಪರ್ಕಕ್ಕೆ ಸಾಕಷ್ಟು ಅನನುಕೂಲ ಹೊಂದಿರುವ ದ್ವೀಪ ಭಾಗದ ಹಳ್ಳಿಗಳ ಸಂಪರ್ಕಕ್ಕೆ ಸೇತುವೆಯ ಅಗತ್ಯ ಮನಗಂಡು 423 ಕೋಟಿ ವೆಚ್ಚದಲ್ಲಿ ನಿರ್ಮಿಸಿರುವ ಸೇತುವೆಯ ಕಾಮಗಾರಿ ಬಹುತೇಕ ಪೂರ್ಣಗೊಂಡಿದೆ.

## ಧರ್ಮ, ಜಾತಿ ಆಧಾರದ ಮೇಲೆ ರಾಜಕೀಯ ಸಲ್ಲದು: ಸುನೀಲಗೌಡ

• ಉದಯವಾಹಿನಿ ವಿಜಯಪುರ

ಧರ್ಮ ಮತ್ತು ಜಾತಿಯ ಆಧಾರದ ಮೇಲೆ ಯಾರೂ ರಾಜಕೀಯ ಮಾಡಬಾರದು. ದೇಶ ಮೊದಲು ಎಂಬ ತತ್ವ ನಮ್ಮದಾಗಬೇಕು ಎಂದು ವಿಧಾನ ಪರಿಷತ್ ಶಾಸಕ ಸುನೀಲಗೌಡ ಪಾಟೀಲ ಹೇಳಿದ್ದಾರೆ. ಬಬಲೇಶ್ವರದಲ್ಲಿ ಮುಸ್ಲಿಂ ಸಮಾಜದ ವತಿಯಿಂದ ಶಾಸಕ ಯತ್ನಾಳ ಅವರು ಪ್ರವಾದಿ ಹಜರತ್ ಮೊಹಮ್ಮದ ಪೈಗಂಬರ್ ವಿರುದ್ಧ ನೀಡಿರುವ ಹೇಳಿಕೆ ಖಂಡಿಸಿ, ಯತ್ನಾಳ ಮತ್ತು ವಕ್ಫ್ ತಿದ್ದುಪಡಿ ಕಾಯಿದೆ ವಿರೋಧಿಸಿ ಬೃಹತ್ ಪ್ರತಿಭಟನೆ ಹಾಗೂ ಫಹಲ್ಗಾಮ ಭಯೋತ್ಪಾದಕರ ದಾಳಿಯಲ್ಲಿ ಹುತಾತ್ಮರಾದ ಭಾರತೀಯ ವೀರರಿಗೆ ಭಾವಪೂರ್ಣ ಶ್ರದ್ಧಾಂಜಲಿ ಅರ್ಪಿಸುವ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು. ಶಾಸಕ ಯತ್ನಾಳ ಅವರು ಪ್ರವಾದಿ ಮೊಹಮ್ಮದ


ಉದಯವಾಹಿನಿ ಚಿತ್ರ

ಪೈಗಂಬರ್ ಕುರಿತು ನೀಡಿರುವ ಹೇಳಿಕೆಯನ್ನು ಖಂಡಿಸುತ್ತೇನೆ. ಅವರ ವಿರುದ್ಧ ಸೂಕ್ತ ಕಾನೂನು ಕ್ರಮ ಕೈಗೊಳ್ಳಬೇಕು. ಯತ್ನಾಳ ತಮ್ಮ ಮಾತಿನ ಮೇಲೆ ನಿಯಂತ್ರಣ ಹೊಂದಬೇಕು. ಇಲ್ಲದಿದ್ದರೆ ಉಗ್ರ ಹೋರಾಟ ನಡೆಸಲಾಗುವುದು ಎಂದು ಅವರು ಹೇಳಿದರು.

**ನಮ್ಮದು ನೀರಿನ ಜಾತಿ**

ಬಬಲೇಶ್ವರ ಮತಕ್ಷೇತ್ರ ಭಾವೈಕ್ಯತೆಗೆ ಹೆಸರಾಗಿದೆ. ಇಲ್ಲಿ ಹಿಂದೂ ಮತ್ತು ಮುಸ್ಲಿಮರು ಸೇರಿಕೊಂಡು ಜಾತ್ರೆ ಮತ್ತು ಉರುಸುಗಳನ್ನು ಆಚರಿಸುತ್ತಾರೆ. ಸಬ್ ಕಾ ಮಾಲಿಕ ಏಕ್ ಹೈ ಎಂಬಂತೆ ಮತಕ್ಷೇತ್ರ ಸರ್ವ ಜನಾಂಗದ ಶಾಂತಿಯ ತೋಟವಾಗಿದೆ. ನಮ್ಮ ಮನೆತನವೂ ಕೂಡ ಸರ್ವರೊಂದಿಗೆ ಉತ್ತಮ ಬಾಂಧವ್ಯ ಹೊಂದಿದ್ದು, ಇಲ್ಲಿ ಸರ್ವ ಸಮಾಜದವರು ಸಹಬಾಳ್ವೆ ನಡೆಸುತ್ತಿದ್ದು, ಎಲ್ಲ ಕಾರ್ಯಕ್ರಮಗಳಲ್ಲಿ ಹಿಂದೂ, ಮುಸ್ಲಿಮರು ಒಗ್ಗಟ್ಟಿನಿಂದ ಪಾಲ್ಗೊಳ್ಳುತ್ತಾರೆ.

ಓಟಿನ ಆಸೆಗಾಗಿ ನಾವು ಎಂದೂ ರಾಜಕಾರಣ ಮಾಡಿಲ್ಲ. ಯಾವುದೇ ಭೇದಭಾವ ಮಾಡಿಲ್ಲ. ನಮ್ಮದು ನೀರಿನ ಜಾತಿ. ಮಾನವೀಯ ಧರ್ಮ ತತ್ವದ ಮೇಲೆ ನಾವು ಸಾಮರಸ್ಯದಿಂದ ಬದುಕು ಸಾಗಿಸುತ್ತಿದ್ದೇವೆ. ನಮ್ಮ ತಂದೆ ದಿ. ಬಿ. ಎಂ. ಪಾಟೀಲ ಅವರ ಕಾಲದಿಂದಲೂ ನಾವು ಎಲ್ಲರೊಂದಿಗೂ ಉತ್ತಮ ಬಾಂಧವ್ಯ ಮತ್ತು ಸಂಬಂಧ ಹೊಂದಿದ್ದೇವೆ ಎಂದು ಹೇಳಿದರು.

## ಪೆಹಲ್ಗಾಮ್ ದಾಳಿಯ ಪ್ರತಿಕಾರ: ತಾಳಿಕೋಟೆಯಲ್ಲಿ ವಿಜಯೋತ್ಸವ

• ಉದಯವಾಹಿನಿ, ತಾಳಿಕೋಟೆ

ಪೇಹಲ್ಗಾಮ ದಾಳಿಯ ಪ್ರತಿಕಾರವಾಗಿ ಭಾರತೀಯ ಸೈನಿಕರು ಪಾಕಿಸ್ಥಾನದಲ್ಲಿಯ ಉಗ್ರರ ಅಡುಗುತಾಣಗಳನ್ನು ದ್ವಂಸ ಗೊಳಿಸುವದರೊಂದಿಗೆ ಯಶಸ್ವಿ ಕಾರ್ಯಚರಣೆ ನಡೆಸಿದ್ದಕ್ಕೆ ತಾಳಿಕೋಟೆಯಲ್ಲಿ ಯುವಕರು ತಿರಂಗಾ ದ್ವಜದೊಂದಿಗೆ ಬೈಕ್ ರ್ಯಾಲಿ ನಡೆಸುವ ಮೂಲಕ ಸಂಭ್ರಮಿಸಿದರಲ್ಲದೇ ಸಿಹಿ ಹಂಚಿ ಸಂತಸ ವ್ಯಕ್ತಪಡಿಸಿದರು. ಈ ಸಮಯದಲ್ಲಿ ಪುರಸಭಾ ಸದಸ್ಯ ಜೈಸಿಂಗ್ ಮೂಲಿಮನಿ ಅವರು ಮಾತನಾಡಿ ಪಾಪಿ ಪಾಕಿಸ್ತಾನದ ಉಗ್ರರು ಪೆಹಲ್ಗಾಮನಲ್ಲಿ 26 ಜನ ಅಮಾಯಕ ಹಿಂದೂ ಹೆಣ್ಣುಮಕ್ಕಳ ಸಿಂಧೂರವನ್ನು ಅಳಿಸಿದ್ದರು ಅದರ ಪ್ರತಿಕಾರವಾಗಿ ನರೇಂದ್ರ ಮೋದಿಜಿ ನೇತೃತ್ವದ ಸರ್ಕಾರ ದಿಟ್ಟ ನಿರ್ಧಾರ ತೆಗೆದುಕೊಂಡು ಭಾರತೀಯ ಸೈನಿಕರ ಮೂಲಕ ಪಾಕ್‌ನಲ್ಲಿ ಅಡಗುತಾಣಗಳನ್ನು ನಿರ್ಮಿಸಿಕೊಂಡಿದ್ದ ಉಗ್ರರ ಹೆಡೆ ಮುರಿಕಟ್ಟುವಂತಹ ಕಾರ್ಯ ಮಾಡಿ ಪಾಕ್‌ಗೆ ಕಠೋರ ಎಚ್ಚರಿಕೆಯನ್ನು ನೀಡಿದ್ದಾರೆ. ಉಗ್ರರನ್ನು


ಉದಯವಾಹಿನಿ ಚಿತ್ರ

ಸುಮಾರು 3 ದಶಕಗಳಿಂದಲೂ ಪೊಷಿಸುತ್ತಾ ಬೆಳೆಸುತ್ತಾ ಸಾಗಿರುವ ಪಾಪಿ ಪಾಕಿಸ್ಥಾನ ಸೇನಾ ಭಲವಿಲ್ಲದಿದ್ದರೂ ಸುತ್ತಲಿನ ರಾಷ್ಟ್ರಗಳಿಗೆ ಕೇವಲ ಹೆದರಿಸುವ ಕಾರ್ಯ ಮಾಡುತ್ತಿತ್ತು ಆದರೆ ಭಾರತದ ತಂಟೆಗೆ ಬಂದರೆ ನಮ್ಮ ಸೈನಿಕರು ಪಾಕಿಸ್ಥಾನ ದೇಶವನ್ನು ಇಡೀ ಭೂಪಟದಿಂದಲೇ ಅಳಸಿ ಹಾಕುವಂತಹ ಮಾಡಲಿದ್ದಾರೆ ಎಂಬ ಸಂದೇಶ ರವಾನಿಸಿದ್ದಾರೆ ಜಮ್ಮು ಕಾಶ್ಮೀರ ಯಾವತಿದ್ದರೂ ಭಾರತ ಮಾತೆಯ ಸಿಂಧೂರವಾಗಿರಲಿದೆ ಅದರ ತಂಟೆಗೆ ಬಂದರೆ ಭಾರತೀಯ ಪ್ರತಿಯೊಬ್ಬ ಪ್ರಜೆ ಸೈನಿಕರಾಗಿ ಹೊರಬರಲಿದ್ದಾರೆ ಎಂದರು.

● ಮೇ 21, 22 ರಂದು ಮುಖ್ಯಮಂತ್ರಿಗಳ ನೇತೃತ್ವದಲ್ಲಿ ಬೆಂಗಳೂರಿನಲ್ಲಿ ರಾಜ್ಯದ ಮಟ್ಟದ ಪ್ರಗತಿ ಪರಿಶೀಲನಾ ಸಭೆ

# ಜಿಲ್ಲೆಯ ಪ್ರಗತಿಯ ಪೂರಕ ಮಾಹಿತಿ ಒದಗಿಸಿ: ಜಿಲ್ಲಾಧಿಕಾರಿ

• ಉದಯವಾಹಿನಿ, ಬಳ್ಳಾರಿ

ಇದೇ ಮೇ 21, 22 ರಂದು ಮುಖ್ಯಮಂತ್ರಿಗಳ ನೇತೃತ್ವದಲ್ಲಿ ಬೆಂಗಳೂರಿನಲ್ಲಿ ರಾಜ್ಯದ ಮಟ್ಟದ ಪ್ರಗತಿ ಪರಿಶೀಲನಾ ಸಭೆ ನಡೆಯಲಿದ್ದು, ಇಲ್ಲಿಯವರೆಗೆ ಜಿಲ್ಲೆಯಲ್ಲಿ ವಿವಿಧ ಇಲಾಖೆಗಳಿಂದನಾನಾ ಯೋಜನೆಗಳಡಿ ಸಾಧಿಸಲಾದವಪ್ರಗತಿಯ ಪೂರಕ ಮಾಹಿತಿಯನ್ನು ಒದಗಿಸಬೇಕು ಎಂದು ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರು ಅಧಿಕಾರಿಗಳಿಗೆ ಸೂಚಿಸಿದರು.


ಮಾನ್ಯ ಮುಖ್ಯಮಂತ್ರಿಗಳು ಇದೇ ಮೇ 21 ಹಾಗೂ 22 ರಂದು ರಾಜ್ಯದ ಎಲ್ಲಾ ಜಿಲ್ಲಾಧಿಕಾರಿಗಳು ಹಾಗೂ ಜಿಪಂ ಮುಖ್ಯ ಕಾರ್ಯನಿರ್ವಾಹಣಾಧಿಕಾರಿಗಳೊಂದಿಗೆ ಸಭೆ ನಡೆಸಲಿದ್ದು, ಈ ಕುರಿತು ಗುರುವಾರ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಏರ್ಪಡಿಸಿದ್ದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ನಗರ ಮತ್ತು ಗ್ರಾಮೀಣ ಪ್ರದೇಶಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಬಾರದಂತೆ ನೋಡಿಕೊಳ್ಳಬೇಕು. ಸರಬರಾಜಾಗುವ ಕುಡಿಯುವ ನೀರಿನ ನಿಯಮಿತ ಪರೀಕ್ಷೆ, ಕ್ಲೋರಿನೇಷನ್ ತಪಾಸಣೆ ಹಾಗೂ ಇತರೆ ಕೈಗೊಳ್ಳುವ ಕಾರ್ಯದ ಕುರಿತು ಸಂಪೂರ್ಣ ಮಾಹಿತಿ ನೀಡಬೇಕು ಎಂದು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು. ಜಿಲ್ಲೆಯಲ್ಲಿ ಬಿತ್ತನೆ ಕ್ಷೇತ್ರ, ರಸಗೊಬ್ಬರ ವಿತರಣೆ ಮತ್ತು ಬಾಕಿ ಇರುವ ದಾಸ್ತಾನು, ಬೆಳೆ ವಿಮೆಗೆ ರೈತರ ನೋಂದಣಿ ಸೇರಿದಂತೆ ಎಲ್ಲಾ ಸಂಪೂರ್ಣ ಮಾಹಿತಿ ಒದಗಿಸಿ ಎಂದು ಕೃಷಿ ಇಲಾಖೆ ಅಧಿಕಾರಿಗಳಿಗೆ ತಿಳಿಸಿದರು.

**ಪ್ರಗತಿ ಪರಿಶೀಲನಾ ಸಭೆ**

ರಾಜ್ಯ ಸರ್ಕಾರದ ಮಹತ್ವಾಕಾಂಕ್ಷಿ ಯೋಜನೆಗಳಾದ ಶಕ್ತಿ, ಅನ್ನಭಾಗ್ಯ, ಗೃಹಲಕ್ಷ್ಮಿ, ಗೃಹಜ್ಯೋತಿ ಮತ್ತು ಯುವನಿಧಿ ಯೋಜನೆಗಳ ಪ್ರಗತಿವಾರು ವರದಿ ಸಲ್ಲಿಸಬೇಕು. ಅರ್ಹ ಸಾರ್ವಜನಿಕರಿಗೆ ಯೋಜನೆಗಳು ತಲುಪಿಸುವಲ್ಲಿ ಆಗುವ ಸಮಸ್ಯೆ ಅಥವಾ ವಿಳಂಬ ಕುರಿತು ಪೂರಕ ಮಾಹಿತಿ ನೀಡಬೇಕು ಎಂದು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಜಿಲ್ಲೆಯಲ್ಲಿ ಬಿ-ಖಾತಾ ವಿತರಣೆಯಲ್ಲಿ ಪ್ರಗತಿ ಹೊಂದಬೇಕು, ಬಿ-ಖಾತಾ ಅಭಿಯಾನ ಹೆಚ್ಚಾಗಿ ಆಯೋಜಿಸಬೇಕು. ತೆರಿಗೆ ಸಂಗ್ರಹಣ ವಿವರ ನೀಡಬೇಕು ಎಂದು ಸಂಬಂಧಿಸಿದ ಅಧಿಕಾರಿಗಳಿಗೆ ತಿಳಿಸಿದರು. ಪ.ಜಾತಿ ಮತ್ತು ಪ.ಪಂಗಡ ದೌರ್ಜನ್ಯ ಪ್ರಕರಣಗಳ ವಿಲೇವಾರಿ ಮಾಹಿತಿ, ಎಸ್ಸಿ ಎಸ್ಪಿ ಮತ್ತು ಟಿಎಸ್ಪಿ ಯೋಜನೆ ಅನುದಾನ ಬಳಕೆ, ಅರಣ್ಯ ಹಕ್ಕು ಕಾಯ್ದೆಯಡಿ ಬಾಕಿಯಿರುವ ಅರ್ಜಿಗಳ ಮಾಹಿತಿ


ಉದಯವಾಹಿನಿ ಚಿತ್ರ

ನೀಡಬೇಕು ಎಂದು ಸಮಾಜ ಕಲ್ಯಾಣ ಇಲಾಖೆಯ ಅಧಿಕಾರಿಗಳಿಗೆ ತಿಳಿಸಿದರು.

ಸರ್ಕಾರಿ ಕಾಲೇಜುಗಳ ಜಮೀನು, ವಸತಿ ನಿಲಯ, ಅಂಗನವಾಡಿ, ಸ್ಮಶಾನ ಭೂಮಿ ಖರೀದಿ ಯಾವುದೇ ಬಾಕಿ ಇದ್ದರೂ ಗಮನಕ್ಕೆ ತರಬೇಕು. ಸಭೆಯಲ್ಲಿ ಜಿಲ್ಲಾ ಉಸ್ತುವಾರಿ ಸಚಿವರು ಭಾಗಿಯಾಗುವುದರಿಂದ ತಮ್ಮ ಇಲಾಖೆಗಳಿಗೆ ಬೇಕಾದ ಪ್ರಸ್ತಾವನೆ, ಬೇಡಿಕೆಗಳಿದ್ದಲ್ಲಿ ಮಾಹಿತಿ ನೀಡಿ ಎಂದರು.

ಎಲ್ಲಾ ಜಿಲ್ಲಾ ಮಟ್ಟದ ಅಧಿಕಾರಿಗಳೊಂದಿಗೆ ಮಾಹಿತಿ ಪಡೆದುಕೊಂಡ ಅವರು, ಜಿಲ್ಲೆಯ ಎಲ್ಲಾ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳು ವಾರದೊಳಗಾಗಿ ಸಂಪೂರ್ಣ ಮಾಹಿತಿಯನ್ನು ಸೂಕ್ತ ನಮೂನೆಯಲ್ಲಿ ತಪ್ಪಿಲ್ಲದಂತೆ ಅಧಿಕಾರಿಗಳೇ ಖುದ್ದಾಗಿ ನಮೂದಿಸಬೇಕು. ಕಡ್ಡಾಯವಾಗಿ ಪ್ರಗತಿ ವರದಿಯನ್ನು ನಿಗದಿತ ಅವಧಿಯೊಳಗೆ ಜಿಲ್ಲಾಧಿಕಾರಿಗಳ ಕಚೇರಿಗೆ ಸಲ್ಲಿಸಬೇಕು ಎಂದರು.

### ಅರ್ಜಿ ವಿಲೇವಾರಿ ಮಾಡಬೇಕು

ಜಿಲ್ಲೆಯಲ್ಲಿ ಈವರೆಗೆ ನಡೆದ ಜನತಾ ದರ್ಶನ ಕಾರ್ಯಕ್ರಮಗಳಲ್ಲಿ ವಿವಿಧ ಇಲಾಖೆಗಳಿಗೆ ಸಂಬಂಧಿಸಿದಂತೆ ಸಾರ್ವಜನಿಕರಿಂದ ಸಲ್ಲಿಕೆಯಾದ ಅಹವಾಲು ವಿಲೇವಾರಿ ಬಗ್ಗೆ ವಿಚಾರಿಸಿದ ಜಿಲ್ಲಾಧಿಕಾರಿಗಳು, ಬಾಕಿಯಿರುವ ಎಲ್ಲಾ ಅರ್ಜಿಗಳನ್ನು ನಿಯಾಮನುಸಾರವಾಗಿ ಇಲಾಖೆಗಳು ವಿಲೇವಾರಿ ಮಾಡಬೇಕು, ಕೇವಲ ಹಿಂಬರಹ ನೀಡುವಂತಹದ್ದಲ್ಲ, ಯಾವುದೇ ಅರ್ಜಿಗಳನ್ನು ತಮ್ಮಲ್ಲಿ ಇಟ್ಟುಕೊಳ್ಳಬಾರದು. ಬಾಕಿಯಿರುವ ಪ್ರಕರಣಗಳನ್ನು ವಿಲೇ ಮಾಡುವ ಕಾರ್ಯವಾಗಬೇಕು. ಈ ಕುರಿತು ಪೂರಕ ಮಾಹಿತಿ ನೀಡಬೇಕು ಎಂದು ಎಲ್ಲಾ ಸಂಬಂಧಿಸಿದ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

### ನಿರ್ವಹಣೆ ಕುರಿತು ಮಾಹಿತಿ

ಮುಖ್ಯಮಂತ್ರಿಗಳ ಕನಸಿನ ಯೋಜನೆಯಾದ ಇಂದಿರಾ ಕ್ಯಾಂಟೀನ್‌ಗಳ ಬಗ್ಗೆ ಹೆಚ್ಚಿನ ಕಾಳಜಿ ತೋರಿಸಲಾಗುತ್ತಿದ್ದು, ಜಿಲ್ಲೆಯಲ್ಲಿ ವಿವಿಧೆಡೆ ಬಾಕಿ ಇರುವ ಇಂದಿರಾ ಕ್ಯಾಂಟೀನ್‌ಗಳ ನಿರ್ಮಾಣ ಕಾಮಗಾರಿಯನ್ನು ಸ್ಥಳೀಯ ಶಾಸಕರ ಸಹಕಾರದಲ್ಲಿ ಪೂರ್ಣಗೊಳಿಸಬೇಕು. ಎಲ್ಲಾ ತಾಲ್ಲೂಕುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಇಂದಿರಾ ಕ್ಯಾಂಟೀನ್‌ಗಳಲ್ಲಿ ಸಿಸಿಟಿವಿ ಅಳವಡಿಕೆ ಮತ್ತು ನಿರ್ವಹಣೆ ಕುರಿತು ಸಂಪೂರ್ಣ ಮಾಹಿತಿ ನೀಡಬೇಕು ಎಂದು ಡಿಯುಡಿಸಿ ಅಧಿಕಾರಿಗಳಿಗೆ ಸೂಚಿಸಿದರು.

> ವಿವಿಧ ನಿಗಮಗಳ ಗಂಗಕಲ್ಯಾಣ ಯೋಜನೆಗಳ ಪ್ರಗತಿ ಬಗ್ಗೆ ಮಾಹಿತಿ ಪಡೆದು ಮಾತನಾಡಿದ ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರು, ಆಯ್ಕೆಗೊಂಡ ಫಲಾನುಭವಿಗಳಿಗೆ ಯಾವುದೇ ಕಾರಣಕ್ಕೂ ವಿಳಂಬ ಆಗದ ರೀತಿಯಲ್ಲಿ ಯೋಜನೆ ತಲುಪಿಸಬೇಕು. ವಿದ್ಯುತ್ ಸರಬರಾಜು ಹಾಗೂ ಇತರೆ ಸಮಸ್ಯೆ ಇದ್ದಲ್ಲಿ ಸಂಬಂಧಪಟ್ಟ ಅಧಿಕಾರಿಗಳ ಸಮನ್ವಯತೆಯಿಂದ ಪರಿಹಾರವಾಗಬೇಕು ಎಂದು ಸೂಚನೆ ನೀಡಿದರು.

ಈ ಸಂದರ್ಭದಲ್ಲಿ ಅಪರ ಜಿಲ್ಲಾಧಿಕಾರಿ ಮಹಮ್ಮದ್ ಝುಬೇರ್, ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕ ಮಲ್ಲಿಕಾರ್ಜುನ, ಕೃಷಿ ಜಂಟಿ ನಿರ್ದೇಶಕ ಸೋಮ್ ಸುಂದರ್, ಜಿಪಂ ಯೋಜನಾಧಿಕಾರಿ ವಿನೋದ್, ಜಿಲ್ಲಾ ನಗರಾಭಿವೃದ್ಧಿ ಕೋಶದ ಯೋಜನಾಧಿಕಾರಿ ರಾಘವೇಂದ್ರ, ಸೇರಿದಂತೆ ಜಿಲ್ಲಾ ಮಟ್ಟದ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.




# ಮೈತ್ರಿಕೂಟ ಬೆಂಬಲ ನಮೋಗೆ ಸರ್ವ ಬಲ

1. ಆಪರೇಷನ್ ಸಿಂಧೂರ್ ನಲ್ಲಿ ಸತ್ತ ಕುಖ್ಯಾತ ಉಗ್ರರು ಯಾರು?
2. ಈ ಪ್ರಶ್ನೆಗೆ ಈ ಕೂಡಲೇ ಉತ್ತರ ನೀಡಲು ಆಗಲ್ಲ ಎಂದ ವಿದೇಶಾಂಗ ಇಲಾಖೆ.
3. ಮೇ 8ರ ಸುದ್ದಿಗೋಷ್ಠಿಯಲ್ಲಿ ಮಾಧ್ಯಮದವರ ಪ್ರಶ್ನೆಗೆ ಉತ್ತರಿಸಿದ ಇಲಾಖೆಯ ಕಾರ್ಯದರ್ಶಿ

• ಉದಯವಾಹಿನಿ, ನವದೆಹಲಿ

ರಾಷ್ಟ್ರೀಯ ಭದ್ರತೆಗೆ ಸಂಬಂಧಿಸಿದ ಇತ್ತೀಚಿನ ಬೆಳವಣಿಗೆಗಳ ಬಗ್ಗೆ ಚರ್ಚಿಸಲು, ಪ್ರಧಾನಮಂತ್ರಿ ಮೋದಿ ಅವರು ಭಾರತ ಸರ್ಕಾರದ ವಿವಿಧ ಸಚಿವಾಲಯಗಳು ಮತ್ತು ಇಲಾಖೆಗಳ ಕಾರ್ಯದರ್ಶಿಗಳೊಂದಿಗೆ ಉನ್ನತ ಮಟ್ಟದ ಸಭೆ ನಡೆಸಿದರು. ಸಭೆಯ ಅಧ್ಯಕ್ಷತೆವಹಿಸಿದ್ದ ಮೋದಿ, ರಾಷ್ಟ್ರೀಯ ಸನ್ನದ್ಧತೆ ಮತ್ತು ಅಂತರ ಸಚಿವಾಲಯ ಸಮನ್ವಯವನ್ನು ಪರಿಶೀಲಿಸಿದರು. ಪಾಕಿಸ್ತಾನ ಮತ್ತು ಪಾಕ್ ಆಕ್ರಮಿತ ಕಾಶ್ಮೀರದಾದ್ಯಂತ ಭಯೋತ್ಪಾದಕ ಮೂಲಸೌಕರ್ಯಗಳ ಮೇಲೆ ಭಾರತ ನಡೆಸಿದ ನಿಖರ ಮಿಲಿಟರಿ ದಾಳಿ, ಆಪರೇಷನ್ ಸಿಂಧೂರ್ ನಡೆಸಿದ ಹಿನ್ನೆಲೆ ಗಡಿಗಳಲ್ಲಿ ಮೂಲಸೌಕರ್ಯ ಜಾಲಗಳಲ್ಲಿ ಹೆಚ್ಚಿನ ಎಚ್ಚರಿಕೆ ವಿಧಿಸಿರುವ ನಿಟ್ಟಿನಲ್ಲಿ ಈ ಸಭೆ ನಡೆಸಲಾಗಿದೆ. ಕಾರ್ಯದರ್ಶಿಗಳು ತಮ್ಮ ಸಚಿವಾಲಯದ ಕಾರ್ಯಾಚರಣೆಗಳ ಸಮಗ್ರ ಪರಿಶೀಲನೆಯನ್ನು ಕೈಗೊಳ್ಳಲು ಮತ್ತು ಅಗತ್ಯ ವ್ಯವಸ್ಥೆಗಳ ಪರಿಪೂರ್ಣ ಕಾರ್ಯನಿರ್ವಹಣೆಯನ್ನು ಖಚಿತಪಡಿಸಿಕೊಳ್ಳಲು, ಸಿದ್ಧತೆ, ತುರ್ತು ಪ್ರತಿಕ್ರಿಯೆ, ಆಂತರಿಕ ಸಂವಹನ ಶಿಷ್ಟಾಚಾರಗಳ ಮೇಲೆ ನಿರ್ದಿಷ್ಟ ಗಮನ ಹರಿಸಲು ಸಭೆಯಲ್ಲಿ ನಿರ್ದೇಶಿಸಲಾಯಿತು. ಪ್ರಸ್ತುತ ಪರಿಸ್ಥಿತಿಯಲ್ಲಿ ಸರ್ಕಾರದ ಕಾರ್ಯದರ್ಶಿಗಳು ಸಂಪೂರ್ಣ ಸರ್ಕಾರಿ ವಿಧಾನದೊಂದಿಗೆ ತಮ್ಮ ಯೋಜನೆಯನ್ನು ವಿವರಿಸಿದ್ದಾರೆ. ಸಂಘರ್ಷಕ್ಕೆ ಸಂಬಂಧಿಸಿದಂತೆ ಎಲ್ಲಾ ಸಚಿವಾಲಯಗಳು ತಮ್ಮ ಕಾರ್ಯಸಾಧ್ಯತೆಗಳನ್ನು ಗುರುತಿಸಿವೆ ಮತ್ತು ಪ್ರಕ್ರಿಯೆಗಳನ್ನು ಬಲಪಡಿಸುತ್ತಿವೆ. ಸಚಿವಾಲಯಗಳು ಎಲ್ಲಾ ರೀತಿಯ ಉದಯೋನ್ಮುಖ ಸಂದರ್ಭಗಳನ್ನು ಎದುರಿಸಲು ಸಿದ್ಧವಾಗಿವೆ. ಈ ಸಭೆಯಲ್ಲಿ ಹಲವಾರು ವಿಷಯಗಳ ಕುರಿತು ಚರ್ಚಿಸಲಾಯಿತು. ಇವುಗಳಲ್ಲಿ ನಾಗರಿಕ ರಕ್ಷಣಾ ಕಾರ್ಯವಿಧಾನಗಳನ್ನು ಬಲಪಡಿಸುವುದು, ತಪ್ಪು ಮಾಹಿತಿ ಮತ್ತು ನಕಲಿ ಸುದ್ದಿಗಳನ್ನು ಎದುರಿಸುವ ಪ್ರಯತ್ನಗಳು ಮತ್ತು ನಿರ್ಣಾಯಕ ಮೂಲಸೌಕರ್ಯಗಳ ಸುರಕ್ಷತೆಯನ್ನು ಕಾಪಾಡಿಕೊಳ್ಳುವ ಬಗ್ಗೆ ಚರ್ಚಿಸಲಾಯ್ತು. ರಾಜ್ಯ ಅಧಿಕಾರಿಗಳು ಮತ್ತು ತಳಮಟ್ಟದ ಸಂಸ್ಥೆಗಳೊಂದಿಗೆ ನಿಕಟ ಸಮನ್ವಯವನ್ನು ಕಾಯ್ದುಕೊಳ್ಳಲು ಸಚಿವಾಲಯಗಳಿಗೆ ಸೂಚಿಸಲಾಯಿತು. ಸಭೆಯಲ್ಲಿ ಸಂಪುಟ ಕಾರ್ಯದರ್ಶಿ, ಪ್ರಧಾನ ಮಂತ್ರಿ ಕಚೇರಿಯ ಹಿರಿಯ ಅಧಿಕಾರಿಗಳು ಮತ್ತು ರಕ್ಷಣಾ, ಗೃಹ ವ್ಯವಹಾರಗಳು, ವಿದೇಶಾಂಗ ವ್ಯವಹಾರಗಳು, ಮಾಹಿತಿ ಮತ್ತು ಪ್ರಸಾರ, ವಿದ್ಯುತ್, ಆರೋಗ್ಯ ಮತ್ತು ದೂರಸಂಪರ್ಕ ಸೇರಿದಂತೆ ಪ್ರಮುಖ ಸಚಿವಾಲಯಗಳ ಕಾರ್ಯದರ್ಶಿಗಳು ಭಾಗಿಯಾಗಿದ್ದರು.

## ಒಳ್ಳೆಯ ಸಂದೇಶ: ಖರ್ಗೆ

ಆಪರೇಷನ್ ಸಿಂಧೂರ' ಕುರಿತು ಕರೆದಿದ್ದ ಸರ್ವ ಪಕ್ಷ ಸಭೆಯಲ್ಲಿ ಸರ್ಕಾರ ಮತ್ತು ಸೇನಾ ಪಡೆಗಳಿಗೆ ವಿರೋಧ ಪಕ್ಷಗಳು ಸಂಪೂರ್ಣ ಬೆಂಬಲ ವ್ಯಕ್ತಪಡಿಸಿವೆ. ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಅವರು 'ಉತ್ತಮ ಸಂದೇಶವೊಂದನ್ನು ರವಾನೆ ಮಾಡಲು ಕೂಡಲೇ ವಿಶೇಷ ಅಧಿವೇಶನ ಕರೆಯುವಂತೆ ಆಗ್ರಹ ಮಾಡಿದ್ದಾರೆ' ಎಂದು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರು ತಿಳಿಸಿದ್ದಾರೆ. ಸರ್ವಪಕ್ಷ ಸಭೆಯ ನಂತರ ಮಾಧ್ಯಮಗಳಿಗೆ ಪ್ರತಿಕ್ರಿಯೆ ನೀಡಿದ ಖರ್ಗೆ ಅವರು, 'ಶೌರ್ಯ ಪ್ರದರ್ಶಿಸಿದ ಯೋಧರಿಗೆ ನಾವು ವಂದಿಸುತ್ತೇವೆ. ಪ್ರಧಾನಿಯವರು ಸಭೆಯಲ್ಲಿ ಭಾಗಿ ಯಾಗಬೇಕಿತ್ತು. ಉಗ್ರವಾದದ ವಿರುದ್ಧ ಕೈಗೊಂಡ ಕ್ರಮಗಳ ಬಗ್ಗೆ ತಿಳಿಸಬೇಕು.

## ರಾಜನಾಥ್ ಸಿಂಗ್ ಮಹತ್ವದ ಸುಳಿವು

25 ನಿಮಿಷದ ಪ್ರತೀಕಾರದ ವೈಮಾನಿಕ ದಾಳಿಯಲ್ಲಿ ಪಾಕಿಸ್ತಾನ ಉಗ್ರರ ನೆಲೆಗಳು ಉಡೀಸ್ ಆಗಿದ್ದು, ಆಪರೇಷನ್ ಸಿಂಧೂರ ಪಾಕಿಸ್ತಾನದ ಭಯೋತ್ಪಾದಕ ಸಂಘಟನೆಗಳ ಬುಡಕ್ಕೆ ಬೆಂಕಿ ಹಚ್ಚಿ ಬಿಸಿ ಮುಟ್ಟಿಸಿದೆ. ಇದರ ಬೆನ್ನಲ್ಲೇ ಪಾಕ್ ಉಗ್ರರ ವಿರುದ್ಧ ಭಾರತ ನಡೆಸಿರೋ ಆಪರೇಷನ್ ಸಿಂಧೂರ ಕಾರ್ಯಾಚರಣೆ ಇನ್ನೂ ಮುಗಿದಿಲ್ಲ. ಪಿಕ್ಚರ್ ಅಭಿ ಬಾಕಿ ಹೇ ಎನ್ನುವ ಮೂಲಕ ರಕ್ಷಣಾ ಸಚಿವ ರಾಜನಾಥ್ ಸಿಂಗ್ ಖಡಕ್ ವಾರ್ನ್ ಮಾಡಿದ್ದಾರೆ. ಭಾರತ ನಡೆಸಿದ ಏರ್‌ಸ್ಟ್ರೈಕ್‌ನಲ್ಲಿ 100 ಮಂದಿ ಉಗ್ರರು ಮಟಾಷ್ ಆಗಿದ್ದಾರೆ ಎಂದು ಸರ್ವಪಕ್ಷ ಸಭೆಯಲ್ಲಿ ಮಾಹಿತಿ ನೀಡಿದ್ದಾರೆ. ರಕ್ಷಣಾ ಸಚಿವರು ವಾರ್ನಿಂಗ್ ಕೊಟ್ಟ ಕೆಲವೇ ಗಂಟೆಗಳಲ್ಲಿ ಭಾರತ ತನ್ನ ತಾಕತ್ತು ತೋರಿಸಿದೆ. ಪಾಕಿಸ್ತಾನದ ಮೇಲೆ ಭಾರತ ಮತ್ತೊಂದು ಡೆಡ್ಲಿ ಅಟ್ಯಾಕ್ ಮಾಡಿದೆ. ಪಾಕ್‌ನ ಕ್ಷಿಪಣಿ ದಾಳಿ ಯತ್ನಕ್ಕೆ ಭಾರತ ಪ್ರತ್ಯುತ್ತರ ನೀಡಿದೆ.

## ಭಾರತ ಪಾಕಿಸ್ತಾನದ ನಡುವೆ ನಿಲ್ಲದ ದಾಳಿ

ಭಾರತೀಯ ಸೇನೆಯಿಂದ ಪಾಕಿಸ್ತಾನದ ಲಾಹೋರ್, ಕರಾಚಿ, ಸಿಯೋಲ್ ಕೋಟ್ ಮೇಲೆ ದಾಳಿ ನಡೆಸಲಾಗಿದೆ. ಭಾರತದ ಮೇಲೆ ಪಾಕ್ ದಾಳಿಯನ್ನು ವಿಫಲಗೊಳಿಸಿದ ಬಳಿಕ ಭಾರತೀಯ ಸೇನೆಯಿಂದ ದಾಳಿ ನಡೆಸಲಾಗಿದೆ. ಪಾಕಿಸ್ತಾನ ಭಾರತದ ಚಂಡೀಗಢ, ಆವಂತಿಪೊರ, ಜಲಂಧರ್, ಲೂಧಿಯಾನ, ಅಮೃತಸರ, ಪಠಾಣಕೋಟ್, ಕಪೂರ್ತಲಾ, ನಲ, ಫಲೋಡಿ, ಉತ್ತರಲೈ, ಭುಜ್, ಜಮ್ಮು, ಶ್ರೀನಗರ, ಆಧಂಪುರ, ಭಟಿಂಡಾ ಮೇಲೆ ದಾಳಿಗೆ ಯತ್ನಿಸಿತ್ತು. ನಿನ್ನೆ ರಾತ್ರಿ ಭಾರತದ 15 ನಗರಗಳ ಮೇಲೆ ಪಾಕಿಸ್ತಾನ ದಾಳಿಗೆ ಮುಂದಾಗಿತ್ತು. ಪಾಕಿಸ್ತಾನ ಸೇನೆ ದಾಳಿಯನ್ನು ವಿಫಲಗೊಳಿಸಿರುವ ಭಾರತೀಯ ಸೇನೆ -400 ಏರ್‌ಡಿಫೆನ್ಸ್ ಸಿಸ್ಟಮ್ ಮೂಲಕ ಪಾಕ್ ಕ್ಷಿಪಣಿಗಳನ್ನು ಧ್ವಂಸ ಮಾಡಿದೆ. ಪಾಕಿಸ್ತಾನದ ಕ್ಷಿಪಣಿಗಳ ಅವಶೇಷಗಳನ್ನು ಭಾರತೀಯ ಸೇನೆ ವಶಕ್ಕೆ ಪಡೆದಿದೆ. ಆಪರೇಷನ್ ಸಿಂಧೂರ್ ಅಡಿಯಲ್ಲಿ ಲಾಹೋರ್‌ನಲ್ಲಿ ಪಾಕಿಸ್ತಾನದ ಊಕಿ-9 ವಾಯು ರಕ್ಷಣಾ ವ್ಯವಸ್ಥೆಯನ್ನು ಭಾರತ ನಾಶಪಡಿಸಿದೆ. ಪಾಕಿಸ್ತಾನದ ವಾಯು ರಕ್ಷಣಾ ಮೂಲಸೌಕರ್ಯದ ಮೇಲೆ ಭಾರತ ನಡೆಸಿದ ದಾಳಿಯಲ್ಲಿ ಒಬ್ಬ ಅಧಿಕಾರಿ ಮತ್ತು ಮೂವರು ಸೈನಿಕರು ಸಾವನ್ನಪ್ಪಿದ್ದಾರೆ ಎಂದು ಪಾಕಿಸ್ತಾನ ಸೇನೆಯ ನಿವೃತ್ತ ಯೋಧ ಆದಿಲ್ ರಾಜಾ ಹೇಳಿದ್ದಾರೆ.

## ಪಾಕ್ ಸಂಸತ್‌ನಲ್ಲಿ ಕಣ್ಣೀರಿಟ್ಟ ಸಂಸದರು

ಭಾರತದ ಆಪರೇಷನ್ ಸಿಂಧೂರ್ ನಂತರ ಪಾಕಿಸ್ತಾನದಲ್ಲಿ ಭಯದ ವಾತಾವರಣ ನಿರ್ಮಾಣವಾಗಿದೆ. ಇದಕ್ಕೆ ಸ್ಪಷ್ಟ ಉದಾಹರಣೆಯಾಗಿ ಪಾಕಿಸ್ತಾನದ ಸಂಸತ್ತಿನಲ್ಲಿಯೂ ಭಾರತದ ದಾಳಿಯ ಭೀತಿ ಪ್ರತಿಧ್ವನಿಸಿದೆ.ಸಂಸತ್ತಿನಲ್ಲಿ ಚರ್ಚೆಯ ಸಮಯದಲ್ಲಿ ಮಾತನಾಡುತ್ತಿದ್ದ ಪಾಕಿಸ್ತಾನಿ ಸಂಸದ ತಾಹಿರ್ ಇಕ್ಬಾಲ್ ಭಾರತೀಯ ದಾಳಿಯನ್ನು ಉಲ್ಲೇಖಿಸಿ ಕಣ್ಣೀರಿಡಲು ಪ್ರಾರಂಭಿಸಿದ್ದು ಈಗ ಎಲ್ಲೆಡೆ ಸುದ್ದಿಯಾಗುತ್ತಿದೆ.ಭಾರತದ ದಾಳಿಯಿಂದ ಪಾಕಿಸ್ತಾನವನ್ನು ರಕ್ಷಿಸುವಂತೆ ಸಂಸತ್ ನಲ್ಲಿ ಮನವಿ ಮಾಡುತ್ತಿದ್ದ ಇಕ್ಬಾಲ್, ಓ ದೇವರೇ, ಇವತ್ತು ನನ್ನನ್ನು ಕಾಪಾಡು ಅಲ್ಲಾಹನು ನಮ್ಮ ದೇಶವನ್ನು ರಕ್ಷಿಸಲಿ ಮತ್ತು ನಮ್ಮನ್ನು ಒಗ್ಗಟ್ಟಿನಿಂದ ಇಡಲಿ ಎಂದು ನಾವು ಪ್ರಾರ್ಥಿಸುತ್ತೇವೆ ಎಂದು ಗದ್ಗದಿತರಾಗಿ ಮಾತನಾಡಿರುವ ವಿಡಿಯೋ ಎಲ್ಲೆಡೆ ವೈರಲ್ ಆಗತೊಡಗಿದೆ. ಮತ್ತೊಬ್ಬ ಮಹಿಳಾ ಸಂಸದೆಯೂ ಭಾರತದ ದಾಳಿ ಬಗ್ಗೆ ಆತಂಕ ವ್ಯಕ್ತಪಡಿಸಿದ್ದು, ಜನರನ್ನು ರಕ್ಷಿಸುವಂತೆ ಮನವಿ ಮಾಡಿದ್ದಾರೆ.

# ಮಿನಿ ನ್ಯೂಸ್

## 25 ಭಾರತೀಯ ಡ್ರೋನ್‌ಗಳನ್ನು ಹೊಡೆದುರುಳಿಸಿದ್ದೇವೆ: ಪಾಕ್ ಸೇನೆ


**ಲಾಹೋರ್:** ಭಾರತ ಹಾಗೂ ಪಾಕಿಸ್ತಾನ ನಡುವೆ ಯುದ್ಧದ ಪರಿಸ್ಥಿತಿ ಉಲ್ಬಣಗೊಂಡಿರುವಂತೆಯೇ ಭಾರತದ ಡ್ರೋನ್ ದಾಳಿಯಲ್ಲಿ ತನ್ನ ನಾಲ್ವರು ಸೈನಿಕರು ಗಾಯಗೊಂಡಿರುವುದಾಗಿ ಪಾಕಿಸ್ತಾನ ಸೇನೆ ಗುರುವಾರ ಹೇಳಿದೆ. 25 ಭಾರತೀಯ ಡ್ರೋನ್‌ಗಳನ್ನು ಹೊಡೆದುರುಳಿಸಿದ್ದೇವೆ ಎಂದು ಪಾಕ್ ಸೇನೆ ಹೇಳಿಕೆಯಲ್ಲಿ ತಿಳಿಸಿದೆ. ಕಳೆದ ರಾತ್ರಿ ಉತ್ತರ ಮತ್ತು ಪಶ್ಚಿಮ ಭಾರತದಲ್ಲಿ ಹಲವು ಕಡೆ ದಾಳಿ ನಡೆಸುವ ಪಾಕ್ ಸೇನೆಯ ಪ್ರಯತ್ನಗಳನ್ನು ಭಾರತೀಯ ಸಶಸ್ತ್ರ ಪಡೆಗಳು ವಿಫಲಗೊಳಿಸಿದ್ದು, ಲಾಹೋರ್‌ನಲ್ಲಿ ಪಾಕಿಸ್ತಾನದ ವಾಯು ರಕ್ಷಣಾ ವ್ಯವಸ್ಥೆಯನ್ನು ನಾಶಪಡಿಸಲಾಗಿದೆ ಎಂದು ನವದೆಹಲಿಯಲ್ಲಿ ಭಾರತೀಯ ಮಿಲಿಟರಿ ಅಧಿಕಾರಿಗಳು ಹೇಳಿದ್ದಾರೆ.

ಅತ್ತ ಇಸ್ಲಾಮಾಬಾದ್‌ನಲ್ಲಿ ಮಾತನಾಡಿದ ಪಾಕಿಸ್ತಾನ ಸೇನೆಯ ವಕ್ತಾರ ಲೆಫ್ಟಿನೆಂಟ್ ಜನರಲ್ ಅಹ್ಮದ್ ಷರೀಫ್ ಚೌಧರಿ, ಲಾಹೋರ್ ಬಳಿ ಒಂದು ಡ್ರೋನ್ ಪತನಗೊಂಡಿದ್ದು, ದಾಳಿಯ ಪರಿಣಾಮವಾಗಿ ನಾಲ್ವರು ಸೈನಿಕರು ಗಾಯಗೊಂಡಿದ್ದಾರೆ. ಲಾಹೋರ್, ಗುಜ್ರಾನ್‌ವಾಲಾ, ಚಕ್ವಾಲ್, ಬಹವಾಲ್‌ಪುರ್, ಮಿಯಾನೋ, ಕರಾಚಿ, ರಾವಲ್ಪಿಂಡಿ, ಚೋರ್, ಅತ್ವಾಲಾಕ್‌ಪಿಂಡಿ, ಚೋರ್, ಅತ್ವಾಲಾಕ್‌ನಲ್ಲಿ ಡ್ರೋನ್‌ಗಳನ್ನು ಹೊಡೆದುರುಳಿಸಲಾಗಿದೆ ಎಂದು ಹೇಳಿದ್ದಾರೆ.

ಇಲ್ಲಿಯವರೆಗೆ 25 ಇಸ್ರೇಲಿ ನಿರ್ಮಿತ ಹೀರೋಪ್ ಡ್ರೋನ್‌ಗಳನ್ನು ಪಾಕಿಸ್ತಾನಿ ಸೇನೆಯ ಸಾಫ್ಟ್ ಕಿಲ್ (ತಾಂತ್ರಿಕ), ಹಾರ್ಡ್ ಕಿಲ್ ಆಯುಧಗಳಿಂದ ಹೊಡೆದುರುಳಿಸಲಾಗಿದೆ ಎಂದು ಪಾಕಿಸ್ತಾನ ಸೇನೆ ಹೇಳಿಕೆಯಲ್ಲಿ ತಿಳಿಸಿದೆ.

## ಭಾರತೀಯ ಸೇನೆಗೆ ಅಭಿನಂದಿಸಿದ ರಾಜನಾಥ್ ಸಿಂಗ್

**ನವದೆಹಲಿ:** ಊಹಿಸಲಾಗದ ನಿಖರತೆಯೊಂದಿಗೆ ಆಪರೇಷನ್ ಸಿಂಧೂರ್ ಅನ್ನು ಕಾರ್ಯಗತಗೊಳಿಸಿದ ಸಶಸ್ತ್ರ ಪಡೆಗಳ ಧೈರ್ಯ ಶೌರ್ಯವನ್ನು ರಕ್ಷಣಾ ಸಚಿವ ರಾಜನಾಥ್ ಸಿಂಗ್ ಗುರುವಾರ ಶ್ಲಾಘಿಸಿದ್ದಾರೆ. ಗುರುವಾರ ರಾಷ್ಟ್ರೀಯ ಗುಣಮಟ್ಟ ಸಮಾವೇಶದಲ್ಲಿ ಮಾತನಾಡಿದ ರಾಜನಾಥ್ ಸಿಂಗ್, ನಿನ್ನೆ ತೆಗೆದುಕೊಂಡ ಕ್ರಮ ಮತ್ತು ಅವರು ತೋರಿದ ಧೈರ್ಯ ಹಾಗೂ ಶೌರ್ಯಕ್ಕಾಗಿ ನಾನು ಸಶಸ್ತ್ರ ಪಡೆಗಳನ್ನು ಅಭಿನಂದಿಸುತ್ತೇನೆ. ಪಾಕಿಸ್ತಾನ, ಪಿಒಕೆಯಲ್ಲಿನ ಭಯೋತ್ಪಾದಕ ಶಿಬಿರಗಳನ್ನು ತಟಸ್ಥಗೊಳಿಸಲಾಗಿದೆ, ಇದು ನಮಗೆ ಹೆಮ್ಮೆಯ ವಿಷಯ ಎಂದು ಹೇಳಿದರು. ಆಪರೇಷನ್ ಸಿಂಧೂರ್ ಕಾರ್ಯಾಚರಣೆಯನ್ನು ನಿರ್ವಹಿಸಿದ ನಿಖರತೆಯು ಊಹಿಸಲಾಗದು ಎಂದು ರಕ್ಷಣಾ ಸಚಿವರು ತಿಳಿಸಿದರು. ಆಪರೇಷನ್ ಸಿಂಧೂರ್ ನಿರ್ವಹಿಸಿದ ನಿಖರತೆಯು ಊಹಿಸಲಾಗದು, ಇದು ಅತ್ಯಂತ ಪ್ರಶಂಸನೀಯ. ಇದರಲ್ಲಿ ಒಂಬತ್ತು ಭಯೋತ್ಪಾದಕ ಶಿಬಿರಗಳನ್ನು ನಾಶಪಡಿಸಲಾಯಿತು ಮತ್ತು ಹೆಚ್ಚಿನ ಸಂಖ್ಯೆಯ ಭಯೋತ್ಪಾದಕರು ಹತ್ಯೆ ಮಾಡಲಾಯಿತು. ಈ ವೇಳೆ ಯಾವುದೇ ಅಮಾಯಕರಿಗೆ ಹಾನಿಯಾಗದಂತೆ ಈ ಕಾರ್ಯಾಚರಣೆಯನ್ನು ನಡೆಸಲಾಯಿತು... ಎಂದು ರಕ್ಷಣಾ ಸಚಿವರು ಹೇಳಿದರು.



## ಭಾರತ, ಪಾಕ್ ಸಂಯಮ ಕಾಯ್ದುಕೊಳ್ಳಬೇಕು: ಮೆಹಬೂಬಾ ಮುಫ್ತಿ


**ಶ್ರೀನಗರ:** ಭಾರತ ಮತ್ತು ಪಾಕಿಸ್ತಾನ ಎರಡೂ ದೇಶಗಳ ಸಂಯಮದಿಂದ ವರ್ತಿಸಬೇಕು ಮತ್ತು ಯುದ್ಧವನ್ನು ಕೊನೆಗೊಳಿಸಲು ಮಾತುಕತೆ ನಡೆಸಬೇಕು ಎಂದು ಪೀಪಲ್ಸ್ ಡೆಮಾಕ್ರಟಿಕ್ ಪಾರ್ಟಿ ಮುಖ್ಯಸ್ಥೆ ಮೆಹಬೂಬಾ ಮುಫ್ತಿ ಗುರುವಾರ ಪ್ರಧಾನಿ ನರೇಂದ್ರ ಮೋದಿಯವರಿಗೆ ಮನವಿ ಮಾಡಿದ್ದಾರೆ. ಏ. 22 ರಂದು ಪಹಲ್ಗಾಮ್‌ನಲ್ಲಿ ನಡೆದ ಉಗ್ರ ದಾಳಿಯು ಭಾರತ-ಪಾಕಿಸ್ತಾನ ಸಂಬಂಧಗಳನ್ನು ಮತ್ತಷ್ಟು ಅಪಾಯಕಾರಿ ಹಂತಕ್ಕೆ ತಳ್ಳಿದೆ ಎಂದು ಜಮ್ಮು, ಕಾಶ್ಮೀರ ಮಾಜಿ ಸಿಎಂ ಮುಫ್ತಿ ಮೈಕ್ರೋಬ್ಲಾಗಿಂಗ್ ಪ್ಲಾಟ್‌ಫಾರ್ಮ್ ಎಕ್ಸ್‌ನಲ್ಲಿ ಪೋಸ್ಟ್ ಮಾಡಿದ್ದಾರೆ. ಎರಡೂ ಕಡೆಯ ಮಹಿಳೆಯರು, ಮಕ್ಕಳು ಸೇರಿದಂತೆ ಮುಗ್ಧ ಜೀವಗಳ ದುರಂತ ಅಂತ್ಯ ಹೃದಯವಿದ್ರಾವಕವಾಗಿದೆ. ಉಲ್ಬಣಗೊಳ್ಳುವ ಸಂಘರ್ಷವೂ ಪ್ರತಿ ಕ್ಷಣವೂ ಹೆಚ್ಚು ಜೀವಗಳನ್ನು ತೆಗೆದುಕೊಳ್ಳುವ ಸಾಧ್ಯತೆ ಇದೆ. ಮಿಲಿಟರಿಯಿಂದ ಯಾವುದೇ ಪರಿಹಾರ ಕಂಡುಕೊಳ್ಳಲು ಸಾಧ್ಯವಿಲ್ಲ ಎಂದು ಮುಫ್ತಿ ಹೇಳಿದ್ದಾರೆ.

ಭಾರತ ಮತ್ತು ಪಾಕಿಸ್ತಾನ ಎರಡೂ ರಾಷ್ಟ್ರಗಳ ನಾಯಕರು ಶಾಂತಿಯುತ ಸಹಬಾಳ್ವೆಯನ್ನು ಆಯ್ಕೆ ಮಾಡಿಕೊಳ್ಳಬೇಕು ಎಂದು ಮಾಜಿ ಸಿಎಂ ಒತ್ತಾಯಿಸಿದ್ದಾರೆ. ವಿಶೇಷವಾಗಿ ಭಾರತದ ಪ್ರಧಾನಿಯವರು ಯುದ್ಧವನ್ನು ಕೊನೆಗೊಳಿಸಲು ಮಾತುಕತೆ ಆರಿಸಿಕೊಳ್ಳಬೇಕೆಂದು ನಾನು ಮನವಿ ಮಾಡುತ್ತೇನೆ. ಈಗ, ಎಂದಿಗಿಂತಲೂ ಹೆಚ್ಚಾಗಿ ಶಾಂತಿಯುತ ಸಹಬಾಳ್ವೆ ಮತ್ತು ಮಾತುಕತೆ ನಮ್ಮ ಏಕೈಕ ಸಾಧನವಾಗಿ ಕಾರ್ಯನಿರ್ವಹಿಸಬೇಕು ಎಂದು ಮುಫ್ತಿ ಬರೆದಿದ್ದಾರೆ. ಪ್ರಾಮಾಣಿಕ, ನಿರಂತರ ಪ್ರಯತ್ನಗಳ ಮೂಲಕ ಮಾತ್ರ ನಾವು ಉದ್ವಿಗ್ನತೆಯನ್ನು ಕಡಿಮೆ ಮಾಡಬಹುದು ಮತ್ತು ಶಾಂತಿಯನ್ನು ಪುನಃಸ್ಥಾಪಿಸುವ ಕಠಿಣ ಪರಿಶ್ರಮವನ್ನು ಪ್ರಾರಂಭಿಸಬಹುದು ಎಂದು ಅವರು ಹೇಳಿದ್ದಾರೆ.

## ತುರ್ತು ಪರಿಸ್ಥಿತಿ ಎದುರಿಸಲು ಸಿದ್ಧರಾಗಿ

**ನವದೆಹಲಿ:** ಪಾಕಿಸ್ತಾನ ಮತ್ತು ಪಾಕಿಸ್ತಾನ ಆಕ್ರಮಿತ ಕಾಶ್ಮೀರದಲ್ಲಿ ಭಾರತದ ನಿಖರ ಕ್ಷಿಪಣಿ ದಾಳಿಯ ನಂತರ, ಕೇಂದ್ರ ಸಚಿವ ಅಮಿತ್ ಶಾ ಗಡಿ ರಾಜ್ಯಗಳಿಗೆ ಜಾಗರೂಕರಾಗಿರಲು, ಯಾವುದೇ ತುರ್ತು ಪರಿಸ್ಥಿತಿಗೆ ಪ್ರತಿಕ್ರಿಯಿಸಲು ಸಿದ್ಧರಾಗಿರಲು ಕೇಳಿ ಕೊಂಡಿದ್ದಾರೆ. ಸಾಮಾಜಿಕ ಮಾಧ್ಯಮ ವೇದಿಕೆಗಳಲ್ಲಿ ರಾಷ್ಟ್ರ ವಿರೋಧಿ ಪ್ರಚಾರದ ಬಗ್ಗೆ ಗಮನ ಹರಿಸುವಂತೆ ಗೃಹ ಸಚಿವರು ಅಧಿಕಾರಿಗಳಿಗೆ ಸೂಚಿಸಿದ್ದಾರೆ, ತಪ್ಪು ಮಾಹಿತಿಯನ್ನು ಹತ್ತಿಕ್ಕಲು ಕಠಿಣ ಕ್ರಮ ಕೈಗೊಳ್ಳುವಂತೆ ಒತ್ತಾಯಿಸಿ ದ್ದಾರೆ ಎಂದು ಮೂಲಗಳು ತಿಳಿಸಿವೆ. ಜಮ್ಮು, ಕಾಶ್ಮೀರ ಮತ್ತು ಲಡಾಖ್‌ನ ಲೆಫ್ಟಿನೆಂಟ್ ಗವರ್ನರ್‌ಗಳು, ಉತ್ತರ ಪ್ರದೇಶ, ಉತ್ತರಾಖಂಡ, ಪಂಜಾಬ್, ರಾಜಸ್ಥಾನ, ಗುಜರಾತ್ ಪಶ್ಚಿಮ ಬಂಗಾಳದ ಮುಖ್ಯಮಂತ್ರಿಗಳು, ಸಿಕ್ಕಿಂ ಸರ್ಕಾರದ ಪ್ರತಿನಿಧಿಯೊಂದಿಗೆ ಅಮಿತ್ ಶಾ ಸಭೆ ನಡೆಸಿದರು ಎಂದು ಗೃಹ ಸಚಿ ವಾಲಯ ತಿಳಿಸಿದೆ. ಈ ಸಭೆ ವಿಡಿಯೋ ಕಾನ್ಫರೆನ್ಸಿಂಗ್ ಮೂಲಕ ನಡೆಯಿತು.

ಸಭೆಯಲ್ಲಿ, ಮುಖ್ಯಮಂತ್ರಿಗಳು, ಲೆಫ್ಟಿನೆಂಟ್ ಗವರ್ನರ್‌ಗಳು ಪರೇಷನ್ ಸಿಂಧೂರ್‌ನ ಯಶಸ್ಸಿಗಾಗಿ ಮೋದಿ ಸರ್ಕಾರ, ಸಶಸ್ತ್ರ ಪಡೆಗಳನ್ನು ಶ್ಲಾಘಿಸಿದರು ಎಂದು ವರದಿಯಾಗಿದೆ. ಏ. 22 ರಂದು ಪಹಲ್ಗಾಮ್ ಭಯೋತ್ಪಾದಕ ದಾಳಿಗೆ ಪ್ರತೀಕಾರವಾಗಿ ಈ ದಾಳಿಗಳನ್ನು ನಡೆಸಲಾಯಿತು, ಇದರಲ್ಲಿ 25 ಪ್ರವಾಸಿಗರು, ಕಾಶ್ಮೀರಿ ಕುದುರೆ ಸವಾರಿ ಆಪರೇಟರ್ ಅನ್ನು ಗುಂಡಿಕ್ಕಿ ಕೊಲ್ಲಲಾಯಿತು. ಭಯೋತ್ಪಾದಕ ದಾಳಿ, ಆಪರೇಷನ್ ಸಿಂಧೂರ್ ನಂತರ ಹೊರಹೊಮ್ಮಿದ ರಾಷ್ಟ್ರೀಯ ಏಕತೆಯ ಮನೋಭಾವವು ನಾಗರಿಕರ ನೈತಿಕ ಸ್ಥೈರ್ಯವನ್ನು ಹೆಚ್ಚಿಸಿದೆ ಎಂದರು.



## ಭಾರತದ 15 ನಗರಗಳ ಮೇಲೆ ದಾಳಿಗೆ ಬಂದ ಪಾಕಿಸ್ತಾನ

### ವಾಯುದಾಳಿಯನ್ನು ತಡೆದ ಭಾರತೀಯ ಸೇನೆಯು ಪ್ರತಿಯಾಗಿ ದಾಳಿ

**ಹೊಸದಿಲ್ಲಿ:** ಆಪರೇಷನ್ ಸಿಂಧೂರ್‌ಗೆ ಪ್ರತಿಯಾಗಿ ಪಾಕಿಸ್ತಾನವು ಮೇ 7 ಮಧ್ಯರಾತ್ರಿ, ಭಾರತದ ಪ್ರಮುಖ 15 ಸ್ಥಳಗಳ ಮೇಲೆ ಕ್ಷಿಪಣಿ ಮೇಲೆ ದಾಳಿ ಮಾಡಿದೆ. ಈ ಬಗ್ಗೆ ಮೊದಲೇ ಮುನ್ನೆಚ್ಚರಿಕೆ ಕೈಗೊಂಡಿದ್ದ ಭಾರತ ಸೇನೆಯು ಪಾಕಿಸ್ತಾನ ಸೇನೆಗೆ ತಿರುಗೇಟು ನೀಡಿದೆ.

### 16 ಭಾರತೀಯರು ಸಾವಿಗೀಡಾಗಿದ್ದಾರೆ

ಇನ್ನೊಂದೆಡೆ ಪಾಕಿಸ್ತಾನವು ಮಾರ್ಟರ್‌ಗಳು ಮತ್ತು ಭಾರೀ ಕ್ಯಾಲಿಬರ್ ಫಿರಂಗಿಗಳನ್ನು ಬಳಸಿಕೊಂಡು ಗಡಿ ನಿಯಂತ್ರಣ ರೇಖೆಯಾದ್ಯಂತ ಅಪ್ರಚೋದಿತ ಗುಂಡಿನ ದಾಳಿಯನ್ನು ನಡೆಸಿದೆ. ಜಮ್ಮು, ಕಾಶ್ಮೀರದ ಕುಪ್ವಾರಾ, ಬಾರಾಮುಲ್ಲಾ, ಉರಿ, ಪೂಂಚ್, ಮೆಂಧರ್ ಮತ್ತು ರಾಜೌರಿ ವಲಯದ ಪ್ರದೇಶಗಳಲ್ಲಿ ದಾಳಿಯಾಗಿದೆ. ಇದರಲ್ಲಿ 16 ಜನ ಸಾವನ್ನಪ್ಪಿದ್ದಾರೆ ಎಂದು ಭಾರತೀಯ ಸೇನೆ ಮಾಹಿತಿ ನೀಡಿದೆ.

ಪಾಕಿಸ್ತಾನ ಸೇನೆಯ ವಾಯುದಾಳಿಯನ್ನು ವಿಫಲಗೊಳಿಸುವ ಜತೆಗೆ ಪ್ರತಿ ಯಾಗಿ ಲಾಹೋರ್ ಮೇಲೆ ದಾಳಿ ಮಾಡಿದೆ.

ಜಮ್ಮು ಕಾಶ್ಮೀರದ ಪಹಲ್ಗಾಮ್ ದಾಳಿಯ ಸೇಡು ತೀರಿಸಿಕೊಳ್ಳಲು ಮುಂದಾದ ಭಾರತ ಸೇನೆಯು ಪಾಕಿಸ್ತಾನ ಉಗ್ರ ನೆಲಗಳ ಮೇಲೆ ಆಪರೇಷನ್ ಸಿಂಧೂರ್ ವಾಯು ದಾಳಿ ನಡೆಸಿತ್ತು. ದಾಳಿಯಲ್ಲಿ ಸಾಕಷ್ಟು ಸಾವು ನೋವುಗಳಾಗಿದ್ದವು. ಆದರೆ, ಈ ದಾಳಿಯಿಂದ ಬುದ್ದಿ ಕಲಿಯ ಪಾಕಿಸ್ತಾನವು ಬುಧವಾರ ಮಧ್ಯರಾತ್ರಿ, ಭಾರತದ 15 ನಗರಗಳ ಸೇನಾ ಶಿಬಿರಗಳನ್ನು ಟಾರ್ಗೆಟ್ ಮಾಡಿ ಡ್ರೋನ್ ಮತ್ತು ಮಿಸೈಲ್ ದಾಳಿಯನ್ನು ನಡೆಸಿತ್ತು. ಈ ಬಗ್ಗೆ ಭಾರತೀಯ ಸೇನೆ ಅಧಿಕೃತ ಮಾಹಿತಿ ನೀಡಿದೆ.

**ಪಾಕಿಸ್ತಾನ ದಾಳಿ ತಡೆಗಟ್ಟಿದ್ದೇಗೆ?:** ಈ ಬಗ್ಗೆ ಮಾಹಿತಿ ನೀಡಿರುವ ಭಾರತ ಸೇನೆಯು, ಪಾಕಿಸ್ತಾನವು ಉತ್ತರ, ಪಶ್ಚಿಮ ಭಾರತದ ಹಲವಾರು ಮಿಲಿಟರಿ ಗುರಿಗಳ ಮೇಲೆ ಡ್ರೋನ್‌ಗಳು, ಕ್ಷಿಪಣಿಗಳನ್ನು ಬಳಸಿ ದಾಳಿ ಮಾಡಲು ಪ್ರಯತ್ನಿಸಿತು.

ಯುಎಎಸ್ ಗ್ರಿಡ್, ಏರ್‌ಡಿಫೆನ್ಸ್ ಸಿಸ್ಟಮ್ ಸಹಾಯ ದಿಂದ ದಾಳಿಯನ್ನು ತಡೆಯಲಾಗಿದೆ. ಮುಂದು ವರೆದು ಲಾಹೋರ್‌ನಲ್ಲಿದ್ದ ಪಾಕಿಸ್ತಾನದ ವಾಯು ರಕ್ಷಣಾ ವ್ಯವಸ್ಥೆಗಳ ಮೇಲೆ ಭಾರತ ಸೇನೆಯ ದಾಳಿ ನಡೆಸಲಾಗಿದೆ.




### ಯಾವೆಲ್ಲಾ ನಗರಗಳ ಮೇಲೆ ದಾಳಿಗೆ ಬಂದಿತ್ತು ಪಾಕಿಸ್ತಾನ?

- ಅವಂತಿಪುರ - ಜಮ್ಮು ಮತ್ತು ಕಾಶ್ಮೀರ
- ಶ್ರೀನಗರ - ಜಮ್ಮು ಮತ್ತು ಕಾಶ್ಮೀರ
- ಜಮ್ಮು - ಜಮ್ಮು ಮತ್ತು ಕಾಶ್ಮೀರ
- ಪಠಾಣ್‌ಕೋಟ್ - ಪಂಜಾಬ್
- ಅಮೃತಸರ - ಪಂಜಾಬ್
- ಕಪುರ್ತಲಾ - ಪಂಜಾಬ್
- ಜಲಂಧರ್ - ಪಂಜಾಬ್
- ಲುಧಿಯಾನ - ಪಂಜಾಬ್
- ಆದಂಪುರ - ಪಂಜಾಬ್
- ಭಟಿಂಡಾ - ಪಂಜಾಬ್
- ಚಂಡೀಗಢ - ಕೇಂದ್ರಾಡಳಿತ ಪ್ರದೇಶ (ಪಂಜಾಬ್, ಹರಿಯಾಣದ ರಾಜಧಾನಿ ಕೂಡ)
- ನಲ್ - ರಾಜಸ್ಥಾನ
- ಫಲೋಡಿ - ರಾಜಸ್ಥಾನ
- ಉತ್ತರಲೈ - ರಾಜಸ್ಥಾನ
- ಭುಜ್ - ಗುಜರಾತ್

# ಭಾರತದ 27 ವಿಮಾನ ನಿಲ್ದಾಣಗಳು ಬಂದ್: 430 ವಿಮಾನಗಳ ಹಾರಾಟ ರದ್ದು

■ ಪಾಕಿಸ್ತಾನದ ವಿಮಾನಯಾನ ಸಂಸ್ಥೆಗಳು 147 ವಿಮಾನಗಳನ್ನು ರದ್ದು ■ ಮೇ 10 ರ ಬೆಳಿಗ್ಗೆ 5.29 ರವರೆಗೆ ಬಂದ್

• ಉದಯವಾಹಿನಿ, ನವದೆಹಲಿ

ಭಾರತದ ರಕ್ಷಣಾ ಪಡೆಗಳು ಬುಧವಾರ ಮುಂಜಾನೆ ನಡೆಸಿದ ಆಪರೇಷನ್ ಸಿಂಧೂರ್ ಕಾರ್ಯಾಚರಣೆ ಹಿನ್ನೆಲೆ ವಿಮಾನ ಹಾರಾಟಗಳಲ್ಲಿ ವ್ಯತ್ಯಯವಾಗಿದೆ. ಉತ್ತರ, ಪಶ್ಚಿಮ ಮತ್ತು ಮಧ್ಯ ಭಾರತದ 27 ವಿಮಾನ ನಿಲ್ದಾಣಗಳನ್ನು ಮುಚ್ಚಲಾಗಿದೆ. ಮೇ 10 ರ ಶನಿವಾರ ಬೆಳಿಗ್ಗೆ 5.29 ರವರೆಗೆ ಈ ನಿಲ್ದಾಣಗಳು ಬಂದ್ ಇರಲಿವೆ ಎನ್ನಲಾಗಿದೆ. ಅಲ್ಲದೆ ಭಾರತೀಯ ವಿಮಾನಯಾನ ಸಂಸ್ಥೆಗಳು ಗುರುವಾರ ಒಟ್ಟು 430 ವಿಮಾನಗಳನ್ನು ರದ್ದುಗೊಳಿಸಿವೆ. ಇದು ದೇಶದ ಒಟ್ಟು ನಿಗದಿತ ವಿಮಾನಗಳ ಶೇಕಡಾ 3 ರಷ್ಟನ್ನು ಒಳಗೊಂಡಿದ್ದು, ಇವು ಹಾರಾಟ ರದ್ದುಮಾಡಿವೆ.

**ಪಾಕಿಸ್ತಾನದಲ್ಲೂ ವಿಮಾನಗಳು ರದ್ದು:** ಪಾಕಿಸ್ತಾನದ ವಿಮಾನಯಾನ ಸಂಸ್ಥೆಗಳು 147 ವಿಮಾನಗಳನ್ನು ರದ್ದುಗೊಳಿಸಿವೆ. ಇದು ಆ ದೇಶದ 17% ವಿಮಾನಯಾನವಾಗಿದ್ದು, ರದ್ದಾಗಿವೆ. ವಿಮಾನಗಳ ಹಾರಾಟದ ಮಾಹಿತಿಯನ್ನು ನೀಡುವ ಪ್ರಕಾರ, ಪಾಕಿಸ್ತಾನ ಮತ್ತು ಭಾರತದ ಪಶ್ಚಿಮ ಭಾಗದ ಕಾಶ್ಮೀರ ಮತ್ತು ಗುಜರಾತ್ ನಡುವಿನ ವಾಯು ಪ್ರದೇಶದಲ್ಲಿ ಯಾವುದೇ ನಾಗರಿಕ ವಿಮಾನ ಸಂಚಾರ ಇರಲಿಲ್ಲ. ಹೆಚ್ಚಿನ ವಿದೇಶಿ ವಿಮಾನಯಾನ ಸಂಸ್ಥೆಗಳು ಪಾಕಿಸ್ತಾನದ ವಾಯು ಪ್ರದೇಶವನ್ನು ಬಳಸುವುದನ್ನು ನಿಲ್ಲಿಸಿದ್ದು, ಪಾಕ್ ವಾಯುಪ್ರದೇಶದ ಬದಲಿಗೆ, ಮುಂಬೈ ಮತ್ತು ಅಹಮದಾಬಾದ್ ಮೂಲಕ ತಮ್ಮ ಮಾರ್ಗವನ್ನು ಬದಲಾಯಿಸಿವೆ. ಬೆಂಗಳೂರು ಸೇರಿದಂತೆ ದೇಶದ ವಿವಿಧ ನಗರಗಳಿಂದ ಈ ನಗರಗಳಿಗೆ ಆಗಮಿಸಬೇಕಿದ್ದ ವಿಮಾನಗಳ ಸಂಚಾರವನ್ನೂ ನಿಲ್ಲಿಸಲಾಗಿದೆ. ವಿಮಾನ ನಿಲ್ದಾಣಗಳನ್ನು ಎಷ್ಟು ದಿನ ಬಂದ್ ಮಾಡಲಾಗುವುದು ಎಂಬುದನ್ನು ನಾಗರಿಕ ವಿಮಾನಯಾನ ಸಚಿವಾಲಯ ಸ್ಪಷ್ಟಪಡಿಸಿಲ್ಲ. ಇಂಡಿಗೊ ಮಾತ್ರ ಮೇ 10ರ ತನಕ ದೇಶೀಯ ವಿಮಾನ ಸೇವೆ ಇರುವುದಿಲ್ಲಎಂದು ಘೋಷಿಸಿದೆ. ಪ್ರಯಾಣಿಕರಿಗೆ ಟಿಕೆಟ್ ಹಣವನ್ನು ಮರುಪಾವತಿಸಲಾಗುತ್ತದೆ ಎಂದು ಹಲವು ವಿಮಾನಯಾನ ಸಂಸ್ಥೆಗಳು ಘೋಷಿಸಿವೆ.




### ಎಲ್ಲೆಲ್ಲಿ ನಿಲ್ದಾಣಗಳು ಬಂದ್

● ಶ್ರೀನಗರ ● ಜಮ್ಮು ● ಲೇಹ್ ● ಚಂಡೀಗಢ ● ಅಮೃತಸರ, ● ಲೂಧಿಯಾನ, ● ಪಟಿಯಾಲ ● ಬಟಿಂಡಾ, ● ಹಲ್ವಾರ ● ಪಠಾಣ್‌ಕೋಟ್ ● ಭುಂಟರ್ ● ಶಿಮ್ಲಾ ● ಗಗ್ಗಲ್ ● ಧರ್ಮಶಾಲಾ, ● ಕಿಶನ್‌ಗಢ ● ಜೈಸಲ್ಮೇರ್ ಜೋಧ್‌ಪುರ ● ಬಿಕಾನೇರ್ ● ಮುಂಡ್ರಾ ● ಜಾಮ್‌ನಗರ ● ರಾಜ್‌ಕೋಟ್ ● ಪೋರಬಂದರ್ ● ಕಾಂಡ್ಲಾ ● ಕೇಶೋಡ್ ● ಭುಜ್ ● ಗ್ವಾಲಿಯರ್ ಮತ್ತು ● ಹಿಂಡನ್ ವಿಮಾನ ನಿಲ್ದಾಣಗಳನ್ನು ಮುಚ್ಚಲಾಗಿದೆ ಎಂದು ಮೂಲಗಳು ತಿಳಿಸಿವೆ.

### ಪಾಕ್‌ನಲ್ಲಿ 48 ಗಂಟೆ ನೋ ಫ್ಲೈ ಝೋನ್

ಭಾರತದ ಸಿಂಧೂರ್ ಕಾರ್ಯಾಚರಣೆ ಬಳಿಕ ಪಾಕ್‌ನಲ್ಲಿ ಇಸ್ಲಾಮಾಬಾದ್ ಮತ್ತು ಲಾಹೋರ್‌ಗೆ ಹೋಗುವ ಎಲ್ಲಾ ವಿಮಾನಗಳನ್ನು ಕರಾಚಿ ವಿಮಾನ ನಿಲ್ದಾಣಕ್ಕೆ ತಿರುಗಿಸಲಾಯಿತು. ಇದರಿಂದ ವಿಮಾನ ಕಾರ್ಯಾಚರಣೆಗಳ ಮೇಲೆ ತೀವ್ರ ಒತ್ತಡ ಉಂಟಾಯಿತು. ನಂತರ, ಕೆಲವು ಅಗತ್ಯ ವಿಮಾನಗಳನ್ನು ಹೊರತುಪಡಿಸಿ, ಸಂಪೂರ್ಣ ವಾಯುಮಾರ್ಗವನ್ನು ಮುಚ್ಚಲಾಯಿತು.48 ಗಂಟೆಗಳ ಕಾಲ ನೋ ಫ್ಲೈ ಝೋನ್ ಎಂದು ಅಲ್ಲಿನ ವಿಮಾನಯಾನದ ಸಂಸ್ಥೆ ಹೇಳಿದೆ.

ಮುಂದಿನ ಸೂಚನೆ ಬರುವ ತನಕ ವಿಮಾನಯಾನ ಸೇವೆ ಇರುವುದಿಲ್ಲ, ಪ್ರಯಾಣಿಕರು ಪೂರ್ಣ ಮರುಪಾವತಿ ಪಡೆಯಬಹುದು, ಇಲ್ಲವೇ ಬದಲಿ ವಿಮಾನವನ್ನು ಆಯ್ಕೆ ಮಾಡಬಹುದು, ಎಂದು ಎಂದು ಸ್ಪೈಸ್ ಜೆಟ್ ಘೋಷಿಸಿದೆ.

ಮಿಲಿಟರಿ ಚಾರ್ಟರ್‌ಗಳನ್ನು ಮಾತ್ರ ನಿರ್ವಹಿಸುವ ವಿಮಾನ ನಿಲ್ದಾಣಗಳನ್ನೂ ಸಹ ಮುಚ್ಚಲಾಗಿದೆ. ಬುಧವಾರ ಸುಮಾರು 250 ವಿಮಾನಗಳು ರದ್ದಾಗಿದ್ದ ವು. ಏರ್ ಇಂಡಿಯಾವು ತನ್ನ ಎರಡು ಅಂತರಾಷ್ಟ್ರೀಯ ವಿಮಾನಗಳನ್ನು ಅಮೃತಸರಕ್ಕೆ ಹೋಗುವ ಮಾರ್ಗದಲ್ಲಿ ದೆಹಲಿಗೆ ತಿರುಗಿಸಿತು ಎಂದು ಹೇಳಿದೆ. ಅಮೇರಿಕನ್ ಏರ್ ಬುಧವಾರ ತನ್ನ ದೆಹಲಿ-ನ್ಯೂಯಾರ್ಕ್ ವಿಮಾನವನ್ನು ರದ್ದುಗೊಳಿಸಿತು.



# ದೀಪಿಕಾ ಪಡುಕೋಣೆಗೆ ಕಾಡುತ್ತಿದೆಯಂತೆ ಭಯ ಏನದು

ದೀಪಿಕಾ ಎಚ್ಚರಿಕೆಯಿಂದ ಡಯಟ್ ಹಾಗೂ ವ್ಯಾಯಾಮ ಮಾಡುತ್ತಿದ್ದಾರಂತೆ.

ಕಳೆದ ವರ್ಷ ತಾಯಿಯಾದ ನಟಿ ದೀಪಿಕಾ ಪಡುಕೋಣೆ ಈಗ ಮತ್ತೆ ಚಿತ್ರರಂಗಕ್ಕೆ ಬರಲು ತಯಾರಿ ಆರಂಭಿಸಿದ್ದಾರೆ. ದೇಹ ತೂಕ ಇಳಿಸಿಕೊಳ್ಳಲು ವರ್ಕೌಟ್ ಆರಂಭಿಸಿರುವ ನಟಿ ದೀಪಿಕಾ ಪಡುಕೋಣೆ, ಹಲವು ಗಂಟೆಗಳ ಕಾಲ ಜಿಮ್‌ನಲ್ಲಿ ಸಮಯ ಕಳೆಯುತ್ತಿದ್ದಾರೆ.

ಇಷ್ಟೆಲ್ಲ ಮಾಡುತ್ತಿದ್ದರೂ ನಟಿಗೆ ಭಯವೊಂದು ಕಾಡುತ್ತಲೇ ಇದೆಯಂತೆ. ಏನು ಆ ಭಯ ನಟಿ ದೀಪಿಕಾ ಪಡುಕೋಣೆ ತಾಯಿಯಾಗಿದ್ದಾರೆ. ಆದರೆ ಇದೀಗ ಬಾಲಿವುಡ್‌ಗೆ ಮರಳಲು ದೀಪಿಕಾ ಪಡುಕೋಣೆ ಸಜ್ಜಾಗುತ್ತಿದ್ದಾರೆ. ತಾಯಿಯಾದ ಬಳಿಕ ಸಹಜವಾಗಿಯೇ ನಟಿಯ ದೇಹದ ತೂಕ ಹೆಚ್ಚಾಗಿತ್ತು. ಇದೀಗ ದೇಹತೂಕ ಇಳಿಸಿಕೊಂಡು, ಮೊದಲಿನಂತೆ ಸಪೂರದೇಹಿಯಾಗುವ ಪ್ರಯತ್ನದಲ್ಲಿದ್ದಾರೆ. ಇದೆಲ್ಲದರ ನಡುವೆ ದೀಪಿಕಾ ಪಡುಕೋಣೆಗೆ ಭಯವೊಂದು ಕಾಡುತ್ತಿದೆಯಂತೆ.

ಮ್ಯಾರಿ ಕ್ಲೇಯ್ರ್ ಅವರಿಗೆ ನೀಡಿರುವ ಸಂದರ್ಶನದಲ್ಲಿ ದೀಪಿಕಾ ಪಡುಕೋಣೆ ಈ ಬಗ್ಗೆ ಮಾತನಾಡಿದ್ದು, ತಾವು, ದೇಹದ ತೂಕ ಇಳಿಸಿಕೊಂಡು ಮೊದಲಿನಂತಾಗಲು ಮಾಡುತ್ತಿರುವ ಪ್ರಯತ್ನಗಳ ಬಗ್ಗೆ ಹೇಳಿಕೊಂಡಿದ್ದಾರೆ. ಮೊದಲಿಗೆ ಸ್ವಿಮ್ಮಿಂಗ್ ಹಾಗೂ ವಾಕಿಂಗ್‌ನಿಂದ ಆರಂಭ ಮಾಡಿದ ದೀಪಿಕಾ ಪಡುಕೋಣೆ ನಿಧಾನಕ್ಕೆ ಜಿಮ್ ವ್ಯಾಯಾಮಗಳ ಕಡೆಗೆ ಬಂದಿದ್ದಾರಂತೆ. ಇದರಿಂದ ದೇಹದ ತೂಕ ಸರಿಯಾದ ರೀತಿಯಲ್ಲಿ ಕಡಿಮೆ ಆಗಲಿದೆ ಎಂಬುದು ನಟಿಯ ವಿಶ್ವಾಸ. ಜಿಮ್ ವ್ಯಾಮಾಯದ ಜೊತೆಗೆ ಯೋಗಾಸನವನ್ನು ತಪ್ಪದೆ ಮಾಡುತ್ತಿದ್ದಾರಂತೆ ನಟಿ. ದೇಹ ತೂಕ ಇಳಿಸುವ ಯತ್ನದಲ್ಲಿ ಆರೋಗ್ಯವನ್ನು ಕೆಡಿಸಿಕೊಳ್ಳಬಾರದು, ನನ್ನ ಆರೋಗ್ಯ ಮಗುವಿನ ಬೆಳವಣಿಗೆ ಮೇಲೆ ಪರೋಕ್ಷ ಪ್ರಭಾವ ಬೀರುವ ಸಾಧ್ಯತೆ ಇದೆ ಎಂದಿರುವ ದೀಪಿಕಾ ಎಚ್ಚರಿಕೆಯಿಂದ ಡಯಟ್ ಹಾಗೂ ವ್ಯಾಯಾಮ ಮಾಡುತ್ತಿದ್ದಾರಂತೆ. ಏನೇ ಮಾಡಿದರೂ ದೀಪಿಕಾ ಪಡುಕೋಣೆಗೆ ದೊಡ್ಡ ಭಯವೊಂದು ಕಾಡುತ್ತಲೇ ಇದೆಯಂತೆ. ಏನೇ ವ್ಯಾಯಾಮ ಮಾಡಿದರೂ ಸಹ ನಾನು ಮೊದಲಿನಂತೆ ಆಗಲು ಸಾಧ್ಯವಾ ಎಂಬ ಅನುಮಾನ ದೀಪಿಕಾಗೆ ಇದೆಯಂತೆ.



# ಉಗ್ರರ ಬಗ್ಗೆ ಕರುಣೆ ಹೊಂದಿದ್ದರೆ ನೀವು ಕೂಡ ಭಯೋತ್ಪಾದಕರೇ

ಇದು ಒಂದು ಸಂದೇಶ

ಭಾರತ ಸೇನೆಯ 'ಆಪರೇಷನ್ ಸಿಂಧೂರ' ಕಾರ್ಯಾಚರಣೆಯ ಬಗ್ಗೆ ಧ್ರುವ ಸರ್ಜಾ ಮೆಚ್ಚುಗೆ ಮಾತುಗಳನ್ನಾಡಿದ್ದಾರೆ. ಸೋಷಿಯಲ್ ಮೀಡಿಯಾದಲ್ಲಿ ಭಾರತ ದೇಶದಲ್ಲಿರುವ ಹಿತಶತ್ರುಗಳಿಗೆ ನಟ ಎಚ್ಚರಿಕೆ ನೀಡಿದ್ದಾರೆ. ಉಗ್ರರ ಬಗ್ಗೆ ಕರುಣೆ ಹೊಂದಿದ್ದರೆ ನೀವು ಕೂಡ ಭಯೋತ್ಪಾದಕರೇ ಆಗುತ್ತೀರಿ. ಭಾರತಕ್ಕೆ ದ್ರೋಹಿಗಳಾಗಬೇಡಿ ಎಂದು ಧ್ರುವ ಸರ್ಜಾ ಹೇಳಿದ್ದಾರೆ. ಭಾರತದಲ್ಲಿ ವಾಸಿಸುವ ಪಾಕಿಸ್ತಾನಿಗರೇ, ನೀವು ಉಗ್ರರ ಬಗ್ಗೆ ಕರುಣೆ ಹೊಂದಿದ್ದರೆ ನೀವು ಕೂಡ ಭಯೋತ್ಪಾದಕರೇ ಆಗುತ್ತೀರಿ.
ಭಾರತಕ್ಕೆ ದ್ರೋಹಿಗಳಾಗಬೇಡಿ. ಭಾರತದಲ್ಲಿರುವವರು ಮೊದಲು ಭಾರತವನ್ನು ನಂಬಿ, ನೀವು ವಾಸಿಸುವ ದೇಶವನ್ನು ಪ್ರೀತಿಸಿ ಎಂದು ನಟ ತಿಳಿಸಿದ್ದಾರೆ. ಇಲ್ಲದಿದ್ದರೆ ಶೀಘ್ರದಲ್ಲೇ ನಾವು ನಿಮ್ಮನ್ನು ಭಾರತದಿಂದ ಹೊರಹಾಕುತ್ತೇವೆ ಎಂದು ಧ್ರುವ ಸರ್ಜಾ ಎಚ್ಚರಿಕೆ ನೀಡಿದ್ದಾರೆ. ಜೈ ಹಿಂದ್, ಜೈ ಶ್ರೀರಾಮ್, ಜೈ ಹನುಮಾನ್ ಎಂದು ಬರೆದುಕೊಂಡಿದ್ದಾರೆ.
ಏ.22ರಂದು ಜಮ್ಮು ಮತ್ತು ಕಾಶ್ಮೀರದ ಪಹಲ್ಗಾಮ್‌ನಲ್ಲಿ ನಡೆದ ಉಗ್ರರ ದಾಳಿಗೆ 26 ಮಂದಿ ಬಲಿಯಾಗಿದ್ದರು. ಅದಕ್ಕೆ ಪ್ರತೀಕಾರವಾಗಿ ನಡೆಸುತ್ತಿರುವ ಆಪರೇಷನ್ ಸಿಂಧೂರ ಕಾರ್ಯಾಚರಣೆಯಲ್ಲಿ 100 ಕ್ಕೂ ಹೆಚ್ಚು ಉಗ್ರರು ಸಾವನ್ನಪ್ಪಿರಬಹುದು ಎಂದು ಅಂದಾಜಿಸಲಾಗಿದೆ.



ಸಿನಿ ವಾಹಿನಿ

# ನಮ್ಮ ಸೈನಿಕರಿಗೆ ಥ್ಯಾಂಕ್ಯೂ

'ಆಪರೇಷನ್ ಸಿಂಧೂರ' ಕಾರ್ಯಾಚರಣೆಯ ಬಗ್ಗೆ ಸುದೀಪ್, ಜಗ್ಗೇಶ್ ಸೇರಿದಂತೆ ಅನೇಕ ಸೆಲೆಬ್ರಿಟಿಗಳು ಪ್ರತಿಕ್ರಿಯೆ ನೀಡಿದ್ದಾರೆ. ಈ ಬೆನ್ನಲ್ಲೇ ರಶ್ಮಿಕಾ ಮಂದಣ್ಣ ಕೂಡ ರಿಯಾಕ್ಟ್ ಮಾಡಿದ್ದಾರೆ. ಪ್ರಾಣವನ್ನೇ ಪಣಕ್ಕಿಟ್ಟು ರಕ್ಷಿಸುವ ನಮ್ಮ ಸೈನಿಕರಿಗೆ ಥ್ಯಾಂಕ್ಯೂ ಎಂದು ನಟಿ ಹೇಳಿದ್ದಾರೆ. ಈಗಾಗಲೇ ಸಾಕಷ್ಟು ನೋವನ್ನು ನಮ್ಮ ಜನರು ಅನುಭವಿಸಿದ್ದಾರೆ. ತಮ್ಮ ಪ್ರಾಣವನ್ನೇ ಪಣಕ್ಕಿಟ್ಟು ನಮ್ಮನ್ನು ರಕ್ಷಿಸುವ ಎಲ್ಲಾ ಸೈನಿಕರಿಗೆ ಥ್ಯಾಂಕ್ಯೂ. ಜೈ ಹಿಂದ್, ಆಪರೇಷನ್ ಸಿಂಧೂರ ಎಂದು ರಶ್ಮಿಕಾ ಮಂದಣ್ಣ ಇನ್ಸ್ಟಾಗ್ರಾಂನಲ್ಲಿ ಪೋಸ್ಟ್ ಮಾಡಿದ್ದಾರೆ. ಏ.22ರಂದು ಜಮ್ಮು ಮತ್ತು ಕಾಶ್ಮೀರದ ಪಹಲ್ಗಾಮ್‌ನಲ್ಲಿ ನಡೆದ ಉಗ್ರರ ದಾಳಿಗೆ 26 ಮಂದಿ ಬಲಿಯಾಗಿದ್ದರು. ಅದಕ್ಕೆ ಪ್ರತೀಕಾರವಾಗಿ ನಿನ್ನೆ ತಡರಾತ್ರಿ ಭಾರತೀಯ ವೀರ ಯೋಧರು ಉಗ್ರರ 9 ಅಡಗುತಾಣಗಳ ಮೇಲೆ ದಾಳಿ ನಡೆಸುವ ಮೂಲಕ ಪಹಲ್ಗಾಮ್‌ನಲ್ಲಿ ನಡೆದ ನರಮೇಧಕ್ಕೆ ತಕ್ಕ ಪಾಠ ಕಲಿಸಿದ್ದಾರೆ.



ಬೀಚ್‌ನಲ್ಲಿ ಸುನಾಮಿ ಎಬ್ಬಿಸಿದ ನಟಿ

ತೆಲುಗು ನಟಿ ರಮ್ಯಾ ಪಸುಪಿಲೇಟಿ ಥೈಲ್ಯಾಂಡ್‌ನ ಕೊಹ್ ಸಮುಯಿ ಬೀಚ್‌ನಲ್ಲಿ ಫೋಟೋಶೂಟ್ ಮಾಡಿ ಹಂಚಿಕೊಂಡಿರುವ ಹಸಿಬಿಸಿ ಫೋಟೋಗಳು ಪಡ್ಡೆ ಹುಡುಗರ ಕನಸಲ್ಲಿ ಸುನಾಮಿ ಎಬ್ಬಿಸಿವೆ!

# ಪಡ್ಡೆ ಹುಡುಗರಿಗೆ ಗ್ಲಾಮರ್ ಟ್ರೀಟ್ ಕೊಟ್ಟ ರಮ್ಯಾ!

ಕಳೆದ ಐದಾರು ವರ್ಷಗಳಿಂದ ಕಿರುಚಿತ್ರಗಳಲ್ಲಿ ನಟಿಸುತ್ತಿದ್ದ ರಮ್ಯಾ, ಕಳೆದ ವರ್ಷ ತೆರೆಗೆ ಬಂದ ಮಾರುತಿ ನಗರ ಸುಬ್ರಮಣ್ಯಂ ಚಿತ್ರದಿಂದ ಸಿನಿ ಪ್ರಿಯರಿಗೆ ಹೆಚ್ಚು ಪರಿಚಯ ಆಗಿದ್ದರು. ನಟಿಯ ಗ್ಲಾಮರ್‌ಗೆ ಸಾಕಷ್ಟು ಮನ್ನಣೆ ಸಿಕ್ಕಿಲ್ಲ. ಆದರೂ ತಮ್ಮ ಬ್ಯೂಟಿಯಿಂದಲೇ ಸೋಶಿಯಲ್ ಮೀಡಿಯಾದಲ್ಲಿ ಹವಾ ಇಟ್ಟುಕೊಂಡಿದ್ದಾರೆ. ಬಿಡುವಿನ ವೇಳೆ ಬೀಚ್‌ಗೆ ತೆರಳಿದ್ದ ರಮ್ಯಾ, ಸಕತ್ ಹಾಟ್ ಅವತಾರದಲ್ಲಿ ಫೋಟೋಶೂಟ್ ಮಾಡಿಸಿದ್ದಾರೆ. ಈ ಫೋಟೋಗಳನ್ನು ಇನ್ಸ್ಟಾದಲ್ಲಿ ಹಂಚಿಕೊಂಡು ಪಡ್ಡೆಹುಡುಗರಿಗೆ ಗ್ಲಾಮರ್ ಟ್ರೀಟ್ ಕೊಟ್ಟಿದ್ದಾರೆ. ಸಾಮಾಜಿಕ ಜಾಲತಾಣಗಳಲ್ಲಿ ಸದಾ ಸಕ್ರಿಯವಾಗಿರುವ ನಟಿಗೆ ಬಹಳಷ್ಟು ಅಭಿಮಾನಿಗಳಿದ್ದಾರೆ. ಈ ಅಭಿಮಾನಿಗಳಿಗಾಗಿಯೇ ಸಕತ್ ಗ್ಲಾಮರ್ ಆಗಿ ಕಾಣಿಸಿಕೊಂಡು ಸಂಚಲನ ಮೂಡಿಸಿದ್ದಾರೆ.
ಇತ್ತೀಚೆಗೆ ಮೆಗಾಸ್ಟಾರ್ ಚಿರಂಜೀವಿ ನಟಿಸಲಿರುವ ವಿಶ್ವಂಭರ ಚಿತ್ರದಲ್ಲಿ ಸಹೋದರಿಯ ಪಾತ್ರದಲ್ಲಿ ನಟಿಸಲು ರಮ್ಯಾ ಆಯ್ಕೆಯಾಗಿದ್ದಾರೆ. ಇದರ ಬೆನ್ನಲ್ಲೇ ಅವರಿಗೆ ಇನ್ನೂ ಎರಡು ಜನಪ್ರಿಯ ಚಿತ್ರಗಳಲ್ಲಿ ಅವಕಾಶ ಸಿಕ್ಕಿದೆ ಎಂದು ವರದಿಯಾಗಿದೆ.



# ಮತ್ತೆ ಬಾಲಿವುಡ್‌ನತ್ತ ಪ್ರಿಯಾಂಕಾ ಉಪೇಂದ್ರ

ಕನ್ನಡದ ನಟಿ ಪ್ರಿಯಾಂಕಾ ಉಪೇಂದ್ರ ಅವರು ಹಲವು ವರ್ಷಗಳ ಬಳಿಕ ಬಾಲಿವುಡ್‌ನತ್ತ ಮುಖ ಮಾಡಿದ್ದಾರೆ. 'ಸೆಪ್ಟೆಂಬರ್ 21' ಹೆಸರಿನ ಸಿನಿಮಾದಲ್ಲಿ ಪ್ರಿಯಾಂಕಾ ನಟಿಸಿದ್ದಾರೆ. ಮಂಗಳೂರಿನ ಯುವ ನಿರ್ದೇಶಕಿ ಕರೆನ್ ಕ್ಷಿತಿ ಸುವರ್ಣ ನಿರ್ದೇಶನದ 'ಸೆಪ್ಟೆಂಬರ್ 21' ಸಿನಿಮಾದಲ್ಲಿ ಪ್ರಿಯಾಂಕಾ ಕೂಡ ಪವರ್‌ಫುಲ್ ಪಾತ್ರದಲ್ಲಿ ನಟಿಸಿದ್ದಾರೆ. ಕಮಲಾ ಹೆಸರಿನ ಕೇರ್ ಟೇಕರ್ ಪಾತ್ರದಲ್ಲಿ ಉಪೇಂದ್ರ ಪತ್ನಿ ನಟಿಸಿದ್ದಾರೆ. ಖಿನ್ನತೆ ಮತ್ತು ಸ್ಮರಣಶಕ್ತಿ ಕಳೆದುಕೊಂಡ 60 ವರ್ಷದ ವ್ಯಕ್ತಿಯ ಪಾತ್ರದಲ್ಲಿ ಪ್ರವೀಣ್ ಸಿಂಗ್ ಸಿಸೋಡಿಯಾ ನಟಿಸುತ್ತಿದ್ದಾರೆ. ಚಿತ್ರದಲ್ಲಿ ಅವರ ಆರೋಗ್ಯ ಸ್ಥಿತಿ ಹದಗೆಟ್ಟಾಗ ಆರೈಕೆ ಮಾಡುವ ಕೇರ್ ಟೇಕರ್ ಆಗಿ ಪ್ರಿಯಾಂಕಾ ಕಾಣಿಸಿಕೊಂಡಿದ್ದಾರೆ. 'ಸೆಪ್ಟೆಂಬರ್ 21' ಚಿತ್ರವನ್ನು ಮಲಯಾಳಂ ಬರಹಗಾರ ನೆಲ್ಲೂಲಿ ಪಿ ರಾಜಶೇಖರನ್ ಬರೆದಿದ್ದಾರೆ. ಕನ್ನಡಿಗ ವಿನಯ್ ಚಂದ್ರ ಸಂಗೀತ ನೀಡಿದರೆ, ಅನಿಲ್ ಕುಮಾರ್ ಕೆ ಅವರ ಛಾಯಾಗ್ರಹಣವಿದೆ. ಈ ಚಿತ್ರದಲ್ಲಿ ಬಾಲಿವುಡ್ ನಟಿ ಆಯೇಷಾ ಐಮೆನ್, ನೆಲ್ಲೂಲಿ ಪಿ ರಾಜಶೇಖರನ್ ಮತ್ತು ರಿಕಿ ರುದ್ರ ನಟಿಸಿದ್ದಾರೆ. ಜೊತೆಗೆ ನಾನಾ ಪಾಟೇಕರ್ ಅವರ ಸೋದರಳಿಯ ಸಚಿನ್ ಪಾಟೇಕರ್ ಕೂಡ ನಟಿಸಿದ್ದಾರೆ.

# ಯಾರಾಗಲಿದ್ದಾರೆ ಭಾರತ ತಂಡದ ಮುಂದಿನ ನಾಯಕ

ಭಾರತ ಟೆಸ್ಟ್ ತಂಡದ ನಾಯಕ ರೋಹಿತ್ ಶರ್ಮಾ ಟೆಸ್ಟ್ ಕ್ರಿಕೆಟ್ ನಿಂದ ನಿವೃತ್ತಿ ಘೋಷಿಸಿದ್ದಾರೆ. ಇದರ ಬೆನ್ನಲ್ಲೇ ಟೀಮ್ ಇಂಡಿಯಾದ ಮುಂದಿನ ನಾಯಕ ಯಾರೆಂಬ ಚರ್ಚೆಗಳು ಕೂಡ ಶುರುವಾಗಿದೆ. ಏಕೆಂದರೆ ಭಾರತ ಟೆಸ್ಟ್ ತಂಡದ ನಾಯಕತ್ವಕ್ಕಾಗಿ ನಾಲ್ವರು ಆಟಗಾರರ ನಡುವೆ ನೇರ ಪೈಪೋಟಿ ಇದೆ. ಇವರಲ್ಲಿ ಒಬ್ಬರಿಗೆ ಕ್ಯಾಪ್ಟನ್ ಪಟ್ಟ ಸಿಗುವುದು ಬಹುತೇಕ ಖಚಿತ. ಆ ಆಟಗಾರರು ಯಾರೆಂದರೆ...

**ಶುಭ್‌ಮನ್ ಗಿಲ್:** ಭಾರತ ಟಿ20 ಹಾಗೂ ಏಕದಿನ ತಂಡಗಳ ಉಪನಾಯಕರಾಗಿರುವ ಶುಭ್‌ಮನ್ ಗಿಲ್ ಟೆಸ್ಟ್ ತಂಡದ ನಾಯಕತ್ವದ ರೇಸ್‌ನಲ್ಲಿ ಮುಂಚೂಣಿಯಲ್ಲಿದ್ದಾರೆ. ಭವಿಷ್ಯದ ದೃಷ್ಟಿಯಿಂದ ಗಿಲ್‌ಗೆ ಕ್ಯಾಪ್ಟನ್ ಪಟ್ಟ ನೀಡುವ ಬಗ್ಗೆ ಕೂಡ ಬಿಸಿಸಿಐ ಆಯ್ಕೆ ಸಮಿತಿ ಚರ್ಚಿಸಿದೆ.



**ಜಸ್‌ಪ್ರೀತ್ ಬುಮ್ರಾ:** ಟೀಮ್ ಇಂಡಿಯಾ ವೇಗಿ ಜಸ್‌ಪ್ರೀತ್ ಬುಮ್ರಾ ಈಗಾಗಲೇ ಭಾರತ ತಂಡವನ್ನು ಟೆಸ್ಟ್‌ನಲ್ಲಿ ಮುನ್ನಡೆಸಿದ್ದಾರೆ. ಅಲ್ಲದೆ ಅವರು ಪ್ರಸ್ತುತ ಟೆಸ್ಟ್ ತಂಡದ ಉಪನಾಯಕ. ಹೀಗಾಗಿ ಅವರಿಗೆ ಪೂರ್ಣ ಪ್ರಮಾಣದ ನಾಯಕತ್ವ ಲಭಿಸಿದರೂ ಅಚ್ಚರಿಪಡಬೇಕಿಲ್ಲ.

**ಕೆಎಲ್ ರಾಹುಲ್:** ವಿಕೆಟ್ ಕೀಪರ್ ಬ್ಯಾಟರ್ ಕೆಎಲ್ ರಾಹುಲ್ ಈ ಹಿಂದೆ ಸೌತ್ ಆಫ್ರಿಕಾ ವಿರುದ್ಧದ ಟೆಸ್ಟ್ ಸರಣಿಯಲ್ಲಿ ಭಾರತ ತಂಡವನ್ನು ಮುನ್ನಡೆಸಿದ್ದರು. ಅಷ್ಟೇ ಅಲ್ಲದೆ ದೀರ್ಘಾವಧಿ ಕ್ರಿಕೆಟ್‌ನಲ್ಲಿ ರಾಹುಲ್ ಖಾಯಂ ಸ್ಥಾನ ಹೊಂದಿದ್ದಾರೆ. ಹೀಗಾಗಿ ಅನುಭವಕ್ಕೆ ಮಣೆ ಹಾಕಲು ಮುಂದಾದರೆ ಕನ್ನಡಿಗನಿಗೆ ನಾಯಕತ್ವ ಲಭಿಸುವ ಸಾಧ್ಯತೆಯಿದೆ.

**ರಿಷಭ್ ಪಂತ್:** ಭಾರತ ವೈಟ್ ಬಾಲ್ ತಂಡಗಳನ್ನು ಮುನ್ನಡೆಸಿದ ಅನುಭವ ಹೊಂದಿರುವ ರಿಷಭ್ ಪಂತ್ ಕೂಡ ನಾಯಕತ್ವದ ರೇಸ್‌ನಲ್ಲಿದ್ದಾರೆ. ಅದರಲ್ಲೂ ವಿಕೆಟ್ ಕೀಪರ್‌ಗೆ ಕ್ಯಾಪ್ಟನ್ಸಿ ವಹಿಸಲು ಮುಂದಾದರೆ ಪಂತ್‌ಗೆ ನಾಯಕತ್ವ ಒಲಿಯಲಿದೆ. ಹೀಗಾಗಿ ಟೆಸ್ಟ್ ಕ್ರಿಕೆಟ್‌ನಲ್ಲಿನ ನಾಯಕತ್ವವನ್ನು ರಿಷಭ್ ಪಂತ್ ಎದುರು ನೋಡುತ್ತಿದ್ದಾರೆ. ಇಲ್ಲಿ ಶುಭ್‌ಮನ್ ಗಿಲ್ ಹಾಗೂ ಜಸ್‌ಪ್ರೀತ್ ಬುಮ್ರಾ ಹೆಸರುಗಳು ಮುಂಚೂಣಿಯಲ್ಲಿದ್ದರೂ, ಬಿಸಿಸಿಐ ನಡೆ ಮಾತ್ರ ನಿಗೂಢವಾಗಿ ಉಳಿದಿದೆ. ಅದರಲ್ಲೂ ಮಹೇಂದ್ರ ಸಿಂಗ್ ಧೋನಿ ಬಳಿಕ ಮತ್ತೊಮ್ಮೆ ವಿಕೆಟ್ ಕೀಪರ್‌ಗೆ ಕ್ಯಾಪ್ಟನ್ ಪಟ್ಟ ನೀಡಬೇಕೆಂಬ ಅಭಿಪ್ರಾಯಗಳು ಕೂಡ ಕೇಳಿ ಬರುತ್ತಿದೆ.

# ಆರ್‌ಸಿಬಿ ಪ್ಲೇಯಿಂಗ್ ಇಲೆವೆನ್‌ನಲ್ಲಿ 2 ಬದಲಾವಣೆ ಖಚಿತ



ಪಡಿಕ್ಕಲ್ ಬದಲಿಗೆ ಮತ್ತೋರ್ವ ಆಟಗಾರ

ಇಂಡಿಯನ್ ಪ್ರೀಮಿಯರ್ ಲೀಗ್‌ನ 59ನೇ ಪಂದ್ಯದಲ್ಲಿ ರಾಯಲ್ ಚಾಲೆಂಜರ್ಸ್ ಬೆಂಗಳೂರು ಹಾಗೂ ಲಕ್ನೋ ಸೂಪರ್ ಜೈಂಟ್ಸ್ ತಂಡಗಳು ಮುಖಾಮುಖಿಯಾಗಲಿದೆ. ಲಕ್ನೋನ ಏಕಾನ ಸ್ಟೇಡಿಯಂನಲ್ಲಿ ನಡೆಯಲಿರುವ ಈ ಪಂದ್ಯಕ್ಕಾಗಿ ಆರ್‌ಸಿಬಿ ತಂಡವು 2 ಬದಲಾವಣೆ ಮಾಡಿಕೊಳ್ಳುವ ಸಾಧ್ಯತೆ ಹೆಚ್ಚಿದೆ. ಏಕೆಂದರೆ ಸಿಎಸ್‌ಕೆ ವಿರುದ್ಧದ ಪಂದ್ಯದಲ್ಲಿ ಕಣಕ್ಕಿಳಿದಿದ್ದ ದೇವದತ್ ಪಡಿಕ್ಕಲ್ ಗಾಯದ ಕಾರಣ ಟೂರ್ನಿಯಿಂದ ಹೊರಗುಳಿದಿದ್ದಾರೆ. ಹೀಗಾಗಿ ಈ ಬಾರಿ ಪಡಿಕ್ಕಲ್ ಬದಲಿಗೆ ಮತ್ತೋರ್ವ ಆಟಗಾರನ ಪ್ಲೇಯಿಂಗ್ ಇಲೆವೆನ್‌ನಲ್ಲಿ ಕಾಣಿಸಿಕೊಳ್ಳುವುದು ಖಚಿತ.

ಇಲ್ಲಿ ಆರ್‌ಸಿಬಿ ತಂಡದ ಆರಂಭಿಕರಾಗಿ ಜೇಕಬ್ ಬೆಥೆಲ್ ಹಾಗೂ ವಿರಾಟ್ ಕೊಹ್ಲಿ ಮುಂದುವರೆಯಲಿದ್ದಾರೆ. ಇನ್ನು ಮೂರನೇ ಕ್ರಮಾಂಕದಲ್ಲಿ ರಜತ್ ಪಾಟಿದಾರ್ ಕಣಕ್ಕಿಳಿಯುವ ಸಾಧ್ಯತೆಯಿದೆ. ಹಾಗೆಯೇ ನಾಲ್ಕನೇ ಕ್ರಮಾಂಕದಲ್ಲಿ ಮಯಾಂಕ್ ಅಗರ್ವಾಲ್‌ಗೆ ಚಾನ್ಸ್ ನೀಡಬಹುದು.

ಇನ್ನು ಐದನೇ ಕ್ರಮಾಂಕದಲ್ಲಿ ಕೃನಾಲ್ ಪಾಂಡ್ಯ ಕಣಕ್ಕಿಳಿದರೆ, ಆರನೇ ಕ್ರಮಾಂಕದಲ್ಲಿ ವಿಕೆಟ್ ಕೀಪರ್ ಬ್ಯಾಟರ್ ಜಿತೇಶ್ ಶರ್ಮಾ ಕಾಣಿಸಿಕೊಳ್ಳಬಹುದು. ಇನ್ನುಳಿದಂತೆ 7ನೇ ಮತ್ತು 8ನೇ ಕ್ರಮಾಂಕಗಳಲ್ಲಿ ಟಿಮ್ ಡೇವಿಡ್ ಹಾಗೂ ರೊಮಾರಿಯೊ ಶೆಫರ್ಡ್ ಕಣಕ್ಕಿಳಿಯುವುದು ಖಚಿತ.

ಹಾಗೆಯೇ ಬೌಲರ್‌ಗಳಾಗಿ ಭುವನೇಶ್ವರ್ ಕುಮಾರ್ ಹಾಗೂ ಯಶ್ ದಯಾಳ್ ಪ್ಲೇಯಿಂಗ್ ಇಲೆವೆನ್‌ನಲ್ಲಿರಲಿದ್ದಾರೆ. ಇನ್ನು ಕಳೆದ ಪಂದ್ಯದ ವೇಳೆ ಭುಜದ ನೋವಿನ ಕಾರಣ ವಿಶ್ರಾಂತಿ ಪಡೆದಿದ್ದ ಜೋಶ್ ಹ್ಯಾಝಲ್‌ವುಡ್ ಸಂಪೂರ್ಣ ಫಿಟ್‌ನೆಸ್ ಸಾಧಿಸಿದ್ದರೆ, ಲುಂಗಿ ಎನ್‌ಗಿಡಿ ಬದಲಿಗೆ ಕಣಕ್ಕಿಳಿಯಲಿದ್ದಾರೆ. ಹಾಗೆಯೇ ಇಂಪ್ಯಾಕ್ಟ್ ಸಬ್ ಆಗಿ ಸುಯಶ್ ಶರ್ಮಾ ಕಾಣಿಸಿಕೊಳ್ಳಲಿದ್ದಾರೆ.


# ಐಪಿಎಲ್ ಮಧ್ಯದಲ್ಲೇ ನಿವೃತ್ತಿ ಬಗ್ಗೆ ಮೌನ ಮುರಿದ ಧೋನಿ

ಇಂಡಿಯನ್ ಪ್ರೀಮಿಯರ್ ಲೀಗ್‌ನ 57ನೇ ಪಂದ್ಯ ದಲ್ಲಿ ಕೊಲ್ಕತ್ತಾ ನೈಟ್ ರೈಡರ್ಸ್ ವಿರುದ್ಧ ಚೆನ್ನೈ ಸೂಪರ್ ಕಿಂಗ್ಸ್ ತಂಡ ಜಯ ಸಾಧಿಸಿದೆ. ಅದು ಕೂಡ ಸತತ 4 ಸೋಲುಗಳ ಬಳಿಕ ಎಂಬುದು ವಿಶೇಷ. ಅಂದರೆ ಈ ಬಾರಿಯ ಐಪಿಎಲ್‌ನಲ್ಲಿ ಅತ್ಯಂತ ಹೀನಾಯ ಪ್ರದರ್ಶನ ನೀಡುತ್ತಿರುವ ಸಿಎಸ್‌ಕೆ ತಂಡವು 12 ಪಂದ್ಯಗಳಲ್ಲಿ ಗೆದ್ದಿರುವುದು ಕೇವಲ 3 ಮ್ಯಾಚ್‌ಗಳಲ್ಲಿ ಮಾತ್ರ.

ಈ ಗೆಲುವಿನ ಬಳಿಕ ಮಾತನಾಡಿದ ಮಹೇಂದ್ರ ಸಿಂಗ್ ಧೋನಿ, ತಾನು ನಿವೃತ್ತಿ ಅಂಚಿನಲ್ಲಿರುವುದನ್ನು ಬಹಿರಂಗಪಡಿಸಿದ್ದಾರೆ. ಆದರೆ ಅದು ಸದ್ಯಕ್ಕಿಲ್ಲ ಎಂಬುದನ್ನು ಸಹ ಸ್ಪಷ್ಟಪಡಿಸಿದ್ದಾರೆ. ಈಗ ನನಗೆ 43 ವರ್ಷ. ಇದನ್ನು ನೀವು ಮರೆಯಬೇಡಿ ಎಂದು ಮಹೇಂದ್ರ ಸಿಂಗ್ ಧೋನಿ ಹೇಳಿದ್ದಾರೆ.


ಅಭಿಮಾನಿಗಳಿಂದ ನನಗೆ ಯಾವಾಗಲೂ ಪ್ರೀತಿ ಮತ್ತು ವಾತ್ಸಲ್ಯ ಸಿಕ್ಕಿದೆ. ಹೀಗಾಗಿ ನಾನು ಬಹಳ ಸಮಯದಿಂದ ಆಡುತ್ತಿದ್ದೇನೆ. ಇದಾಗ್ಯೂ ನನಗೆ 43 ವರ್ಷವಾಗಿದೆ ಎಂಬುದು ಅಭಿಮಾನಿಗಳಿಗೆ ಗೊತ್ತಿರಲಿ. ಅವರಲ್ಲಿ ಹಲವರಿಗೆ ನನ್ನ ಕೊನೆಯ ಪಂದ್ಯ ಯಾವಾಗ ಎಂದು ತಿಳಿದಿಲ್ಲ. ಹೀಗಾಗಿಯೇ ಅವರು ನನ್ನ ಆಟವನ್ನು ನೋಡಲು ಬಯಸುತ್ತಿದ್ದಾರೆ.

ನಾನು ನನ್ನ ವೃತ್ತಿಜೀವನದ ಕೊನೆಯ ಹಂತದಲ್ಲಿದ್ದೇನೆ ಎಂಬ ಅಂಶದಿಂದ ತಪ್ಪಿಸಿಕೊಳ್ಳಲು ಸಾಧ್ಯವಿಲ್ಲ. ಈ ಐಪಿಎಲ್ ಮುಗಿದ ನಂತರ, ನನ್ನ ದೇಹವು ಈ ಒತ್ತಡವನ್ನು ತಡೆದುಕೊಳ್ಳುತ್ತದೆಯೇ ಅಥವಾ ಇಲ್ಲವೇ ಎಂಬುದನ್ನು ನೋಡಲು ನಾನು ಇನ್ನೂ ಆರರಿಂದ ಎಂಟು ತಿಂಗಳು ಕಷ್ಟಪಟ್ಟು ಕೆಲಸ ಮಾಡಬೇಕಾಗುತ್ತದೆ ಎಂದು ಧೋನಿ ಹೇಳಿದ್ದಾರೆ. ಅಲ್ಲದೆ ಸದ್ಯ ಯಾವುದೇ ನಿವೃತ್ತಿ ನಿರ್ಧಾರವನ್ನು ತೆಗೆದುಕೊಂಡಿಲ್ಲ. ಈ ಬಾರಿಯ ಐಪಿಎಲ್ ಬಳಿಕ ಮುಂದಿನ ಸೀಸನ್‌ಗೆ ತನ್ನ ದೇಹ ಹೊಂದಿಕೊಳ್ಳುತ್ತದೆಯೇ ಎಂಬುದರ ಆಧಾರದ ಮೇಲೆ ನಿವೃತ್ತಿ ಬಗ್ಗೆ ಯೋಚಿಸುತ್ತೇನೆ.
ಇದಕ್ಕಾಗಿ ಇನ್ನೂ 6 ರಿಂದ 8 ತಿಂಗಳುಗಳಿವೆ. ಹೀಗಾಗಿ ಸದ್ಯ ನಿವೃತ್ತಿ ಘೋಷಿಸುವ ಇರಾದೆಯಿಲ್ಲ ಎಂದು ಮಹೇಂದ್ರ ಸಿಂಗ್ ಧೋನಿ ಹೇಳಿದ್ದಾರೆ.




# ಪಾಕ್ ದಾಳಿ ನಡುವೆ ಪಂಜಾಬ್ ಕಿಂಗ್ಸ್ ಡೆಲ್ಲಿ ಕ್ಯಾಪಿಟಲ್ಸ್ ಪಂದ್ಯ ಸ್ಥಗಿತ!

ಭಾರತದ 'ಆಪರೇಷನ್ ಸಿಂಧೂರ' ಕ್ಕೆ ಪ್ರತೀಕಾರವಾಗಿ ಪಾಕಿಸ್ತಾನ ಗುರುವಾರ ರಾತ್ರಿ ಭಾರತದ ಹಲವೆಡೆ ಕ್ಷಿಪಣಿ, ಡ್ರೋನ್ ಹಾಗೂ ಗುಂಡಿನ ದಾಳಿ ನಡೆಸಿದೆ. ರಾಜಸ್ಥಾನದ ಜೈಸಲ್ಮಾರ್ ವಾಯುನೆಲೆ ಗುರಿಯಾಗಿಸಿಕೊಂಡು ಪಾಕ್ ಡ್ರೋನ್ ದಾಳಿಗೆ ಯತ್ನಿಸಿದೆ. ಆದರೆ, ಜೈಸಲ್ಮಾರ್ ನಲ್ಲಿನ ಭಾರತೀಯ ವಾಯು ರಕ್ಷಣಾ ವ್ಯವಸ್ಥೆಯಿಂದ ಪಾಕ್ ಡ್ರೋನ್ ಗಳನ್ನು ಹೊಡೆದುರುಳಿಸಲಾಗಿದೆ. ಆಕಾಶದಲ್ಲಿ ಸ್ಫೋಟದ ಶಬ್ದ, ಬೆಂಕಿಯ ಜ್ವಾಲೆ ಉಗುಳುವಂತೆ ಕಾಣುವ ಕ್ಷಿಪಣಿಗಳ ವಿಡಿಯೋ ಕೂಡಾ ವೈರಲ್ ಆಗಿದೆ.



ಆಕಾಶದಲ್ಲಿ ಪಾಕಿಸ್ತಾನದ 8 ಕ್ಷಿಪಣಿಗಳನ್ನು S-400 ರಕ್ಷಣಾ ವ್ಯವಸ್ಥೆಯಿಂದ ಹೊಡೆದುರುಳಿಸಲಾಗಿದೆ. ಸತ್ವಾರಿ, ಸಾಂಬಾ, ಆರ್‌ಎಸ್ ಪುರ ಮತ್ತು ಅರ್ನಿಯಾ ಸೆಕ್ಟರ್‌ನಲ್ಲಿ ಪಾಕಿಸ್ತಾನ ಉಡಾಯಿಸಿದ 8 ಕ್ಷಿಪಣಿಗಳನ್ನು ಭಾರತೀಯ ವಾಯು ರಕ್ಷಣಾ ಘಟಕಗಳು ತಡೆದಿವೆ ಎಂದು ಮೂಲಗಳು ತಿಳಿಸಿವೆ.



**ಐಪಿಎಲ್ ಪಂದ್ಯ ಸ್ಥಗಿತ:** ಪಾಕಿಸ್ತಾನ ದಾಳಿ ನಡುವೆ ಧರ್ಮಶಾಲಾದ ಹಿಮಾಚಲ ಪ್ರದೇಶ ಕ್ರಿಕೆಟ್ ಅಸೋಸಿಯೇಷನ್ ಸ್ಟೇಡಿಯಂನಲ್ಲಿ ನಡೆಯುತ್ತಿದ್ದ ಪಂಜಾಬ್ ಕಿಂಗ್ಸ್-ಡೆಲ್ಲಿ ಕ್ಯಾಪಿಟಲ್ಸ್ ನಡುವಿನ ಐಪಿಎಲ್ ಪಂದ್ಯವನ್ನು ಸ್ಥಗಿತಗೊಳಿಸಲಾಗಿದೆ.
ಮೊದಲು ಬ್ಯಾಟಿಂಗ್ ಮಾಡುತ್ತಿದ್ದ ಪಂಜಾಬ್ ಕಿಂಗ್ಸ್ 10.1 ಓವರ್‌ಗಳ ಲ್ಲಿ 122 ರನ್‌ಗಳನ್ನು ಹಾಕಿತು ಆಗ ಮಂದಬೆಳಕಿನ ಕಾರಣದಿಂದ ಪಂದ್ಯವನ್ನು ಸ್ಥಗಿತಗೊಳಿಸಲಾಗಿದೆ ಎಂದು ಹೇಳಲಾಯಿತು. ಆದರೆ, ಭದ್ರತಾ ಕಾರಣಗಳಿಗಾಗಿ ಅಭಿಮಾನಿಗಳನ್ನು ಕ್ರೀಡಾಂಗಣದಿಂದ ಹೊರ ಹೋಗು ವಂತೆ ಸೂಚಿಸಲಾಯಿತು.
ಇದರಿಂದಾಗಿ ಪಂದ್ಯವನ್ನು ರದ್ದುಗೊಳಿಸಲಾಗಿದೆ. ಹೆಚ್ಚುತ್ತಿರುವ ಉದ್ವಿಗ್ನತೆ ಮತ್ತು ಭದ್ರತಾ ಕಾಳಜಿಗಳಿಂದಾಗಿ, ಹಿಮಾಚಲ ಪ್ರದೇಶದಲ್ಲಿ ಬ್ಲಾಕ್ ಔಟ್ ಘೋಷಿಸಲಾಗಿದ್ದು, ಇದರಿಂದ ಪಂದ್ಯವನ್ನು ರದ್ದುಗೊಳಿಸಲಾಗಿದೆ ಎಂದು ESPN Cricinfo ವರದಿ ಮಾಡಿದೆ.

# ಹೋಯ್ತಾ ಇರು ಎಂದ ವರುಣ್ ಚಕ್ರವರ್ತಿಗೆ ಬಿತ್ತು ದಂಡ

ಇಂಡಿಯನ್ ಪ್ರೀಮಿಯರ್ ಲೀಗ್‌ನ 57ನೇ ಪಂದ್ಯದಲ್ಲಿ ಐಪಿಎಲ್‌ನ ನೀತಿ ಸಂಹಿತೆ ಉಲ್ಲಂಘಿಸಿದಕ್ಕಾಗಿ ಕೊಲ್ಕತ್ತಾ ನೈಟ್ ರೈಡರ್ಸ್ ತಂಡದ ಸ್ಪಿನ್ನರ್ ವರುಣ್ ಚಕ್ರವರ್ತಿಗೆ ಅವರಿಗೆ ಪಂದ್ಯ ಶುಲ್ಕದ ಶೇ.25 ರಷ್ಟು ದಂಡ ವಿಧಿಸಲಾಗಿದೆ. ಹಾಗೆಯೇ ಒಂದು ಡಿಮೆರಿಟ್ ಪಾಯಿಂಟ್ ನೀಡಲಾಗಿದೆ. ಕೊಲ್ಕತ್ತಾದ ಈಡನ್ ಗಾರ್ಡನ್ಸ್ ಮೈದಾನದಲ್ಲಿ ನಡೆದ ಈ ಪಂದ್ಯದಲ್ಲಿ ಟಾಸ್ ಗೆದ್ದ ಕೆಕೆಆರ್ ತಂಡದ ನಾಯಕ ಅಜಿಂಕ್ಯ ರಹಾನೆ ಬ್ಯಾಟಿಂಗ್ ಆಯ್ದುಕೊಂಡಿದ್ದರು. ಅದರಂತೆ ಮೊದಲು ಬ್ಯಾಟ್ ಮಾಡಿದ ಕೊಲ್ಕತ್ತಾ ನೈಟ್ ರೈಡರ್ಸ್ ಪರ ಅಜಿಂಕ್ಯ ರಹಾನೆ 48 ರನ್ ಬಾರಿಸಿದರೆ, ಮನೀಶ್ ಪಾಂಡೆ 36 ರನ್ ಕಲೆಹಾಕಿದರು. ಇನ್ನು ಆಯಂಡ್ರೆ ರಸೆಲ್ 38 ರನ್ ಚಚ್ಚಿದ್ದರು. ಈ ಮೂಲಕ ಕೆಕೆಆರ್ ತಂಡವು 20 ಓವರ್‌ಗಳಲ್ಲಿ 6 ವಿಕೆಟ್ ಕಳೆದುಕೊಂಡು 179 ರನ್ ಕಲೆಹಾಕಿತು.

180 ರನ್‌ಗಳ ಗುರಿ ಪಡೆದ ಚೆನ್ನೈ ಸೂಪರ್ ಕಿಂಗ್ಸ್ ತಂಡವು ಉತ್ತಮ ಆರಂಭ ಪಡೆದಿರಲಿಲ್ಲ. ಆರಂಭಿಕರಾದ ಆಯುಷ್ ಮ್ಹಾತ್ರೆ ಹಾಗೂ ಡೆವೊನ್ ಕಾನ್ವೆ ಶೂನ್ಯಕ್ಕೆ ಔಟಾಗಿದ್ದರು. ಈ ಹಂತದಲ್ಲಿ ಕಣಕ್ಕಿಳಿದ ಉರ್ವಿಲ್ ಪಟೇಲ್ ಕೇವಲ 11 ಎಸೆತಗಳಲ್ಲಿ 4 ಭರ್ಜರಿ ಸಿಕ್ಸ್‌ನೊಂದಿಗೆ 31 ರನ್ ಬಾರಿಸಿದರು. ಆ ಬಳಿಕ 6ನೇ ಕ್ರಮಾಂಕದಲ್ಲಿ ಕಣಕ್ಕಿಳಿದ ಡೆವಾಲ್ಡ್ ಬ್ರೆವಿಸ್ ಕೇವಲ 25 ಎಸೆತಗಳಲ್ಲಿ 4 ಭರ್ಜರಿ ಸಿಕ್ಸ್ ಹಾಗೂ 4 ಫೋರ್‌ಗಳೊಂದಿಗೆ 52 ರನ್ ಚಚ್ಚಿದ್ದರು.

ಕೈ ಸನ್ನೆ ಮಾಡಿದ ವರುಣ್



**ವರುಣ್ ಚಕ್ರವರ್ತಿ ಆಕ್ರೋಶ:** ಮಧ್ಯಮ ಕ್ರಮಾಂಕದಲ್ಲಿ ಡೆವಾಲ್ಡ್ ಬ್ರೆವಿಸ್ ಆಡಿದ ಬಿರುಸಿನ ಬ್ಯಾಟಿಂಗ್‌ನಿಂದಾಗಿ ಕೆಕೆಆರ್ ಪರ ವಾಲಿದ್ದ ಪಂದ್ಯವು ಸಿಎಸ್‌ಕೆಯತ್ತ ಸಾಗಿತು. ಈ ಹಂತದಲ್ಲಿ ದಾಳಿಗಿಳಿದ ವರುಣ್ ಚಕ್ರವರ್ತಿ ಡೆವಾಲ್ಡ್ ಬ್ರೆವಿಸ್ ವಿಕೆಟ್ ಪಡೆಯುವಲ್ಲಿ ಯಶಸ್ವಿಯಾದರು. ಇತ್ತ ಬ್ರೆವಿಸ್ ಔಟ್ ಆಗುತ್ತಿದ್ದಂತೆ, ವರುಣ್ ಚಕ್ರವರ್ತಿ ಹೋಯ್ತಾ ಇರು ಎಂದು ಕೈ ಸನ್ನೆ ಮಾಡುವ ಮೂಲಕ ಸಿಎಸ್‌ಕೆ ಬ್ಯಾಟರ್‌ಗೆ ಬೀಳ್ಕೊಡುಗೆ ನೀಡಿದ್ದರು. ವರುಣ್ ಚಕ್ರವರ್ತಿಯ ಈ ವರ್ತನೆಗೆ ಇದೀಗ ಪಂದ್ಯ ಶುಲ್ಕದ ಶೇ.25 ರಷ್ಟು ದಂಡ ವಿಧಿಸಲಾಗಿದೆ. ಹಾಗೆಯೇ ಒಂದು ಡಿಮೆರಿಟ್ ಪಾಯಿಂಟ್ ನೀಡಲಾಗಿದೆ.

**ಗೆದ್ದು ಬೀಗಿದ ಸಿಎಸ್‌ಕೆ:** ಈ ಪಂದ್ಯದಲ್ಲಿ ಕೆಕೆಆರ್ ನೀಡಿದ 180 ರನ್‌ಗಳ ಗುರಿಯನ್ನು ಚೆನ್ನೈ ಸೂಪರ್ ಕಿಂಗ್ಸ್ ತಂಡವು 19.4 ಓವರ್‌ಗಳಲ್ಲಿ ಚೇಸ್ ಮಾಡಿದೆ. ಈ ಮೂಲಕ ಸಿಎಸ್‌ಕೆ ತಂಡವು 2 ವಿಕೆಟ್‌ಗಳ ರೋಚಕ ಗೆಲುವು ದಾಖಲಿಸಿದೆ. ಈ ಗೆಲುವಿನ ಹೊರತಾಗಿಯೂ ಚೆನ್ನೈ ಸೂಪರ್ ಕಿಂಗ್ಸ್ ತಂಡವು ಅಂಕ ಪಟ್ಟಿಯಲ್ಲಿ ಕೊನೆಯ ಸ್ಥಾನದಲ್ಲೇ ಉಳಿದಿದೆ.

**Printed by : A. BALACHANDRA, Printed at : RAJHANS ENTERPRISES** No. 134, 4th Main Road, Industrial Town, Rajajinagar, Bengaluru - 560044, Karnataka. **Owned By, Published By, Editor :T. HOMBE GOWDA,** No. 1230, Jayamahal, Ground Floor, 13th Cross, 2nd Phase, Girinagar, Bengaluru - 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news
**ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966**